


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜೂನ್ 17 ಮಂಗಳವಾರ 2025

ಸಂಪುಟ: 46 | ಸಂಚಿಕೆ: 61 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ದೇಶಾದ್ಯಂತ ಎರಡು ಹಂತದಲ್ಲಿ

ಜನ-ಜಾತಿ ಗಣತಿ

ಕೇಂದ್ರ ಗೃಹ ಸಚಿವಾಲಯದಿಂದ ಅಧಿಸೂಚನೆ

ನವದೆಹಲಿ: ಸುಮಾರು 16 ವರ್ಷಗಳ ನಂತರ ಬಹು ನಿರೀಕ್ಷಿತ ಭಾರತದ 16ನೇ ಜನಗಣತಿಯೊಂದಿಗೆ ಜಾತಿ ಗಣತಿ ನಡೆಸಲು ಕೇಂದ್ರ ಸರ್ಕಾರ ಸೋಮವಾರ ಅಧಿಸೂಚನೆ ಹೊರಡಿಸಿದೆ.

ಲಡಾಖ್‌ನಂತಹ ಹಿಮದಿಂದ ಆವೃತ ಪ್ರದೇಶಗಳಲ್ಲಿ ಅಕ್ಟೋಬರ್ 1, 2026 ಮತ್ತು ದೇಶದ ಉಳಿದ ಭಾಗಗಳಲ್ಲಿ ಮಾರ್ಚ್ 1, 2027 ರಂದು ಜನಗಣತಿಯೊಂದಿಗೆ ಜಾತಿಗಣತಿ ನಡೆಸಲಾಗುವುದು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. 2011ರ ನಂತರ ನಡೆಯುತ್ತಿರುವ ಭಾರತದ ಮೊದಲ ಜನಗಣತಿಯನ್ನು ಕ್ರಮವಾಗಿ ಅಕ್ಟೋಬರ್ 1, 2026 ಮತ್ತು ಮಾರ್ಚ್ 1, 2027 ರಂದು ಎರಡು ಹಂತಗಳಲ್ಲಿ ನಡೆಸಲಾಗುವುದು ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

ಮೊದಲ ಹಂತದಲ್ಲಿ ಲಡಾಖ್ ಕೇಂದ್ರಾಡಳಿತ ಪ್ರದೇಶ, ಜಮ್ಮು ಮತ್ತು ಕಾಶ್ಮೀರ, ಹಿಮಾಚಲಪ್ರದೇಶ ಮತ್ತು ಉತ್ತರಾಖಂಡ ರಾಜ್ಯಗಳ ಹಿಮದಿಂದ ಆವೃತವಲ್ಲದ ಸಿಂಕ್ರೊನಸ್ ಅಲ್ಲದ ಪ್ರದೇಶಗಳಲ್ಲಿ ಸರ್ವೇ ನಡೆಯಲಿದ್ದು, ಈ ಪ್ರದೇಶಗಳಿಗೆ ಸಂಬಂಧಿಸಿದಂತೆ, ಉಲ್ಲೇಖ ದಿನಾಂಕವು ಅಕ್ಟೋಬರ್ 1, 2026 ರ 00:00 ಗಂಟೆಗಳಾಗಿರಬೇಕು ಎಂದು ಪ್ರಕಟಣೆ ಹೇಳಿದೆ. ಇತರ ರಾಜ್ಯಗಳಲ್ಲಿ ಈ ಜನಗಣತಿಯ ಉಲ್ಲೇಖ ದಿನಾಂಕವು ಮಾರ್ಚ್ 1, 2027 ರ 00.00 ಗಂಟೆ ಆಗಿರಬೇಕು ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಮನೆಪಟ್ಟಿ ಕಾರ್ಯಾಚರಣೆ ಎಂದೂ ಕರೆಯಲ್ಪಡುವ ಮೊದಲ ಹಂತದಲ್ಲಿ, ಆಸ್ತಿಗಳು, ಕುಟುಂಬದ ಆದಾಯ, ವಸತಿ ಪರಿಸ್ಥಿತಿಗಳು ಮತ್ತು ಸೌಕರ್ಯಗಳಿಗೆ



ಸಂಬಂಧಿಸಿದ ಡೇಟಾವನ್ನು ಸಂಗ್ರಹಿಸಲಾಗುತ್ತದೆ. ಮುಂಬರುವ ಜನಗಣತಿಯು ಭಾರತದ ಮೊದಲ ಡಿಜಿಟಲ್ ಜನಗಣತಿಯಾಗಿರುವುದರಿಂದ, ಮೊದಲ ಬಾರಿಗೆ ಪ್ರತಿಕ್ರಿಯಿಸುವವರು ಮನೆಯಿಂದಲೇ ಪ್ರಶ್ನೆಗಳಿಗೆ ಉತ್ತರಿಸಲು ಸಾಧ್ಯವಾಗುತ್ತದೆ.

ಎರಡನೇ ಹಂತವಾದ ಜನಸಂಖ್ಯಾ ಗಣತಿ, ಮನೆಯಲ್ಲಿ ವಾಸಿಸುವ ಪ್ರತಿಯೊಬ್ಬ ವ್ಯಕ್ತಿಯ ಬಗ್ಗೆ ಜನಸಂಖ್ಯಾ, ಸಾಮಾಜಿಕ–ಆರ್ಥಿಕ, ಸಾಂಸ್ಕೃತಿಕ ಮತ್ತು ಇತರ ವೈಯಕ್ತಿಕ ಮಾಹಿತಿಯನ್ನು ಸಂಗ್ರಹಿಸುತ್ತದೆ. ಮೊದಲ ಬಾರಿಗೆ, ಜಾತಿ ಗಣತಿಯು ಜನಗಣತಿ ಆಯಾಮದ ಭಾಗವಾಗಲಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾನುವಾರ ಕೇಂದ್ರ ಗೃಹ ಕಾರ್ಯದರ್ಶಿ, ರಿಜಿಸ್ಟ್ರಾರ್ ಜನರಲ್ ಮತ್ತು ಭಾರತದ ಜನಗಣತಿ ಆಯುಕ್ತ ಮೃತ್ಯುಂಜಯ್ ಕುಮಾರ್ ನಾರಾಯಣ್ ಮತ್ತು ಇತರ ಹಿರಿಯ ಅಧಿಕಾರಿಗಳೊಂದಿಗೆ ಜನಗಣತಿಯ ಸಿದ್ಧತೆಗಳನ್ನು ಪರಿಶೀಲಿಸಿದರು. ಅಲ್ಲದೆ ಈ ಬಾರಿ ಜನ ಗಣತಿಯೊಂದಿಗೆ ಜಾತಿ ಗಣತಿಯೂ ನಡೆಯುತ್ತಿರುವುದನ್ನು ಖಚಿತಪಡಿಸಿದ್ದಾರೆ.

ಕೇಂದ್ರದ್ದೇ ಬೇರೆ... ನಮ್ಮದೇ ಬೇರೆ...

ಬೆಂಗಳೂರು, ಜೂ.16(ಕೆಎಂಶಿ)– ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಗತಿಗಳ ಸಮೀಕ್ಷೆಯನ್ನು ತಕ್ಷಣವೇ ಕೈಗೆತ್ತಿಕೊಳ್ಳುವಂತೆ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಆದೇಶಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.



ಕೇಂದ್ರ ಸರ್ಕಾರ ಜನಗಣತಿ ಜೊತೆ ಜಾತಿಗಣತಿ ನಡೆಸುವ ಸಂಬಂಧ ಅಧಿಸೂಚನೆ ಹೊರಡಿಸಿದ ಬೆನ್ನಲ್ಲೇ ಮುಖ್ಯಮಂತ್ರಿ ಈ ಹೇಳಿಕೆ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ನಡೆಸಲಿರುವ ಜಾತಿಗಣತಿಗೂ ನಮ್ಮ ಸಮೀಕ್ಷೆಗೂ ಸಂಬಂಧವಿಲ್ಲ ಎಂದಿದ್ದಾರೆ. ನಾವು ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದವರ ಸಮೀಕ್ಷೆ ಮಾಡುತ್ತಿದ್ದೇವೆ. ಜೊತೆಗೆ ಜಾತಿಗಣತಿಯೂ ನಡೆಯುತ್ತದೆ. ಕೇಂದ್ರ ಇಂತಹ ಸಮೀಕ್ಷೆ ಮಾಡುತ್ತಿಲ್ಲ, ಅವರು ಜಾತಿಗಣತಿಯನ್ನಷ್ಟೇ ಮಾಡುತ್ತಿದ್ದಾರೆ. ಕಾಂತರಾಜ್ ವರದಿ ಶಿಫಾರಸು ಬಗ್ಗೆ ಪ್ರಬಲರು ಮತ್ತು ದುರ್ಬಲರು ಆಕ್ಷೇಪ ವ್ಯಕ್ತಪಡಿಸಿದ್ದರು. ಅಲ್ಲದೆ, ಸಮೀಕ್ಷೆ ನಡೆಸಿ 10 ವರ್ಷ ಕಳೆದಿರುವುದರಿಂದ, ನಿಯಮದಂತೆ ಹೊಸದಾಗಿ ಸಮೀಕ್ಷೆ ನಡೆಸುತ್ತಿದ್ದೇವೆ ಎಂದರು. ಸಾಮಾಜಿಕ ನ್ಯಾಯ ಒದಗಿಸಲು ■ 6ನೇ ಪುಟಕ್ಕೆ

ಪ್ರಧಾನಿ ಮೋದಿಗೆ ಸೈಪ್ರಸ್‌ನ ಅತ್ಯುನ್ನತ ನಾಗರಿಕ ಪ್ರಶಸ್ತಿ



ನಿಕೋಸಿಯಾ: ಸೈಪ್ರಸ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೋಮವಾರ ಆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಗ್ರ್ಯಾಂಡ್ ಕ್ರಾಸ್ ಆಫ್ ದಿ ಆರ್ಡರ್ ಆಫ್ ಮಕರಿ ಯೋಸ್ III ಆಫ್ ಸೈಪ್ರಸ್ ಅನ್ನು ಪ್ರದಾನ ಮಾಡಲಾಯಿತು. ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡೌಲೈಡ್ಸ್ ಅವರು ಪ್ರಧಾನಿ ಮೋದಿಗೆ ಗ್ರ್ಯಾಂಡ್ ಕ್ರಾಸ್ ಆಫ್ ದಿ ಆರ್ಡರ್ ಆಫ್ ಮಕರಿಯೋಸ್ III ಪ್ರಶಸ್ತಿ ನೀಡಿ ಗೌರವಿಸಿದರು. 'ಸೈಪ್ರಸ್‌ನ 'ಗ್ರ್ಯಾಂಡ್ ಕ್ರಾಸ್ ಆಫ್ ದಿ ಆರ್ಡರ್ ಆಫ್ ಮಕರಿಯೋಸ್ III' ಅನ್ನು ನಮ್ರತೆ ಮತ್ತು ಕೃತಜ್ಞತೆಯಿಂದ ಸ್ವೀಕರಿಸುತ್ತೇನೆ. ನಾನು ಇದನ್ನು ಭಾರತ ಮತ್ತು ಸೈಪ್ರಸ್ ನಡುವಿನ ಸ್ನೇಹಕ್ಕೆ ಅರ್ಪಿಸುತ್ತೇನೆ' ಎಂದು ಪ್ರಶಸ್ತಿ ಸ್ವೀಕರಿಸಿದ ನಂತರ ಪ್ರಧಾನಿ ಮೋದಿ ಹೇಳಿದ್ದಾರೆ.

ಆರ್ಡರ್ ಆಫ್ ಮಕರಿಯೋಸ್ III ಸೈಪ್ರಸ್‌ನ ಮೊದಲ ಅಧ್ಯಕ್ಷ ಆರ್ಚ್‌ಬಿಷಪ್ ಮಕರಿಯೋಸ್ III ಅವರ ಹೆಸರಿನಲ್ಲಿ ನೀಡುವ ಅತ್ಯುನ್ನತ ನಾಗರಿಕ ಗೌರವವಾಗಿದೆ.

ರಾಜ್ಯದಲ್ಲಿ ಗಣತಿ ಅನವಶ್ಯಕ

- ಹಿಂದೆ ನಡೆದ ಜಾತಿಗಣತಿಯಿಂದ 165 ಕೋಟಿ ವ್ಯಯ
- ರಾಹುಲ್ ಗಾಂಧಿ ಆದೇಶ ಪಾಲನೆಗೆ ಮತ್ತೊಮ್ಮೆ ಜಾತಿಗಣತಿ
- ಜಾತಿ ಗಣತಿ ಉದ್ದೇಶವನ್ನು ಯತೀಂದ್ರ ಮೊದಲು ಅರಿಯಲಿ
- 39 ಶಾಸಕರಿರುವ ಲಿಂಗಾಯತರಿಗೆ ಸಿಎಂ ಕುರ್ಚಿ ಬಿಟ್ಟು ಕೊಡುತ್ತೀರಾ

ಮೈಸೂರು, ಜೂ.16(ಬಿಎಲ್‌ಯು)– ದೇಶದಾದ್ಯಂತ ಕೇಂದ್ರ ಸರ್ಕಾರವೇ ಜನಗಣತಿಯೊಂದಿಗೆ ಜಾತಿ ಗಣತಿ ನಡೆಸುತ್ತಿರುವಾಗ ರಾಜ್ಯ ಸರ್ಕಾರದ ಜಾತಿ ಗಣತಿ ಅನವಶ್ಯಕ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅಭಿಪ್ರಾಯಪಟ್ಟರು.



ಮೈಸೂರಿನಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಭಾರತದ 16ನೇ ಜನಗಣತಿಗೆ ಕೇಂದ್ರ ಸರ್ಕಾರ ಇಂದು ಅಧಿಸೂಚನೆ ಹೊರಡಿಸಿರುವ ಹಿನ್ನೆಲೆಯಲ್ಲಿ ಇದರೊಂದಿಗೆ ಮೊದಲೇ ನಿರ್ಧರಿಸಿದಂತೆ ಜಾತಿ ಗಣತಿಯೂ ನಡೆಯಲಿದೆ ಎಂದರು.


ಕೇಂದ್ರ ಸರ್ಕಾರ ರಾಜಕೀಯವಾಗಿ ತನ್ನ ಸಾಮರ್ಥ್ಯ ಮೆರೆಯಲು ಜಾತಿ ಗಣತಿ ಮಾಡುತ್ತಿಲ್ಲ. ಜನರ ಆರ್ಥಿಕ ಸ್ಥಿತಿಗತಿ ತಿಳಿಯಲು ಸರ್ವೆ ಮಾಡಿಸುತ್ತಿದೆ. ಕೇಂದ್ರದಿಂದಲೇ ಜಾತಿ ಗಣತಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಪ್ರತ್ಯೇಕವಾಗಿ ಜಾತಿ ಗಣತಿ ನಡೆಸದೆ ಸುಮ್ಮನಿರುವುದು ಒಳಿತು. ಅಲ್ಲದೆ ರಾಜ್ಯ ಸರ್ಕಾರದ ಜಾತಿಗಣತಿ ಅಗತ್ಯವೂ ಇಲ್ಲ ಎಂದು ಪ್ರತಾಪ್ ಸಿಂಹ ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ 10 ವರ್ಷದ ಹಿಂದೆ 165 ಕೋಟಿ ವ್ಯಯ ಮಾಡಿ ಕಾಟಾಚಾರಕ್ಕೆ ಜಾತಿಗಣತಿ ಮಾಡಿದರು. ಇದು ಅವೈಜ್ಞಾನಿಕವಾಗಿರುವ ಹಿನ್ನೆಲೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ವಿರೋಧ ಮಾಡಿದವು.

ಈಗ ರಾಹುಲ್ ಗಾಂಧಿ ಆದೇಶದ ಮೇರೆಗೆ ಮತ್ತೊಂದು ಜಾತಿಗಣತಿ ಮಾಡುತ್ತಿದ್ದಾರೆ. ಇದರಿಂದ ಮತ್ತೆ ನೂರಾರು ಕೋಟಿ ವ್ಯರ್ಥವಾಗುತ್ತದೆ. ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳುತ್ತಿರುವ ರಾಜ್ಯ ಸರ್ಕಾರ ಇಂತಹ ತಂತ್ರ ರೂಪಿಸುತ್ತಿದೆ ಎಂದು ಆರೋಪಿಸಿದರು. ಜಾತಿ ಗಣತಿ ಬಗ್ಗೆ ■ 6ನೇ ಪುಟಕ್ಕೆ

ಮೆಟ್ರೋ ನಿಲ್ದಾಣಕ್ಕೆ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಹೆಸರು

ಮಡಿಕೇರಿ, ಜೂ.16– ಬೆಂಗಳೂರಿನ ಯಾವುದಾದರೊಂದು ಮೆಟ್ರೋ ರೈಲು ನಿಲ್ದಾಣಕ್ಕೆ ಭಾರತದ ವೀರ ಸೇನಾನಿ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರ ಹೆಸರು ನಾಮಕರಣ ಮಾಡುವ ಬಗ್ಗೆ ಶೀಘ್ರದಲ್ಲೇ ತೀರ್ಮಾನಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.



ಕೆ.ಎಂ. ಕಾರ್ಯಪ್ಪ



ಬೆಂಗಳೂರು ಕೊಡವ ಸಮಾಜಕ್ಕೆ 7ಎಕರೆ ಜಾಗವನ್ನು ಮಂಜೂರು ಮಾಡಿರುವ ಹಿನ್ನೆಲೆಯಲ್ಲಿ ಕೊಡವ ಸಮಾಜದಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ರಾಜಧಾನಿ ಬೆಂಗಳೂರಿನಲ್ಲಿರುವ ಯಾವುದಾದರೊಂದು ಮೆಟ್ರೋ ರೈಲು ನಿಲ್ದಾಣಕ್ಕೆ ಕಾರ್ಯಪ್ಪನವರ ಹೆಸರು ನಾಮಕರಣ ಸಂಬಂಧ ಶೀಘ್ರದಲ್ಲೇ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ, ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ಕೊಡವ ಸಮಾಜ ಸಂಖ್ಯೆಯಲ್ಲಿ ಅಲ್ಪಸಂಖ್ಯಾತರಾದರೂ ದೇಶ ಸೇವೆಯಲ್ಲಿ ಇವರಿಗೆ ಸರಿಸಮಾನರಾದವರು ಯಾರೂ ಇಲ್ಲ. ಸಂಸ್ಕೃತಿ ಮತ್ತು ಶಿಸ್ತಿನಲ್ಲಿ ಮುಂಚೂಣಿಯಲ್ಲಿದ್ದಾರೆ. ದೇಶ ರಕ್ಷಣೆಗೆ, ಕ್ರೀಡೆಗೆ, ರಾಜಕಾರಣಕ್ಕೆ ಕೊಡವರ ಕೊಡುಗೆ ಅಪಾರ ಎಂದು ಮುಖ್ಯ ಮಂತ್ರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು. ನಾವೆಲ್ಲರೂ ಭಾರತೀಯರು ಮತ್ತು ಕನ್ನಡಿಗರು. ದೇಶ ರಕ್ಷಣೆಯಲ್ಲಿ ಮುಂಚೂಣಿಯಲ್ಲಿರುವ ■ 6ನೇ ಪುಟಕ್ಕೆ

ಪಿರಿಯಾಪಟ್ಟಣ ಬಳಿ ಬಟ್ಟೆ ವ್ಯಾಪಾರಿಗೆ ಹನಿಟ್ರ್ಯಾಪ್

ಪೊಲೀಸ್ ಸಿಬ್ಬಂದಿ ಬಂಧನ; ಯುವತಿ ಸೇರಿ ಉಳಿದವರು ನಾಪತ್ತೆ


ಮೈಸೂರು, ಜೂ.16(ಬಿಎಲ್‌ಯು)– ಬಟ್ಟೆ ವ್ಯಾಪಾರಿಯನ್ನು ಹನಿಟ್ರ್ಯಾಪ್ ಖೆಡ್ಡಾಗೆ ಕೆಡವಿ, 10 ಲಕ್ಷ ಹಣಕ್ಕೆ ಬೇಡಿಕೆಯನ್ನಿಟ್ಟ ಘಟನೆ ಪಿರಿಯಾಪಟ್ಟಣ ತಾಲೂಕು, ಬೈಲಕುಪ್ಪೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಈ ಪ್ರಕರಣ ಸಂಬಂಧ ಹುಣಸೂರು ತಾಲೂಕಿನ ಓರ್ವ ಪೊಲೀಸ್ ಸಿಬ್ಬಂದಿಯನ್ನು ಬಂಧಿಸಲಾಗಿದೆ.



ಪೊಲೀಸ್ ಶಿವಣ್ಣ

ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯ ಸಿಬ್ಬಂದಿ ಶಿವಣ್ಣ ಅಲಿಯಾಸ್ ಪೊಲೀಸ್ ಶಿವಣ್ಣ ಬಂಧನಕ್ಕೊಳಗಾಗಿದ್ದು, ಬಟ್ಟೆ ವ್ಯಾಪಾರಿಯನ್ನು ಹನಿಟ್ರ್ಯಾಪ್ ಮಾಡಿದ್ದ ಯುವತಿ ಹಾಗೂ ಇನ್ನಿತರ ಆರೋಪಿಗಳು ತಲೆಮರೆಸಿಕೊಂಡಿದ್ದಾರೆ.

ಖರೀದಿ ನೆಪದಲ್ಲಿ ಖೆಡ್ಡಾ: ಪಿರಿಯಾಪಟ್ಟಣ ತಾಲೂಕು ಕಂಪಲಾಪುರದಲ್ಲಿ ದಿನೇಶ್ ಕುಮಾರ್, ಪೂಜಾ ಫ್ಯಾಷನ್ ಹೆಸರಿನ ಬಟ್ಟೆ ಅಂಗಡಿ ನಡೆಸುತ್ತಿದ್ದಾರೆ. ಜೂನ್ 11 ರಂದು ಅಂಗಡಿಗೆ ಬಂದ ಸುಮಾರು 23 ವರ್ಷದ ಯುವತಿ, ಲೆಗ್ಗಿನ್ಸ್ ಹಾಗೂ ಟಾಪ್ ಖರೀದಿ ಮಾಡಿದ್ದಾಳೆ. ಆ ವೇಳೆ ಹೊಸ ಡಿಸೈನ್ ಬಟ್ಟೆಗಳು ನನಗೆ ಬೇಕು, ನಾನು ನಿಮಗೆ ಫೋನ್ ಮಾಡುತ್ತೇನೆ ಎಂದು



ಹನಿಟ್ರ್ಯಾಪ್‌ಗೆ ಹೋಂಸ್ಟೇ ಬಳಕೆ

ಹನಿಟ್ರ್ಯಾಪ್‌ಗೆ ಆರೋಪಿಗಳು ಹೋಂಸ್ಟೇ ಬಳಸಿಕೊಂಡಿದ್ದಾರೆ. ಮದನ್ ಎಂಬುವರು ಮರಡಿಯೂರು ಗ್ರಾಮದಲ್ಲಿ ಹೋಂಸ್ಟೇ ನಿರ್ಮಾಣ ಮಾಡಿದ್ದಾರೆ. ಆದರೆ ಹೋಂಸ್ಟೇ ಅನ್ನು ಇನ್ನೂ ಬಾಡಿಗೆಗೆ ನೀಡುತ್ತಿರಲಿಲ್ಲ. ಆದರೆ ಮದನ್ ಅವರನ್ನು ಸಂಪರ್ಕಿಸಿದ ಪೊಲೀಸ್ ಪೇದೆ ಶಿವಣ್ಣ, ನಮ್ಮ ಸ್ನೇಹಿತರ ಕುಟುಂಬ ಪ್ರವಾಸಕ್ಕೆ ಬಂದಿದ್ದು, ನಿಮ್ಮ ಹೋಂಸ್ಟೇ ಬೇಕಾಗಿದೆ ಎಂದು ಕೇಳಿದ್ದಾನೆ. ಶಿವಣ್ಣನನ್ನು ನಂಬಿದ ಮದನ್ ಹೋಂಸ್ಟೇ ಕೀ ಕೊಟ್ಟಿದ್ದಾರೆ. ಆದರೆ ನಂಬಿ ಕೊಟ್ಟ ಸ್ಥಳವನ್ನು ಆರೋಪಿಗಳು ಹನಿಟ್ರ್ಯಾಪ್‌ಗೆ ಬಳಸಿಕೊಂಡಿದ್ದಾರೆ.

ದಿನೇಶ್ ಕುಮಾರ್‌ನ ಮೊಬೈಲ್ ನಂಬರ್ ಪಡೆದಿದ್ದಾಳೆ. ಮರುದಿನ ದಿನೇಶ್ ಕುಮಾರ್ ಅವರ ವಾಟ್ಸಾಪ್‌ಗೆ ಹಾಯ್ ಎಂದು ಮೆಸೇಜ್ ಬಂದಿದೆ. ಅದು ಅಪರಿಚಿತ ನಂಬರ್ ಆಗಿದ್ದರಿಂದ ದಿನೇಶ್ ಕುಮಾರ್ ಪ್ರತಿಕ್ರಿಯಿಸಿಲ್ಲ. ಆದರೆ

> ಬಟ್ಟೆ ವ್ಯಾಪಾರಿಯನ್ನು ವಂಚಿಸಿರುವ ಪ್ರಕರಣದಲ್ಲಿ ಮೂವರು ಭಾಗಿಯಾಗಿರುವ ಬಗ್ಗೆ ಮಾಹಿತಿ ಇದ್ದು, ಈ ಸಂಬಂಧ ತನಿಖೆ ಮುಂದುವರೆದಿದೆ. ಇತರೆ ಆರೋಪಿಗಳ ಬಗ್ಗೆ ತನಿಖೆಯಲ್ಲಿ ತಿಳಿಯಬೇಕಿದೆ.
>
> – **ನಾಗೇಶ್**, ಎಎಸ್ಪಿ

ಮರುದಿನ ಮೆಸೇಜ್ ಮಾಡಿ, ನಿನ್ನೆ ಮೆಸೇಜ್ ಕಳುಹಿಸಿದ್ದೀರಿ, ನೀವು ಯಾರು ಎಂದು ಕೇಳಿದ್ದಾರೆ. ಆಗ ನಾನು ನಿಮ್ಮ ಅಂಗಡಿಗೆ ಬಂದು ಹೊಸ ಡಿಸೈನ್ ಬಟ್ಟೆ ಬೇಕೆಂದು ಕೇಳಿದ್ದೆ ನೆನಪಿದೆಯೇ ಎಂದು ಯುವತಿ ಕೇಳಿದ್ದಾಳೆ. ನಂತರ ಯುವತಿ ಸಲುಗೆಯಿಂದ ದಿನೇಶ್ ಕುಮಾರ್ ಜೊತೆ ಚಾಟ್ ಮಾಡಲಾರಂಭಿಸಿದ್ದಾಳೆ. ಈ ವೇಳೆ ಯುವತಿ ಮೆಸೇಜ್‌ಗೆ ದಿನೇಶ್ ಕುಮಾರ್ ಕೂಡ ಚಾಟ್ ಮೂಲಕ ಪ್ರತಿಕ್ರಿಯೆ ನೀಡಿದ್ದಾರೆ. ಯುವತಿ ತನ್ನ ಫೋಟೋಗಳನ್ನೂ ಹಂಚಿಕೊಂಡು, ಬಲೆಗೆ ಬೀಳಿಸಿಕೊಂಡಿದ್ದಾಳೆ.

ಖತರ್ನಾಕ್ ಪ್ಲಾನ್: ಜೂನ್ 14 ರಂದು ಮಧ್ಯಾಹ್ನ 3.30ರ ವೇಳೆಯಲ್ಲಿ ದಿನೇಶ್ ಕುಮಾರ್‌ಗೆ ವಾಟ್ಸಾಪ್ ಕರೆ ಮಾಡಿದ ಯುವತಿ, ಮರಡಿಯೂರು ಗ್ರಾಮದಲ್ಲಿರುವ ನಮ್ಮ ಚಿಕ್ಕಮ್ಮನ ಮನೆಯಲ್ಲಿ ಒಬ್ಬಳೇ ಇದ್ದೇನೆ. ಈಗಲೇ ಲೊಕೇಷನ್ ಕಳುಹಿಸುತ್ತೇನೆ ಇಲ್ಲಿಗೆ ಬನ್ನಿ ಎಂದು ಆಹ್ವಾನಿಸಿದ್ದಾಳೆ. ಆಕೆಯನ್ನು ಭೇಟಿ ಮಾಡಲು ನಿರ್ಧರಿಸಿದ ದಿನೇಶ್ ಕುಮಾರ್ ಸಂಜೆ 4.45ರ ಹೊತ್ತಿಗೆ ■ 6ನೇ ಪುಟಕ್ಕೆ

ಮೈಸೂರು ಮಿತ್ರ

ಮಂಗಳವಾರ 17 ಜೂನ್ 2025

ಇಂದು ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ

ಮೈಸೂರು, ಜೂ.16– ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ, ಡಯಟ್‌ನಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರ ಹಾಗೂ ಮುಖ್ಯ ಶಿಕ್ಷಕರ ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ಲಿಖಿತ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಜೂ.17ರಂದು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆವರೆಗೆ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ–2023ರ ಸೆಕ್ಷನ್ 163 ರೀತ್ಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಈ ಪ್ರದೇಶಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿ ಹೊರತುಪಡಿಸಿ ಇತರೆ ಅನಧೀಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರೂ ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್, ಬ್ರೌಸಿಂಗ್ ಸೆಂಟರ್‌ಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಆದೇಶಿಸಲಾಗಿದೆ.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ಜೂ. 16–ಮೈಸೂರಿನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಜೂ. 19 ರಂದು ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರವು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಮೈಸೂರಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತ್ಯುತ್ಸವದ ಪ್ರಚಾರ ವಾಹನಕ್ಕೆ ಚಾಲನೆ

ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ವ್ಯಾಪಕ ಪ್ರಚಾರ ಉದ್ದೇಶ

ಮೈಸೂರು, ಜೂ.16(ಬಿಎಲ್‌ಯು)– ನಾಡಪ್ರಭು ಕೆಂಪೇಗೌಡರ 516ನೇ ಜಯಂತ್ಯುತ್ಸವದ ಪ್ರಚಾರ ವಾಹನಕ್ಕೆ ಮೈಸೂರಿನಲ್ಲಿ ಇಂದು ಚಾಲನೆ ನೀಡಲಾಯಿತು.

ಕುವೆಂಪುನಗರದ ಶ್ರೀ ಬಂದಂತಮ್ಮ ದೇವಸ್ಥಾನದ ಮುಂಭಾಗ ಕೆಂಪೇಗೌಡರ ಜಯಂತ್ಯುತ್ಸವದ ಪ್ರಚಾರ ವಾಹನಕ್ಕೆ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಚಾಲನೆ ನೀಡಿದರು.

ಮೈಸೂರಿನ ಕೃಷ್ಣರಾಜ, ಚಾಮರಾಜ, ನರಸಿಂಹರಾಜ ಹಾಗೂ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಎರಡು ಪ್ರಚಾರ ವಾಹನಗಳು ಕೆಂಪೇಗೌಡ ಜಯಂತ್ಯುತ್ಸವ ಸಂಬಂಧ ಪ್ರಚಾರ ಮಾಡಲಿವೆ. ಒಂದು ಪ್ರಚಾರ ವಾಹನ ಮೈಸೂರು ಗ್ರಾಮಾಂತರ ಪ್ರದೇಶದಲ್ಲಿ ಪ್ರಚಾರ ಮಾಡಿ ಜೂನ್ 27ರಂದು ನಡೆಯುವ ಕೆಂಪೇಗೌಡರ ಜಯಂತಿಯಲ್ಲಿ ಎಲ್ಲರೂ ಭಾಗಿಯಾಗುವಂತೆ ಮನವಿ ಮಾಡಲಿದೆ.

ಈ ವೇಳೆ ಮಾತನಾಡಿದ ಕೆಂಪೇಗೌಡ ಆಚರಣಾ ಸಮಿತಿ ಅಧ್ಯಕ್ಷ ಪಿ.ಪ್ರಶಾಂತ್ ಗೌಡ, ನಾಡಪ್ರಭು ಕೆಂಪೇಗೌಡರು ಯಾವುದೇ ಒಂದು ಸಮುದಾಯಕ್ಕೆ ಸೇರಿದವರಲ್ಲ. ಜಾತ್ಯಾತೀತ ಹಾಗೂ ಧರ್ಮಾತೀತವಾಗಿ ನಾಡಿನ ಅಭಿವೃದ್ಧಿಗೆ ಕಂಕಣಬದ್ಧರಾಗಿ ಶ್ರಮಿಸಿದರು. ವೃತ್ತಿ ಆಧಾರದ ಮೇಲೆ ಪ್ರತಿಯೊಂದು ಸಮುದಾಯಕ್ಕೆ ಬೆಂಗಳೂರಿನಲ್ಲಿ ಪೇಟೆಗಳ ನಿರ್ಮಾಣ ಮಾಡಿದರು. ಈ ಹಿನ್ನೆಲೆಯಲ್ಲಿ ಎಲ್ಲಾ ಸಮುದಾಯದವರು ಕೆಂಪೇಗೌಡರ ಜಯಂತ್ಯುತ್ಸವದಲ್ಲಿ ಭಾಗಿಯಾಗುವಂತೆ ಕೋರಿದರು.

ಮೈಸೂರಿನ ಕಲಾಮಂದಿರದಲ್ಲಿ ಜೂ.27ರಂದು ಕೆಂಪೇಗೌಡರ ಜಯಂತಿ ನಡೆಯಲಿದೆ. ಇದಕ್ಕೂ ಮುನ್ನ ಅರಮನೆ ಆಂಜನೇಯಸ್ವಾಮಿ ದೇವಸ್ಥಾನದಿಂದ ವರ್ಣರಂಜಿತ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿ ಕಾರ್ಯಕ್ರಮ ನಡೆಯುವ ಕಲಾಮಂದಿರ ತಲುಪಲಿದೆ.

ಪ್ರಚಾರ ವಾಹನಕ್ಕೆ ಚಾಲನೆ ನೀಡಿದ ಸಂದರ್ಭದಲ್ಲಿ ಶಾಸಕರಾದ ಜಿ.ಟಿ. ದೇವೇಗೌಡ, ಕೆ.ಹರೀಶ್‌ಗೌಡ, ಟಿ.ಎಸ್. ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಒಕ್ಕಲಿಗರ ಸಂಘದ ನಿರ್ದೇಶಕ ಸಿ.ಜಿ.ಗಂಗಾಧರ್, ಎ.ರವಿ, ಮಾಜಿ ಉಪಾಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ, ಕರ್ನಾಟಕ ಕಾವಲುಪಡೆ ಅಧ್ಯಕ್ಷ ಮೋಹನ್ ಕುಮಾರ್‌ಗೌಡ, ಜೆಡಿಎಸ್ ಮುಖಂಡ ರಾಜಣ್ಣ ಇನ್ನಿತರರು ಪಾಲ್ಗೊಂಡಿದ್ದರು.



ಮೈಸೂರಿನ ಕುವೆಂಪುನಗರದ ಬಂದಂತಮ್ಮ ದೇವಸ್ಥಾನದ ಮುಂದೆ ನಾಡಪ್ರಭು ಕೆಂಪೇಗೌಡರ 516ನೇ ಜಯಂತ್ಯುತ್ಸವದ ಪ್ರಚಾರ ವಾಹನಕ್ಕೆ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಚಾಲನೆ ನೀಡಿದರು. ಶಾಸಕರಾದ ಜಿ.ಟಿ.ದೇವೇಗೌಡ, ಕೆ.ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಆಚರಣಾ ಸಮಿತಿ ಅಧ್ಯಕ್ಷ ಪ್ರಶಾಂತ್‌ಗೌಡ, ಒಕ್ಕಲಿಗರ ಸಂಘದ ನಿರ್ದೇಶಕ ಸಿ.ಜಿ.ಗಂಗಾಧರ್, ಎ.ರವಿ, ಮಾಜಿ ಉಪಾಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ, ರಾಜಣ್ಣ ಇನ್ನಿತರರಿದ್ದಾರೆ.



ಕೆಂಪೇಗೌಡ ಜಯಂತ್ಯುತ್ಸವದ ಪ್ರಚಾರ ವಾಹನ.

ಜಾತಿ ಗಣತಿಗೆ ಹಣ ಎಲ್ಲಿಂದ ತರುತ್ತೀರಾ: ಶಾಸಕ ಶ್ರೀವತ್ಸ ಪ್ರಶ್ನೆ



ಟಿ.ಎಸ್.ಶ್ರೀವತ್ಸ

ಮೈಸೂರು, ಜೂ.16(ಬಿಎಲ್‌ಯು)– ಈಗಾಗಲೇ ರಾಜ್ಯದ ಆರ್ಥಿಕ ಪರಿಸ್ಥಿತಿ ಹೀನಾಯವಾಗಿರುವ ಸಂದರ್ಭದಲ್ಲಿ ಮತ್ತೊಮ್ಮೆ ಜಾತಿ ಗಣತಿ ಮಾಡಲು ಹಣ ಎಲ್ಲಿಂದ ತರುತ್ತಾರೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಪ್ರಶ್ನಿಸಿದರು.

ನಗರದಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಳೆದ ಹತ್ತು ವರ್ಷದ ಹಿಂದೆ ಮಾಡಿದ ಜಾತಿ ಗಣತಿಯಿಂದ ನೂರಾರು ಕೋಟಿ ಹಣ ಪೋಲಾಗಿದೆ. ಈಗ ಮತ್ತೆ ಜಾತಿ ಗಣತಿ ಮಾಡಿ ಜನರ ತೆರಿಗೆ ಹಣವನ್ನು ವ್ಯಯ ಮಾಡುತ್ತಿದ್ದಾರೆ ಎಂದು ಆಪಾದಿಸಿದರು.

ಒಟ್ಟಾರೆ ಜಾತಿ ಗಣತಿ ಮಾಡುವ ಮೂಲಕ ತಮ್ಮ ಆಡಳಿತದ ವೈಫಲ್ಯವನ್ನು ಮುಚ್ಚಿಕೊಳ್ಳಲು ಸಿದ್ದರಾಮಯ್ಯ ತಂತ್ರ ರೂಪಿಸಿದ್ದಾರೆ ಎಂದು ಆರೋಪಿಸಿದರು.

ಈ ಹಿಂದೆ ನಡೆದ ಜಾತಿಗಣತಿ ಸರಿ ಇಲ್ಲ ಎಂದು ಲಿಂಗಾಯತ, ಒಕ್ಕಲಿಗ ಸಮುದಾಯ ವಿರೋಧಿಸಿತ್ತು. ಯಾರೂ ಏನೇ ವಿರೋಧ ಮಾಡಿದರೂ ಹಿಂದೆ ನಡೆದ ಜಾತಿಗಣತಿ ಜಾರಿ ಮಾಡುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದ್ದರು. ಆದರೆ ಈಗ ಕಾಂಗ್ರೆಸ್ ಹೈಕಮಾಂಡ್ ಆದೇಶಿಸಿದೆ ಎಂದು ಹಿಂದಿನ ಜಾತಿಗಣತಿ ಕೈಬಿಟ್ಟು ಹೊಸದಾಗಿ ಜಾತಿಗಣತಿ ಮಾಡಿಸುತ್ತಿದ್ದಾರೆ. ಈಗ ಮತ್ತೊಮ್ಮೆ ಗಣತಿ ಮಾಡಲು ಹಣ ಎಲ್ಲಿಂದ ತರುತ್ತಾರೆ. ಗಣತಿಗಾಗಿ ಸಿಬ್ಬಂದಿಗಳನ್ನು ಎಲ್ಲಿ ಹೊಂದಿಸುತ್ತಾರೆ ಎಂದು ಪ್ರಶ್ನಿಸಿದ ಶ್ರೀವತ್ಸ ಜಾತಿಗಣತಿ ಬಗ್ಗೆ ಜನರಲ್ಲಿ ಗೊಂದಲ ಮೂಡಿಸುತ್ತಿದ್ದಾರೆ. ಸರ್ಕಾರದ ವೈಫಲ್ಯತೆಯ ಸರಮಾಲೆಗೆ ಇದೂ ಈಗ ಸೇರ್ಪಡೆಯಾಗಿದೆ ಎಂದು ದೂರಿದರು.

ಕಡಕೊಳ ದಿ ಯೂನಿಯನ್ ರೈತ ಸಹಕಾರ ಸಂಘದ ಅಧ್ಯಕ್ಷರಾಗಿ ನಾರಾಯಣ್, ಉಪಾಧ್ಯಕ್ಷರಾಗಿ ಪೂರ್ಣಿಮಾ ಅವಿರೋಧ ಆಯ್ಕೆ

ಮೈಸೂರು, ಜೂ. 16 –ತಾಲೂಕಿನ ಕಡಕೊಳ ಗ್ರಾಮದ ದಿ ಯೂನಿಯನ್ ರೈತ ಸಹಕಾರ ಸಂಘಕ್ಕೆ ನಡೆದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಕೆ.ಆರ್.ನಾರಾಯಣ್ ಅಧ್ಯಕ್ಷರಾಗಿ, ಮತ್ತು ಉಪಾಧ್ಯಕ್ಷರಾಗಿ ಪೂರ್ಣಿಮಾ ಅವಿರೋಧವಾಗಿ ಆಯ್ಕೆಯಾದರು.

ಇದೇ ವೇಳೆ ನೂತನ ಅಧ್ಯಕ್ಷ ಕೆ.ಆರ್. ನಾರಾಯಣ್ ಹಾಗೂ ಉಪಾಧ್ಯಕ್ಷೆ ಪೂರ್ಣಿಮಾ ಮಾತನಾಡಿ, ಸಂಘವು ಸ್ಥಾಪನೆಯಾದಾಗಿನಿಂದಲೂ ಅವಿರೋಧವಾಗಿ ಆಯ್ಕೆಯಾಗಿರಲಿಲ್ಲ. ಈ ಅವಧಿಯಲ್ಲಿ ಅದು ಸಾಧ್ಯವಾಗಿದೆ. ಹಾಗಾಗಿ ಎಲ್ಲರಿಗೂ ಸಾಮಾಜಿಕ ನ್ಯಾಯ ದೊರೆತಂತಾಗಿದೆ. ನಾವು ಸಂಘದ ಸದಸ್ಯರ ಸಲಹೆ ಸೂಚನೆಗಳನ್ನು ಪಡೆದು ಮಾದರಿ ಸಹಕಾರ ಸಂಘವನ್ನಾಗಿ ಮಾಡಲು ಶ್ರಮಿಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯ ಮುಖಂಡ ಹಾಗೂ ಜಿ.ಪಂ ಮಾಜಿ ಸದಸ್ಯ ಪಟೇಲ್ ಜವರೇಗೌಡ ಮಾತನಾಡಿ, ಈ ಸಹಕಾರ ಸಂಘವು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅನುದಾನಗಳನ್ನು ಪಡೆದು ಅಭಿವೃದ್ಧಿ ಹೊಂದಿ ಜಿಲ್ಲೆಗೆ ಮಾದರಿ ಸಹಕಾರ ಸಂಘವಾಗಿ ಹೊರಹೊಮ್ಮಲು ಎಲ್ಲಾ ನಿರ್ದೇಶಕರು, ಸದಸ್ಯರು ಹಾಗೂ ಗ್ರಾಮಸ್ಥರು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಈ ವೇಳೆ ಸಂಘದ ನಿರ್ದೇಶಕರಾದ ನಟರಾಜು, ಕಬಿನಿಗೌಡ, ವಿಲ್ಲನಾಯಕ, ಶರಹಟ್ಟಿ ಲಿಂಗಪ್ಪ, ಪುಟ್ಟಮಾದಶೆಟ್ಟಿ, ಕೆಂಪಮ್ಮ, ಬೀರಪ್ಪ, ರಜೇಶ್, ರಾಮಲಿಂಗು, ವಿಶ್ವನಾಥ್, ಮಹೇಶ್, ಸಿದ್ದರಾಮೇಗೌಡ, ನಾಗರಾಜು, ರವಿಗೌಡ, ಶ್ರೀಕಂಠು, ರಮೇಶ್, ಮಾದೇಶ್, ಮಹದೇವ, ನಂಜಪ್ಪ, ಕಡಕೊಳ ರೇವಲಿಂಗ, ಕಡಕೊಳ ಕುಮಾರಸ್ವಾಮಿ ಸೇರಿದಂತೆ ಸಹಕಾರ ಸಂಘಕ್ಕೆ ಸೇರಿದ 18 ಗ್ರಾಮಗಳ ಮುಖಂಡರು, ಸಂಘದ ಸದಸ್ಯರು ಉಪಸ್ಥಿತರಿದ್ದರು.



ಕಡಕೊಳ ಗ್ರಾಮದ ದಿ ಯೂನಿಯನ್ ರೈತ ಸಹಕಾರ ಸಂಘಕ್ಕೆ ನಡೆದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಕೆ.ಆರ್.ನಾರಾಯಣ್ ಅಧ್ಯಕ್ಷರಾಗಿ ಮತ್ತು ಉಪಾಧ್ಯಕ್ಷರಾಗಿ ಪೂರ್ಣಿಮಾ ಅವಿರೋಧವಾಗಿ ಆಯ್ಕೆಯಾದರು.

ಜನಸಂಪರ್ಕ ಸಭೆ

ಮೈಸೂರು,ಜೂ.16–ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವಿ.ವಿ ಮೊಹಲ್ಲಾ ವಿಭಾಗದ ವ್ಯಾಪ್ತಿಯ ಕೇಂದ್ರ, ಹೂಟಗಳ್ಳಿ, ವಿ.ವಿ ಮೊಹಲ್ಲಾ, ಕುವೆಂಪುನಗರ, ಆರ್.ಕೆ.ನಗರ ಉಪವಿಭಾಗ ಕಚೇರಿಗಳಲ್ಲಿ ಜೂ.18 ಮತ್ತು 19 ರಂದು ಗ್ರಾಹಕರ ಕುಂದುಕೊರತೆಗಳ ಜನಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.


ಜೂ.18ರಂದು ಬೆಳಗ್ಗೆ 11 ಗಂಟೆಗೆ ಹೂಟಗಳ್ಳಿ ಉಪವಿಭಾಗ ಕಚೇರಿಯಲ್ಲಿ ಹಾಗೂ ಮಧ್ಯಾಹ್ನ 3 ಗಂಟೆಗೆ ವಿ.ವಿ ಮೊಹಲ್ಲಾ ಉಪವಿಭಾಗ ಕಚೇರಿಯಲ್ಲಿ, ಜೂ.19ರಂದು ಬೆಳಗ್ಗೆ 11 ಗಂಟೆಗೆ ಕುವೆಂಪುನಗರ ಉಪವಿಭಾಗ ಕಚೇರಿಯಲ್ಲಿ ಹಾಗೂ ಮಧ್ಯಾಹ್ನ 3 ಗಂಟೆಗೆ ಆರ್.ಕೆ.ನಗರ ಉಪವಿಭಾಗ ಕಚೇರಿಯಲ್ಲಿ ಆಯೋಜಿಸಲಾಗಿದ್ದು, ಗ್ರಾಹಕರು ವಿದ್ಯುತ್ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳೇನಾದರೂ ಇದ್ದಲ್ಲಿ ಜನಸಂಪರ್ಕ ಸಭೆಯಲ್ಲಿ ಲಿಖಿತ ಅರ್ಜಿ ಸಲ್ಲಿಸಿ ತಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

ಗಿಡ ನೆಡುವ ಕಾರ್ಯಕ್ರಮ



ಮೈಸೂರಿನ ನ್ಯಾಯಾಲಯ ಮುಂಭಾಗದ ಉದ್ಯಾನವನದಲ್ಲಿ ಚಾಮುಂಡೇಶ್ವರಿ ಬಳಗದಿಂದ ತಂದೆಯಂದಿರ ದಿನವನ್ನು ಗಿಡ ನೆಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಸಿದ್ದರಾಮಯ್ಯ ಬ್ರಿಗೇಡ್ ರಾಜ್ಯ ಅಧ್ಯಕ್ಷ ಹಿನಕಲ್ ಉದಯ್, ಕಾಂಗ್ರೆಸ್ ಮುಖಂಡರಾದ ಆರಿಫ್ ಪಾಷಾ, ಜಿ.ರಾಘವೇಂದ್ರ, ಚಂದ್ರು, ರಾಜೇಶ್ ಪಳನಿ, ಲೋಕೇಶ್, ರಮೇಶ್, ರಾಮಪ್ಪ, ರಾಜೇಶ್, ಮೋಹನ್, ಗುಂಡಪ್ಪ, ಕೃಷ್ಣಪ್ಪ, ರವಿಚಂದ್ರ ಇನ್ನಿತರರು ಹಾಜರಿದ್ದರು.

ಅನ್ನ ಸಂತರ್ಪಣೆ



ಮೈಸೂರಿನ ಜೆ.ಪಿ.ನಗರದ ನಾಚನಹಳ್ಳಿಪಾಳ್ಯದಲ್ಲಿ ಚಾಮುಂಡೇಶ್ವರಿ ಅಮ್ಮನವರ 10ನೇ ವರ್ಷದ ದಶಮಾನೋತ್ಸವ ಪ್ರಯುಕ್ತ ಅನ್ನಸಂತರ್ಪಣಾ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಕಾರ್ಯಕ್ರಮ ಉದ್ಘಾಟಿಸಿದರು. ಈ ವೇಳೆ ಸಿದ್ದಪ್ಪಾಜಿ, ಪ್ರಸನ್ನ, ಜಗನ್ನಾಥ್ ಭೋವಿ, ಶರತ್ ಗೌಡ, ರವೀಂದ್ರ, ಮನುರಾಜ್, ಜಗದೀಶ್‌ಗೌಡ, ಮಹೇಂದ್ರ ಮತ್ತಿತರರಿದ್ದರು.

ಡಿಪ್ಲೊಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮೈಸೂರು,ಜೂ.16– 2025–26ನೇ ಸಾಲಿಗೆ ಮೂರು ವರ್ಷಗಳ ಅವಧಿಯ ಡಿಪ್ಲೊಮಾ ಕೋರ್ಸುಗಳ ಪ್ರವೇಶಕ್ಕೆ (ಅಖಿಲ ಭಾರತ ಮಟ್ಟದಲ್ಲಿ) ವಿಶೇಷಚೇತನ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ ಜೂ.23ರವರೆಗೆ ವಿಸ್ತರಿಸಲಾಗಿದೆ. ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರ್ ಅನುದಾನಿತ ಕೋರ್ಸುಗಳು, ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್ (ಫಾರ್ ವಿಜ್ಯುವಲಿ ಇಂಪರಡ್), ಅಪಾರೇಲ್ ಡಿಸೈನ್ & ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ & ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ ಅನುದಾನ ರಹಿತ ಕೋರ್ಸ್‌ಗಳು. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹಾಗೂ ಅಂಗವೈಕಲ್ಯತೆ ಹೊಂದಿರುವ ಅಭ್ಯರ್ಥಿಗಳು ಮೂಳೆ ಮತ್ತು ಕೀಲು ಅಂಗವಿಕಲತೆ 40% ಮತ್ತು ಮೇಲ್ಪಟ್ಟು, ಕಿವುಡು ಮತ್ತು ಮೂಗು ಅಂಗವಿಕಲತೆ – 60 ಡಿಬಿ ಮತ್ತು ಮೇಲ್ಪಟ್ಟು, ಅಂಧತ್ವ–6/60 ಅಥವಾ 20/200 ಸ್ನೆಲೆನ್ – ಕ್ರ.ಸಂ.6ರ ಕೋರ್ಸಿಗೆ ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ವಿದ್ಯಾರ್ಥಿವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುತ್ತದೆ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿ ನಿಲಯದ ಸೌಲಭ್ಯ ಕಲ್ಪಿಸಲಾಗಿದೆ. ಪ್ರವೇಶಕ್ಕೆ ಅರ್ಜಿಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳು ರೂ. 100/– ಹಾಗೂ SC/ST/C-I ವರ್ಗದವರಿಗೆ ರೂ. 50/– ನಗದು ಅಥವಾ ಡಿ.ಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಕಳುಹಿಸಿ ಪಡೆಯಬಹುದು ಅಥವಾ ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಇ–ಮೇಲ್ www.jsspda.org ಹಾಗೂ ಮೊ.ಸಂ.98446 44937ನ್ನು ಸಂಪರ್ಕಿಸಬಹುದು ಎಂದು ಜೆ.ಎಸ್.ಎಸ್. ವಿಶೇಷಚೇತನರ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ನೇರ ಫೋನ್–ಇನ್



ಜವರೇಗೌಡ


ಮೈಸೂರು, ಜೂ.16–2025–2026ನೇ ಸಾಲಿನ ಶೈಕ್ಷಣಿಕ ವರ್ಷದ ಯೋಜನೆಗಳ ಕುರಿತ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮವನ್ನು ಜೂ.17ರ ಮಂಗಳವಾರ ಬೆಳಗ್ಗೆ 11:30ರಿಂದ 12:30ರವರೆಗೆ ಆಯೋಜಿಸಿದ್ದು, ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆ (ಆಡಳಿತ), ಉಪನಿರ್ದೇಶಕ ಎಸ್.ಟಿ.ಜವರೇಗೌಡ ಭಾಗವಹಿಸಲಿದ್ದಾರೆ. ಸಾರ್ವಜನಿಕರು 2025ನೇ ಸಾಲಿನ ಸರ್ಕಾರಿ ಶಾಲೆಗಳ ಶಿಕ್ಷಣದ ಅಭಿವೃದ್ಧಿಗಾಗಿ ಈ ಶೈಕ್ಷಣಿಕ ವರ್ಷದಲ್ಲಿ ಇಲಾಖೆ ಕೈಗೊಂಡಿರುವ ವಿಶೇಷ ಯೋಜನೆಗಳ ಕುರಿತಂತೆ ನೇರವಾಗಿ ಉಪ ನಿರ್ದೇಶಕರ ಜೊತೆ ಮಾತನಾಡಬಹುದು. ಅದಕ್ಕಾಗಿ ನೀವು ಕರೆಮಾಡಬೇಕಾದ ನಿಲಯದ ದೂ.ಸಂಖ್ಯೆ: 8296725912 / 0821–25 46 563. ಜೆಎಸ್‌ಎಸ್ ರೇಡಿಯೋವನ್ನು ಪ್ಲೇ ಸ್ಟೋರ್‌ನಲ್ಲಿ ಲಭ್ಯವಿರುವ ಆ್ಯಪ್ ಮೂಲಕ ವಿಶ್ವದ ಯಾವುದೇ ಮೂಲೆಯಲ್ಲಾದರೂ ಆಲಿಸಬಹುದು.

ಸಹಾಯಧನಕ್ಕೆ ಅರ್ಜಿ ಆಹ್ವಾನ

ಮೈಸೂರು: 2025–26ನೇ ಶೈಕ್ಷಣಿಕ ವರ್ಷದಲ್ಲಿ ಬೀಡಿ/ಸುಣ್ಣದ ಕಲ್ಲು/ ಡೋಲೊಮೈಟ್/ಗಣಿ/ಕಬ್ಬಿಣ, ಕ್ರೋಮ್ ಮತ್ತು ಮ್ಯಾಂಗನೀಸ್ ಅದಿರು ಗಣಿ/ಸಿನಿ ಕಾರ್ಮಿಕರ ಮಕ್ಕಳಿಗೆ ಶಿಕ್ಷಣಕ್ಕಾಗಿ ಆರ್ಥಿಕ ಸಹಾಯಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಪುರುಷ ಮತ್ತು ಮಹಿಳೆ ಇಬ್ಬರಿಗೂ 1ರಿಂದ 4 ತರಗತಿ ವಿದ್ಯಾರ್ಥಿಗಳಿಗೆ (ಉಡುಪುಗಳು, ಪುಸ್ತಕಗಳು ಇತ್ಯಾದಿಗಳ ಖರೀದಿಗೆ) ರೂ.1000, 5ರಿಂದ 8 ತರಗತಿಯ ವಿದ್ಯಾರ್ಥಿಗಳಿಗೆ ರೂ.1500, 9, 10 ತರಗತಿ ವಿದ್ಯಾರ್ಥಿಗಳಿಗೆ ರೂ.2000, 11, 12 ವಿದ್ಯಾರ್ಥಿಗಳಿಗೆ ರೂ.3000, ITI, ಪಾಲಿಟೆಕ್ನಿಕ್/ಪದವಿ ಕೋರ್ಸ್‌ಗಳು(ಬಿಎಸ್‌ಸಿ ಕೃಷಿ ಸೇರಿದಂತೆ) ರೂ.6000 ವೃತ್ತಿಪರ ಕೋರ್ಸ್‌ಗಳು ರೂ.25,000 ವಿದ್ಯಾರ್ಥಿವೇತನ ನೀಡಲಾಗುತ್ತದೆ. scholarships.gov.in ಮೂಲಕ ಅರ್ಜಿ ಸಲ್ಲಿಸಬಹುದು. ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಆಗಸ್ಟ್ 31, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ಅಕ್ಟೋಬರ್ 31 ಕೊನೆಯ ದಿನಾಂಕವಾಗಿರುತ್ತದೆ.

ನಿಧನ


ಜೋಗೇಗೌಡ



ಮೈಸೂರು, ಜೂ.16– ಮೈಸೂರಿನ ಪಡುವಾರಹಳ್ಳಿಯ 6ನೇ ಮುಖ್ಯ ರಸ್ತೆ, 1ನೇ ಅಡ್ಡರಸ್ತೆಯ ನಿವಾಸಿ ಜೋಗೇಗೌಡ (ಜೋಗಪ್ಪ) ಶುಕ್ರವಾರ ನಿಧನರಾದರು. ಮೃತರು ಪತ್ನಿ, ಪುತ್ರರಾದ ರಮೇಶ್ ಗೌಡ, ಸಿಲ್ಕಿ ಗೌಡ, ಪ್ರಭಾ ಗೌಡ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗೋಕುಲಂನ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೃತರ ನಿಧನಕ್ಕೆ ಶಾಸಕ ಕೆ.ಹರೀಶ್‌ಗೌಡ, ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಮರಿಸ್ವಾಮಿ, ಸಿಟಿ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಶಿವು, ನಕುಲ್‌ಗೌಡ, ನಿಖಿಲ್ ಗೌಡ ಸಂತಾಪ ಸೂಚಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.06.2025 ಮಂಗಳವಾರ, ಮಳೆ ನಕ್ಷತ್ರ: ಮೃಗಶಿರ, 08.06.2025 ರಿಂದ 21.06.2025 ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ, ತಿಥಿ: ಷಷ್ಠಿ, ನಕ್ಷತ್ರ: ಶತಭಿಷ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 6.30ರಿಂದ ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9ರಿಂದ ಬೊಜ್ಜು ನಿವಾರಣಾ ಶಿಬಿರ, ಸಂಧಿವಾತಕ್ಕೆ ಚಿಕಿತ್ಸಾ ಶಿಬಿರ, ಗರ್ಭಾಶಯ ಮುಖದಲ್ಲಿ ಹುಣ್ಣು (ಸರ್ವಿಕಲ್ ಎರೋಷನ್) ಶಿಬಿರ, ಕಾರ್ನಿಯಲ್ ಒಪೇಸಿಟಿ (ಕಾರ್ನಿಯಾದ ಅಪಾರದರ್ಶಕತೆ, ಕಣ್ಣಿನ ಹೂ)ಗೆ ಚಿಕಿತ್ಸಾ ಶಿಬಿರ, ಇಂಗ್ವಾನಲ್ ಹರ್ನಿಯಾ ಮತ್ತು ಮೂಲವ್ಯಾಧಿ ಚಿಕಿತ್ಸಾ ಶಿಬಿರ, ಕುತ್ತಿಗೆ ಹಾಗೂ ಬೆನ್ನುನೋವಿಗೆ ಆಕ್ಯೂಪಂಕ್ಚರ್ ಮತ್ತು ಯೋಗ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಮಕ್ಕಳಲ್ಲಿ ಕಂಡು ಬರುವ ಹಸಿವಾಗದೆ ಇರುವುದು, ಅಜೀರ್ಣ, ಹೊಟ್ಟೆನೋವು, ಜಂತುಹುಳುವಿನ ಬಾಧೆ, ರುಮಟೈಡ್ ಆರ್ಥ್ರೈಟಿಸ್ ಚಿಕಿತ್ಸಾ ಶಿಬಿರ, ಉತ್ತಮ ನಿದ್ರೆ ಅಭ್ಯಾಸ ಸಮಸ್ಯೆ ನಿವಾರಣೆಯ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಯಿಂದ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್ :** ಆಕ್ಯೂಪ್ರೆಶರ್, ಸು–ಜೋಕ್ ಮತ್ತು ಆಕ್ಯೂ ಡಿಜಿಟಲ್ ಫಿಶಿಯೋ ಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಇನ್ನರ್‌ವ್ಹೀಲ್, ರೋಟರಿ ಭವನ, ವಿಜಯನಗರ, ರೈಲ್ವೆ ಬಡಾವಣೆ, ಬೆಳಗ್ಗೆ 10.30ಕ್ಕೆ.

■ **ಶಬರಿಮಲ ಶ್ರೀ ಅಯ್ಯಪ್ಪ ಸಮಿತಿ (ಶ್ರೀ ಅಯ್ಯಪ್ಪ ಸ್ವಾಮಿ ಹಾಗೂ ಶ್ರೀ ಗುರುವಾಯೂರಪ್ಪನ್ ದೇವಾಲಯ):** ಪ್ರತಿಷ್ಠಾಪನಾ ವಾರ್ಷಿಕ ಮಹೋತ್ಸವ, ಸಂಜೆ 5.30ರಿಂದ ಗಣಪತಿ ಹೋಮಂ, ಚತುಶುದ್ಧಿ, ಶ್ರೀ ಗುರುವಾಯೂರಪ್ಪನಿಗೆ ಬಿಂಬ ಶುದ್ಧಿ, ಧಾರ, ಪಂಚಗವ್ಯಂ, ಪಂಚಗಂ, ಅಸ್ತ್ರ ಕಳಶಪೂಜಾ, ಕಳಶಾಭಿಷೇಕಂ, ಉಚ್ಛ ಪೂಜೆ, ಮಧ್ಯಾಹ್ನ 12ಕ್ಕೆ ಅನ್ನದಾನ, ಸಂಜೆ 5.30 ರಿಂದ ದೀಪಾರಾಧನೆ, ವಾದ್ಯಗಳೊಂದಿಗೆ ವಿಶೇಷ ಪೂಜೆ, ಅತ್ತಾಳ ಪೂಜಾ, ಸ್ಥಳ: ದೇವಾಲಯದ ಸನ್ನಿಧಿ, ಚಾಮುಂಡಿಬೆಟ್ಟದ ಪಾದ.

■ **ಶ್ರೀ ಕುದೇರು ಮಠ:** ಶ್ರೀ ಮನ್ನಿರಂಜನ ಮಹಾತ್ಮ ಶ್ರೀ ಗುರುಮಲ್ಲೇಶ್ವರ ಮಹಾ ಪ್ರಭುಗಳ 126ನೇ ಪ್ರಮಥರ ಗಣಾರಾಧನೆ ಮತ್ತು ಲಿಂಗೈಕ್ಯ ಶ್ರೀ ಗುರುಲಿಂಗಸ್ವಾಮಿಗಳವರ 34ನೇ ವಾರ್ಷಿಕ ಗಣಾರಾಧನಾ ಮಹೋತ್ಸವ, ಶಿವಪೂಜೆ, ಶ್ರೀ ಸಿದ್ಧಗಂಗಾ ಮಠದ ಶ್ರೀ ಶಿವಸಿದ್ದೇಶ್ವರ ಮಹಾಸ್ವಾಮಿಗಳು, ಮುಖ್ಯ ಅತಿಥಿಗಳು : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಜಿ.ಟಿ. ದೇವೇಗೌಡ, ಶ್ರೀವತ್ಸ, ಹೆಚ್.ಎಂ.ಗಣೇಶ್‌ಪ್ರಸಾದ್, ಯತೀಂದ್ರ ಸಿದ್ದರಾಮಯ್ಯ, ಮುಖಂಡರಾದ ಕವೀಶ್‌ಗೌಡ, ಹೆಚ್.ವಿ. ರಾಜೀವ್, ಎಂ.ಕೆ. ಸೋಮಶೇಖರ್, ಮರಿತಿಬ್ಬೇಗೌಡ, ಎಂ.ಜಿ. ಸುದೀಪ್, ಎಸ್. ನಿಶಾಂತ್, ಸ್ಥಳ: ಕುದೇರು ಮಠ, 4ನೇ ಕ್ರಾಸ್, ಬಸವೇಶ್ವರ ರಸ್ತೆ.

■ **ಶ್ರೀ ತೋಂಟದಾರ್ಯ ವಿದ್ಯಾಸಂಸ್ಥೆ :** ಮಹಾತ್ಮ ಶ್ರೀ ಗುರುಮಲ್ಲೇಶ್ವರರ 126ನೇ ಪ್ರಮಥ ಗಣಾರಾಧನೆ ಶ್ರೀ ಗುರುಲಿಂಗಸ್ವಾಮಿಗಳವರ 34ನೇ ವಾರ್ಷಿಕ ಗಣಾರಾಧನೆ, ಶಿವಪೂಜಾ ಕಾರ್ಯಕ್ರಮ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಡಾ. ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳು, ಶ್ರೀ ಕುದೇರು ಮಠದ ಹಿರಿಯ ಶ್ರೀಗಳಾದ ಶ್ರೀ ಗುರುಶಾಂತ ಮಹಾಸ್ವಾಮೀಜಿ, ಸ್ಥಳ: ಶ್ರೀ ತೋಂಟದಾರ್ಯ ವಿದ್ಯಾಸಂಸ್ಥೆ, ಶ್ರೀ ಕುದೇರು ಮಠ, ಬೆಳಗ್ಗೆ 10.30ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಸದಾಶಿವ ಪಾಟೀಲ್ ಹಾಗೂ ನಿತಿನ್ ರಾಜಾರಾಂ ಶಾಸ್ತ್ರೀ, ವ್ಯಾಖ್ಯಾನ–ಡಾ. ಜಿ ಆರ್. ತಿಪ್ಪೇಸ್ವಾಮಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ:ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್., 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಯೋಗದತ್ತ ಜಗತ್ತು–ಯೋಗ ಕುರಿತ ವಿಶೇಷ ಕಾರ್ಯಕ್ರಮ ಸರಣಿ ನೃತ್ಯ ಗುರು ಡಾ. ಕೃಪಾಫಡ್ಕೆ ಅವರೊಂದಿಗೆ ಸಂದರ್ಶನ, ಸಂದರ್ಶಕರು–ದಿವಾಕರ್ ಹೆಗಡೆ, 8.50 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಡಾ. ಜಿ. ಎನ್. ನಾಗಮಣಿ ಶ್ರೀನಾಥ್ – ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ–ರಶ್ಮಿ ವಿ. ರಾವ್, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು–ಪೃಥ್ವಿ ಎಸ್. ಭಾರದ್ವಾಜ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಎನ್. ಭಾರತಿ ವೀಣಾವಾದನ, 4.00 ಕಥಾಕಾಲಕ್ಷೇಪ–ಶ್ರೀಸುಬ್ರಹ್ಮಣ್ಯೇಶ್ವರ ಮಹಿಮೆ, ಪ್ರಸ್ತುತಿ–ಭದ್ರಗಿರಿ ಅಚ್ಯುತದಾಸರು, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ ತರಂಗ–ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ–ಮೀನು ಕೃಷಿಗೆ ಯೋಗ್ಯವಾದ ತಳಿಗಳು ಮತ್ತು ಆಹಾರ ಪದ್ಧತಿ ಈ ಕುರಿತು ಮಂಡ್ಯ ತಾಲೂಕು ಹಳೇ ಬೂದನೂರಿನ ಮೀನು ಸಾಕಾಣಿಕ ಕೇಂದ್ರದ ಸಹಾಯಕ ನಿರ್ದೇಶಕರಾದ ಟಿ.ಯೋಗಾನಂದ ಅವರೊಂದಿಗೆ ಸಂದರ್ಶನ, ಸಂದರ್ಶಕರು – ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ : ಬಿ.ದಿಗ್ವಿಜಯ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ–ಪ್ರಶಾಂತ್ ರಾವ್ ಕದಮ– ಹಾಡುಗಾರಿಕೆ, 8.30 ಹಿಂದಿ ಚಿತ್ರಗೀತೆಗಳು, 9.30 ವಿಶೇಷ ಕಾರ್ಯಕ್ರಮ–ವಿಕಸಿತ ಭಾರತದ ಅಮೃತಕಾಲ ಸೇವೆ,ಉತ್ತಮ ಆಡಳಿತ ಹಾಗೂ ಗರೀಬ್ ಕಲ್ಯಾಣದ ಹನ್ನೊಂದು ವರ್ಷಗಳು, 10.00 ಚೈತ್ರವನ ಲಕ್ಷೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ. ಎ.ಎಸ್. ಶಂಕರನಾರಾಯಣ, 10.30ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

ಮೈಸೂರು ಮಿತ್ರ

ಪಿಎಸ್‌ಐ ನೇಮಕಾತಿ ಹಗರಣದಲ್ಲಿ ಕರ್ತವ್ಯ ಲೋಪ

ಅಮಾನತಾದವರು ನಾನ್ ಫೀಲ್ಡ್ ಹುದ್ದೆಗೆ ನಿಯೋಜನೆ

ಮೈಸೂರು, ಜೂ.16(ಎಸ್‌ಪಿಎನ್)– ತೀವ್ರ ಸಾರ್ವಜನಿಕ ಚರ್ಚೆಗೆ ಒಳಪಟ್ಟಿದ್ದ ಪಿಎಸ್‌ಐ ನೇಮಕಾತಿ ಹಗರಣದಲ್ಲಿ ಭಾಗಿಯಾಗಿ ಕರ್ತವ್ಯ ಲೋಪವೆಸಗಿರುವ ಅಧಿಕಾರಿಗಳ ಅಮಾನತನ್ನು ತೆರವುಗೊಳಿಸಿ ಕಾರ್ಯೇತರ(ನಾನ್ ಫೀಲ್ಡ್) ಹುದ್ದೆಗೆ ಸ್ಥಳ ನಿಯುಕ್ತಿಗೊಳಿ ಸುವಂತೆ ಡಿಜಿ ಮತ್ತು ಐಜಿಪಿ ಅನುಮೋದನೆ ಮೇರೆಗೆ ಡಿಐಜಿಪಿ (ಆಡಳಿತ) ಕಾರ್ತಿಕ್ ರೆಡ್ಡಿ ಆದೇಶಿಸಿದ್ದಾರೆ.

ಡಿವೈಎಸ್‌ಪಿ ಮಲ್ಲಿಕಾರ್ಜುನ ಸಾಲಿ ಅವರನ್ನು ಬೆಂಗಳೂರಿನ ಐಎಸ್‌ಡಿಗೆ, ಡಿವೈಎಸ್‌ಪಿ(ಸಶಸ್ತ್ರ) ಶಾಂತಕುಮಾರ್ ಅವರನ್ನು ಹಾಸನದ ಪಿಟಿಎಸ್‌ಗೆ, ವೈಜನಾಥ ಕಲ್ಯಾಣಿ ರೇವೂರ ಅವರನ್ನು ಮಂಗಳೂರಿನ ಕೆಎಸ್‌ಆರ್‌ಪಿ 7ನೇ ಪಡೆಗೆ ಹಾಗೂ ಪಿ.ಐ.ಆನಂದಮೇತ್ರಿ (ಎಫ್‌ಪಿಬಿ) ಅವರನ್ನು ಮಂಗಳೂರು ಜಿಲ್ಲೆ ಎಫ್‌ಪಿಬಿಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದ್ದು, ಈ ಅಧಿಕಾರಿಗಳ ಲೀನ್‌ಅನ್ನು ಸ್ಥಳಾಂತರಿಸಿದ ಕಚೇರಿ/ಘಟಕಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಲು ಸೂಚಿಸಿದ್ದಾರೆ.

ಈ ಅಧಿಕಾರಿಗಳ ವಿರುದ್ಧ ಕೆಎಸ್‌ಪಿ (ಡಿಪಿ) ನಿಯಮಗಳು 1965/89ರ ನಿಯಮ–5 ರನ್ವಯ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಸೇವೆಯಿಂದ ಅಮಾನತ್ತಿನಲ್ಲಿರಿಸಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ, ಕಾರ್ಯಕಾರ್ಯೇತರ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

ರಾಶಿ ರಾಶಿ ಟೊಮೆಟೊ ಮಣ್ಣು ಪಾಲು; ರೈತರಿಗೆ ಭಾರೀ ನಷ್ಟ

ಮೈಸೂರು,ಜೂ.16(ಪಿಎಂ)– ರಾಶಿ ರಾಶಿ ಜಾಮ್ ಟೊಮೆಟೊ ಮಣ್ಣುಪಾಲಾಗಿದ್ದು, ನಿರಂತರ ಮಳೆಯ ಹೊಡೆತಕ್ಕೆ ಹಾನಿಗೊಳಗಾದ ಹಣ್ಣುಗಳು ಮಾರಾಟವಾಗದ ಕಾರಣ ರೈತರು ವಿಧಿಯಿಲ್ಲದೇ ಮೈಸೂರಿನ ಬಂಡಿಪಾಳ್ಯದ ಎಪಿಎಂಸಿ ಮಾರುಕಟ್ಟೆ ಆವರಣದಲ್ಲಿ ಸುರಿದು, ಹತಾಶೆಯಿಂದ ಮನೆಗೆ ಮರಳಿದ್ದಾರೆ.



ಮೈಸೂರಿನ ಎಪಿಎಂಸಿ ಆವರಣದಲ್ಲಿ ಮಾರಾಟವಾಗದ ಹಿನ್ನೆಲೆಯಲ್ಲಿ ರೈತರು ರಾಶಿ ರಾಶಿ ಟೊಮೆಟೊ ಸುರಿದಿರುವುದು.

ನಿರಂತರ ಜಿಟಿ ಮಳೆಯ ಕಾರಣ ವಾತಾವರಣದಲ್ಲಿ ತೇವಾಂಶ ಹೆಚ್ಚಳಗೊಂಡಿದೆ. ಪರಿಣಾಮ ರೈತರು ಬೆಳೆದ ಟೊಮೆಟೊ ಹಣ್ಣುಗಳ ಪೈಕಿ ಭಾರಿ ಪ್ರಮಾಣದ ಹಣ್ಣುಗಳು ಹಾನಿಗೊಳಗಾಗಿ ಮಾರಾಟವಾಗಿಲ್ಲ. ಈ ಕಾರಣದಿಂದ ಎಪಿಎಂಸಿ ಆವರಣದಲ್ಲಿ ಮಾರಾಟವಾದ ಹಣ್ಣುಗಳನ್ನು ಸುರಿದು ಬರಿಗೈಯಲ್ಲಿ ರೈತರು ಮರಳುವಂತಹ ದುಸ್ಥಿತಿ ನಿರ್ಮಾಣವಾಗಿದೆ.

ಸೋಮವಾರ ಸಂಜೆ ಹಣ್ಣು ಮತ್ತು ತರಕಾರಿಗಳ ಸಗಟು ವ್ಯಾಪಾರದ ದಲ್ಲಾಳಿಗಳ ಮಳಿಗೆಗಳ ಎದುರು ರಾಶಿ ರಾಶಿ ಟೊಮೆಟೊ ಸುರಿದಿರುವುದು ಕಂಡು ಬಂದಿತು. ಇಂದು ಸೋಮವಾರ ಕ್ವಿಂಟಾಲ್‌ಗೆ 1,500ರಿಂದ 1,600 ರೂ.ವರೆಗೆ ಜಾಮ್ ಟೊಮೆಟೊದ ದರ ಇತ್ತು.

ಸ್ಥಳದಲ್ಲಿದ್ದ ಎಪಿಎಂಸಿ ಮಳಿಗೆಗಳ ಕಾರ್ಮಿಕರು 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಎಪಿಎಂಸಿಯಲ್ಲಿ ದಲ್ಲಾಳಿಗಳು ಗುಣಮಟ್ಟದ ಹಣ್ಣುಗಳನ್ನು ಮಾತ್ರವೇ ಖರೀದಿ ಮಾಡಿದ್ದಾರೆ. ಊಜಿ ಸೇರಿದಂತೆ ಇನ್ನಿತರ ರೀತಿಯಲ್ಲಿ ಹಾನಿಗೆ ಒಳಗಾದ ಹಣ್ಣುಗಳನ್ನು ಖರೀದಿ ಮಾಡಿಲ್ಲ. ಇಲ್ಲಿಂದ ಹೆಚ್ಚಾಗಿ ಕೇರಳದ ವ್ಯಾಪಾರಿಗಳು ಟೊಮೆಟೊ ಖರೀದಿಸುತ್ತಾರೆ. ಮಳೆಯಿಂದ ಹಾನಿಯಾಗಿರುವ ಹಣ್ಣುಗಳನ್ನು ತೆಗೆದುಕೊಂಡು ಹೋಗಿ ಕೇರಳದಲ್ಲಿ ದಾಸ್ತಾನು ಮಾಡಿಟ್ಟರೆ ಕೊಳೆತು ಹಾಳಾಗಲಿವೆ. ಹಾಗಾಗಿ ಇಂತಹ ಹಣ್ಣುಗಳನ್ನು ಖರೀದಿಸಲು ಯಾರೂ ಮುಂದೆ ಬರುವುದಿಲ್ಲ ಎಂದು ಹೇಳಿದರು.

ಟೊಮೆಟೊ ನುಂಗಿದ ಮಾವು!: ಮೈಸೂರು ಜಿಲ್ಲೆಯ ಸುತ್ತಮುತ್ತಲ ರೈತರು ಮಾತ್ರವಲ್ಲದೆ, ಮಂಡ್ಯ ಜಿಲ್ಲೆಯ ಪಾಂಡವಪುರ, ಕೆಆರ್‌ಎಸ್ ಮೊದಲಾದ ಕಡೆಗಳಿಂದಲೂ ರೈತರು ಮೈಸೂರು ಎಪಿಎಂಸಿಗೆ ಟೊಮೆಟೊ ತಂದು ಮಾರಾಟ ಮಾಡುತ್ತಾರೆ. ಹಾನಿಗೊಳಗಾದ ಟೊಮೆಟೊ ಹಣ್ಣುಗಳನ್ನು ಖರೀದಿಸಿ ಸಾಸ್ ತಯಾರಿಕೆಗಾಗಿ ಕಳುಹಿಸಲಾಗುತ್ತಿತ್ತು. ಆದರೆ ಈಗ ಮಾವಿನ ಹಣ್ಣಿನ ಋತು ಇರುವ ಕಾರಣ ಈ ಟೊಮೆಟೊ ಹಣ್ಣಗಳನ್ನು ಕೇಳುವವರಿಲ್ಲ. ಮಾವಿನ ಹಣ್ಣಿನ ಋತು ಮುಗಿಯುವವರೆಗೆ ಈ ಹಣ್ಣುಗಳು ರೈತರಿಗೆ ಪ್ರಯೋಜನಕ್ಕೆ ಬರುವುದಿಲ್ಲ ಎಂದರು.

> ಟೊಮೆಟೊ ಬೆಳೆದ ರೈತರು ಈ ಪರಿ ನಷ್ಟಕ್ಕೆ ಒಳಗಾಗುತ್ತಿರುವುದಕ್ಕೆ ಹೊಣೆ ಯಾರು ಎಂಬ ಪ್ರಶ್ನೆ ಉದ್ಭವಿಸಿದೆ. ಈ ನಷ್ಟದಿಂದ ರೈತರನ್ನು ಪಾರು ಮಾಡುವ ಜವಾಬ್ದಾರಿಯನ್ನು ಸರ್ಕಾರದ ಯಾವ ಇಲಾಖೆಯೂ ವಹಿಸಿದಂತೆ ಕಾಣುತ್ತಿಲ್ಲ. ಮಳೆಗಾಲದಲ್ಲಿ ಟೊಮೆಟೊ ಬೆಳೆ ರಕ್ಷಣೆ ಹಾಗೂ ಕೊಯ್ಲು ಪ್ರಕ್ರಿಯೆ ನಿಜಕ್ಕೂ ರೈತರಿಗೆ ಸವಾಲು. ಮಳೆ ಹೊಡೆತಕ್ಕೆ ಹಾನಿಗೆ ತುತ್ತಾಗುವ ಹಣ್ಣುಗಳು ರೈತರಿಗೆ ನಷ್ಟ ತಂದೊಡ್ಡುತ್ತಿದ್ದು, ಇದಕ್ಕೊಂದು ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಗಂಭೀರವಾಗಿ ಚಿಂತಿಸಿ, ರೈತರ ಹಿತ ಕಾಯಲು ಮುಂದಾಗಬೇಕಿದೆ.

ಮಳೆ ಇಲ್ಲದ ಸಂದರ್ಭದಲ್ಲಿ ವ್ಯರ್ಥವಾಗಲ್ಲ

ಮೈಸೂರು,ಜೂ.16(ಪಿಎಂ)– ಮಳೆ ಇರುವಾಗ ಪ್ರತಿನಿತ್ಯ ಇಷ್ಟು ಪ್ರಮಾಣದಲ್ಲಿ ಟೊಮೆಟೊ ವ್ಯರ್ಥವಾಗುವುದು ಸಹಜ. ಸಾಕಷ್ಟು ದೂರಕ್ಕೆ ಕೊಂಡೊಯ್ಯುವಾಗ ಕೊಳತೆ ಹಣ್ಣುಗಳಿಂದ ಇಡೀ ಕ್ರೇಟ್‌ನಲ್ಲಿನ ಹಣ್ಣುಗಳೂ ಹಾಳಾಗಲಿವೆ. ಹಾಗಾಗಿ ಪ್ರತಿನಿತ್ಯ ಅಷ್ಟು ಪ್ರಮಾಣದ ಹಣ್ಣುಗಳನ್ನು ಬಿಸಾಡುವ ಸನ್ನಿವೇಶ ಇದೆ ಎಂದು ಮೈಸೂರು ಎಪಿಎಂಸಿ ಕಾರ್ಯದರ್ಶಿ ಕುಮಾರಸ್ವಾಮಿ ತಿಳಿಸಿದರು.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅವರು, 15, 20 ಹಾಗೂ 25 ಕೆಜಿ ಕ್ರೇಟ್ ಲೆಕ್ಕದಲ್ಲಿ ಖರೀದಿ ಮಾಡಲಾಗುತ್ತದೆ. ಇಂದು ಸೋಮವಾರ ಜಾಮ್ ಟೊಮೆಟೊ ಕೆಜಿಗೆ 15ರಿಂದ 16 ರೂ.ವರೆಗೆ ದರವಿತ್ತು. ನಿನ್ನೆ ಮೊನ್ನೆಯಿಂದಲೂ ಟೊಮೆಟೊ ಬೆಲೆಯಲ್ಲಿ ಸರಿಸುಮಾರು ಇಷ್ಟೇ ಇದೆ. ಮುಂದಿನ ದಿನಗಳಲ್ಲಿ ಟೊಮೆಟೊ ಬೆಲೆಯಲ್ಲಿ ಹೆಚ್ಚಳವಾಗಬಹುದು ಎಂದರು.

ದೂರಕ್ಕೆ ಸಾಗಣೆ ಮಾಡಬೇಕಾದ ಹಿನ್ನೆಲೆಯಲ್ಲಿ ತೀರ ಮೆದು ಇರುವುದನ್ನು ದಲ್ಲಾಳಿಗಳು ಖರೀದಿ ಮಾಡುವುದಿಲ್ಲ. ಮಳೆ ಇಲ್ಲದ ಸಂದರ್ಭದಲ್ಲಿ ದಿನನಿತ್ಯ ಇಷ್ಟು ಪ್ರಮಾಣದಲ್ಲಿ ಟೊಮೆಟೊ ಹಣ್ಣುಗಳು ವ್ಯರ್ಥವಾಗುವುದಿಲ್ಲ. ಮಳೆ ಹೊಡೆತಕ್ಕೆ ಟೊಮೆಟೊಗಳು ಹೆಚ್ಚಿನ ಪ್ರಮಾಣದಲ್ಲಿ ಹಾನಿಗೆ ಒಳಗಾಗಲಿವೆ. ಭಾರೀ ಪ್ರಮಾಣದ ಮಳೆಯಾದಲ್ಲಿ ಜಮೀನಿನಲ್ಲೇ ಹಣ್ಣುಗಳು ಕೊಳೆತು ಹೋಗಲಿವೆ ಎಂದು ಪ್ರತಿಕ್ರಿಯಿಸಿದರು.


660 ಕೆಜಿ ಹಣ್ಣು ಸುರಿದಿದ್ದೇನೆ: ಮಾರುಕಟ್ಟೆಯಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ಪಾಂಡವಪುರದ ಯುವ ರೈತರೊಬ್ಬರು, ಇಂದು ನಾನು 30 ಬಾಕ್ಸ್ ಟೊಮೆಟೊ ಸುರಿದಿದ್ದೇನೆ. ಒಂದು ಬಾಕ್ಸ್‌ನಲ್ಲಿ 22 ಕೆಜಿ ಇರುತ್ತದೆ. 30 ಬಾಕ್ಸ್ ಅಂದರೆ 660 ಕೆಜಿ. ಅಷ್ಟು ಪ್ರಮಾಣದ ಹಣ್ಣುಗಳು ನನಗೆ ನಷ್ಟವಾಗಿವೆ. ನಿನ್ನೆ, ಇವತ್ತು ಹಲವರು ಸುರಿದಿದ್ದಾರೆ. ನಾಳೆಯೂ ಇದು ಮುಂದುವರೆಬಹುದು ಎಂದು ಬೇಸರ ವ್ಯಕ್ತಪಡಿಸಿದರು.

'ಮೈಸೂರು ಮಿತ್ರ'ನೊಂದಿಗೆ ನಾಗಮಂಗಲ ತಾಲೂಕಿನ ಟೊಮೆಟೊ ಬೆಳೆಗಾರ ಯೋಗ ಮಾತನಾಡಿ, ಟೊಮೆಟೊಗೆ ಈಗ ದರ ಕೂಡ ಇಲ್ಲ. ಊರಿನ ಜಮೀನಿಂದ ಮಾರುಕಟ್ಟೆಗೆ ಸಾರಿಗೆ ವೆಚ್ಚ ಭರಿಸಿ ತಂದಿರುತ್ತೇವೆ. ಮಾರಾಟವಾಗದ ಹಣ್ಣುಗಳನ್ನು ಮತ್ತೆ ಊರಿಗೆ ವಾಪಸ್ ತೆಗೆದುಕೊಂಡು ಹೋಗಲು ಮತ್ತೆ ವಾಹನದ ಬಾಡಿಗೆ ಭರಿಸಬೇಕಾಗುತ್ತದೆ. ಹಾಗಾಗಿ ಅಲ್ಲಿಯೇ ಸುರಿಯುವ ಅನಿವಾರ್ಯತೆ ಎದುರಾಗುತ್ತದೆ. ಬಹುತೇಕ ರೈತರು ವಾಪಸ್ ತೆಗೆದುಕೊಂಡು ಹೋಗುವುದಿಲ್ಲ ಎಂದು ಹೇಳಿದರು.

ನಿರಂತರ ಮಳೆ ಕಾರಣ ಟೊಮೆಟೊ ಹಣ್ಣುಗಳಿಗೆ ಹಾನಿಯಾಗಿದೆ. ಇದರಿಂದ ಹಣ್ಣುಗಳು ಒಡೆದು ಹೋಗಿರುವುದನ್ನು ಮಾರುಕಟ್ಟೆಯಲ್ಲಿ ಖರೀದಿ ಮಾಡುವುದಿಲ್ಲ. ಜೊತೆಗೆ ಮಳೆ ಬಂದಾಗ ಟೊಮೆಟೊಗೆ ಚುಕ್ಕಿ ಸಮಸ್ಯೆ ಕಾಡಲಿದ್ದು, ಇಂತಹ ಹಣ್ಣುಗಳನ್ನು ಸಹ ತೆಗೆದುಕೊಳ್ಳುವುದಿಲ್ಲ. ಟೊಮೆಟೊ ಸಾಸ್‌ಗೂ ಈಗ ಹೆಚ್ಚಾಗಿ ಬೇಡಿಕೆ ಇಲ್ಲ ಇದಾದರೂ ಇದ್ದಿದ್ದರೆ ಟೊಮೆಟೊಗೆ ಬೆಲೆ ಬರುತ್ತಿತ್ತು ಇಂದು ಹಲವು ರೈತರು ವ್ಯಾಪಾರವಾಗದ ಹಣ್ಣುಗಳನ್ನು ಸುರಿದಿದ್ದಾರೆ ಎಂದರು.

ಹಣ ಅಕ್ರಮ ವರ್ಗಾವಣೆ ಪ್ರಕರಣ: ರಾಬರ್ಟ್ ವಾದ್ರಾಗೆ ಇಡಿ ಸಮನ್ಸ್

ನವದೆಹಲಿ: ಕಾಂಗ್ರೆಸ್‌ನ ಸಂಸದರಾದ ಪ್ರಿಯಾಂಕಾ ಗಾಂಧಿ ಅವರ ಪತಿ, ಉದ್ಯಮಿ ರಾಬರ್ಟ್ ವಾದ್ರಾ ಅವರಿಗೆ ಜಾರಿ ನಿರ್ದೇಶನಾಲಯವು (ಇ.ಡಿ) ಮತ್ತೆ ಸಮನ್ಸ್ ಜಾರಿಗೊಳಿಸಿದೆ.



ಬ್ರಿಟನ್ ಮೂಲದ ಶಸ್ತ್ರಾಸ್ತ್ರ ಸಲಹೆಗಾರ ಸಂಜಯ್ ಭಂಡಾರಿ ಅವರಿಗೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ವಿಚಾರಣೆಗಾಗಿ ಜೂನ್ 17ರಂದು ಹಾಜರಾಗುವಂತೆ ಸೂಚಿಸಲಾಗಿದೆ ಎಂದು ಮೂಲಗಳು ಸೋಮವಾರ ತಿಳಿಸಿವೆ.


ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯಡಿ (ಪಿಎಂಎಲ್‌ಎ) ತನಿಖೆ ನಡೆಯುತ್ತಿರುವ ಈ ಪ್ರಕರಣದಲ್ಲಿ, ಜೂನ್ 10ರಂದು ವಿಚಾರಣೆಗೆ ಹಾಜರಾಗುವಂತೆ ಈ ಹಿಂದೆ ಸಮನ್ಸ್ ನೀಡಲಾಗಿತ್ತು. ಜೂನ್ 9ರಂದು ಜ್ವರದ ಲಕ್ಷಣಗಳು ಕಾಣಿಸಿಕೊಂಡಿದ್ದರಿಂದ ವಾದ್ರಾ ವಿಚಾರಣೆಗೆ ಹಾಜರಾಗಿರಲಿಲ್ಲ.

ಪಿಎಂಎಲ್‌ಎ ಕಾಯ್ದೆಯಡಿ ಹೇಳಿಕೆ ದಾಖಲಿಸಿಕೊಳ್ಳಲು ತನಿಖಾ ಸಂಸ್ಥೆಯು ವಾದ್ರಾಗೆ ಮತ್ತೆ ಸಮನ್ಸ್ ಜಾರಿಗೊಳಿಸಿದೆ ಎಂದು ತಿಳಿದುಬಂದಿದೆ.

ಹರಿಯಾಣದಲ್ಲಿ 2008ರಲ್ಲಿ ನಡೆದ ಭೂ ಒಪ್ಪಂದದಲ್ಲಿನ ಅಕ್ರಮಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ತನಿಖಾ ಸಂಸ್ಥೆಯು ವಾದ್ರಾ ಅವರನ್ನು ಏಪ್ರಿಲ್‌ನಲ್ಲಿ ಸತತ ಮೂರು ದಿನ ವಿಚಾರಣೆಗೆ ಒಳಪಡಿಸಿತ್ತು. ಮೂರು ಪ್ರಕರಣಗಳಲ್ಲಿ ಇ.ಡಿ ತನಿಖೆ ನಡೆಸುತ್ತಿದೆ.

ದೆಹಲಿಯಲ್ಲಿ ಆದಾಯ ತೆರಿಗೆ ಇಲಾಖೆಯು 2016ರಲ್ಲಿ ದಾಳಿ ನಡೆಸಿದ ಬೆನ್ನಿಗೆ ಭಂಡಾರಿ ಲಂಡನ್‌ಗೆ ಪರಾರಿ ಆಗಿದ್ದರು. ಇ.ಡಿ.ಯ ಆರೋಪಗಳನ್ನು ರಾಬರ್ಟ್ ವಾದ್ರಾ ನಿರಾಕರಿಸಿದ್ದಾರೆ.

ಮೈಸೂರು ಎಪಿಎಂಸಿ ಆವರಣದಲ್ಲಿ ಗಬ್ಬೆದ್ದು ನಾರುತ್ತಿರುವ ಶೌಚಾಲಯ



ಮೈಸೂರು ಎಪಿಎಂಸಿ ಆವರಣದಲ್ಲಿ ಅನೈರ್ಮಲ್ಯದಿಂದ ದುಸ್ಥಿತಿಯಲ್ಲಿರುವ ಶೌಚಾಲಯ.

ಮೈಸೂರು,ಜೂ.16(ಪಿಎಂ)– ಮೈಸೂರು ಎಪಿಎಂಸಿ ಆವರಣದ ಸಗಟು ಹಣ್ಣು ಮತ್ತು ತರಕಾರಿ ಮಾರಾಟದ ಅಂಗಳದಲ್ಲಿರುವ ಶೌಚಾಲಯವು ನಿರ್ವಹಣೆ ಇಲ್ಲದೇ ಗಬ್ಬೆದ್ದು ನಾರುತ್ತಿದ್ದು, ರೈತರು, ಕಾರ್ಮಿಕರು ಸೇರಿದಂತೆ ಇಲ್ಲಿ ಕಾರ್ಯನಿರ್ವಹಿಸುವ ಎಲ್ಲರೂ ಪ್ರತಿನಿತ್ಯ ತೀವ್ರ ಕಿರಿಕಿರಿ ಅನುಭವಿಸುವಂತಾಗಿದೆ.

ಇಲ್ಲಿನ ಮಳಿಗೆಗಳ ಎದುರು ಇರುವ ಶೌಚಾಲಯ ಇಂತಹ ದುಸ್ಥಿತಿಯಲ್ಲಿದ್ದು, ನಿರ್ವಹಣೆ ಮಾಡದೇ ನಿರ್ಲಕ್ಷ್ಯ ವಹಿಸಿರುವ ಕಾರಣ ಇದ್ದೂ ಪ್ರಯೋಜನಕ್ಕೆ ಬಾರದಾಗಿದೆ. ಅಷ್ಟೇ ಅಲ್ಲ, ಕೆಲವರು ಅವಸರದ ಕಾರಣಕ್ಕೇನೋ ನಿರ್ವಹಣೆ ಇಲ್ಲದ ಶೌಚಾಲಯವನ್ನೇ ಬಳಕೆ ಮಾಡಿದ ಹಿನ್ನೆಲೆಯಲ್ಲಿ ಮಲ, ಮೂತ್ರದ ದುರ್ವಾಸನೆ ಸೂಸುವ ಹೀನ ಪರಿಸ್ಥಿತಿ ನಿರ್ಮಾಣವಾಗಿದೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಇಲ್ಲಿನ ಕಾರ್ಮಿಕರು ಹಾಗೂ ರೈತರು, ಶೌಚಾಲಯದ ನಿರ್ವಹಣೆ ಮಾಡದ ಹಿನ್ನೆಲೆಯಲ್ಲಿ ಇಲ್ಲಿನ ವಾತಾವರಣ ಅನೈರ್ಮಲ್ಯದಿಂದ ತಾಂಡವವಾಡುತ್ತಿದೆ. ಶೌಚಾಲಯದ ಒಳಗೆ ಪ್ರವೇಶಕ್ಕೂ ಅವಕಾಶವಿಲ್ಲದಷ್ಟು ಗಬ್ಬು ನಾರುತ್ತಿದೆ. ಟೆಂಡರ್ ಪಡೆದವರು ಪ್ರತಿನಿತ್ಯ ಸ್ವಚ್ಛಗೊಳಿಸಬೇಕು. ಆದರೆ ಅವರು ಆ ಕೆಲಸ ಮಾಡುತ್ತಿಲ್ಲ. ರೈತರು, ಕಾರ್ಮಿಕರು ತೊಂದರೆ ಅನುಭವಿಸಬೇಕಾಗಿದೆ ಎಂದು ಆರೋಪಿಸಿದರು.

ಅನೈರ್ಮಲ್ಯದ ಕಾರಣ ಸೊಳ್ಳೆ ಕಾಟ ಇದೆ. ಮತ್ತೊಂದು ಶೌಚಾಲಯವಿದ್ದು, ಅದನ್ನು ಪಾವತಿಸಿ ಬಳಕೆ ಮಾಡಬೇಕು. ಈ ಶೌಚಾಲಯ ಉಚಿತ ಬಳಕೆಗೆ ಅವಕಾಶವಿದೆ. ಆದರೆ ಅದರ ಒಳಹೋಗುವ ಪರಿಸ್ಥಿತಿಯೂ ಇಲ್ಲದ ಮಟ್ಟಿಗೆ ಅನೈರ್ಮಲ್ಯವಿದೆ. ಬೆಳಗ್ಗೆ ರೈತರು ಟೊಮೆಟೊ ಸುರಿದಿದ್ದಾರೆ. ಇನ್ನು ತೆರವುಗೊಳಿಸಿ ಶುಚಿಗೊಳಿಸಿಲ್ಲ. ನಾಳೆ ಬಂದು ನೋಡಿದರೂ ಬಹುಶಃ ಇದೇ ಸನ್ನಿವೇಶ ಇರುತ್ತದೆ ಎಂದು ದೂರಿದರು.

ಕುಡಿಯುವ ನೀರಿನ ವ್ಯವಸ್ಥೆ ಸಹ ಇಲ್ಲ. ತೊಂಬೆ ಇದ್ದರೂ ನೀರು ಮಾತ್ರ ಬರುವುದಿಲ್ಲ ಎಂದು ದೂರಿದರು. ಈ ಸಂಬಂಧ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿದ ಮೈಸೂರು ಎಪಿಎಂಸಿ ಕಾರ್ಯದರ್ಶಿ ಕುಮಾರಸ್ವಾಮಿ, ನಾಳೆಯೇ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ ಕ್ರಮ ಕೈಗೊಳ್ಳುತ್ತೇನೆ ಎಂದು ತಿಳಿಸಿದರು.

ಇಸ್ರೇಲ್‌ನಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಯ ಭರವಸೆ: ಹೆಚ್‌ಡಿಕೆ

ನವದೆಹಲಿ/ಬೆಂಗಳೂರು: ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ತಾರಕಕ್ಕೇರಿದ್ದು, ಈ ನಡುವೆ ಇಸ್ರೇಲ್‌ನಲ್ಲಿ ಸಂಕಷ್ಟಕ್ಕೆ ಸಿಲುಕಿರುವ ಕನ್ನಡಿಗರೊಂದಿಗೆ ಕೇಂದ್ರ ಭಾರಿ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ, ಮಾತುಕತೆ ನಡೆಸಿ, ರಕ್ಷಣೆಯ ಭರವಸೆ ನೀಡಿದ್ದಾರೆ.



ಇಸ್ರೇಲ್‌ನಲ್ಲಿ ಸಿಲುಕಿರುವ ಹಲವಾರು ಕನ್ನಡಿಗರಿಗೆ ವೀಡಿಯೋ ಕರೆ ಮಾಡಿದ ಕುಮಾರಸ್ವಾಮಿ, ಅವರ ಕ್ಷೇಮ, ಸುರಕ್ಷತೆ ಬಗ್ಗೆ ಮಾಹಿತಿ ಪಡೆದುಕೊಂಡರು. ಈ ವೇಳೆ ಕೇಂದ್ರ ಸರಕಾರದಿಂದ ಸಂಪೂರ್ಣ ಬೆಂಬಲದ ಭರವಸೆ ನೀಡಿದರು.

ನಮ್ಮ ಜನರು ಸುರಕ್ಷಿತವಾಗಿ ಮತ್ತು ತ್ವರಿತವಾಗಿ ತಾಯ್ನಾಡಿಗೆ ಮರಳುವುದನ್ನು ಖಚಿತಪಡಿಸಿಕೊಳ್ಳಲು ವಿದೇಶಾಂಗ ಸಚಿವಾಲಯದೊಂದಿಗೆ ಈ ವಿಷಯವನ್ನು ತಕ್ಷಣವೇ ಚರ್ಚಿಸುವುದಾಗಿ ಸಚಿವರು ಹೇಳಿದರು.

ವಿಡಿಯೋ ಕರೆಯ ಮೂಲಕ ಮಾತನಾಡಿದ ಎಲ್ಲಾ ಕನ್ನಡಿಗರು, ತಾವು ಸುರಕ್ಷಿತರಾಗಿದ್ದೇವೆ ಮತ್ತು ಟೆಲ್ ಅವೀವ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಅಧಿಕಾರಿಗಳು ಅಗತ್ಯವಿರುವ ಎಲ್ಲಾ ಸಹಾಯವನ್ನು ನೀಡುತ್ತಿದ್ದಾರೆ ಎಂದು ಸಚಿವರಿಗೆ ತಿಳಿಸಿದರು.

ಕೇದಾರನಾಥದಲ್ಲಿ ಪತನವಾದ ಹೆಲಿಕಾಪ್ಟರ್ ಸಂಸ್ಥೆಯ ವಿರುದ್ಧ ಪ್ರಕರಣ ದಾಖಲು

ಡೆಹ್ರಾಡೂನ್: ಭಾನುವಾರ ಕೇದಾರನಾಥ ಬಳಿ ಎರಡು ವರ್ಷದ ಮಗು, ಪೈಲಟ್ ಸೇರಿದಂತೆ ಏಳು ಜನರ ಸಾವಿಗೆ ಕಾರಣವಾದ ಹೆಲಿಕಾಪ್ಟರ್ ಪತನ ಪ್ರಕರಣಕ್ಕೆ ಸಂಬಂಧಿಸಿದಂತೆ ಖಾಸಗಿ ಹೆಲಿಕಾಪ್ಟರ್ ಸಂಸ್ಥೆಯ ವಿರುದ್ಧ ಸೋಮವಾರ ಪ್ರಕರಣ ದಾಖಲಾಗಿದೆ.

ಹೆಲಿಕಾಪ್ಟರ್ ಸೇವಾ ನಿರ್ವಹಣಾ ಸಂಸ್ಥೆ ಆರ್ಯನ್ ಏವಿಯೇಷನ್ ಪ್ರೈವೇಟ್ ಲಿಮಿಟೆಡ್ ವಿರುದ್ಧ ನಿರ್ಲಕ್ಷ್ಯದ ಆರೋಪದಡಿ ಪ್ರಕರಣ ದಾಖಲಾಗಿದೆ.

ಆರ್ಯನ್ ಏವಿಯೇಷನ್‌ನ ಜವಾಬ್ದಾರಿಯುತ ವ್ಯವಸ್ಥಾಪಕ ಕೌಶಿಕ್ ಪಾಠಕ್ ಮತ್ತು ವ್ಯವಸ್ಥಾಪಕ ವಿಕಾಸ್ ತೋಮರ್ ವಿರುದ್ಧ ಸೋನ್‌ಪ್ರಯಾಗ್ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ ಮತ್ತು ವಿಮಾನ ಕಾಯ್ದೆ 1934ರ ಸೆಕ್ಷನ್ 10ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜೀವ್ ನಖೋಲಿಯಾ ಅವರು ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ.

ದುರಂತವು ಬೆಳಿಗ್ಗೆ 5.30ರ ಸುಮಾರಿಗೆ ಸಂಭವಿಸಿದೆ. ಆದರೆ, ಆರ್ಯನ್ ಏವಿಯೇಷನ್‌ಗೆ ಹೆಲಿಕಾಪ್ಟರ್ ಸಂಸ್ಥೆಗೆ ಜೂನ್ 15 ರಂದು ಕಾರ್ಯಾಚರಣೆಗಾಗಿ ಬೆಳಿಗ್ಗೆ 6 ರಿಂದ 7 ರವರೆಗೆ ಮೊದಲ ಸ್ಲಾಟ್ ನೀಡಲಾಗಿತ್ತು, ಆದರೆ, ಅದಕ್ಕೂ ಮೊದಲೇ ಕಾರ್ಯಾಚರಣೆ ಆರಂಭಿಸಲಾಗಿದ್ದು, ಇದರಿಂದ ದುರಂತ ಸಂಭವಿಸಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಇದಲ್ಲದೆ, ಬೆಳಿಗ್ಗೆಯಿಂದಲೂ ಮೋಡ ಕವಿದ ವಾತಾವರಣವಿದ್ದರೂ, ಹೆಲಿಕಾಪ್ಟರ್ ಹಾರುವ ಮೊದಲು ಹವಾಮಾನ ಪರಿಸ್ಥಿತಿಗಳನ್ನು ಪರಿಶೀಲಿಸಲಾಗಿಲ್ಲ. ಡಿಜಿಸಿಎ ಮತ್ತು ಉತ್ತರಾಖಂಡ ನಾಗರಿಕ ವಿಮಾನಯಾನ ಅಭಿವೃದ್ಧಿ ಪ್ರಾಧಿಕಾರ ಹೊರಡಿಸಿದ ಎಸ್‌ಒಪಿಯನ್ನು ನಿರ್ಲಕ್ಷಿಸಲಾಗಿದೆ. ಇಂತಹ ಕ್ರಮಗಳು ಜೀವ ಮತ್ತು ಆಸ್ತಿಪಾಸ್ತಿಗಳ ನಷ್ಟಕ್ಕೆ ಕಾರಣವಾಗುತ್ತದೆ ಎಂದು ಕಂಪನಿಯ ವ್ಯವಸ್ಥಾಪಕರಿಗೆ ಚೆನ್ನಾಗಿ ತಿಳಿದಿತ್ತು ಆದರೂ ನಿರ್ಲಕ್ಷ್ಯ ತೋರಿದ್ದಾರೆಂದು ತಿಳಿಸಿದ್ದಾರೆ.

ಪಹಲ್ಗಾಮ್ ದಾಳಿ ಬಳಿಕ ಬಂದ್ ಆಗಿದ್ದ 16 ಪ್ರವಾಸಿ ತಾಣಗಳು ಮುಕ್ತ

ಶ್ರೀನಗರ: ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ಮುಚ್ಚಲಾಗಿದ್ದ 16 ಪ್ರವಾಸಿ ತಾಣಗಳನ್ನು ಜಮ್ಮು ಮತ್ತು ಕಾಶ್ಮೀರದ ಆಡಳಿತವು ಪ್ರವಾಸಿಗರಿಗೆ ಮುಕ್ತಗೊಳಿಸಿದೆ. ಈ ಪ್ರದೇಶಗಳಲ್ಲಿನ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದ ಬಳಿಕ ಸರ್ಕಾರ ಈ ಕ್ರಮ ತೆಗೆದುಕೊಂಡಿದೆ.

ಏಪ್ರಿಲ್ 22ರಂದು ಪಹಲ್ಗಾಮ್‌ನಲ್ಲಿ ನಡೆದಿದ್ದ ಭಯೋತ್ಪಾದಕ ದಾಳಿಯಲ್ಲಿ 25 ಪ್ರವಾಸಿಗರು ಮತ್ತು ಒಬ್ಬ ಸ್ಥಳೀಯ ವ್ಯಕ್ತಿ ಮೃತಪಟ್ಟಿದ್ದರು. ಆ ಬಳಿಕ ಭದ್ರತಾ ಕಾರಣಗಳಿಗಾಗಿ 40ಕ್ಕೂ ಹೆಚ್ಚು ಪ್ರವಾಸಿ ತಾಣಗಳನ್ನು ಬಂದ್ ಮಾಡಲಾಗಿತ್ತು.

ದಕ್ಷಿಣ ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣಗಳಾದ ಬೆತಾಬ್ ಕಣಿವೆ, ಪಹಲ್ಗಾಮ್‌ನಲ್ಲಿರುವ ಉದ್ಯಾನಗಳು, ವೆರಿನಾಗ್ ಉದ್ಯಾನ, ಕೊಕರ್ನಾಗ್ ಉದ್ಯಾನ, ಅಚಾಬಲ್ ಉದ್ಯಾನ ಸೇರಿ 16 ತಾಣಗಳನ್ನು ಪ್ರವಾಸಿಗರಿಗೆ ಮುಕ್ತಗೊಳಿಸಲಾಗಿದೆ. ಭದ್ರತಾ ಪರಿಶೀಲನೆ ಬಳಿಕ ಉಳಿದ ತಾಣಗಳನ್ನು ಹಂತ ಹಂತವಾಗಿ ತೆರವುಗೊಳಿಸಲಾಗುವುದು ಎಂದು ಸರ್ಕಾರ ಮಾಹಿತಿ ನೀಡಿದೆ.

ಪ್ರವಾಸಿ ತಾಣಗಳನ್ನು ಮುಕ್ತಗೊಳಿಸುತ್ತಿರುವುದು ಒಳ್ಳೆಯ ಬೆಳವಣಿಗೆ. ಆದರೆ ಭಯೋತ್ಪಾದಕ ದಾಳಿಯ ಬಳಿಕ ಪ್ರವಾಸಿಗರಲ್ಲಿ ಆತಂಕ ನಿವಾರಿಸುವ ಮತ್ತು ಪುನಃ ವಿಶ್ವಾಸವನ್ನು ಮೂಡಿಸುವ ಕೆಲಸ ಆಗಬೇಕಿದೆ. ಈ ನಿಟ್ಟಿನಲ್ಲಿ ಪ್ರಯತ್ನಗಳು ನಡೆಯಬೇಕಿದೆ ಎಂದು ಪ್ರವಾಸ ನಿರ್ವಾಹಕರು ಹೇಳುತ್ತಾರೆ.

ಪ್ರವಾಸಿಗರು ಭದ್ರತೆ, ಸುರಕ್ಷತೆ ಕುರಿತು ಹೇಳಿಕೆಗಳಿಗಿಂತ ಹೆಚ್ಚಿನದ್ದನ್ನು ಬಯಸುತ್ತಾರೆ. ತ್ವರಿತವಾಗಿ ಸ್ಪಂದಿಸುವ ತಂಡಗಳು, ಕಟ್ಟುನಿಟ್ಟಾದ ಬಂದೋಬಸ್ತ್ ವ್ಯವಸ್ಥೆ ಗೋಚರಿಸುವಂತಿರಬೇಕು ಎಂದು ಅವರು ನಿರೀಕ್ಷಿಸುತ್ತಾರೆ ಎಂದು ಅವರು ತಿಳಿಸುತ್ತಾರೆ.

ಸಂಧ್ಯಾ ಸುರಕ್ಷಾ, ವೃದ್ಧಾಪ್ಯ ವೇತನ ಯೋಜನೆಯಡಿ 23.19 ಲಕ್ಷ ಫಲಾನುಭವಿಗಳ ಪಿಂಚಣಿ ರದ್ದು

ಬೆಂಗಳೂರು: ಸಂಧ್ಯಾ ಸುರಕ್ಷಾ ಮತ್ತು ವೃದ್ಧಾಪ್ಯ ವೇತನ ಯೋಜನೆಯಡಿ 23.19 ಲಕ್ಷ ಫಲಾನುಭವಿಗಳನ್ನು ಅನರ್ಹರೆಂದು ಘೋಷಿಸಿದ್ದು, ಇವರ ಪಿಂಚಣಿಯನ್ನು ರದ್ದುಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಕಂದಾಯ ಇಲಾಖೆ ಆದೇಶ ನೀಡಿದೆ.

ಬಿಜೆಪಿ ಶಾಸಕ ವಿ.ಸುನಿಲ್‌ಕುಮಾರ್ ಅವರು ಆದೇಶದ ಪ್ರತಿಯನ್ನು 'ಎಕ್ಸ್'ನಲ್ಲಿ ಟ್ಯಾಗ್ ಮಾಡಿ ಸರ್ಕಾರದ ಈ ಕ್ರಮವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಬಡವರ ಬಗ್ಗೆ ಕಾಳಜಿ, ಸಹಾನುಭೂತಿ ಇರಲಿ ಎಂದು ಜಿಲ್ಲಾಧಿಕಾರಿಗಳ ಸಭೆಯಲ್ಲಿ ಪ್ರವಚನ ಮಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗ ಬಡವರ ಮೇಲೆ ಪ್ರಹಾರ ಮಾಡಲು ಹೊರಟಿದ್ದಾರೆ. ವಿವಿಧ ಸಾಮಾಜಿಕ ಭದ್ರತಾ ಯೋಜನೆಯ ಅಡಿ ವೃದ್ಧರು, ಅಸಹಾಯಕರು, ದುರ್ಬಲರಿಗೆ ನೀಡುತ್ತಿದ್ದ ಪಿಂಚಣಿ ಹಣದ ಮೇಲೆ 60 ಪರ್ಸೆಂಟ್ ಸರ್ಕಾರದ ಕಣ್ಣು ಬಿದ್ದಿದೆ ಎಂದು ಟೀಕಿಸಿದ್ದಾರೆ.

ರಾಜ್ಯದಲ್ಲಿ ಒಟ್ಟು 21.87 ಲಕ್ಷ ವೃದ್ಧಾಪ್ಯ ಹಾಗೂ31.33 ಲಕ್ಷ ಸಂಧ್ಯಾ ಸುರಕ್ಷಾ ಯೋಜನೆಯ ಫಲಾನುಭವಿಗಳಲ್ಲಿ ಅನರ್ಹರನ್ನು ಹುಡುಕುವುದಕ್ಕೆ ಸರ್ಕಾರ ಮುಂದಾಗಿದೆ. 9.04 ಲಕ್ಷ ವೃದ್ಧಾಪ್ಯ ವೇತನದಾರರು 14.15 ಲಕ್ಷ ಸಂಧ್ಯಾ ಸುರಕ್ಷಾ ಕಾರ್ಡ್‌ಗಳನ್ನು ರದ್ದುಗೊಳಿಸುವುದಕ್ಕೆ ಸಂಬಂಧಿಸಿದಂತೆ ಅಧಿಕೃತ ಆದೇಶ ಹೊರಡಿಸಲಾಗಿದೆ ಎಂದಿದ್ದಾರೆ.

ತಮ್ಮದು ಆಲಿಸುವ ಸರ್ಕಾರ ಎಂದು ಜಾಹೀರಾತಿನಲ್ಲಿ ಪೋಸು ಕೊಡುವ ಕಾಂಗ್ರೆಸ್ ಸರ್ಕಾರ ಬಡವರ ಪಿಂಚಣಿ ಹಣದಲ್ಲಿ ಉಳಿತಾಯ ಮಾಡಲು ಹೊರಟಿದೆ. ಸರ್ಕಾರ ದಿವಾಳಿ ಅಂಚಿಗೆ ತಲುಪಿದೆ ಎಂಬುದಕ್ಕೆ ಇದಕ್ಕಿಂತ ಬೇರೆ ಸಾಕ್ಷಿ ಬೇಕೆ ಎಂದು ಪ್ರಶ್ನಿಸಿದ್ದಾರೆ.

ಸಂಬಂಧಿಯಿಂದಲೇ ವ್ಯಕ್ತಿಯ ಹತ್ಯೆ

ಮೈಸೂರು, ಜೂ.16– ಕೌಟುಂಬಿಕ ಜಗಳದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬನನ್ನು ಆತನ ಸಂಬಂಧಿಕನೇ ಹತ್ಯೆ ಮಾಡಿರುವ ಘಟನೆ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸೋಮವಾರ ಸಂಜೆ ನಡೆದಿದೆ. ರಾಜೀವ್‌ನಗರದ ನಿವಾಸಿ ಸಾಕಿಬ್ ಪಾಷಾ ಹತ್ಯೆಯಾದವರು. ಈತನ ಸಂಬಂಧಿ ಅಫ್ರಿದ್ ಪಾಷಾ, ಚಾಕುವಿನಿಂದ ಕುತ್ತಿಗೆಗೆ ಇರಿದು ಹತ್ಯೆ ಮಾಡಿದ್ದಾನೆ ಎಂದು ಹೇಳಲಾಗಿದೆ. ಉದಯಗಿರಿ ಠಾಣೆ ಪೊಲೀಸರು ಸ್ಥಳ ಮಹಜರು ನಡೆಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ. ಆರೋಪಿ ಬಂಧನಕ್ಕೆ ಕ್ರಮ ಕೈಗೊಂಡಿದ್ದಾರೆ.

ಕಲಬುರಗಿಯಲ್ಲಿ ಕೋರ್ಟ್ ಹಾಲ್‌ಗೆ ಬರುವ ಮುನ್ನ ಹೃದಯಾಘಾತ; ನ್ಯಾಯಾಧೀಶ ಸಾವು

ಕಲಬುರಗಿ: ಕೋರ್ಟ್ ಹಾಲ್‌ಗೆ ತೆರಳುವ ಕೆಲವೇ ನಿಮಿಷಗಳ ಮುನ್ನ ಹೃದಯಾಘಾತದಿಂದ ಹಿರಿಯ ನ್ಯಾಯಾಧೀಶರು ಸಾವನ್ನಪ್ಪಿರುವ ಘಟನೆ, ಕಲಬುರಗಿ ಜಿಲ್ಲಾ ನ್ಯಾಯಾಲಯದಲ್ಲಿ ನಡೆದಿದೆ.



ಜಿಲ್ಲಾ 3ನೇ ಹಿರಿಯ ಶ್ರೇಣಿ ನ್ಯಾಯಾಧೀಶರಾದ ವಿಶ್ವನಾಥ್ ವಿ ಮೂಗತಿ (44) ಸಾವನ್ನಪ್ಪಿದ ದುರ್ದೈವಿ. ಕಳೆದ ವಾರವೇ ಕಲಬುರಗಿ ಕೋರ್ಟ್‌ಗೆ ವಿಶ್ವನಾಥ್ ಅವರು ವರ್ಗಾವಣೆಯಾಗಿದ್ದರು. ಇಂದು ಬೆಳಗ್ಗೆ ಎಂದಿನಂತೆ ಕೋರ್ಟ್‌ಗೆ ಬಂದಿದ್ದರು.

ಆದರೆ ಕೋರ್ಟ್ ಹಾಲ್‌ಗೆ ಬರುವುದಕ್ಕಿಂತ ಮುಂಚೆ ಎದೆಯಲ್ಲಿ ನೋವು ಕಾಣಿಸಿಕೊಂಡಿದೆ. ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ ಆಸ್ಪತ್ರೆಗೆ ಕರೆತರುವ ಮುನ್ನವೇ ನ್ಯಾಯಾಧೀಶರು ಕೊನೆಯುಸಿರೆಳೆದಿರುವುದಾಗಿ ವೈದ್ಯರು ತಿಳಿಸಿದ್ದಾರೆ.

ಹಲವು ಸಾಮಾಜಿಕ ಸೇವಾ ಕಾರ್ಯಗಳೊಂದಿಗೆ ಕಾವೇರಿ ಸಮೂಹ ವಿದ್ಯಾಸಂಸ್ಥೆ ಅಧ್ಯಕ್ಷ ಡಾ.ಚಂದ್ರಶೇಖರ್ ಹುಟ್ಟುಹಬ್ಬ ಆಚರಣೆ





ಮೈಸೂರಿನ ಪ್ರತಿಷ್ಠಿತ ಡಾ.ಚಂದ್ರಶೇಖರ್ ಫೌಂಡೇಷನ್ ಹಾಗೂ ಕಾವೇರಿ ಸಮೂಹ ವಿದ್ಯಾಸಂಸ್ಥೆಯ ಅಧ್ಯಕ್ಷ ಡಾ.ಜಿ.ಆರ್.ಚಂದ್ರಶೇಖರ್ ಅವರ ಹುಟ್ಟುಹಬ್ಬ ಹಾಗೂ ವಿಶ್ವಪರಿಸರ ದಿನಾಚರಣೆ ಹಿನ್ನೆಲೆಯಲ್ಲಿ 300ಕ್ಕೂ ಹೆಚ್ಚು ಗಿಡ ನೆಡುವ ಕಾರ್ಯಕ್ರಮಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಹಾಗೂ ಡಾ.ಚಂದ್ರಶೇಖರ್ ಚಾಲನೆ ನೀಡಿದರು. ಮತ್ತೊಂದು ಚಿತ್ರದಲ್ಲಿ ತಿಲಕ್‌ನಗರದ ವಿಶೇಷಚೇತನ ಮಕ್ಕಳ ಶಾಲೆಯ ವಿದ್ಯಾರ್ಥಿಗಳೊಂದಿಗೆ ಡಾ.ಚಂದ್ರಶೇಖರ್ ದಂಪತಿಯನ್ನು ಕಾಣಬಹುದು.

ಮೈಸೂರು, ಜೂ.16– ಮೈಸೂರಿನ ಪ್ರತಿಷ್ಠಿತ ಡಾ.ಚಂದ್ರಶೇಖರ್ ಫೌಂಡೇಷನ್ ಹಾಗೂ ಇದರ ಅಂಗಸಂಸ್ಥೆಯಾದ ಕಾವೇರಿ ಸಮೂಹ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಡಾ.ಜಿ.ಆರ್.ಚಂದ್ರಶೇಖರ್ ಅವರ ಹುಟ್ಟುಹಬ್ಬವನ್ನು ಹಲವು ಸಾಮಾಜಿಕ ಸೇವಾ ಕಾರ್ಯಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಡಾ.ಚಂದ್ರಶೇಖರ್ ಫೌಂಡೇಷನ್ ವತಿಯಿಂದ ತಿಲಕ್‌ನಗರದಲ್ಲಿರುವ ವಿಶೇಷಚೇತನ ಮಕ್ಕಳ ಶಾಲೆಯ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸಮವಸ್ತ್ರ, ಶೂ ವಿತರಿಸುವುದರ ಜೊತೆಗೆ ಉಪಾಹಾರ ವ್ಯವಸ್ಥೆ ಕಲ್ಪಿಸಲಾಗಿತ್ತು.

ಡಾ.ಚಂದ್ರಶೇಖರ್ ಹುಟ್ಟುಹಬ್ಬ ಹಾಗೂ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಿದ್ಧಾರ್ಥನಗರದ ಸಂಗೀತ ಕಾರ್ನರ್‌ನಿಂದ ಲಲಿತಮಹಲ್ ಕಮಾನು ಗೇಟ್‌ವರೆಗೆ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ಕಚೇರಿ ಸಂಕೀರ್ಣ(ಹೊಸ ಡಿಸಿ ಆಫೀಸ್) ಸುತ್ತಮುತ್ತಲಿನ ಪ್ರದೇಶದಲ್ಲಿ 300ಕ್ಕೂ ಹೆಚ್ಚು ಗಿಡಗಳನ್ನು ನೆಡಲಾಯಿತು. ಈ ವೇಳೆ ಡಾ.ಚಂದ್ರಶೇಖರ್, ಡಾ.ಸರಳ ಚಂದ್ರಶೇಖರ್, ಶಾಸಕ ಟಿ.ಎಸ್. ಶ್ರೀವತ್ಸ ಮತ್ತಿತರರು ಉಪಸ್ಥಿತರಿದ್ದರು.

ಬಳಿಕ ಕಾವೇರಿ ಸಮೂಹ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಮೈಸೂರು ಹಾಗೂ ನೆರೆ ಜಿಲ್ಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು. ಎಸ್‌ಎಸ್‌ಎಲ್‌ಸಿಯ 10, ಪಿಯುಸಿಯ 15 ಹಾಗೂ 10 ಪದವಿ ವಿದ್ಯಾರ್ಥಿಗಳು ಸೇರಿ ಒಟ್ಟು 35 ಮಂದಿಗೆ 'ವಿದ್ಯಾಸೇವಾ ನಿಧಿ'ಯಿಂದ ತಲಾ 10 ಸಾವಿರ ರೂ.ಗಳಂತೆ ಒಟ್ಟು 3.50 ಲಕ್ಷ ರೂ. ವಿದ್ಯಾರ್ಥಿವೇತನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ವಿಶ್ರಾಂತ ಕುಲಪತಿ ಹಾಗೂ ವಿಜ್ಞಾನಿ ಪ್ರೊ.ಕೆ.ಎಸ್.ರಂಗಪ್ಪ ಅವರು, ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಸಂಸ್ಥೆಯ ಅಧ್ಯಕ್ಷ ಡಾ.ಜಿ.ಆರ್. ಚಂದ್ರಶೇಖರ್, ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉನ್ನತ ಸ್ಥಾನಮಾನಗಳನ್ನು ಅಲಂಕರಿಸಿ, ಸಮಾಜಕ್ಕೆ ಉತ್ತಮ ರೀತಿಯಲ್ಲಿ ಸೇವೆ ಸಲ್ಲಿಸುವಂತಾಗಲಿ. ನಿಮ್ಮ ಏಳಿಗೆಗೆ ನೀವೇ ಶಿಲ್ಪಿ ಎಂಬುದನ್ನು ಸದಾ ಸ್ಮರಿಸಿಕೊಂಡು ಯಶಸ್ಸಿನ ಹಾದಿಯಲ್ಲಿ ಮುನ್ನಡೆಯಿರಿ ಎಂದು ಆಶಿಸಿದರು.

ಈ ವೇಳೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಡಾ.ಸರಳ ಚಂದ್ರಶೇಖರ್, ಸಂಸ್ಥೆಯ ಡೀನ್, ಮುಖ್ಯ ಆಡಳಿತಾಧಿಕಾರಿ, ಪ್ರಾಂಶುಪಾಲರು, ಹಿರಿಯ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ರೋಗಿ : ನರ್ಸ್ ನಾನು ನಿನ್ನನ್ನು ಪ್ರೀತಿಸುತ್ತಿದ್ದೇನೆ.
ನರ್ಸ್ : ಧಮ್ ಇದ್ರೆ ಇಂಗ್ಲೀಷ್‌ನಲ್ಲಿ ಹೇಳು
ರೋಗಿ : ಐ ಲವ್ ಯೂ ಸಿಸ್ಟರ್
ನರ್ಸ್ : ಐ ಲವ್ ಯೂ ಟು ಬ್ರದರ್

ಮೈಸೂರು ಮಿತ್ರ

ಮಂಗಳವಾರ, 17 ಜೂನ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಎಲ್ಲಾ ಗೊತ್ತಿದ್ದು, ಗೊತ್ತಿಲ್ಲದವರಂತೆ ಇದ್ದು ಬಿಡು. ಅರ್ಥ ಮಾಡಿಕೊಂಡವರು ಜೊತೆಯುಳಿಯುತ್ತಾರೆ. ಅನುಮಾನ ಪಟ್ಟವರು ದೂರ ಸರಿದು ಹೋಗುತ್ತಾರೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬೆಕ್ಕಿಗೆ ಚೆಲ್ಲಾಟ, ಇಲಿಗೆ ಪ್ರಾಣ ಸಂಕಟ

ನಿಮ್ಮ ಪತ್ರಗಳು

■ ಅಂಧಾ ದರ್ಬಾರ್ ಸರ್ಕಾರ

ಮಾನ್ಯರೆ,

ರಾಜ್ಯ ಸರ್ಕಾರ ಯಾವುದು ಯೋಗ್ಯ, ಯಾವುದು ಯೋಗ್ಯವಲ್ಲ ಎಂಬುದನ್ನು ಯೋಚಿಸುವ ವಿವೇಚನಾ ಶಕ್ತಿಯನ್ನೇ ಕಳೆದುಕೊಂಡು ಬಿಟ್ಟಿದೆ. ಕೇವಲ ಪಕ್ಷ ರಾಜಕೀಯ, ಸ್ವಜನ ಪಕ್ಷಪಾತ, ವೈಯಕ್ತಿಕ ದ್ವೇಷ, ಜನ ಸಾಮಾನ್ಯರನ್ನು ಪ್ರತಿ ಹಂತದಲ್ಲೂ ಸುಲಿಗೆ ಮಾಡುವುದು, ಜನರ ಹಿತಾಸಕ್ತಿಗೆ ವಿರುದ್ಧವಾದ ಬೇಡದ, ಆದ್ಯತೆ ಅಲ್ಲದ ಯೋಜನೆಗಳನ್ನು ಯಾರಿಗೋ ಲಾಭ ಮಾಡಿಕೊಡಲು ಹುಟ್ಟುಹಾಕಿ ಅಕ್ರಮ ಹಾದಿಯಲ್ಲಿ ಹಣ ಹೊಡೆಯುವುದಷ್ಟೇ ತನ್ನ ಕೆಲಸ ಎಂದು ಭಾವಿಸಿದಂತಿದೆ. ಸರ್ಕಾರದ ಯಾವ ನಡೆಯಲ್ಲಿಯೂ ಜನಹಿತವಾಗಲಿ, ಕಾಳಜಿಯಾಗಲಿ ಇದ್ದಂತೆ ಕಾಣುವುದಿಲ್ಲ.

* ಮೋದಿಯವರ ಮೇಲಿನ ವೈಯಕ್ತಿಕ ದ್ವೇಷಕ್ಕೆ ಪ್ರತಿಶತ 100ಕ್ಕೆ 100 ಜನೋಪಕಾರಿಯಾಗಿರುವ ರಾಜ್ಯ ಸರ್ಕಾರಿ (ಪ್ರೇತಮುಖ)ಆಸ್ಪತ್ರೆಗಳ ಆವರಣದಲ್ಲಿರುವ 200 ಜನೌಷಧಿ ಕೇಂದ್ರಗಳನ್ನು ಮುಚ್ಚಿಸುತ್ತಿರುವುದು ಬಡವರ ಪರ ನಿರ್ಧಾರವೇ?

* ಮುಡಾ ಹೆಸರನ್ನು ಎಂಡಿಎ ಮಾಡುವುದು ಮೂರ್ಖತನ ಅಲ್ಲವೇ? 'ಹೆಸರು ಬದಲಾಯಿಸಿದರೆ ಹಣೆಬರಹ ಬದಲಾಗುತ್ತದೆಯೇ?' ಎಂಬ ಗಾದೆ ಜ್ಯೋತಿಷ್ಯದಲ್ಲಿದೆ. ಇದು ಓಲ್ಡ್ ವೈನ್ ಇನ್ ದಿ ನ್ಯೂ ಬಾಟಲ್ ಅಷ್ಟೇ ಅಂತ ಎಂತಹ ಪೆದ್ದನಿಗೂ ಅರ್ಥವಾಗುತ್ತೆ.

* ಈಗಾಗಲೇ ಹಲವಾರು ಇಂದಿರಾ ಕ್ಯಾಂಟೀನ್‌ಗಳು ಕಾರ್ಯ ನಿರ್ವಹಿಸದೇ ಇದ್ದರೂ, ಮುಖ್ಯಮಂತ್ರಿಗಳೇ ಮತ್ತೆ ಹೊಸ ಕ್ಯಾಂಟೀನ್ ಅನ್ನು ಇತ್ತೀಚೆಗೆ ಮೈಸೂರು ಹಿನಕಲ್‌ನಲ್ಲಿ ಪ್ರಾರಂಭಿಸಿರುವುದು ಯಾವ ಭಾಗ್ಯಕ್ಕಾಗಿ?

* ದಕ್ಷಿಣ ಭಾರತದ ಜೀವನದಿ, ಜೀವನಾಡಿ ಕಾವೇರಿ ನದಿಯ ಸುತ್ತ ಹಾಗೂ ಡ್ಯಾಮ್ ಸುತ್ತ ರಾಜಕೀಯ ವ್ಯಕ್ತಿಗಳ ಲಾಭಕ್ಕಾಗಿ ಕ್ವಾರಿ ನಡೆಸಲು ಪರವಾನಗಿ ನೀಡುವುದು, ಡ್ಯಾಮ್‌ನ ಮುಂಭಾಗ ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ಸಾವಿರಾರು ಕೋಟಿ, ಕಾವೇರಿ ಆರತಿಗೆ 93 ಕೋಟಿ ರೂ. ವೆಚ್ಚ ಮಾಡುವುದು ಬಡವರಿಗೆ ಉಪಕಾರ ಆಗುವಂತದ್ದೇ?

* ರಾಮನಗರ ಜಿಲ್ಲೆ ಎಂಬ ಸುಂದರವಾದ ಹೆಸರನ್ನು ದಕ್ಷಿಣ ಬೆಂಗಳೂರು ಎಂದು ಮಾಡಿದಾಕ್ಷಣ ರಾಮನಗರ ಅಭಿವೃದ್ಧಿಯಾಗಿ ಬಿಡುತ್ತದೆಯೇ?

* ಬ್ರಾಂಡ್ ಬೆಂಗಳೂರು ತೋಪಾಗಿ ಸಮುದ್ರ ಆಗಿರುವುದು ಕಣ್ಣ ಮುಂದೆಯೇ ಇದೆ. ಇಂತಹ ಪ್ರೌಢಿಮೆ ಇಲ್ಲದ, ವಿವೇಕರಹಿತ ಯೋಜನೆಗಳನ್ನು ಆದ್ಯತೆ ಅಲ್ಲದಿದ್ದರೂ ಜಾರಿಗೊಳಿಸಲು ಮುಂದಾಗಿರುವ ಸರ್ಕಾರದ ತೀರ್ಮಾನಗಳಿಗೆ ಅಂಧಾ ದರ್ಬಾರ್, ತಿಕ್ಕಲುತನ, ತೊಘಲಕ್, ನಾಲಾಯಕ್, ಎಡವಟ್ಟು ಇತ್ಯಾದಿ ನಾಮವಿಶೇಷಣಗಳ ಪಾರಿತೋಷಕಗಳನ್ನು ನೀಡಬಹುದಾಗಿದೆ.

–ವಿ. ಕೇಶವಮೂರ್ತಿ, ಜ್ಯೋತಿಷ ವಿದ್ವಾಂಸ.

■ ಸಾಹಿತಿ–ಪತ್ರಕರ್ತ ಬನ್ನೂರು ರಾಜುಗೆ ಸರ್ಕಾರದ ನೆರವು ಸಿಗಲಿ...



ಮಾನ್ಯರೆ,

ಕಥೆ, ಕಾವ್ಯ, ನಾಟಕ, ಶಿಶುಸಾಹಿತ್ಯ, ಪ್ರಬಂಧ, ವಿಮರ್ಶೆ, ಸಂಪಾದನೆ, ಸಂಶೋಧನೆ, ವ್ಯಕ್ತಿ ವಿಶೇಷ ಸೇರಿದಂತೆ ಸಾಹಿತ್ಯದ ಬಹುತೇಕ ಎಲ್ಲಾ ಪ್ರಾಕಾರಗಳಲ್ಲೂ ಕೃಷಿ ಮಾಡಿರುವ ನಾಡಿನ ಪ್ರಸಿದ್ಧ ಸಾಹಿತಿಗಳಲ್ಲೊಬ್ಬರು ಬನ್ನೂರು ಕೆ.ರಾಜು. ಸೃಜನಶೀಲ ಮತ್ತು ಸೃಜನೇತರ ಸಾಹಿತ್ಯಗಳೆರಡರಲ್ಲೂ ಇವರು ಅದ್ಭುತವೆನಿಸುವ ಸಾಧನೆ ಮಾಡಿದ್ದು ಈವರೆಗೆ ಸುಮಾರು ನೂರಕ್ಕೂ ಹೆಚ್ಚು ಪುಸ್ತಕಗಳನ್ನು ಬರೆದಿದ್ದಾರೆ.

ಅಷ್ಟು ಮಾತ್ರವಲ್ಲ, ಆರು ಸಾವಿರಕ್ಕೂ ಹೆಚ್ಚು ಬಿಡಿ ಲೇಖನಗಳನ್ನು ಬರೆದು ನಾಡಿನ ಗಮನ ಸೆಳೆದಿರುವ ಪತ್ರಕರ್ತರೂ ಆದ ಸಾಹಿತಿ ಬನ್ನೂರು ರಾಜು ಅವರು, ಪ್ರತಿನಿತ್ಯ ಒಂದಲ್ಲ ಒಂದು ಬರವಣಿಗೆಯಿಂದ ಓದುಗರೊಡನೆ ಬಾಂಧವ್ಯ ಹೊಂದಿದ್ದಾರೆ. ಎಲ್ಲಾ ಪತ್ರಿಕೆಗಳಿಗೂ ಬರೆಯುವ ಇವರ ಕಾರ್ಯ ಶ್ಲಾಘನೀಯ.

ಇಂತಹ ಶ್ರೇಷ್ಠ ಸಾಹಿತಿಗಳು, ಪತ್ರಕರ್ತರೂ ಆದ ಸದ್ಯಕ್ಕೆ ಬರೆಯಲಾರದಷ್ಟು ದುಸ್ಥಿತಿ ತಲುಪಿದ್ದಾರೆ. ಕಾರಣ ಇವರು ಅನಾರೋಗ್ಯ ಪೀಡಿತರಾಗಿ ಹಾಸಿಗೆ ಹಿಡಿದಿದ್ದಾರೆ. ಇಂತಹವರು ಇನ್ನೂ ಹೆಚ್ಚು ಕನ್ನಡವನ್ನು ಶ್ರೀಮಂತಗೊಳಿಸಬೇಕಾಗಿದೆ. ಹಾಗಾಗಿ ಕನ್ನಡಿಗರಾದ ನಾವುಗಳು ಇವರನ್ನು ಉಳಿಸಿಕೊಳ್ಳಬೇಕಾಗಿದೆ. ಆದ್ದರಿಂದ ಘನ ಸರ್ಕಾರ ಇವರ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ನೆರವಿನ ಹಸ್ತ ಚಾಚಬೇಕಾಗಿದೆ. ಇವರು ಬೇಗ ಗುಣಮುಖರಾಗಿ ಮೊದಲಿನಂತಾಗಲೆಂದು ಓದುಗರಾದ ನಾವು ಹಾರೈಸುತ್ತೇವೆ.

–ಸಂಗಪ್ಪ ಎ., ಅಧ್ಯಕ್ಷರು, ಹಿರಣ್ಮಹಿ ಪ್ರತಿಷ್ಠಾನ, ಕೃಷ್ಣಮೂರ್ತಿಪುರಂ, ಮೈಸೂರು.

■ ಕೃಷಿ ಪಾಠಕ್ಕೆ ರೈತರಿಗೊಂದು ಶಾಲೆ

ಮಾನ್ಯರೆ,

ವ್ಯವಸಾಯ ಮತ್ತು ಕೃಷಿ ಚಟುವಟಿಕೆ ಬಗ್ಗೆ ರೈತರಿಗೆ ಅರಿವು ಮೂಡಿಸುವ ಉದ್ದೇಶದಿಂದ ರೈತರ ಶಾಲೆಯೊಂದು ಮಂಡ್ಯ ತಾಲೂಕಿನ ಆಲಕೆರೆ ಗ್ರಾಮದ ಕೆಂಪೇಗೌಡ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದಿಂದ ಸ್ಥಾಪನೆಯಾಗುತ್ತಿರುವುದು ಶ್ಲಾಘನೀಯ.

ಈ ಶಾಲೆ ಸಂಜೆ 6.30 ಪ್ರಾರಂಭವಾಗಿ 7.30 ಅಥವಾ 8.30 ಕೊನೆಗೊಳ್ಳುತ್ತದೆ. ಇದು ಕೃಷಿಯಲ್ಲಿ ತಂತ್ರಜ್ಞಾನ, ಮಾರುಕಟ್ಟೆ ಜ್ಞಾನ, ಹೊಸ ಕೃಷಿ ವಿಚಾರಗಳ ಬಗ್ಗೆ ಅರಿವು ಮೂಡಿಸುವ ಕೇಂದ್ರವಾಗಿ ಕಾರ್ಯ ನಿರ್ವಹಿಸಲಿದೆ ಮತ್ತು ಕೃಷಿ ಇಲಾಖೆಯ ಸಹಯೋಗದಲ್ಲಿ ಕೃಷಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ, ಸರ್ಕಾರದ ಸವಲತ್ತುಗಳನ್ನು ರೈತರಿಗೆ ತಲುಪಿಸುವ ಕೆಲಸ ಮಾಡಲಿದೆ. ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಮಣ್ಣು ಸಂರಕ್ಷಣೆ, ವ್ಯವಸಾಯದ ಮಾದರಿಯ ಬಗ್ಗೆ ಮಾರ್ಗದರ್ಶನ ನೀಡುವ ಮೂಲಕ ಕೃಷಿಯೇ ಪ್ರಧಾನ ಎಂಬುದನ್ನು ಮನದಟ್ಟು ಮಾಡಿಕೊಡುವುದು ಈ ಶಾಲೆಯ ಉದ್ದೇಶವಾಗಿರುವುದು ಸ್ವಾಗತಾರ್ಹ. ಬಹುರಾಷ್ಟ್ರೀಯ ಕಂಪನಿಗಳ ಕಪಿಮುಷ್ಟಿಗೆ ರೈತರು ಸಿಲುಕುತ್ತಿದ್ದಾರೆ. ರೈತ ಸ್ವಂತ ನಿರ್ಧಾರ ಕೈಗೊಳ್ಳಲು ಆಗುತ್ತಿಲ್ಲ. ಇಂತಹ ಸಮಯದಲ್ಲಿ ರೈತರಿಗೆ ಕೃಷಿ ಮತ್ತು ಭವಿಷ್ಯದ ಮಹತ್ವವನ್ನು ವಿವರಿಸಿ, ಸುಸ್ಥಿರ ಕೃಷಿಯತ್ತ ಉತ್ತೇಜಿಸುವ ಕೆಲಸವನ್ನು ರೈತ ಶಾಲೆ ಮಾಡಲಿದೆ. ಮುಂದಿನ ದಿನಗಳಲ್ಲಿ ಶಾಲೆಯ ಚಟುವಟಿಕೆಗಳನ್ನು ಜಿಲ್ಲೆಯಾದ್ಯಂತ ವಿಸ್ತರಿಸಲಾಗುವುದು ಎಂದು ಸಂಘದ ಕಾರ್ಯದರ್ಶಿ ಸತ್ಯಮೂರ್ತಿ ಅವರ ಹೇಳಿಕೆ ಮೆಚ್ಚುವಂತದ್ದು.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ಮಾತು ಮಂತ್ರವಾಗಿರಬೇಕು; ಕುತಂತ್ರವಾಗಿರಬಾರದು!

ನಾಲಿಗೆ ಒಳ್ಳೆಯದಾದರೆ ನಾಡೆಲ್ಲಾ ಒಳ್ಳೆಯದು. ಕಾಲು ಜಾರಿದರೂ ಬದುಕಬಹುದು. ಆದರೆ ನಾಲಿಗೆ ಜಾರಿದರೆ ಬದುಕಲಾಗದು ಎಂಬ ಮಾತು ನಾಲಿಗೆಯಿಂದಾಗಬಹುದಾದ ಭಾರೀ ಅನಾಹುತಗಳನ್ನು ಅನಾವರಣ ಮಾಡುತ್ತದೆ. ಮಾತು ಬಲ್ಲವನಿಗೆ ಜಗಳವಿಲ್ಲ ಊಟ ಬಲ್ಲವನಿಗೆ ರೋಗವಿಲ್ಲ ಯಾರಾದರು ಜಗಳ ವಾಡುತ್ತಿದ್ದಾರೆ ಎಂದರೆ ಜಗಳ ಮಾಡುತ್ತಿರುವವರಿಗೆ ಸರಿಯಾಗಿ ಮಾತನಾಡಲು ತಿಳಿದಿಲ್ಲ ಎಂದೇ ಅರ್ಥ. ಅಂತೆಯೇ ಯಾರಾದರೂ ರೋಗದಿಂದ ನರಳುತ್ತಿದ್ದಾರೆ ಎಂದರೆ ಅವರು ಸರಿಯಾಗಿ ಊಟ ಮಾಡಲ್ಲ ಎಂದೇ ಭಾವಿಸಬೇಕು. ಇಷ್ಟು ಪೀಠಿಕೆ ಹಾಕಲು ಕಾರಣವೆಂದರೆ ಒಂದೇ ಒಂದು ಮಾತು ಮುನ್ನೂರು ಕೋಟಿ ಸಿನಿಮಾ ನೂರು ಕೋಟಿ ಸಂಪಾದಿಸಲು ಆಗದಂತೆ ಮಾಡಿತು. ಬಹುಶಃ ಒಂದು ಕ್ಷಣ ಮಾತಿನಿಂದ ಆಗುವ ಪರಿಣಾಮವನ್ನು ಅರಿತಿದ್ದರೆ ಈ ನಷ್ಟ ಇಷ್ಟು ದೊಡ್ಡ ಪ್ರಮಾಣದಲ್ಲಿ ಸಂಭವಿಸುತ್ತಿರಲಿಲ್ಲವೇನೋ! ಈ ಘಟನೆ ನಮ್ಮೆಲ್ಲರಿಗೂ ಮಾದರಿಯಾಗಬಲ್ಲದು. ನಾವಾಡುವ ಮಾತಿಗೆ ಎಷ್ಟು ಪ್ರಾಮುಖ್ಯತೆ ಇದೆ ಎಂಬುದಕ್ಕೆ ಜ್ವಲಂತ ನಿದರ್ಶನವಾಗಬಲ್ಲದು.


ಪಂಚೇಂದ್ರಿಯಗಳಾದ ಕಣ್ಣು, ಕಿವಿ ಮೂಗು, ನಾಲಿಗೆ, ಚರ್ಮ ನಾಲಿಗೆಯನ್ನು ಹೊರತುಪಡಿಸಿ ಉಳಿದವು ಒಂದೊಂದು ಕಾರ್ಯವನ್ನು ಮಾಡಿದರೆ ನಾಲಿಗೆ ಮಾತ್ರ ರುಚಿ ಮತ್ತು ಮಾತನಾಡುವ ಎರಡೂ ಕಾರ್ಯಗಳನ್ನು ಮಾಡುತ್ತದೆ. ಹೀಗಾಗಿ ಎಲುಬಿಲ್ಲದ ನಾಲಿಗೆ ಒಮ್ಮೊಮ್ಮೆ ಅರಳಿಸುವ ಮಾತುಗಳನ್ನು ಆಡುತ್ತದೆ: ಮತ್ತೆ ಕೆಲವು ಬಾರಿ ಅದರಂತೆ ಕೆರಳಿಸುವ ಮಾತುಗಳನ್ನು ಆಡುತ್ತದೆ. ಏನೇ ಆದರೂ ಮತ್ತೊಬ್ಬರ ಮನಸ್ಸಿಗೆ ಘಾಸಿ ಮಾಡುವಂತಾಗಲಿ, ಪರಂಪರೆಯನ್ನು ದಾಟಿ ಬಂದಿರುವ ಘನತೆಯ ಬಗ್ಗೆ ಅವಹೇಳನ ಮಾಡುವ ಬಗೆಯಾಗಲಿ ಮಾತನಾಡಿದರೆ ಸಹಿಸಿಕೊಳ್ಳದ ಮನಸ್ಸುಗಳು ಹೋರಾಟಕ್ಕೆ ನಿಲ್ಲುತ್ತವೆ. ಹೋರಾಟದ ಭೀಕರತೆಯನ್ನು ಎದುರಿಸಬೇಕಾಗುತ್ತದೆ. **'ಮಾತು ಆಡಿದರೆ ಹೋಯಿತು ಮುತ್ತು ಒಡೆದರೆ ಹೋಯಿತು'**, ಮಾತಾಡುವ ಮುನ್ನ ಮಾತು ನಮ್ಮ ಹಿಡಿತದಲ್ಲಿರಬೇಕು. ಮಾತಾಡಿದ ಮೇಲೆ ಆ ಮಾತಿನ ಇಕ್ಕಳದ ಹಿಡಿತದಲ್ಲಿ ನಾನಿರಬೇಕಾಗುತ್ತದೆ. ಮಾತಿನ ಬಾಣ ಪ್ರಯೋಗಿಸುವ ಮುನ್ನ ಎಚ್ಚರ ಎಚ್ಚರ ಎಂದು ಬಲ್ಲವರು ಸಾರಿ ಸಾರಿ ಎಚ್ಚರಿಕೆ ನೀಡಿರುವುದು ಕೂಡ ಈ ಕಾರಣದಿಂದ.

ಮಾತೆಂಬುದು ಜ್ಯೋತಿರ್ಲಿಂಗ ಎಂದು ಅಲ್ಲಮಪ್ರಭು ನುಡಿದರೆ, ನುಡಿದರೆ ಮುತ್ತಿನ ಹಾರದಂತಿರಬೇಕು, ನುಡಿದರೆ ಲಿಂಗ ಮೆಚ್ಚಿ ಅಹುದಹುದೆನ್ನಬೇಕೆಂದು ಬಸವಣ್ಣ ಹೇಳಿರುತ್ತಾರೆ. ಇವರ ನುಡಿಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿದಾಗ ಮಾತಿಗಿರುವ ಮಹತ್ವ, ಮಾತಿಗಿರುವ ಶಕ್ತಿಯ ಅರಿವಾಗುತ್ತದೆ. ಮಾತುಗಳನ್ನಾಡದೆ ಇದ್ದಿದ್ದರೆ ಈ ಜೀವನ ಹೇಗಿರುತಿತ್ತು? ಒಮ್ಮೆ ಕಲ್ಪನೆ ಮಾಡಿಕೊಳ್ಳಿ.... ಇಲ್ಲ, ಮಾತುಗಳಿಲ್ಲದಿರುವ ಜೀವನವನ್ನು ಕಲ್ಪಿಸಿಕೊಳ್ಳುವುದಕ್ಕೂ ಸಾಧ್ಯವಿಲ್ಲ. ಬಹುತೇಕ ಸಮಸ್ಯೆಗಳಿಗೆ ಮಾತೇ ಮೂಲ ಕಾರಣವಾಗಿರುತ್ತದೆ. ಎಲ್ಲಿ, ಹೇಗೆ, ಯಾರೊಂದಿಗೆ, ಯಾವ ಶೈಲಿಯಲ್ಲಿ ಮಾತಾನಾಡಬೇಕೆಂಬುದನ್ನು ಸರಿಯಾಗಿ ತಿಳಿಯುವುದರೊಳಗೆಯೇ ಅರ್ಧ ಆಯಸ್ಸು ಮುಗಿದಿರುತ್ತದೆ. ಮಾತು ನಮ್ಮತನವನ್ನು ಮತ್ತೊಬ್ಬರಿಗೆ ತೋರಿಸಿಕೊಡಲು ಪ್ರಮುಖ ಸಾಧನವಾಗಿದೆ. ಕೆಲವೊಮ್ಮೆ ಈ ಮಾತುಗಳಿಂದಲೇ ಇನ್ನಿಲ್ಲದ ಸಮಸ್ಯೆಗಳು ಉದ್ಭವಿಸುತ್ತವೆ.

ನಾವಾಡುವ ಮಾತುಗಳು ಕೆಲವೊಮ್ಮೆ ಎಷ್ಟರ ಮಟ್ಟಿಗೆ ಪರಿಣಾಮ ಬೀರಬಲ್ಲದು, ಅದರಿಂದ ಉಂಟಾಗುವ ನಷ್ಟ, ಕಳೆದುಕೊಳ್ಳುವ ಘನತೆಯ ಅರಿವು ನಮಗೆ ಮನದಟ್ಟಾಗಬಲ್ಲದು. ಮಾತಿನ ಮಹತ್ವದ ಕುರಿತು ಆಲೋಚಿಸುವಾಗ ಹಿಂದೊಮ್ಮೆ ಕೇಳಿದ ಕಥೆಯೊಂದು ನೆನಪಿಗೆ ಬರುತ್ತದೆ.

ಕಥೆ: ಒಂದಾನೊಂದು ಕಾಲದಲ್ಲಿ ಒಬ್ಬ ರಾಜನಿದ್ದ. ಆ ರಾಜನಿಗೆ ತನ್ನ ಪ್ರಜೆಗಳಿಗೆ ಅನ್ನಸಂತರ್ಪಣೆ ಮಾಡಬೇಕೆಂಬ ಬಯಕೆ ಉಂಟಾಯಿತು. ಒಂದು ದಿನ, ಬಯಲು ಪ್ರದೇಶವೊಂದರಲ್ಲಿ, ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಮೇಲೆ ಆಕಾಶದಲ್ಲಿ ಗಿಡುಗವೊಂದು ಸತ್ತ ಹಾವನ್ನು ಕಚ್ಚಿಕೊಂಡು ಹೋಗುತ್ತಿತ್ತು. ಆ ಸತ್ತ ಹಾವಿನ ಬಾಯಿಯಿಂದ ವಿಷ, ರಾಜ ಬಡಿಸುತ್ತಿದ್ದ ಆಹಾರದ ಮೇಲೆ ಬಿದ್ದಿತು. ಹೀಗಾದದ್ದು ಯಾರಿಗೂ ಗೊತ್ತಾಗಲಿಲ್ಲ. ರಾಜ ಆಹಾರ ಬಡಿಸುವುದನ್ನು ಮುಂದುವರಿಸಿದ. ಆ ವಿಷದ ಆಹಾರವನ್ನು ಸ್ವೀಕರಿಸಿದ ಕೆಲವರು ತೀರಿಕೊಂಡರು. ರಾಜನಿಗೆ ಈ ಘಟನೆಯಿಂದ ತುಂಬಾ ನೋವುಂಟಾಯಿತು.



> ಮಾತು ಮಂತ್ರವಾಗಿರಬೇಕೇ ಹೊರತು ಕುತಂತ್ರವಾಗಿರಬಾರದು. ಬಲ್ಲವನೇ ಬಲ್ಲ ಬೆಲ್ಲದ ಸಿಹಿಯ, ಬಲ್ಲವನೇ ಬಲ್ಲ ಮಾತಿನ ಮಾಧುರ್ಯವ; ಮಾತು ಅರಿತು ಆಡಿದರೆ ಅರಿವು ಮರೆತು ಆಡಿದರೆ ಸಾವು ಎಂಬ ಕವಿ ಮಾತನ್ನು ಇಲ್ಲಿ ಮೌನದಿ ಸ್ಮರಿಸುತ್ತೇನೆ. ಆದ್ದರಿಂದ ಮಾತನ್ನು ಹೃದಯದಿಂದ ತೂಕ ಮಾಡಿ ಆಡಬೇಕು. ನೀರಿನಂತೆ ಖರ್ಚು ಮಾಡದೆ ತುಪ್ಪದಂತೆ ಬಳಸಬೇಕು. ಆಗಲೇ ಜಗತ್ತು ಸೌಖ್ಯ ಮಾತಿನ ಒಡೆಯನಿಗೂ ಸೌಖ್ಯ.

ನಮ್ಮ ಭಾರತೀಯ ಪರಂಪರೆಯಲ್ಲಿ ಒಂದು ನಂಬಿಕೆ ಇದೆ. ನಾವು ಏನೇ ಒಳ್ಳೆಯ ಅಥವಾ ಕೆಟ್ಟ ಕೆಲಸಗಳನ್ನು ಮಾಡಿದರೂ ಮೇಲೆ ಯಮನೊಂದಿಗೆ ಇರುವ ಚಿತ್ರಗುಪ್ತ ಎಲ್ಲವನ್ನು ಬರೆದಿಟ್ಟುಕೊಳ್ಳುತ್ತಾನೆ. ನಾವು ತೀರಿಕೊಂಡ ನಂತರ ಯಮನ ಆಜ್ಞೆಯ ಅನುಸಾರ ಚಿತ್ರಗುಪ್ತ ನಾವು ಮಾಡಿರುವ ಪುಣ್ಯ ಮತ್ತು ಪಾಪದ ಕೆಲಸಗಳನ್ನು ತಿಳಿಸುತ್ತಾನೆ. ಪುಣ್ಯವನ್ನು ಮಾಡಿದ್ದರೆ ಸ್ವರ್ಗ ಲೋಕಕ್ಕೂ, ಪಾಪವನ್ನು ಮಾಡಿದ್ದರೆ ನರಕ ಲೋಕಕ್ಕೂ ಕಳುಹಿಸುತ್ತಾನೆ ಎಂಬ ನಂಬಿಕೆ ಇದೆ.

ಬಹಳ ಹಿಂದಿನಿಂದಲೂ ಈ ನಂಬಿಕೆ ಪ್ರಚಲಿತದಲ್ಲಿದೆ. ಭೂಲೋಕದಲ್ಲಿ ಘಟಿಸಿದ ಈ ಕರ್ಮ ಫಲದ ಹಂಚಿಕೆ ಮಾಡುವ ಚಿತ್ರಗುಪ್ತನಿಗೆ ಒಂದು ಸಂದಿಗ್ಧವುಂಟಾಯಿತು. ಈ ಘಟನೆಯಲ್ಲಿ ತೀರಿಕೊಂಡವರ ಸಾವಿನ ಪಾಪದ ಫಲವನ್ನು ಯಾರ ಲೆಕ್ಕಕ್ಕೆ ಬರೆಯುವುದೆಂದು ಅವನಿಗೆ ತಿಳಿಯಲಿಲ್ಲ. ಗಿಡುಗನ ತಪ್ಪಲ್ಲ. ಯಾಕೆಂದರೆ ಅದು ತನ್ನ ಆಹಾರವನ್ನು ತೆಗೆದುಕೊಂಡು ಹೋಗುತ್ತಿತ್ತು. ಸತ್ತ ಹಾವಿನ ತಪ್ಪಂತೂ ಖಂಡಿತ ಅಲ್ಲ. ರಾಜನ ತಪ್ಪೂ ಆಗಿರಲು ಸಾಧ್ಯವಿಲ್ಲ. ರಾಜನಿಗೆ ಆಹಾರದ ಮೇಲೆ ವಿಷ ಬಿದ್ದಿದ್ದು ಗೊತ್ತೇ ಇರಲಿಲ್ಲ.

ಚಿತ್ರಗುಪ್ತ, ಯಮಧರ್ಮನ ಬಳಿ ಹೋಗಿ ತನ್ನ ಸಮಸ್ಯೆಯನ್ನು ವಿವರಿಸಿದ. ಯಮಧರ್ಮ, ಅವನೊಡನೆ ತಾಳ್ಮೆಯಿಂದ ಕಾಯುವಂತೆ ಹಾಗೂ ಇನ್ನು ಕೆಲವೇ ದಿನಗಳಲ್ಲಿ ಆ ಸಮಸ್ಯೆಗೆ ಉತ್ತರ ಹೊಳೆಯುವುದಾಗಿಯೂ ತಿಳಿಸಿದ. ಆ ನಂತರ ಸ್ವಲ್ಪ ದಿನಗಳಲ್ಲಿ, ರಾಜನನ್ನು ಭೇಟಿಯಾಗಲು ಬೇರೆ ರಾಜ್ಯದಿಂದ ಬಂದಿದ್ದ ಕೆಲವರು ಆ ಊರನ್ನು ಪ್ರವೇಶಿಸಿದರು. ಅರಮನೆಯ ದಾರಿ ಅವರಿಗೆ ಗೊತ್ತಿರಲಿಲ್ಲ. ಅಲ್ಲಿಯೇ ಮಾರ್ಗದ ಬದಿಯಲ್ಲಿ ಕುಳಿತು ಹೂ ಮಾರುತ್ತಿದ್ದ ಹೆಂಗಸಿನೊಡನೆ, ನಿನಗೆ ಅರಮನೆಯ ದಾರಿ ಗೊತ್ತಿದೆಯೇ? ನಾವು ಅಲ್ಲಿಗೆ ಹೇಗೆ ಹೋಗಬಹುದು? ಎಂದು ವಿಚಾರಿಸಿದರು. ಅದಕ್ಕೆ ಆಕೆ, ಸರಿಯಾದ ದಾರಿಯನ್ನು ಅವರಿಗೆ ವಿವರಿಸಿ ಹೇಳಿದ ನಂತರ ಮುಂದುವರೆದು; ಆದರೆ ನೀವು ಜಾಗರೂಕರಾಗಿರಬೇಕು. ಏಕೆಂದರೆ ಆ ರಾಜ ವಿಷದ ಊಟವನ್ನಿಕ್ಕಿ ಕೊಲ್ಲುವವನು ಎಂದು ಎಚ್ಚರಿಕೆ ಕೊಟ್ಟಳು.

ಅವಳು ರಾಜನು ಮಾಡದ ಪಾಪದ ಬಗ್ಗೆ ಕೆಟ್ಟದಾಗಿ ವಿಮರ್ಶೆ ಮಾಡಿದ ಕ್ಷಣದಲ್ಲಿಯೇ ಚಿತ್ರಗುಪ್ತನ ಪ್ರಶ್ನೆಗೆ ಉತ್ತರ ದೊರಕಿತು. ತಕ್ಷಣವೇ ಚಿತ್ರಗುಪ್ತ ವಿಷದ ಆಹಾರ ಸೇವಿಸಿ ಸತ್ತ ಜನರ ಪಾಪದ ಫಲವನ್ನು ಆಕೆಯ ಲೆಕ್ಕಕ್ಕೆ ಸೇರಿಸಿದ.

ಈ ಕಥೆ ಅತಿಶಯೋಕ್ತಿಯಾಗಿರಬಹುದು, ಆದರೆ ಕಥೆ ತಿಳಿಸುವ ಮೌಲ್ಯ ಅಮೂಲ್ಯವಾದದ್ದು. ನಾವಾಡುವ ಮಾತು ಹೇಗಿರಬೇಕು ಎಂಬುದಕ್ಕೆ ಸ್ಪಷ್ಟ ನಿದರ್ಶನವನ್ನು ಈ ಕಥೆ ತಿಳಿಸುತ್ತದೆ. ಮಾತಿಗೆ ಇರುವ ಶಕ್ತಿ, ಮಾತನಾಡುವುದರಿಂದ ಉಂಟಾಗುವ ಪರಿಣಾಮವನ್ನು ಈ ಕತೆ ಮನಮುಟ್ಟುವಂತೆ ತಿಳಿಸುತ್ತದೆ.

ಮಾತು ಮನವ ಬೆಳಗಬಲ್ಲದು, ಮನೆಯ ಸುಡಬಲ್ಲದು

ಮಾತಿಗಿರುವ ಶಕ್ತಿ ಅಪಾರವಾದದ್ದು. ಕೆಲವು ಮಾತುಗಳು ಮನುಷ್ಯರನ್ನು ಉತ್ತೇಜನಗೊಳಿಸಿ ಸಾಧನೆಯ ದಾರಿಗೆ ಕೊಂಡೊಯ್ಯುವ ಕೆಲಸವನ್ನು ಮಾಡುವಂತಿರುತ್ತವೆ. ಹಾಗೆಯೇ ಮತ್ತೆ ಕೆಲವು ಮಾತುಗಳು ಮನುಷ್ಯರನ್ನು ಕುಗ್ಗಿಸುವ, ಆತ್ಮವಿಶ್ವಾಸವನ್ನು ಕಳೆದುಕೊಳ್ಳುವಂತೆ ಮಾಡುತ್ತವೆ.

ಸಕರಾತ್ಮಕ ಮಾತುಗಳು ಮನದಾಳದಲ್ಲಿ ನೆಲೆ ನಿಂತು ಮನವನ್ನು ಬೆಳಗುತ್ತದೆ. ನಕಾರಾತ್ಮಕ ಮಾತುಗಳು ಮನೆಯನ್ನು, ಮನವನ್ನು ಸುಡುವಂತೆ ಮಾಡುತ್ತವೆ. ಸಾಧ್ಯವಾದಷ್ಟು ಮನವ ಬೆಳಗುವ ಮಾತುಗಳನ್ನಾಡಿ ಸಾಧನೆಯ ಪಥದಲ್ಲಿ ಸಾಗುವವರಿಗೆ ದಾರಿದೀಪವಾಗುವ ಮಾತುಗಳನ್ನಾಡುವುದನ್ನು ಅಭ್ಯಾಸ ಮಾಡಿಕೊಂಡರೆ ಬದುಕು ಹಿತಕರವಾಗಿರುತ್ತದೆ.

ಮಾತು ಮನಮುಟ್ಟುವಂತಿರಬೇಕು, ಮನೆ ಹೊಡೆಯುವಂತಿರಬಾರದು

ದೊಡ್ಡ ದೊಡ್ಡ ಸಮಸ್ಯೆಗಳಿಗೆ ಮುಖ್ಯ ಕಾರಣ ಮಾತು. ಅದರಲ್ಲಿಯೂ ಕೆಲವು ಮಾತುಗಳು ಮನಸ್ಸುಗಳನ್ನು ಇನ್ನಿಲ್ಲದಂತೆ ಘಾಸಿ ಮಾಡಿ ಮನೆಗಳಲ್ಲಿ ಬಿರುಕುಗಳನ್ನುಂಟು ಮಾಡುತ್ತವೆ. ಕೆಲವೊಮ್ಮೆ ಮಾತಿನ ಪರಿಣಾಮ ಎಷ್ಟರಮಟ್ಟಿಗೆ ಇರುತ್ತದೆ ಎಂದರೆ ಒಂದೇ ಸ್ಥಳದಲ್ಲಿದ್ದರೂ ಒಟ್ಟಿಗೆ ಕೆಲಸ ಮಾಡುತ್ತಿದ್ದರೂ ಮಾತನಾಡದೇ ಕಾರ್ಯನಿರ್ವಹಿಸುವ ಸ್ಥಿತಿಗೆ ತಲುಪಿರುತ್ತೇವೆ.

ಅನಿಶ್ಚಿತವಾದ ಈ ಬದುಕಿನಲ್ಲಿ ಇನ್ನಿಲ್ಲದ ಕಂದರವನ್ನು ನಾವೇ ಮಾತಿನಿಂದ ನಿರ್ಮಿಸಿಕೊಂಡು ದೂರ ನಿಲ್ಲಬೇಕಾಗುತ್ತದೆ. ಆದ ಕಾರಣ ನಾವಾಡುವ ಮಾತಿನ ಬಗ್ಗೆ ಸ್ಪಷ್ಟ ಅರಿವು ನಮಗಿರಲೇಬೇಕಾಗಿರುತ್ತದೆ. ಒಳ್ಳೆಯ, ಆತ್ಮೀಯವಾದ ಮಾತುಗಳು ಮನಮುಟ್ಟುತ್ತವೆ, ಕೆಟ್ಟ ಮಾತುಗಳು, ಇಲ್ಲಸಲ್ಲದ ಮಾತುಗಳು ಮನೆ, ಮನವನ್ನು ಹೊಡೆಯುವಂತಿರುತ್ತದೆ. ಯಾವುದು ನಮಗೆ ಬೇಕು? ಆಯ್ಕೆ ನಮ್ಮ ಕೈಯಲ್ಲಿಯೇ ಇದೆ.

ಮಾತಿಗೆ ಇರುವ ಮೌಲ್ಯ ಎಲ್ಲ ಕಾಲಕ್ಕೂ ಸಲ್ಲುವಂತದ್ದು. ಅದನ್ನು ನಾವು ಹೇಗೆ ಬಳಸಿ, ಉಳಿಸಿಕೊಳ್ಳಬೇಕೆಂಬುದು ನಮಗೆ ಬಿಟ್ಟದ್ದು. ಮಾತು ಆಡಿದರೆ ಹೋಯಿತು, ಮುತ್ತು ಹೊಡೆದರೆ ಹೋಯಿತು, ಮಾತೇ ಮುತ್ತು, ಮಾತೇ ಮೃತ್ಯು ಎಂಬ ಗಾದೆ ಮಾತುಗಳು ಮಾತಿಗಿರುವ ಮಹತ್ವವನ್ನು ಸಾರುವಂತಹವುಗಳಾಗಿವೆ. ಇನ್ನೂ ಮುಂದಾದರೂ ಒಳ್ಳೆಯ ಮಾತುಗಳನ್ನಾಡುತ್ತಾ ಅನಿಶ್ಚಿತ ವಾದ ಈ ಬದುಕಿನಲ್ಲಿ ಇರುವಷ್ಟು ಕಾಲ ಸಂತೋಷದಿಂದ ಕಾಲ ಕಳೆಯೋಣ, ದ್ವೇಷ, ಮನಸ್ತಾಪ, ಇಲ್ಲಸಲ್ಲದ ಟೀಕೆಗಳನ್ನಾಡುತ್ತಾ ವ್ಯರ್ಥವಾಗಿ ಬದುಕನ್ನು ಕಳೆಯದೇ ಸುಂದರವಾದ ಜೀವನವನ್ನು ಒಳ್ಳೆಯ ಮಾತುಗಳನ್ನಾಡುತ್ತಾ ಅರ್ಥಪೂರ್ಣವಾಗಿ ಕಳೆಯೋಣ. ಮಾತು ಮಂತ್ರವಾಗಿರಬೇಕೇ ಹೊರತು ಕುತಂತ್ರವಾಗಿರಬಾರದು. ಬಲ್ಲವನೇ ಬಲ್ಲ ಬೆಲ್ಲದ ಸಿಹಿಯ ಬಲ್ಲವನೇ ಬಲ್ಲ ಮಾತಿನ ಮಾಧುರ್ಯವ ಮಾತು ಅರಿತು ಆಡಿದರೆ ಅರಿವು ಮರೆತು ಆಡಿದರೆ ಸಾವು ಎಂಬ ಕವಿ ಮಾತನ್ನು ಇಲ್ಲಿ ಮೌನದಿ ಸ್ಮರಿಸುತ್ತೇನೆ. ಆದ್ದರಿಂದ ಮಾತನ್ನು ಹೃದಯದಿಂದ ತೂಕ ಮಾಡಿ ಆಡಬೇಕು. ನೀರಿನಂತೆ ಖರ್ಚು ಮಾಡದೆ ತುಪ್ಪದಂತೆ ಬಳಸಬೇಕು. ಆಗಲೇ ಜಗತ್ತು ಸೌಖ್ಯ ಮಾತಿನ ಒಡೆಯನಿಗೂ ಸೌಖ್ಯ.

ಆಂಧ್ರದಲ್ಲಿ ರಾಜ್ಯದ ತೋತಾಪುರಿ ಮಾವಿನ ಹಣ್ಣಿಗೆ ನಿಷೇಧ ಖಂಡಿಸಿ ಮೈಸೂರಲ್ಲಿ ವಾಟಾಳ್ ಪ್ರತಿಭಟನೆ

ಉಚಿತವಾಗಿ ಜನರಿಗೆ ಮಾವಿನ ಹಣ್ಣು ವಿತರಣೆ

ಮೈಸೂರು,ಜೂ.16(ಎಂಟಿವೈ)– ಆಂಧ್ರಪ್ರದೇಶ ಸರ್ಕಾರ ರಾಜ್ಯದ ತೋತಾಪುರಿ ಮಾವಿನ ಹಣ್ಣಿಗೆ ನಿರ್ಬಂಧ ಹೇರಿರುವುದನ್ನು ಖಂಡಿಸಿ, ಮೈಸೂರಲ್ಲಿ ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಸಾರ್ವಜನಿಕರಿಗೆ ಮಾವಿನಹಣ್ಣು ವಿತರಿಸುವ ಮೂಲಕ ವಿನೂತನವಾಗಿ ಪ್ರತಿಭಟಿಸಿದರು.



ಆಂಧ್ರಪ್ರದೇಶ ಸರ್ಕಾರ ರಾಜ್ಯದ ತೋತಾಪುರಿ ಮಾವಿನ ಹಣ್ಣಿಗೆ ನಿರ್ಬಂಧ ಹೇರಿರುವುದನ್ನು ಖಂಡಿಸಿ, ಮೈಸೂರಲ್ಲಿ ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಸಾರ್ವಜನಿಕರಿಗೆ ಮಾವಿನಹಣ್ಣು ವಿತರಿಸಿ ಪ್ರತಿಭಟಿಸಿದರು.

ಮೈಸೂರಿನ ಹಾರ್ಡಿಂಗ್ ವೃತ್ತದ ಬಳಿ ಸೋಮವಾರ ಮಧ್ಯಾಹ್ನ ಬೆಂಬಲಿಗರೊಂದಿಗೆ ಸಾರ್ವಜನಿಕರಿಗೆ ಮಾವಿನ ಹಣ್ಣನ್ನು ವಿತರಿಸಿ, ಪ್ರತಿಭಟನೆ ನಡೆಸಿದರು. ಆಂಧ್ರದಲ್ಲಿ ರಾಜ್ಯದ ತೋತಾಪುರಿ ಮಾವಿನಹಣ್ಣು ನಿಷೇಧಿಸಿರುವುದು ಖಂಡನೀಯ. ಈಗ ರೈತರಿಗೆ ಗಂಭೀರವಾದ ಪರಿಸ್ಥಿತಿ ಎದುರಾಗಿದೆ. ಶ್ರೀನಿವಾಸಪುರ ಭಾಗದಲ್ಲಿ ತೋತಾಪುರಿ ಮಾವಿನ ಬೆಳೆಯನ್ನು ಹೆಚ್ಚಾಗಿ ಬೆಳೆಯುತ್ತಾರೆ. ಆದರೆ, ಆಂಧ್ರ ಸರ್ಕಾರ ರಾಜ್ಯದ ತೋತಾಪುರಿ ಮಾವಿನ ಹಣ್ಣನ್ನು ನಿಷೇಧಿಸುವ ಮೂಲಕ ಉದ್ಧಟತನ ಪ್ರದರ್ಶಿಸಿದೆ. ಆಂಧ್ರದ ತಿರುಪತಿ ದೇವಾಲಯಕ್ಕೆ ಶೇ.40ರಷ್ಟು ಕನ್ನಡಿಗರು ಹೋಗುತ್ತಾರೆ. ಅಲ್ಲಿನ ಲಡ್ಡು ತಯಾರಿಕೆಗೆ ನಮ್ಮ ನಂದಿನಿ ತುಪ್ಪ ಕೊಡುತ್ತೇವೆ. ಗಂಧದ ಮರವನ್ನು ಸಹ ಕೊಡುತ್ತಿದ್ದೇವೆ. ಇಷ್ಟಾದರೂ, ರಾಜ್ಯದ ಮಾವಿನಹಣ್ಣು ನಿಷೇಧ ಮಾಡಿದ್ದಾರೆ. ಇದು ಸರಿಯಲ್ಲ ನಿಷೇಧ ವಾಪಸ್ ಪಡೆಯದಿದ್ದರೆ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ವ್ಯಾಪಾರೀಕರಣ ಸರಿಯಲ್ಲ: ಚಾಮುಂಡಿ ಬೆಟ್ಟದಲ್ಲಿ ಆಷಾಢ ಮಾಸದಲ್ಲಿ ದೇವಿಯ ದರ್ಶನ ಪಡೆಯಲು ಟಿಕೆಟ್‌ಗೆ 2 ಸಾವಿರ ರೂ. ದರ ನಿಗದಿ ಮಾಡಿರುವುದನ್ನು ಕೂಡಲೇ ರದ್ದು ಮಾಡಬೇಕು. ಜನಸಾಮಾನ್ಯರಿಗೆ ಉಚಿತ ದರ್ಶನಕ್ಕೆ ಅವಕಾಶ ಮಾಡಿಕೊಡಬೇಕು. ದುಡ್ಡಿಗಾಗಿ ಶ್ರೀಮಂತರಿಗೆ ಟಿಕೆಟ್ ಮಾಡಿ ಕರೆದುಕೊಂಡು ಹೋಗುವುದು ಸರಿಯಲ್ಲ, ಚಾಮುಂಡೇಶ್ವರಿ ಸನ್ನಿಧಿಯಲ್ಲಿ ವ್ಯಾಪಾರೀಕರಣ ಮಾಡುವುದು ಸರಿಯಲ್ಲ ಎಂದು ಕಿಡಿಕಾರಿದರು. ಪ್ರತಿಭಟನೆಯಲ್ಲಿ ಹೋರಾಟಗಾರರಾದ ಮೂಗೂರು ನಂಜುಂಡಸ್ವಾಮಿ, ಶಿವಶಂಕರ್, ತೇಜಸ್ ಲೋಕೇಶ್‌ಗೌಡ, ಪಾರ್ಥಸಾರಥಿ ಮತ್ತಿತರರು ಪಾಲ್ಗೊಂಡಿದ್ದರು.

ಸಿದ್ದರಾಮಯ್ಯ ಕೆಳಗಿಳಿದರೆ ರಾಜ್ಯ ರೌಡಿಗಳ ಕೈ ಸೇರುತ್ತದೆ!

ವಾಟಾಳ್ ನಾಗರಾಜ್ ಆತಂಕದ ನುಡಿ

ಮೈಸೂರು,ಜೂ.16(ಎಂಟಿವೈ)– ಮುಖ್ಯಮಂತ್ರಿಯಾಗಿ ಎರಡನೇ ಬಾರಿ ಅಧಿಕಾರ ನಡೆಸುತ್ತಿರುವ ಸಿದ್ದರಾಮಯ್ಯ, ಈಗ ಈ ಹಿಂದೆ ಇದ್ದ ಗತ್ತು, ಗಮ್ಮತ್ತು ಕಳೆದುಕೊಂಡಿದ್ದಾರೆ. ಅವರು ಅಧಿಕಾರದಿಂದ ಕೆಳಗೆ ಇಳಿದರೆ ರಾಜ್ಯ ರೌಡಿಗಳ ಕೈಗೆ ಸೇರುತ್ತದೆ ಎಂದು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಆತಂಕ ವ್ಯಕ್ತಪಡಿಸಿದ್ದಾರೆ.



ಸಿದ್ದರಾಮಯ್ಯ

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, 2ನೇ ಬಾರಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ಬಳಿಕ ಅವರಲ್ಲಿ ಮೊದಲು ಇದ್ದ ಗತ್ತು, ಗಮ್ಮತ್ತು ಕಾಣುತ್ತಿಲ್ಲ. ವೈಯಕ್ತಿಕವಾಗಿ ಒಳ್ಳೆ ಮನುಷ್ಯ. ಆದರೆ, ಈಗ ಆಡಳಿತದಲ್ಲಿ ಯಾಕೋ ಬಿಗಿ ಹಿಡಿತ ಕಾಣಿಸುತ್ತಿಲ್ಲ. ಸಿದ್ದರಾಮಯ್ಯ ಅಧಿಕಾರ ದಿಂದ ಕೆಳಗೆ ಇಳಿದರೆ ರಾಜ್ಯ ರೌಡಿಗಳು ಕೈಯ್ಯಲ್ಲಿ ಸೇರುತ್ತದೆ. ಸಿದ್ದರಾಮಯ್ಯ 5 ವರ್ಷ ಸಿಎಂ ಆಗಿ ಮುಂದುವರೆಯಬೇಕು. ಆರೋಗ್ಯ ಚೆನ್ನಾಗಿದ್ದರೆ ಮುಂದಿನ ಬಾರಿಯೂ ಅವರೇ ಆಗಲಿ ಎನ್ನುವುದು ನನ್ನ ಬಯಕೆ ಎಂದರು.

ರಾಜ್ಯದಲ್ಲಿ ಯಡಿಯೂರಪ್ಪ, ಕುಮಾರಸ್ವಾಮಿ ಕಾಲದಲ್ಲಿ ಮಂತ್ರಿಗಳ ವ್ಯಾಪಾರ ಶುರು ಆಯಿತು. ಇದರಿಂದ ರಾಜ್ಯಕ್ಕೆ ಸಾಕಷ್ಟು ನಷ್ಟ ಆಯಿತು. ಯಡಿಯೂರಪ್ಪನವರ ಮೇಲೆ ನನಗೆ ವೈಯಕ್ತಿಕವಾಗಿ ಬೇಸರವಿಲ್ಲ ಎಂದರು.

ರಾಜ್ಯದಲ್ಲಿ ಸಿದ್ದರಾಮಯ್ಯ ಬಿಟ್ಟರೆ, ಸಿಎಂ ಆಗುವ ವ್ಯಕ್ತಿ ಯಾರು ಇಲ್ಲ. ಇವತ್ತಿನ ಪರಿಸ್ಥಿತಿಗೆ ಸಿದ್ದರಾಮಯ್ಯ ರಾಜ್ಯಕ್ಕೆ ಬೇಕು. ರಾಜಕಾರಣ ಇಂದು ಹಾಳಾಗುತ್ತಿದೆ. ಪರಪ್ಪನ ಅಗ್ರಹಾರದಿಂದ ಕರೆದುಕೊಂಡು ಬಂದು ಆಡಳಿತ ನಡೆಸುತ್ತಿರಾ ಎಂದು ಪ್ರಶ್ನಿಸಿದರು.

ಕಾವೇರಿ ಆರತಿ ಬೇಕಾಗಿಲ್ಲ : ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ ಮಾಡುವ ಅವಶ್ಯಕತೆ ಇಲ್ಲ. ಆದರೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾವ ಕಾರಣಕ್ಕಾಗಿ ಕಾವೇರಿ ಆರತಿ ಮಾಡಲು ಮುಂದಾಗಿದ್ದಾರೆ ಎಂದು ತಿಳಿಯುತ್ತಿಲ್ಲ. ಕೆಆರ್‌ಎಸ್‌ನಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣ ಮಾಡಬಾರದು. ಇದರಿಂದ ಕನ್ನಂಬಾಡಿಗೆ ಇರುವ ಸೌಂದರ್ಯಕ್ಕೆ ಧಕ್ಕೆಯಾಗುತ್ತದೆ. ಆ ಕಾರಣದಿಂದ ಯಾವ ಪಾರ್ಕ್ ಕೂಡ ಕೆಆರ್‌ಎಸ್‌ನಲ್ಲಿ ನಿರ್ಮಿಸಬಾರದು ಎಂದು ಅವರು ಆಗ್ರಹಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಲಾಗೈಡ್ ಮಾಸಿಕ, ಮೈಸೂರು ಪತ್ರಕರ್ತರ ಸ್ನೇಹಕೂಟದಿಂದ
ಖಾದ್ರಿ ಶಾಮಣ್ಣ ಪ್ರಶಸ್ತಿ ಪುರಸ್ಕೃತ ಕೂಡ್ಲಿ ಗುರುರಾಜ್‌ಗೆ ಸನ್ಮಾನ



ಲಾಗೈಡ್ ಕಾನೂನು ಮಾಸಪತ್ರಿಕೆ ಹಾಗೂ ಮೈಸೂರು ಪತ್ರಕರ್ತರ ಸ್ನೇಹಕೂಟದಿಂದ ಖಾದ್ರಿ ಶಾಮಣ್ಣ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತ ಕೂಡ್ಲಿ ಗುರುರಾಜ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಮೈಸೂರು, ಜೂ.16–ಖಾದ್ರಿ ಶಾಮಣ್ಣ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತ ಕೂಡ್ಲಿ ಗುರುರಾಜ್ ಅವರನ್ನು ಲಾಗೈಡ್ ಕಾನೂನು ಮಾಸಪತ್ರಿಕೆ ಹಾಗೂ ಮೈಸೂರು ಪತ್ರಕರ್ತರ ಸ್ನೇಹಕೂಟದಿಂದ ಸೋಮವಾರ ಸನ್ಮಾನಿಸಲಾಯಿತು.

ಮುಖ್ಯ ಅತಿಥಿಯಾಗಿದ್ದ ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ನಾನು ಮೈಸೂರು–ಕೊಡಗು ಲೋಕ ಸಭಾ ಕ್ಷೇತ್ರದಲ್ಲಿ ಹತ್ತು ವರ್ಷಗಳ ಕಾಲ ಸಂಸದನಾಗಿ ಕೆಲಸ ಮಾಡಿದೆ. ಮೂಲತಃ ನಾನೊಬ್ಬ ಪತ್ರಕರ್ತನಾಗಿದ್ದರಿಂದ ಆ ಎಚ್ಚರಿಕೆಯನ್ನು ಇಟ್ಟುಕೊಂಡೇ ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಸಾಧ್ಯ ವಾಯಿತು ಎಂದು ಹೇಳಿದರು.

ರಾಜಕಾರಣಿಗಳು ಮಕ್ಕಳು, ಮೊಮ್ಮ ಕ್ಕಳನ್ನು ರಾಜಕೀಯಕ್ಕೆ ತರುತ್ತಾರೆ. ಆದರೆ ಒಂದು ಸಾರಿ ಪತ್ರಕರ್ತರಾದರೆ ಆತ ಸಾಯುವವರೆಗೂ ಪತ್ರಕರ್ತನಾಗಿಯೇ ಇರುತ್ತಾನೆ. ಆರ್.ಕೃಷ್ಣಕುಮಾರ್ ಸೇರಿ ದಂತೆ ಮೈಸೂರಿನ ಪತ್ರಕರ್ತರು ನನ್ನ ಅವಧಿಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಅತ್ಯುತ್ತಮವಾಗಿ ಸಹಕರಿಸಿದ್ದಾರೆ. ಎಂ.ಬಿ. ಮರಮ್‌ಕಲ್ ಅಂಥವರು ಸಮಾಜದ ಪರವಾಗಿ ಹಲವಾರು ಮಾರ್ಗದರ್ಶನ ಮಾಡಿದ್ದಾರೆ ಎಂದು ಸ್ಮರಿಸಿದರು.

ಯಾರಾದರೊಬ್ಬರ ಮೇಲೆ ಆರೋಪ ಗಳನ್ನು ಮಾಡಿದಾಗ ಸಂಬಂಧಿತ ವ್ಯಕ್ತಿಯ ಅಭಿಪ್ರಾಯವನ್ನು ಕೇಳಿ ಪ್ರಕಟಿಸಬೇಕು ಎಂಬುದು ಪತ್ರಿಕೋದ್ಯಮ ನಿಯಮ. ಆದರೆ ಬಹುತೇಕರು ಆರೋಪಗಳನ್ನು ಪ್ರಕಟಿಸಿ, ಮರುದಿನ ಸಂಬಂಧಿತ ವ್ಯಕ್ತಿ ಪತ್ರಿಕಾಗೋಷ್ಠಿ ಮಾಡುವವರೆಗೂ ಕಾಯು ತ್ತಾರೆ. ಆದರೆ ಕೂಡ್ಲಿ ಗುರುರಾಜ್ ಸದಾ ಕಾಲ ನನ್ನ ಮೇಲೆ ಯಾರೇ ಆರೋಪ ಮಾಡಿದರೂ ನನ್ನ ಪ್ರತಿಕ್ರಿಯೆಯನ್ನು ಕೇಳುತ್ತಿದ್ದರು. ಆದ್ದರಿಂದಲೇ ಅವರು ನನಗಿಷ್ಟವಾದ ಪತ್ರಕರ್ತ ಎಂದರು.

ಸನ್ಮಾನ ಸ್ವೀಕರಿಸಿದ ಕೂಡ್ಲಿ ಗುರು ರಾಜ್ ಮಾತನಾಡಿ, ಆರಂಭದಿಂದ ಇಲ್ಲಿ ಯವರೆಗೆ ತಮಗೆ ಸಹಕರಿಸಿದ ಎಲ್ಲರನ್ನು ಸ್ಮರಿಸಿ, ಕೃತಜ್ಞತೆ ಸಲ್ಲಿಸಿದರು.

ಅಚ್ಚುಮೊಳೆ ಕಾಲದಿಂದ ಬಂದ ನಾವು ಅಪ್‌ಡೇಟ್ ಆಗಿದ್ದರಿಂದ ಇಲ್ಲಿಯ ವರೆಗೆ ಪತ್ರಿಕೋದ್ಯಮದಲ್ಲಿ ಉಳಿಯಲು ಸಾಧ್ಯವಾಗಿದೆ. ಪತ್ರಕರ್ತರು ಸದಾ ಹೊಸ ದಕ್ಕೆ ಹೊಂದಿಕೊಳ್ಳಬೇಕು ಎಂದರು.

ಹಿರಿಯ ಪತ್ರಕರ್ತ ಅಂಶಿಪ್ರಸನ್ನ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಮೈಸೂರು ವಕೀಲರ ಸಂಘದ ಅಧ್ಯಕ್ಷ ಲೋಕೇಶ್, ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ, ಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ, ಹಿರಿಯ ಪತ್ರಕರ್ತರಾದ ಎಂ.ಬಿ. ಮರಮ್ ಕಲ್, ಆರ್.ಕೃಷ್ಣಕುಮಾರ್, ಶಂಕರ್ ಬೆನ್ನೂರು, ಟಿ.ಆರ್.ಸತೀಶ್‌ಕುಮಾರ್, ಆರ್.ಕೃಷ್ಣ, ಕುಂದೂರು ಉಮೇಶ್ ಭಟ್ಟ, ಮಹೇಶ್ ಭಗೀರಥ, ಲಾರೆನ್ಸ್ ಮಿಲ್ಬನ್ ಸೇರಿದಂತೆ ಮುದ್ರಣ, ವಿದ್ಯುನ್ಮಾನ ಮಾಧ್ಯಮದ ಹಲವಾರು ಪತ್ರಕರ್ತರು, ಛಾಯಾಗ್ರಾಹಕರು, ಕ್ಯಾಮರಾಮನ್‌ಗಳು, ಮೈಸೂರು ವಕೀಲರ ಸಂಘದ ಮಾಜಿ ಅಧ್ಯಕ್ಷ ಬಿ.ವಿ.ರಾಮಮೂರ್ತಿ, ಹಲ ವಾರು ವಕೀಲರು ಉಪಸ್ಥಿತರಿದ್ದರು.

ಹಿರಿಯ ವಕೀಲ ಹರೀಶ್‌ಕುಮಾರ್ ಹೆಗ್ಡೆ ಸ್ವಾಗತಿಸಿದರು. ಲಾಗೈಡ್ ಸಂಪಾದಕ ಎಚ್.ಎನ್.ವೆಂಕಟೇಶ್ ನಿರೂಪಿಸಿದರು. ಸನ್ಮಾನಿತರನ್ನು ರಾಮ್ ಪರಿಚಯಿಸಿದರು. ಕೆ.ಪಿ.ನಾಗರಾಜ್ ವಂದಿಸಿದರು.

ಆರೋಗ್ಯಕ್ಕೆ ಆದ್ಯತೆ ನೀಡಿ: ಮಾಜಿ ಶಾಸಕ ಸಿ.ಎಸ್.ನಿರಂಜನ್‌ಕುಮಾರ್


ಮೈಸೂರಿನ ಆಲನಹಳ್ಳಿ ಕುದೇರು ಶಾಖಾ ಮಠದಲ್ಲಿ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ, ಕಣ್ಣಿನ ತಪಾಸಣಾ ಶಿಬಿರವನ್ನು ಮಾಜಿ ಶಾಸಕ ಸಿ.ಎಸ್.ನಿರಂಜನ್‌ಕುಮಾರ್ ಉದ್ಘಾಟಿಸಿದರು.

ಮೈಸೂರು,ಜೂ.16–ಮೈಸೂರಿನ ಆಲನಹಳ್ಳಿ ಕುದೇರು ಶಾಖಾ ಮಠದಲ್ಲಿ ಬಸವ ಬಳಗ ಟ್ರಸ್ಟ್, ಪೂರ್ವ ವಲಯ ಮೈಸೂರು ವತಿಯಿಂದ ಸ್ವಲೀಲ ಮಹಾತ್ಮ, ದಾಸೋಹ ಚಕ್ರವರ್ತಿ ಶ್ರೀ ಮನ್ ನಿರಂಜನ ಶ್ರೀ ಗುರು ಮಲ್ಲೇಶ್ವರ ಮಹಾಪ್ರಭುಗಳವರ 126ನೆಯ ಆರಾಧನಾ ಮಹೋ ತ್ಸವದ ಅಂಗವಾಗಿ ಭಕ್ತಾದಿಗಳು, ಸಾರ್ವಜನಿಕರಿಗೆ ಉಚಿತ ಆರೋಗ್ಯ ಮತ್ತು ಕಣ್ಣಿನ ತಪಾಸಣೆ ಕಾರ್ಯಕ್ರಮವನ್ನು ಶ್ರೀ ನಿರ್ಮಲ ಆಸ್ಪತ್ರೆ ಮತ್ತು ಮಹಾವೀರ್ ದರ್ಶನ್ ಕಣ್ಣಿನ ಆಸ್ಪತ್ರೆ ಸಹಯೋಗದೊಂದಿಗೆ ಆಯೋಜಿಸಲಾಗಿತ್ತು.

ಕುದೇರು ಮಠದ ಶ್ರೀ ಗುರುಶಾಂತ ಮಹಾಸ್ವಾಮಿ ಗಳವರು ಆರೋಗ್ಯ ಹೊಂದಿದ್ದರೆ ಏನು ಬೇಕಾದರೂ ಸಾಧಿಸಬಹುದು. ಆರೋಗ್ಯ ಇಲ್ಲದಿದ್ದರೆ ಸಾಧನೆ ಶೂನ್ಯ. ಈ ಒಂದು ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮವನ್ನು ಬಸವ ಬಳಗ ಪೂರ್ವ ವಲಯ ಟ್ರಸ್ಟ್ ಸದಸ್ಯರು ಅರ್ಥಪೂರ್ಣವಾಗಿ ಕಾರ್ಯ ಕ್ರಮವನ್ನು ಆಯೋಜಿಸಿದ್ದಾರೆ. ಈ ಭಾಗದಲ್ಲಿ ವಾಸಿ ಸುವ ಬಹುತೇಕ ನಿವೃತ್ತ ಸದಸ್ಯರು ನಿವಾಸಿಗಳು ಆರೋಗ್ಯ ಅರಿವು ಪಡೆಯಲು ಅರ್ಥಪೂರ್ಣ ಕಾರ್ಯ ಕ್ರಮ ಮಾಡಿದ್ದಾರೆ. ನಮ್ಮೆಲ್ಲರ ಆರಾಧ್ಯ ಶ್ರೀ ಗುರು ಮಲ್ಲೇಶ್ವರ ಮಹಾಪ್ರಭುಗಳವರ 126ನೇ ಆರಾಧನ ಮಹೋತ್ಸವ ಕಾರ್ಯಕ್ರಮವು ನಾನಾ ಧಾರ್ಮಿಕ ಹಾಗೂ ಜನೋಪಯೋಗಿ ಕಾರ್ಯಕ್ರಮಗಳ ಮೂಲಕ ನಡೆದುಕೊಂಡು ಬರುತ್ತಿದೆ. ಗುರುಮಲ್ಲೇಶ್ವರ ಮಹಾಪ್ರಭು ಗಳವರು ದಾಸೋಹ, ಶೈಕ್ಷಣಿಕ, ಹಾಗೂ ಹಸಿದವರಿಗೆ ದಾಸೋಹದ ಮುಖಾಂತರ ನಮ್ಮೆಲ್ಲರಿಗೂ ಪ್ರೇರಣೆ ಹಾಗೂ ಅವರ ಆದರ್ಶವನ್ನು ನಾವೆಲ್ಲರೂ ಪಾಲನೆ ಮಾಡಬೇಕಾಗಿದೆ ಎಂದು ತಿಳಿಸಿದರು.

ಗುಂಡ್ಲುಪೇಟೆ ಮಾಜಿ ಶಾಸಕ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ, ಈಗಿನ ಕಾಲದಲ್ಲಿ ಪ್ರಪಂಚವು ಹಣದ ಹಿಂದೆ ಓಡುತ್ತಿದೆಯೇ ಹೊರತು ತನ್ನ ಆರೋಗ್ಯ ಅಥವಾ ಸಮಾಜಕ್ಕೆ ಸಹಾಯ ಮಾಡುವ ಕೆಲಸಗಳು, ಬಹಳ ಕಡಿಮೆಯಾಗಿದೆ. ಆದ್ದರಿಂದ ಶ್ರೀ ಗುರು ಮಲ್ಲೇ ಶ್ವರ ಮಹಾಪ್ರಭುಗಳವರ ಸೇವೆ ಮತ್ತು ಅವರ ಕಲ್ಪನೆ ನಿರಂತರವಾಗಿ ನಾವೆಲ್ಲರೂ ಅಳವಡಿಸಿಕೊಂಡು ಮುಂದೆ ಸಾಗಿದರೆ ನಮ್ಮ ಸಮಾಜ ಮತ್ತು ಶೈಕ್ಷಣಿಕವಾಗಿ ಆರ್ಥಿಕ ವಾಗಿ ಕುಗ್ಗಿರುವಂತಹ ವ್ಯಕ್ತಿಗಳನ್ನು ಮೇಲೆ ತರುವ ನಿಟ್ಟಿನಲ್ಲಿ ನಾವೆಲ್ಲರೂ ಒಗ್ಗೂಡಿ ಒಳ್ಳೆಯ ಮನಸ್ಥಿತಿ ಯಿಂದ ಪರಸ್ಪರ ಒಬ್ಬರಿಗೊಬ್ಬರು ಕಷ್ಟಕ್ಕೆ ನಿಂತರೆ ನಮ್ಮ ಸಮಾಜ ಮುನ್ನಡೆಯಲು ಸಾಧ್ಯ ಎಂದು ತಿಳಿಸಿದರು.

ಜಿಪಂ ಮಾಜಿ ಸದಸ್ಯ ಕಾಪು ಸಿದ್ಧವೀರಪ್ಪ, ಬಿಜೆಪಿ ಮುಖಂಡರಾದ ಆಲನಹಳ್ಳಿ ಅಶೋಕ್, ಚಿಕ್ಕಹಳ್ಳಿ ಪಿ.ದೇವ ರಾಜು ದೇಚಿ, ವೀರಶೈವ ಲಿಂಗಾಯತ ಸಮಾನಮನಸ್ಕರ ಸ್ನೇಹ ಬಳಗದ ಅಧ್ಯಕ್ಷ ಶಿವರಾಜು, ಬಸವ ಬಳಗ ಪೂರ್ವ ವಲಯ ಟ್ರಸ್ಟ್ ಅಧ್ಯಕ್ಷ ಎಸ್.ಶಿವಸ್ವಾಮಿ, ಪ್ರಧಾನ ಕಾರ್ಯದರ್ಶಿ ಡಿ.ಲೋಹಿತ್ ಉಪಾಧ್ಯಕ್ಷ ಪಿ.ಟಿ. ಮಹ ದೇವಸ್ವಾಮಿ, ಶ್ರೀಕಂಠಮೂರ್ತಿ, ಪದಾಧಿಕಾರಿಗಳಾದ ಆನಂದಮೂರ್ತಿ, ಗುರುಪ್ರಸಾದ್, ನಂದೀಶ್, ಶ್ರೀಶೈಲ ಕುಂಬಾರ, ಮಹೇಶ್, ಜಯಶಂಕರ್, ಬಸವರಾಜು, ಮಾದಪ್ಪ, ನಾಗೇಂದ್ರ, ಸಿದ್ದಪ್ಪಸ್ವಾಮಿ, ದೇವಪ್ಪಾಜಿ, ಮಲ್ಲಿ ಕಾರ್ಜುನ ಸ್ವಾಮಿ, ಪುಟ್ಟಬುದ್ಧಿ, ವಿಶ್ವನಾಥ, ಕುಮಾರಣ್ಣ, ಮಧುಸೂದನ್, ಗಜೇಂದ್ರ ಮತ್ತಿತರರು ಉಪಸ್ಥಿತರಿದ್ದರು.

ಜೂ.25, ಜನಸ್ಪಂದನ ಕಾರ್ಯಕ್ರಮ

ಮೈಸೂರು: ಜಿಲ್ಲಾ ಮಟ್ಟದಲ್ಲಿ ಸಾರ್ವ ಜನಿಕರ ಅಹವಾಲುಗಳಿಗೆ ಸೂಕ್ತ ಪರಿ ಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆ ಯಲ್ಲಿಯೂ ಪ್ರತಿ ತಿಂಗಳು ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು ಸಾರ್ವ ಜನಿಕ ಸಮಸ್ಯೆಗಳಿಗೆ ಪರಿಹಾರೋಪಾಯ ಗಳನ್ನು ಒದಗಿಸುವ ಸಂಬಂಧ ಜೂನ್ 25ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಜೂನ್ 25ರಂದು ತಮ್ಮ ಅಹವಾಲು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಕಾಂಗ್ರೆಸ್ ಮುಖಂಡ ಎನ್.ಭಾಸ್ಕರ್‌ಗೆ ಜನ್ಮದಿನದ ಶುಭಾಶಯ....


ಅಶೋಕಪುರಂನ ಕಾಂಗ್ರೆಸ್ ಮುಖಂಡ, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ, ಕೆಪಿಸಿಸಿ ಸಂಯೋಜಕ ಎನ್.ಭಾಸ್ಕರ್ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಕೃಷ್ಣರಾಜ ಕ್ಷೇತ್ರದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಶುಭಾಶಯ ಕೋರಿದರು. ಈ ವೇಳೆ ಅಶೋಕಪುರಂ ದೊಡ್ಡಗರಡಿ ಅಧ್ಯಕ್ಷಜೋಗಿ ಮಹೇಶ್, ರಮೇಶ್, ಮಂಜುನಾಥ್, ವಿಶ್ವ, ದ್ಯಾವಪ್ಪ ನಾಯಕ, ಎಸ್.ಆರ್.ರವಿಕುಮಾರ್, ವಕೀಲರಾದ ಕಾಂತರಾಜು, ಎನ್.ಆರ್.ನಾಗೇಶ್ ಮತ್ತಿತರರು ಉಪಸ್ಥಿತರಿದ್ದರು.

ಹೇಮಾವತಿ ಲಿಂಕ್ ಕೆನಾಲ್ ವಿಚಾರ
ರೈತರ ಸಂಘರ್ಷಕ್ಕೆ ಸಿಎಂ, ಡಿಸಿಎಂ ಕಾರಣ

- ಜೆಡಿಎಸ್ ಮುಖಂಡ ನಿಖಿಲ್ ಕುಮಾರಸ್ವಾಮಿ ಆರೋಪ
- 'ಜನರೊಂದಿಗೆ ಜನತಾದಳ' ಪ್ರವಾಸ ಆರಂಭ

ಬೆಂಗಳೂರು, ಜೂ.16(ಕೆಎಂಶಿ)– ಹೇಮಾವತಿ ಲಿಂಕ್ ಕೆನಾಲ್ ಕುರಿತು ರೈತರ ನಡುವಿನ ಸಂಘರ್ಷಕ್ಕೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರಣ ಎಂದು ಯುವ ಜನತಾದಳ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದ್ದಾರೆ.

ಜಲ ಸಂಪನ್ಮೂಲ ಖಾತೆಯನ್ನೂ ನಿರ್ವ ಹಿಸುತ್ತಿರುವ ಶಿವಕುಮಾರ್ ಅವರಿಂದ ಇಷ್ಟೆಲ್ಲಾ ರಾದ್ಧಾಂತವಾಗಿದೆ, ರೈತರ ನಡುವಿನ ಸಂಘರ್ಷ ಕುರಿತು ಅವರು ಒಂದು ಮಾತನ್ನೂ ಆಡುತ್ತಿಲ್ಲ ಎಂದರು.

'ಜನರೊಂದಿಗೆ ಜನತಾದಳ' ಕಾರ್ಯ ಕ್ರಮದ ಮೊದಲ ದಿನದ ಪ್ರವಾಸಕ್ಕೂ ಮುನ್ನ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು, ಸ್ಥಳೀಯ ರೈತ ಮುಖಂ ಡರು ಹಾಗೂ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ಪಡೆದಿಲ್ಲ, ಎಲ್ಲರೊಂದಿಗೆ ರಾಜ್ಯ ಸರ್ಕಾರ ಚರ್ಚೆ ಮಾಡಿಲ್ಲ ಎಂದರು.


ನಿಖಿಲ್

ರೈತರ ನಡುವಿನ ಸಂಘರ್ಷ ಘಟನೆ ಗಳು ಎಚ್.ಡಿ ಕುಮಾರಸ್ವಾಮಿ ಕಾಲದಲ್ಲಿ ನಡೆದಿದ್ದರೆ, ರೈತರು ಹಾಗೂ ಜನಪ್ರತಿನಿಧಿಗಳನ್ನು ಕರೆದು ಚರ್ಚಿಸಿ ಸಮಸ್ಯೆ ಪರಿಹರಿಸುತ್ತಿದ್ದರು. ರಾಜ್ಯ ಸರ್ಕಾರ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು.

ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಮನಸ್ಸು ಮಾಡಬೇಕು. ಇದುವರೆಗೆ ಆ ಕಾರ್ಯ ಆಗಿಲ್ಲ. ಚುನಾ ವಣೆ ನಡೆಯದಂತೆ ತಡೆ ಹಿಡಿದಿದ್ದಾರೆ. ಆದಷ್ಟು ಶೀಘ್ರದಲ್ಲಿ ಚುನಾವಣೆಗಳು ನಡೆಯಬೇಕು ಎಂದರು.

ನಾನು ಪಕ್ಷದ ನಿಷ್ಠಾವಂತ ಕಾರ್ಯ ಕರ್ತ, ಪಕ್ಷವನ್ನು ಕಾರ್ಯಕರ್ತರ ಜೊತೆಗೂಡಿ ಬೇರು ಮಟ್ಟದಿಂದ ಬೆಳೆ ಸಲು ಪ್ರವಾಸ ಮಾಡುತ್ತಿದ್ದು, ರಾಜ್ಯಾಧ್ಯಕ್ಷ ಸ್ಥಾನ ಈಗ ಅಪ್ರಸ್ತುತ. ಜೆಡಿಎಸ್ ಮುಳುಗೋ ದೋಣಿ ಎನ್ನುವ ಕಾಂಗ್ರೆಸ್, ಯಾವುದು ಮುಳುಗಿ ಹೋಗಿರುವ ದೋಣಿ, ಸದಾಕಾಲ ಹೆಚ್.ಡಿ.ದೇವೇಗೌಡ ಹಾಗೂ ಕುಮಾರ ಸ್ವಾಮಿ ಅವರುಗಳ ನಿರಂತರ ಹೋರಾಟದ ಪ್ರತಿಫಲವಾಗಿ ರಾಜ್ಯದ ಜನ ಆಶೀರ್ವಾದ ಮಾಡಿದ್ದಾರೆ.

ಅನೇಕ ಚುನಾವಣೆಗಳಲ್ಲಿ ಇದು ಸಾಬೀತಾಗಿದೆ. ನಮ್ಮದು ಪ್ರಾದೇಶಿಕ ಪಕ್ಷ ವಾದರೂ ಶೇ.20ರಷ್ಟು ಮತ ಪ್ರಮಾಣ ಪಡೆದಿದೆ. ಕಳೆದ ಚುನಾವಣೆಯಲ್ಲಿ ಶೇ.34 ರಷ್ಟು ಪಕ್ಷದ ಪರವಾಗಿ ಮತದಾನ ವಾಗಿದೆ. ಚುನಾವಣೆಯಲ್ಲಿ ಗೆಲುವು–ಸೋಲು ಸಾಮಾನ್ಯ, ಸಮಚಿತ್ತವಾಗಿ ತೆಗೆದುಕೊಳ್ಳುವ ಮನಃಸ್ಥಿತಿ ನಮ್ಮದು. ಕಾರ್ಯಕರ್ತರಿದ್ದಾರೆ, ಅಭ್ಯರ್ಥಿಗಳಲ್ಲಿ ಹುಮ್ಮಸ್ಸಿದೆ, ಸಂಘಟಿತರಾಗಿ ಶ್ರಮಿಸಿ ಜನರ ಆಶೀರ್ವಾದ ಪಡೆದುಕೊಳ್ಳುತ್ತೇವೆ.

ರಾಜ್ಯದ ಸಮಗ್ರ ಅಭಿವೃದ್ಧಿಗಾಗಿಯೇ ಬಿಜೆಪಿ–ಜೆಡಿಎಸ್ ಮೈತ್ರಿ ಆಗಿದೆ. ಇದ ರಿಂದ ಎರಡೂ ಪಕ್ಷಗಳಿಗೆ ಅನುಕೂಲ ವಾಗಿದೆ. ಕಳೆದ ಲೋಕಸಭಾ ಚುನಾವಣೆ ಯಲ್ಲಿ ಇದು ಸಾಬೀತಾಗಿದೆ ಎಂದರು.

ಮದ್ರಾಸ್ ಹೈಕೋರ್ಟ್ ಆದೇಶದಂತೆ ರಾಜ್ಯದಲ್ಲೂ ನೋ ಕಾಸ್ಟ್... ನೋ ರಿಲೀಜಿಯನ್ ಸರ್ಟಿಫಿಕೇಟ್ ನೀಡಲು ಒತ್ತಾಯ

- ಪ್ರಗತಿಪರ ಚಿಂತಕ ಬಂಜಗೆರೆ ಜಯಪ್ರಕಾಶ್ ಆಗ್ರಹ
- ಜಾತ್ಯಾತೀತವಾದಿಗಳಿಗೆ ಇದೊಂದು ವರದಾನ



ಸುದ್ದಿಗೋಷ್ಠಿಯಲ್ಲಿ ಪ್ರಗತಿಪರ ಚಿಂತಕ ಬಂಜಗೆರೆ ಜಯಪ್ರಕಾಶ್ ಮಾತನಾಡಿದರು.

ಮೈಸೂರು,ಜೂ.16(ಎಂಟಿವೈ)– ಮದ್ರಾಸ್ ಹೈಕೋರ್ಟ್ ನೀಡಿರುವ ಆದೇಶ ದಂತೆ ನೋ ಕಾಸ್ಟ್, ನೋ ರಿಲೀಜಿ ಯನ್ ಸರ್ಟಿಫಿಕೇಟ್ ಅನ್ನು ರಾಜ್ಯ ದಲ್ಲೂ ನೀಡಲು ಕ್ರಮಕೈಗೊಳ್ಳಬೇಕು ಎಂದು ಪ್ರಗತಿಪರ ಚಿಂತಕ ಬಂಜಗೆರೆ ಜಯಪ್ರಕಾಶ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನ ದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮಗೆ ಯಾವುದೇ ಜಾತಿ ಮತ್ತು ಧರ್ಮದ ಪ್ರಮಾಣ ಪತ್ರ ಬೇಡ. ನಾನೊಬ್ಬ ಭಾರತೀಯ ಎಂಬ ಪ್ರಮಾಣ ಪತ್ರ ಮಾತ್ರ ಸಾಕು ಎನ್ನುವ ಜಾತ್ಯಾತೀತವಾದಿಗಳಿಗೆ ಮದ್ರಾಸ್ ಕೋರ್ಟ್ ನೀಡಿರುವ ತೀರ್ಪು ವರದಾನವಾಗಿದೆ. ಈ ಹಿಂದೆ ಜಾತಿ, ಧರ್ಮದ ಹೆಸರನ್ನು ನಮೂದಿಸಿಯೇ ಪ್ರಮಾಣ ಪತ್ರ ನೀಡಲಾಗುತ್ತಿತ್ತು. ಆದರೆ ಈಗ ಕೋರ್ಟ್ ತೀರ್ಪಿನ ಅನ್ವಯ ನೋ ಕಾಸ್ಟ್, ನೋ ರಿಲೀಜಿಯನ್ ಪ್ರಮಾಣ ಪತ್ರ ನೀಡಬಹುದಾಗಿದ್ದು, ಇದನ್ನು ಕರ್ನಾಟಕದಲ್ಲಿಯೂ ಅನುಷ್ಠಾನ ಗೊಳಿಸಲು ಕಂದಾಯ ಇಲಾಖೆಗೆ ಸೂಚನೆ ನೀಡಬೇಕು. ಇದರಿಂದ ಅಂತರಧರ್ಮೀಯ ಮತ್ತು ಅಂತರ್ಜಾತಿ ವಿವಾಹವಾದವರಿಗೆ ಅನುಕೂಲವಾಗಲಿದೆ ಎಂದರು.

ಕೋಮು ಸೌಹಾರ್ದತೆಗೆ ಧಕ್ಕೆ ಮಾಡು ವವರ ವಿರುದ್ಧ ಕ್ರಮ: ರಾಜ್ಯ ಸರ್ಕಾರ ಹಿಂದುತ್ವದ ಬಗ್ಗೆ ಮೃದು ಧೋರಣೆ ಹೊಂದಿಲ್ಲ. ಕೋಮು ಸೌಹಾರ್ದತೆಗೆ ಧಕ್ಕೆ ಉಂಟು ಮಾಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಕೊಳ್ಳುತ್ತಿದೆ. ಸರ್ಕಾರ ದೊಂದಿಗೆ ನಾಗರಿಕರು ಸಹಕಾರ ನೀಡಿ ದಾಗ ಮಾತ್ರ ಕೋಮು ಗಲಭೆ ನಿಯಂ ತ್ರಿಸಲು ಸಾಧ್ಯ. ಆತ್ಮಾನಂದ ಸರಸ್ವತಿ ಸ್ವಾಮೀಜಿ ಮುಸ್ಲಿಂ, ಕ್ರಿಶ್ಚಿಯನ್ ಗುಂಪು ಗಳನ್ನು ದಯೆಯಿಲ್ಲದ ಕೊಚ್ಚಿ ಹಾಕಿ ಎಂದು ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿ ಸಿದ ಅವರು, ದ್ವೇಷ ಭಾಷಣ ಯಾರೇ ಮಾಡಿದರೂ ಅವರ ವಿರುದ್ಧ ಸುಮೊಟೊ ಪ್ರಕರಣ ದಾಖಲಿಸಬೇಕು. ಗೃಹ ಇಲಾಖೆ ಯಾರಾದರೂ ದೂರು ಕೊಡುವವರೆಗೆ ಕಾಯಬಾರದು. ದ್ವೇಷ ಭಾಷಣವನ್ನು ಉಪೇಕ್ಷೆ ಮಾಡುವ ಘಟನೆ ಅಲ್ಲ. ಕಾನೂನು ಕ್ರಮದ ಎಚ್ಚರಿಕೆ ನೀಡಬೇಕು ಎಂದು ಆಗ್ರಹಿಸಿದರು.

ಕ್ಷಮೆ ಕೇಳಬೇಕಾಗಿತ್ತು: ಕನ್ನಡ ಭಾಷೆ ಕುರಿತು ನಟ ಕಮಲ್‌ಹಾಸನ್ ನೀಡಿ ರುವ ಹೇಳಿಕೆ ಅವಾಸ್ತವಿಕವಾದದ್ದಾಗಿದೆ. ರಾಜಕೀಯ ಪ್ರೇರಿತವಾಗಿ ಹೇಳಿಕೆ ನೀಡಿ ದ್ದಾರೆ. ಭಾಷಾ ಶಾಸ್ತ್ರಜ್ಞರಲ್ಲದ ಅವರು ತನ್ನದಲ್ಲದ ಭಾಷೆ ಬಗ್ಗೆ ಮಾತನಾಡ ಬಾರದು. ಕರ್ನಾಟಕದಲ್ಲಿರುವ ತಮಿಳು ಜನರನ್ನು ಮೆಚ್ಚಿಸಲು, ರಾಜಕೀಯ ಸ್ಥಾನಮಾನ ಪಡೆಯಲು ಉದ್ಧಟತನದ ಹೇಳಿಕೆ ನೀಡಿದ್ದಾರೆ. ದ್ರಾವಿಡ ಭಾಷೆಯ ತಾಯಿ ತಮಿಳು ಎನ್ನುವುದನ್ನು ಒಪ್ಪ ಲಾಗದು. ಕ್ಷಮೆ ಕೇಳಿದರೆ ಕರ್ನಾಟಕದಲ್ಲಿ ಚಲನಚಿತ್ರ ಬಿಡುಗಡೆಗೆ ಅವಕಾಶ ನೀಡು ವುದಾಗಿ ನ್ಯಾಯಾಲಯ ಹೇಳಿದೆ. ಅದಕ್ಕೆ ಕಮಲ್‌ಹಾಸನ್ ಒಪ್ಪಿಲ್ಲ. ಬೇಷರತ್ ಕ್ಷಮೆ ಯಾಚಿಸುವಂತೆ ನ್ಯಾಯಾಲಯ ಆದೇಶಿಸಿದ್ದರೆ, ಕಮಲ್‌ಹಾಸನ್‌ಗೆ ಬೇರೆ ದಾರಿ ಇರುತ್ತಿರಲಿಲ್ಲ. ಏಕವ್ಯಕ್ತಿಯ ವಿರುದ್ಧ ಸರ್ಕಾರ ನಿರ್ಣಯ ಕೈಗೊಳ್ಳಲು ಸಾಧ್ಯ ವಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿ ದರು. ಸುದ್ದಿಗೋಷ್ಠಿಯಲ್ಲಿ ಡಾ.ಸ್ವಾಮಿ ಆನಂದ್, ಎಂ.ಎಸ್.ಚಂದ್ರ ಇದ್ದರು.

ಜೂ.22ರಂದು ಗಾಯನ ಸಭಾದಿಂದ ಸಂಗೀತ ಸಂಜೆ

ಮೈಸೂರು, ಜೂ. 16– ಮೈಸೂರಿನ ಗಾಯನ ಸಭಾ ವತಿಯಿಂದ ಗಾನ ಭಾರತಿಯ ವೀಣೆ ಶೇಷಣ್ಣ ಭವನದಲ್ಲಿ ಜೂ.22ರಂದು ಸಂಜೆ 5.30ಕ್ಕೆ ವಿ.ಶ್ರೀಮತಿ ದೇವಿಯವರ ಹಿಂದೂಸ್ತಾನಿ ಸಂಗೀತ ಗಾಯನ ಮತ್ತು ಸುಮಿತ್ ನಾಯ್ಕ್ ಅವರ ತಬಲಾ ಸೋಲೋ ಕಾರ್ಯಕ್ರಮ ಆಯೋಜಿಸಲಾಗಿದೆ. ತೇಜಸ್ ಕಾಟೋಟಿ ಹಾರ್ಮೋನಿಯಂ ಸಹಕಾರ ನೀಡಲಿದ್ದಾರೆ.

ವಿದುಷಿ ಶ್ರೀಮತಿ ದೇವಿ, ಮೈಸೂರು ವಾಸಿಯಾಗಿದ್ದು ಕಳೆದ 15 ವರ್ಷ ಗಳಿಂದ ಕರ್ನಾಟಕದಾದ್ಯಂತ ಮತ್ತು ಮಹಾರಾಷ್ಟ್ರದಲ್ಲಿ ಅನೇಕ ಕಾರ್ಯಕ್ರಮ ಗಳನ್ನು ನೀಡಿದ್ದಾರೆ. ಸಂಗೀತ ಮತ್ತು ಇತರ ಕಲೆಗಳ ಬಗ್ಗೆ ಅನೇಕ ಲೇಖನ ಗಳನ್ನು ಸಹ ಬರೆದಿದ್ದಾರೆ.

ಹರಿಕಥಾ ವಿದ್ವಾಂಸರಾದ ತಂದೆ ಪೊಳಲಿ ಜಗದೀಶ ದಾಸರು ಮತ್ತು ಗಾಯಕಿ ಯಾದ ತಾಯಿ ಗಿರಿಜಾ ಬಾಯಿ, ಶ್ರೀಮತಿ ಯವರಿಗೆ ಸಂಗೀತವನ್ನು ಕಲಿಯಲು ಪ್ರೇರಣೆಯಾಗಿದ್ದಾರೆ. ಆರಂಭದ ಕಲಿಕೆ ಯನ್ನು ಮೂಡಬಿದ್ರಿ ಮತ್ತು ಕಾರ್ಕಳಗಳಲ್ಲಿ ಮಾಡಿ ನಂತರ ಧಾರವಾಡದಲ್ಲಿ ಗ್ವಾಲಿಯರ್ ಘರಾಣೆಯ ಪ್ರಸಿದ್ಧ ಗುರುಗಳಾದ ಪಂ.ಚಂದ್ರಶೇಖರ ಪುರಣಿಕಮಠ ಅವರ ಬಳಿ ಹೆಚ್ಚಿನ ಅಭ್ಯಾಸ ಮಾಡಿದರು. ಮುಂದೆ ಪಂ.ಕುಮಾರ್ ಗಂಧರ್ವರ ಶಿಷ್ಯರಾದ ಪಂ.ನಾರಾಯಣ ಪಂಡಿತರ ರಸ–ಭಾವ ವಿಚಾರಗಳಿಂದ ಪ್ರಭಾವಿತರಾಗಿ, ಪಂಡಿತರ ಶಿಷ್ಯತ್ವ ಪಡೆದರು. ನಂತರದಲ್ಲಿ ಪಂಡಿತರ ಶಿಷ್ಯರಾದ ಶ್ರೀ ರವಿಕಿರಣ ಮಣಿಪಾಲ ಅವರ ಬಳಿಯೂ ಮಾರ್ಗದರ್ಶನ ಪಡೆದರು. ಉನ್ನತ ಕಲಿಕೆಯನ್ನು ವಿ.ಪದ್ಮಾ ತಲವಾಲಕರ್ ಮತ್ತು ಪಂ.ವ್ಯಾಸಮೂರ್ತಿ ಕಟ್ಟಿ ಅವರ ಬಳಿ ಮಾಡಿದ ಶ್ರೀಮತಿ, ಪ್ರಸ್ತುತ ಮುಂಬೈನ ವಿ.ಅಪೂರ್ವ ಗೋಖಲೆ ಅವರ ಬಳಿ ಕಲಿಕೆಯಲ್ಲಿ ನಿರತ ರಾಗಿದ್ದಾರೆ. ಶ್ರೀಮತಿ ದೇವಿಯವರು ಆಕಾಶವಾಣಿಯ ಅಖಿಲ ಭಾರತ ಸಂಗೀತ ಸ್ಪರ್ಧೆಯಲ್ಲಿ ವಿಜೇತರಾಗಿದ್ದಾರೆ.


ಶ್ರೀಮತಿ ದೇವಿ

ಪ್ರಸ್ತುತ ಶಾಸ್ತ್ರೀಯ ಸಂಗೀತ ಮತ್ತು ಸುಗಮ ಸಂಗೀತವೆರಡರಲ್ಲೂ ಬಿ ಹೈ ಗ್ರೇಡ್ ಪಡೆದವರಾಗಿದ್ದಾರೆ. 2010ರಲ್ಲಿ ಕೇಂದ್ರ ಸರಕಾರದ ಸಂಸ್ಕೃತಿ ಸಚಿವಾ ಲಯದ ವಿದ್ಯಾರ್ಥಿವೇತನ ಪಡೆದಿದ್ದಾರೆ. ಗಂಧರ್ವ ಮಹಾ ಮಂಡಲ, ಮೀರಜ್ ನಡೆಸುವ ಸಂಗೀತ ಅಲಂಕಾರ ಪರೀಕ್ಷೆ ಯಲ್ಲಿ ಮೊದಲ ರ್‍ಯಾಂಕ್‌ನಲ್ಲಿ ಉತ್ತೀರ್ಣ ರಾಗಿದ್ದಾರೆ. ಮೈಸೂರಿನ ಕೇರ್ಗಳ್ಳಿಯಲ್ಲಿ ನಿನಾದ ಗೃಹ ಸಂಗೀತ ವೇದಿಕೆಯನ್ನು ಆರಂಭಿಸಿ ಅನೇಕ ಉತ್ತಮ ಸಂಗೀತ ಕಾರ್ಯ ಕ್ರಮಗಳನ್ನು ಆಯೋಜಿಸುತ್ತಿದ್ದಾರೆ. ಇಂಗ್ಲಿಷ್ ಎಂಎಯಲ್ಲಿ 3ನೇ ರ್‍ಯಾಂಕ್ ಪಡೆದ ಇವರು ಸಂಗೀತ ರಸಾನುಭವ ಕುರಿತು ಕಾರ್ಯಕ್ರಮಗಳನ್ನು ನಡೆಸಿಕೊಟ್ಟಿದ್ದಾರೆ.

ಮಕ್ಕಳಿಗೆ ನೋಟ್ ಬುಕ್ಸ್ ವಿತರಣಾ ಸಮಾರಂಭ
ಸರ್ಕಾರಿ ಶಾಲೆಯಲ್ಲಿ ಉತ್ತಮ ಶಿಕ್ಷಣ


ಬಾಲಬೋಧಿನಿ ಸರ್ಕಾರಿ ಶಾಲೆ ಮಕ್ಕಳಿಗೆ ನೋಟ್ ಬುಕ್ಸ್ ವಿತರಿಸಲಾಯಿತು.

ಮೈಸೂರು, ಜೂ. 16– ಸರ್ಕಾರಿ ಶಾಲೆಯಲ್ಲಿ ಗುಣಾತ್ಮಕವಾದ ಶಿಕ್ಷಕರಿದ್ದು, ಇಲ್ಲಿ ಉತ್ತಮ ಶಿಕ್ಷಣ ಸಿಗುತ್ತಿದೆ. ವಿದ್ಯಾರ್ಥಿಗಳು ಸಹ ಉತ್ತಮ ಅಧ್ಯಯನ ಶೀಲರಾಗಬೇಕು ಎಂದು ಚಾಮುಂಡೇ ಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಕಾರು ಚಾಲಕರ ಮಾಲೀಕರ ಒಕ್ಕೂಟದ ಅಧ್ಯಕ್ಷ ರವಿ ಹೇಳಿದರು.

ಮೈಸೂರಿನ ಚಾಮುಂಡಿಪುರಂ ನಲ್ಲಿರುವ ಬಾಲಬೋಧಿನಿ ಸರ್ಕಾರಿ ಶಾಲೆ ಮಕ್ಕಳಿಗೆ ನೋಟ್ ಬುಕ್ಸ್ ವಿತರಿಸಿ ಮಾತನಾಡಿದ ಅವರು, ದಾನಿಗಳು ಹಾಗೂ ಸ್ನೇಹಿತರ ಸಹಕಾರದಿಂದ 20 ವರ್ಷದಿಂದ ಮೈಸೂರು ನಗರದ 11 ಹಿಂದುಳಿದ ಸರ್ಕಾರಿ ಹಿರಿಯ ಪ್ರಾಥ ಮಿಕ ಶಾಲೆಯ ಮಕ್ಕಳಿಗೆ ಪುಸ್ತಕ, ಪೆನ್ನು, ಬ್ಯಾಗು ಹಾಗೂ ಅವರಿಗೆ ಅವಶ್ಯಕತೆ ಇರುವ ವಸ್ತುಗಳನ್ನು ನೀಡುತ್ತಾ ಬಂದಿದ್ದು, ಈ ವರ್ಷವೂ ಆ ಕಾರ್ಯವನ್ನು ಮುಂದು ವರಿಸುತ್ತಿದ್ದೇವೆ. ಮಕ್ಕಳು ಶ್ರದ್ಧೆಯಿಂದ ಓದು ಬರಹದಲ್ಲಿ ತೊಡಗಬೇಕು. ಶಿಕ್ಷಣ ಮಾತ್ರ ಮನುಷ್ಯನು ಎತ್ತರಕ್ಕೆ ಕೊಂಡೊ ಯ್ಯುವ ಸಾಧನವಾಗಿದೆ. ದಾನಿಗಳು ನೀಡಿದ ಸಾಮಗ್ರಿಗಳು ಉಪಯೋಗವಾಗಲಿ ಎಂದರು.

ಕೆಆರ್ ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ ಮಾತನಾಡಿ, ಸಮಾಜ ಸೇವೆ ಯಲ್ಲಿ ತೊಡಗಿದ ರವಿ ಅವರ ಕಾರ್ಯ ನಿಜಕ್ಕೂ ಮೆಚ್ಚುವಂಥದ್ದು, ಇವರ ಸ್ನೇಹ ಒಕ್ಕೂಟ ಬಡ ಮಕ್ಕಳ ಓದಿಗೆ ಬಹಳಷ್ಟು ಪ್ರೋತ್ಸಾಹ ನೀಡುತ್ತಾ ಬಂದಿದೆ ಎಂದರು.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಕಾರು ಚಾಲಕರ ಮಾಲೀ ಕರ ಒಕ್ಕೂಟದ ಗೌರವಾಧ್ಯಕ್ಷ ಮಧು, ಹೇಮಂತ್, ರವಿಚಂದ್ರ, ಕನಕಮೂರ್ತಿ, ಶಾಲೆ ಮುಖ್ಯ ಶಿಕ್ಷಕಿ ಜಯಂತಿ, ಸಹ ಶಿಕ್ಷಕಿ ಲತಾ ಕುಮಾರಿ, ಮೊಸಿನ್ ತಾಜ್, ಲೀಲಾ ವತಿ, ಒಕ್ಕೂಟದ ಸಂಚಾಲಕರಿದ್ದರು.

ಹೈ ಟೆನ್ಷನ್ ವಿದ್ಯುತ್ ಲೈನ್‌ಗೆ ವಿರೋಧ


ಬಸ್ತಿಪುರ ಮಾರ್ಗವಾಗಿ ಕಡಕೊಳದವರೆಗೆ ಹೈ ಟೆನ್ಷನ್ ವಿದ್ಯುತ್ ಮಾರ್ಗಕ್ಕೆ ಕಂಬ ನೆಡುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರು,ಜೂ.16(ಎಂಟಿವೈ)– ಬಸ್ತಿ ಪುರ ಮಾರ್ಗವಾಗಿ ಕಡಕೊಳದವರೆಗೆ ಹೈ ಟೆನ್ಷನ್ ವಿದ್ಯುತ್ ಮಾರ್ಗಕ್ಕೆ ಕಂಬ ನೆಡುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಹೊಸ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿ ಭಟನೆ ನಡೆಸಿದ ರೈತರು, ಬಸ್ತಿಪುರದಿಂದ ಕಡಕೊಳ ಮಾರ್ಗವಾಗಿ ಸುಮಾರು 500 ರೈತ ಕುಟುಂಬಗಳಿಗೆ ಸೇರಿದ ಭೂಮಿಗೆ, ಬೆಳೆಗಳಿಗೆ, ಅವರ ಆರೋಗ್ಯದ ಮೇಲೆ ಮತ್ತು ಭವಿಷ್ಯದಲ್ಲಿ ಭೂಮಿಯ ಮಾರು ಕಟ್ಟೆ ಬೆಲೆಗೆ ಮಾರಕವಾಗುವ ಹೈ ಟೆನ್ಷನ್ ವಿದ್ಯುತ್ ಕಂಬಗಳನ್ನು ನೆಡಲು ಹೊರಟಿ ರುವ ಕೆಪಿಟಿಸಿಎಲ್ ಹಾಗೂ ಜಿಲ್ಲಾಡಳಿ ತದ ನಡೆ ಖಂಡನೀಯ ಎಂದು ಪ್ರತಿ ಭಟನಾಕಾರರು ಕಿಡಿಕಾರಿದರು.

ಕೆಪಿಟಿಸಿಎಲ್, ಸಂಬಂಧಪಟ್ಟ ಇಲಾಖೆ ಗಳು ರೈತರ ಸಮಸ್ಯೆ ಬಗೆಹರಿಸಿ ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗಬೇಕು. ವಿದ್ಯುತ್ ಕಂಬ ಹಾಕಲು ರೈತರಿಗೆ ತೊಂದರೆ ಕೊಟ್ಟು, ಅವರ ಮೇಲೆ ಇಲ್ಲ ಸಲ್ಲದ ಆರೋಪ ಮಾಡಿದರೆ ಅದಕ್ಕೆ ಪ್ರತ್ಯು ತ್ತರವಾಗಿ ರೈತರು ತಮ್ಮ ಭೂಮಿಯನ್ನು ಕಾಪಾಡಿಕೊಳ್ಳಲು ಹೋರಾಟದ ಮಾರ್ಗ ಆಯ್ಕೆ ಮಾಡಿಕೊಳ್ಳಬೇಕಾಗುತ್ತದೆ. ಸರ್ಕಾ ರವೇ ನೇರವಾಗಿ ಇದಕ್ಕೆ ರೈತರನ್ನು ಪ್ರಚೋ ದಿಸಿದಂತಾಗುತ್ತದೆ. ಹೀಗಾಗಿ ಈ ವಿಚಾರ ವನ್ನು ಕೈ ಬಿಟ್ಟು ರೈತರಿಗೆ ತೊಂದರೆ ಕೊಡದೆ ಇರುವಂತೆ ಕೆಪಿಟಿಸಿಎಲ್‌ಗೆ ಎಚ್ಚರಿಕೆ ನೀಡುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಾಮೂಹಿಕ ನಾಯ ಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಅಧ್ಯಕ್ಷ ಮಂಡಳಿ ಸದಸ್ಯ ಹೊನ್ನೂರು ಪ್ರಕಾಶ್, ರಾಜ್ಯ ಕಾರ್ಯದರ್ಶಿ ಮಂಜು ಕಿರಣ್, ರೈತರಾದ ಕಡಕೊಳ ನಾಗರಾಜ್, ಸಿಂಧುವಳ್ಳಿ ಜಬ್ಬಾರ್, ಗೋಪಾಲಪುರ ಬೈರೇಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.

ಮೈಸೂರು ಮಿತ್ರ

ಸಮರ್ಪಕವಾಗಿ ಆರೋಗ್ಯ ಧಾಮ ನಿರ್ವಹಿಸಿ

ಜಿಲ್ಲಾಧಿಕಾರಿ ಡಾ.ಕುಮಾರ್ ಸೂಚನೆ

ಮಂಡ್ಯ, ಜೂ.16– ರೋಗಿಗಳ ಆರೈಕೆಗಾಗಿ ಬರುವ ಆರೈಕೆದಾರರು ತಂಗಲು ಸಿಎಸ್‌ಆರ್ ಅನುದಾನದಲ್ಲಿ ಮಿಮ್ಸ್ ಆವರಣದಲ್ಲಿ ನಿರ್ಮಿಸಿರುವ ಆರೋಗ್ಯ ಧಾಮವನ್ನು ಸಮರ್ಪಕವಾಗಿ ನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದರು.

ಸೋಮವಾರ ನಗರದ ಮಿಮ್ಸ್ ವೈದ್ಯಕೀಯ ಕಾಲೇಜಿನ ನಿರ್ದೇಶಕರ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರೋಗ್ಯ ಧಾಮ ಹೊಣೆಗಾರಿಕೆ ನಿಭಾಯಿಸಲು ನೋಡೆಲ್ ಅಧಿಕಾರಿಗಳಾಗಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಎಂ.ಪಿ.ಕೃಷ್ಣಕುಮಾರ್, ಉಸ್ತುವಾರಿ ಹಾಗೂ ಮೇಲ್ವಿಚಾರಣೆಗೆ ಮಿಮ್ಸ್ ಆಸ್ಪತ್ರೆ ಸ್ಥಾನೀಯ ವೈದ್ಯಾಧಿಕಾರಿ ಡಾ.ದರ್ಶನ್ ಕುಮಾರ್ ಅವರನ್ನು ನೇಮಿಸಲಾಗಿದೆ ಎಂದರು.

ಆರೋಗ್ಯ ಧಾಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲು ದಾಖಲಾತಿ ವಿಭಾಗಗಳಲ್ಲಿ ಫಲಕಗಳನ್ನು ಅಳವಡಿಸಿ. ಆಸ್ಪತ್ರೆಗೆ ದಾಖಲಾದ ರೋಗಿಗಳ ಆರೈಕೆಗೆ ಬರುವ ಆರೈಕೆದಾರರು ಆರೋಗ್ಯ ಧಾಮದಲ್ಲಿ ತಂಗಲು ಇಚ್ಛೆಪಟ್ಟಲ್ಲಿ ದಿನಕ್ಕೆ (24 ಗಂಟೆಗಳು) 30 ರೂ. ಪಾವತಿಸಿಕೊಂಡು ರಶೀದಿ ನೀಡಬೇಕು ಎಂದರು.

ಅಲ್ಲದೇ ವಸೂಲಿ ಮಾಡುವ ಶುಲ್ಕವನ್ನು ಬಳಕೆದಾರರ ನಿಧಿಗೆ ಜಮೆ ಮಾಡಬೇಕು. ಈ ಮೊತ್ತದಿಂದಲೇ ಆರೋಗ್ಯಧಾಮದ ನಿರ್ವಹಣೆ, ಸಿಬ್ಬಂದಿ ವೇತನ ಪಾವತಿಸಬೇಕು. ರೋಗಿ ಆಸ್ಪತ್ರೆಯಲ್ಲಿ ದಾಖಲಾದ ನಂತರ ನೀಡಲಾಗುವ ದಾಖಲಾತಿ ಸಂಖ್ಯೆ ಆಧಾರದ ಮೇಲೆ ಅವರ ಆರೈಕೆದಾರರಿಗೆ ಕಂಪ್ಯೂಟರ್ ಆಧಾರಿತ ಪಾವತಿ ಚೀಟಿ ನೀಡಬೇಕು ಎಂದು ತಾಕೀತು ಮಾಡಿದರು.



ಮಿಮ್ಸ್ ಆವರಣವನ್ನು ಜಿಲ್ಲಾಧಿಕಾರಿ ಡಾ.ಕುಮಾರ್ ಅಧಿಕಾರಿಗಳೊಂದಿಗೆ ಪರಿಶೀಲಿಸಿದರು.

ಆರೈಕೆದಾರರು ರೋಗಿ ದಾಖಲಾತಿ ವಿವರ, ಆರೋಗ್ಯ ಧಾಮಕ್ಕೆ ದಾಖಲಾದ ಆರೈಕೆದಾರರ ದಾಖಲಾತಿ ಚೀಟಿ, ಆರೈಕೆದಾರರ ಗುರುತಿನ ಚೀಟಿ ಜೆರಾಕ್ಸ್ ಪ್ರತಿ ನೀಡಿ ಆರೋಗ್ಯ ಧಾಮದಲ್ಲಿ ದಾಖಲಾಗಬೇಕು. ಆರೋಗ್ಯಧಾಮದಲ್ಲಿ ಸ್ವಚ್ಛತೆ ಕಾಪಾಡಬೇಕು, ಅಧಿಕಾರಿಗಳು ಆರೈಕೆದಾರರು ಆರೋಗ್ಯಧಾಮದಲ್ಲಿ ಅನುಸರಿಸಬೇಕಾದ ನಿಯಮಗಳ ಫಲಕ ಅಳವಡಿಸಿ, ನಿಯಮ ಉಲ್ಲಂಘಿಸಿದವರ ವಿರುದ್ಧ ಸೂಕ್ತಕ್ರಮ ಕೈಗೊಳ್ಳಿ ಎಂದರು.

ಆರೋಗ್ಯ ಧಾಮದ ವಿವರ ಮತ್ತು ದಾಖಲಾದವರ ವಿವರಗಳನ್ನು ಪ್ರತ್ಯೇಕವಾಗಿ ನಿರ್ವಹಿಸಬೇಕು. ಆರೋಗ್ಯ ಧಾಮದಲ್ಲಿ ಸಿಸಿಟಿವಿ ಅಳವಡಿಸಲಾಗಿದೆ. ನಿತ್ಯವೂ ಆರೋಗ್ಯ ಧಾಮವನ್ನು ಸ್ವಚ್ಛಗೊಳಿಸಿ ನೈರ್ಮಲ್ಯ ಕಾಪಾಡುವುದು ಅಧಿಕಾರಿಗಳ ಜವಾಬ್ದಾರಿ. ಸಾಧ್ಯವಾದಷ್ಟು ಶೀಘ್ರ ಆರೋಗ್ಯ ಧಾಮದ ದಾಖಲಾತಿ ಪ್ರಾರಂಭಿಸಿ ಸಾರ್ವಜನಿಕರಿಗೆ ಅನುವು ಮಾಡಿ ಎಂದರು.

ಉಪಲೋಕಾಯುಕ್ತರು ಭೇಟಿ ನೀಡಿದ ಸಂದರ್ಭ ಕೆಲವು ನ್ಯೂನತೆ ತಿಳಿಸಿದ್ದು, ಅವುಗಳನ್ನು ಸರಿಪಡಿಸಿಕೊಂಡು ವರದಿ ನೀಡುವಂತೆ ಈಗಾಗಲೇ ತಿಳಿಸಲಾಗಿತ್ತು. ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರು ಹಾಗೂ ಸಿಬ್ಬಂದಿಗಳನ್ನು ಪರಿಶೀಲಿಸಲು ಆಗಿಂದಾಗ್ಗೆ ಭೇಟಿ ನೀಡಿ ಪರಿಶೀಲಿಸುವಂತೆ ಮಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ್ ಅವರಿಗೆ ತಿಳಿಸಿದರು.

> ಹೊರರೋಗಿ ವಿಭಾಗದಲ್ಲಿ ವಿಕಲಚೇತನರಿಗೆ, ಪುರುಷರಿಗೆ, ಮಹಿಳೆಯರಿಗೆ, ಹಿರಿಯ ನಾಗರಿಕರಿಗೆ ಪ್ರತ್ಯೇಕ ಸಾಲಿನ ವ್ಯವಸ್ಥೆ ಮಾಡಲಾಗಿದೆ. ಸ್ವಚ್ಛತಾ ಕೆಲಸಗಳನ್ನು ನಿಯಮಿತವಾಗಿ ಪರಿಶೀಲಿಸಲಾಗುತ್ತಿದೆ. ಶುದ್ಧ ಕುಡಿಯುವ ನೀರಿನ ಆರ್‌ಓ ಅಳವಡಿಕೆ ಕೆಲಸ ಪ್ರಗತಿಯಲ್ಲಿದೆ.
>
> – ಡಾ.ನರಸಿಂಹಸ್ವಾಮಿ, ಮಿಮ್ಸ್ ನಿರ್ದೇಶಕ.

ಸಭೆ ನಂತರ ಜಿಲ್ಲಾಧಿಕಾರಿಗಳು ಓಪಿಡಿ ಹಾಗೂ ಔಷಧಿ ವಿತರಣಾ ಘಟಕಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ವಾಹನ ನಿಲುಗಡೆ ಸ್ಥಳಕ್ಕೆ ಭೇಟಿ ನೀಡಿ ಶುಲ್ಕ ಪಡೆಯುತ್ತಿರುವ ಬಗ್ಗೆ ವಿಚಾರಿಸಿದರು. 8 ಗಂಟೆ ಅವಧಿಗೆ 7 ರೂ. ನಿಗದಿಯಾಗಿದ್ದು, ಈ ವೇಳೆ 10 ರೂ. ಚೀಟಿಗಳು ಲಭ್ಯವಿದ್ದು, ಕಂಪ್ಯೂಟರ್ ಆಧಾರಿತ ಬಿಲ್ ನೀಡಿ ಸರಿಯಾಗಿ ನಿರ್ವಹಿಸದಿದ್ದಲ್ಲಿ ಟೆಂಡರ್ ರದ್ದು ಪಡಿಸುವುದಾಗಿ ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಸೋಮಶೇಖರ್, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಜಯಪ್ರಕಾಶ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಚಿರತೆ ದಾಳಿಗೆ ಕರುಗಳು, ಮೇಕೆ ಬಲಿ



ಪಾಂಡವಪುರ, ಜೂ.16– ಚಿರತೆ ದಾಳಿಗೆ ಕರುಗಳು ಹಾಗೂ ಮೇಕೆ ಬಲಿಯಾಗಿರುವ ಘಟನೆ ತಾಲೂಕಿನ ಹಿರೇಮರಳಿ ಗ್ರಾಮದ ಹೊರವಲಯದಲ್ಲಿ ಭಾನುವಾರ ನಡೆದಿದೆ.

ಗ್ರಾಮದ ನಿವಾಸಿ ರಾಜೇಶ್ ಅವರಿಗೆ ಸೇರಿದ ಕರುಗಳು, ಮೇಕೆ ಬಲಿಯಾಗಿದ್ದು, ಸಾವಿರಾರು ರೂ. ನಷ್ಟ ಸಂಭವಿಸಿದೆ. ಈತ ತಮ್ಮ ಆಲೆಮನೆ ಬಳಿ ಕರು ಹಾಗೂ ಮೇಕೆ ಕಟ್ಟಿಹಾಕಿದ್ದರು. ಆದರೆ ಭಾನುವಾರ ರಾತ್ರಿ ಚಿರತೆ ದಾಳಿ ನಡೆಸಿ ಕರುಗಳನ್ನು ಕೊಂದು ಹಾಕಿ ಮೇಕೆ ಹೊತ್ತೊಯ್ದಿದೆ. ಸೋಮವಾರ ಬೆಳಗ್ಗೆ ಪ್ರಕರಣ ಬೆಳಕಿಗೆ ಬಂದಿದ್ದು, ಆಲೆಮನೆ ಬಳಿ ಕರುವಿನ ಕಳೇಬರ ಬಿದ್ದಿದ್ದರೆ, ಮತ್ತೊಂದು ಕರುವನ್ನು ಕಬ್ಬಿನ ಗದ್ದೆಯ ಬಳಿ ಬೀಸಾಡಿ ಹೋಗಿದೆ. ಅಲ್ಲದೇ ಮೇಕೆಯನ್ನು ಎಳೆದೊಯ್ದಿದೆ. ಇದರಿಂದ ಸಾವಿರಾರು ರೂ. ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿದರು. ಬಳಿಕ ಮೃತ ಕರುಗಳ ಮರಣೋತ್ತರ ಪರೀಕ್ಷೆ ನಡೆಸಿ ಸರ್ಕಾರದಿಂದ ಪರಿಹಾರ ಕೊಡಿಸುವ ಭರವಸೆ ನೀಡಿದರು.

ಚಿರತೆ ದಾಳಿಗೆ ತಮ್ಮ ಸಾಕುಪ್ರಾಣಿಗಳು ಬಲಿಯಾಗುತ್ತಿವೆ. ರೈತರು ಸಾಲ ಮಾಡಿ ಹಸು, ಕರು, ಮೇಕೆಗಳನ್ನು ಖರೀದಿಸಿ ಸಾಕಾಣೆ ಮಾಡುತ್ತಿದ್ದಾರೆ. ಆದರೆ ಅವುಗಳು ಕಾಡುಪ್ರಾಣಿಗಳ ಆಹಾರವಾಗುತ್ತಿವೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಚಿರತೆ ಸೆರೆಗೆ ಮುಂದಾಗಿ ಸೂಕ್ತ ಪರಿಹಾರ ದೊರಕಿಸಿಕೊಡುವಂತೆ ರಾಜೇಶ್ ಮನವಿ ಮಾಡಿದರು.

ಗಾಂಜಾ ಬೆಳೆದಿದ್ದ ಆರೋಪಿ ಬಂಧನ



ಅಬಕಾರಿ ಇಲಾಖೆ ಅಧಿಕಾರಿಗಳು ಮಾಲು ಸಮೇತ ಗಾಂಜಾ ಬೆಳೆದಿದ್ದ ಆರೋಪಿ ಬಂಧಿಸಿರುವುದು.

ಕೆ.ಆರ್.ಪೇಟೆ, ಜೂ.16– ಜಮೀನಿನಲ್ಲಿ ಗಾಂಜಾ ಬೆಳೆದಿದ್ದ ಆರೋಪಿಯನ್ನು ಮಾಲು ಸಮೇತ ಬಂಧಿಸುವಲ್ಲಿ ಅಬಕಾರಿ ಪೊಲೀಸರು ಯಶಸ್ವಿಯಾಗಿದ್ದಾರೆ.

ತಾಲೂಕಿನ ಕಾಶಿ ಮುರುಕನಹಳ್ಳಿ ಗ್ರಾಮದ ನಿವಾಸಿ ಬೋರಲಿಂಗೇಗೌಡ ಬಂಧಿತ ಆರೋಪಿ. ಈತ ತನ್ನ ಜಮೀನಿನಲ್ಲಿ ಸಾವಿರಾರು ರೂ. ಮೌಲ್ಯದ ಗಾಂಜಾ ಬೆಳೆದಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ಮಂಡ್ಯ ಉಪ ಆಯುಕ್ತರ ಕಚೇರಿ ಉಪ ನಿರೀಕ್ಷಕ ನಾಗಭೂಷಣ್ ಹಾಗೂ ಕೆ.ಆರ್.ಪೇಟೆ ಅಬಕಾರಿ ಇನ್ಸ್‌ಪೆಕ್ಟರ್ ದೀಪಕ್ ನೇತೃತ್ವದ ಸಿಬ್ಬಂದಿ ದಾಳಿ ನಡೆಸಿ ಆರೋಪಿಯನ್ನು ಬಂಧಿಸಿ ಆತನಿಂದ 17 ಕೆಜಿ ತೂಕದ ಗಾಂಜಾ ಗಿಡಗಳನ್ನು ವಶಪಡಿಸಿಕೊಂಡಿದ್ದಾರೆ.

ಮಂಡ್ಯ ಅಬಕಾರಿ ಉಪ ಆಯುಕ್ತ ಕಚೇರಿ ಉಪನಿರೀಕ್ಷಕ ನಾಗಭೂಷಣ್ ಮಾತನಾಡಿ, ಕಾಶಿಮುರುಕನಹಳ್ಳಿ ಗ್ರಾಮದ ಬೋರಲಿಂಗೇಗೌಡ ಎಂಬಾತ ತನ್ನ ಜಮೀನಿನಲ್ಲಿ ಗಾಂಜಾ ಗಿಡಗಳನ್ನು ಬೆಳೆದಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ತಾಲೂಕು ಕಂದಾಯ ಅಧಿಕಾರಿಗಳ ಜೊತೆಗೂಡಿ ದಾಳಿ ನಡೆಸಿ 50 ಸಾವಿರ ರೂ. ಮೌಲ್ಯದ ಗಾಂಜಾ ಗಿಡಗಳನ್ನು ವಶಪಡಿಸಿಕೊಂಡು ಆರೋಪಿಗಳ ವಿರುದ್ಧ ಮಾದಕ ವಸ್ತುಗಳು ಹಾಗೂ ಅಮಲು ಪದಾರ್ಥಗಳ ನಿಯಂತ್ರಣ ಕಾಯ್ದೆ (ಎನ್‌ಡಿಪಿಎಸ್) ಅಡಿ ಪ್ರಕರಣ ದಾಖಲಿಸಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದರು.


ಬೂಕನಕೆರೆಯಲ್ಲಿ ರಾಮಮಂದಿರ ಲೋಕಾರ್ಪಣೆ

ಕೆ.ಆರ್.ಪೇಟೆ, ಜೂ.16– ತಾಲೂಕಿನ ಬೂಕನಕೆರೆಯಲ್ಲಿ ಗ್ರಾಮಸ್ಥರು ನೂತನ ರಾಮಮಂದಿರ ಲೋಕಾರ್ಪಣೆಗೊಳಿಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಕೆಂಗೇರಿ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ಪೀಠಾಧಿಪತಿ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಆಶೀರ್ವಚನ ನೀಡಿ ಮಾತನಾಡಿ, ಗುಡಿ ಗೋಪುರಗಳು ನಮ್ಮ ಸಂಸ್ಕೃತಿ ಪರಂಪರೆಯ ಪ್ರತಿಬಿಂಬಗಳಾಗಿವೆ. ಮುಂದಿನ ತಲೆಮಾರಿಗೆ ನಮ್ಮ ಸಂಸ್ಕೃತಿಯನ್ನು ಪರಿಚಯಿಸಬೇಕಾದರೆ ಗುಡಿ ಗೋಪುರಗಳ ಸಂರಕ್ಷಣೆ, ಜೀರ್ಣೋದ್ಧಾರ ಅಗತ್ಯ ಎಂದರು.

ಮನುಷ್ಯನಿಗೆ ಶಾಂತಿ, ನೆಮ್ಮದಿ ಮಾರುಕಟ್ಟೆಯಲ್ಲಿ ಸಿಗುವುದಿಲ್ಲ. ಕೇವಲ ಧರ್ಮ ಹಾಗೂ ಧಾರ್ಮಿಕ ಕಾರ್ಯಕ್ರಮ ಮಾಡುವುದರಿಂದ ಶಾಂತಿ, ನೆಮ್ಮದಿ ಪಡೆಯಬಹುದು. ದೇವಾಲಯ ಕಟ್ಟಡವಾಗದೇ ಅದು ಸಮುದಾಯದ ಆಧ್ಯಾತ್ಮಿಕ ತಾಣವಾಗಿರಬೇಕು ಎಂದರು.

ಕಾರ್ಯಕ್ರಮದಲ್ಲಿ ನೂರಾರು ಭಕ್ತರು, ಗ್ರಾಮಸ್ಥರು, ಆಚಾರ್ಯರು, ಮಹಿಳೆಯರು ಹಾಗೂ ಮಕ್ಕಳ ಉಪಸ್ಥಿತಿ ಕಂಡು ಬಂತು. ದೇವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ನಂತರ ವಿಶೇಷ ಪೂಜೆ, ಶ್ರೀರಾಮನ ಭಜನೆ–ಕೀರ್ತನೆಗಳು ಹಾಗೂ ಆರತಿ ನಡೆಯಿತು. ನಂತರ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.



ಬೂಕನಕೆರೆಯಲ್ಲಿ ರಾಮಮಂದಿರದ ಲೋಕಾರ್ಪಣೆಗೊಳಿಸಲಾಯಿತು.

ಈ ವೇಳೆ ಕಾಂಗ್ರೆಸ್ ಮುಖಂಡ, ಸಮಾಜ ಸೇವಕ ಹಾಗೂ ಮಿತ್ರ ಫೌಂಡೇಶನ್ ಅಧ್ಯಕ್ಷ ವಿಜಯ್ ರಾಮೇಗೌಡ, ಬೇಬಿ ಮಠದ ಶ್ರೀಶಿವಬಸವ ಸ್ವಾಮೀಜಿ, ಬೇಬಿ ಬೆಟ್ಟ ಗವಿಮಠದ ಶ್ರೀಸ್ವತಂತ್ರ ಶ್ರೀಚೆನ್ನವೀರ ಸ್ವಾಮೀಜಿ, ತಾಪಂ ಮಾಜಿ ಅಧ್ಯಕ್ಷ ಜವರಾಯಿಗೌಡ, ಮಾಜಿ ತಾಪಂ ಸದಸ್ಯರಾದ ಮೀನಾಕ್ಷಿ, ಹೆಳವೇಗೌಡ, ಕೃಷ್ಣೇಗೌಡ, ಬೂಕನಕೆರೆ ಗ್ರಾಪಂ ಅಧ್ಯಕ್ಷ ಶ್ಯಾಮ್ ಪ್ರಸಾದ್, ತಾಲೂಕು ಕೆಡಿಪಿ ಸದಸ್ಯ ಮಲ್ಲಿಕಾರ್ಜುನ್, ಪಿಎಸಿಎಸ್ ಅಧ್ಯಕ್ಷ ಪ್ರಕಾಶ್, ಬೂಕನಕೆರೆ ಡೈರಿ ಅಧ್ಯಕ್ಷ ನಾಗೇಶ್, ಯಜಮಾನರಾದ ಮೊಳ್ಳೇಗೌಡ, ಬಿ.ಎನ್.ಪುಟ್ಟರಾಜು, ಬೂಕನಕೆರೆ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ಸೇರಿದಂತೆ ಸಾವಿರಾರು ಭಕ್ತರಿದ್ದರು.


ಸರಣಿ ಅಪಘಾತ: 7 ಮಂದಿಗೆ ತೀವ್ರ ಗಾಯ

ಮಳವಳ್ಳಿ, ಜೂ.16– ಸಾರಿಗೆ ಬಸ್, ಕಾರು, ಬೈಕ್ ನಡುವೆ ಸರಣಿ ಅಪಘಾತ ಸಂಭವಿಸಿ ಕಾರು, ಬೈಕ್‌ನಲ್ಲಿದ್ದ 7 ಮಂದಿ ತೀವ್ರ ಗಾಯಗೊಂಡಿರುವ ಘಟನೆ ತಾಲೂಕಿನ ಹಲಗೂರು ಸಮೀಪದ ಬಾಣಸಮುದ್ರ ಗೇಟ್ ಬಳಿ ಜರುಗಿದೆ.

ಭಾನುವಾರ ಸಂಜೆ 7.30 ರಲ್ಲಿ ಈ ಘಟನೆ ನಡೆದಿದ್ದು ಮಳವಳ್ಳಿಯಿಂದ ಬೆಂಗಳೂರು ಕಡೆಗೆ ಹೊರಟಿದ್ದ ಸಾರಿಗೆ ಬಸ್ ಚಾಲಕನ ನಿಯಂತ್ರಣ ತಪ್ಪಿ ಮುಂದೆ ತೆರಳುತ್ತಿದ್ದ ಕಾರಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಡಿಕ್ಕಿ ಹೊಡೆದ ರಭಸಕ್ಕೆ ಕಾರು ಮುಂದೆ ಬರುತ್ತಿದ್ದ ಬೈಕ್‌ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಈ ಸರಣಿ ಅಪಘಾತದಲ್ಲಿ ಕಾರಿನಲ್ಲಿದ್ದ ಕನಕಪುರ ತಾಲೂಕು ಕಗ್ಗಲೀಪುರದ ಗುರುಸ್ವಾಮಿ, ಬ್ಯಾಟರಾಜು, ಕಾಂತರಾಜು, ವೆಂಕಟಪ್ಪ, ಬೈಕ್‌ನಲ್ಲಿ ಬರುತ್ತಿದ್ದ ಸಂಜಯ್, ಚಂದು, ಚಂದನ್ ಸೇರಿದಂತೆ 7 ಮಂದಿ ತೀವ್ರ ಗಾಯಗೊಂಡಿದ್ದಾರೆ. ತಕ್ಷಣ ಗಾಯಾಳುಗಳನ್ನು ಮಳವಳ್ಳಿ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಪ್ರಥಮ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹಲಗೂರು ಠಾಣೆ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಕಾರು, ಬೈಕ್ ಮುಖಾಮುಖಿ ಡಿಕ್ಕಿ: ಸವಾರ ಸಾವು

ಮಳವಳ್ಳಿ, ಜೂ.16– ಕಾರು ಮತ್ತು ಬೈಕ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿ, ಮತ್ತೋರ್ವ ತೀವ್ರ ಗಾಯಗೊಂಡಿರುವ ಘಟನೆ ಭಾನುವಾರ ಸಂಜೆ ತಾಲೂಕಿನ ಸಂಶೆಟ್ಟಿಪುರ ಗೇಟ್ ಬಳಿ ನಡೆದಿದೆ.



ತಮಿಳುನಾಡು ಮೂಲದ ರಾಹುಲ್ ವಿಘ್ನೇಶ್ವರ್ (25) ಸಾವನ್ನಪ್ಪಿದವರು. ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ನಾಲ್ವರು ಸ್ನೇಹಿತರು 2 ಬೈಕ್‌ಗಳಲ್ಲಿ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಹೋಗಿ ಬೆಂಗಳೂರಿಗೆ ವಾಪಸ್ಸಾಗುತ್ತಿದ್ದಾಗ ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ರಾಹುಲ್ ವಿಘ್ನೇಶ್ವರ್ ಸ್ಥಳದಲ್ಲೇ ಸಾವನ್ನಪ್ಪಿದರೆ, ಹಿಂಬದಿ ಸವಾರ ಪುವಿತ್ ಕುಮಾರ್ ತೀವ್ರ ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಪಟ್ಟಣದ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ಕಿರುಗಾವಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ

ರಾಜ್ಯದಲ್ಲಿ ಗಣತಿ ಅನವಶ್ಯಕ

ಹೇಳಿಕೆ ನೀಡುತ್ತಿರುವ ಯತೀಂದ್ರಗೆ ಇದರ ಬಗ್ಗೆ ಅರಿವು ಇಲ್ಲ. ಮೊದಲು ಜಾತಿ ಗಣತಿ ಅಂದರೇನು ಎಂದು ಅವರು ತಿಳಿದು ಮಾತನಾಡಬೇಕು. ಜನರ ಸಾಮಾಜಿಕ, ಆರ್ಥಿಕತೆ ಬಗ್ಗೆ ಅವರಿಗೆ ಏನೂ ತಿಳಿದಿಲ್ಲ. ಈ ಹಿನ್ನೆಲೆಯಲ್ಲಿ ಮೊದಲು ಯತೀಂದ್ರ ಅವರು ಜಾತಿ ಗಣತಿ ಬಗ್ಗೆ ತಿಳಿದುಕೊಂಡು ಮಾತನಾಡಲಿ ಎಂದು ಪ್ರತಾಪ್ ಸಿಂಹ ಸಲಹೆ ನೀಡಿದರು. ಲಿಂಗಾಯತ ಸಮುದಾಯ ಮೊದಲಿನ ಜಾತಿ ಗಣತಿ ವರದಿಗೆ ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಮತ್ತೊಮ್ಮೆ ಜಾತಿ ಗಣತಿ ಮಾಡುತ್ತಿದ್ದೇವೆ ಎಂದು ಸಿದ್ದರಾಮಯ್ಯ ಸ್ಪಷ್ಟನೆ ನೀಡುತ್ತಾರೆ. ಹಾಗಾದರೆ 39 ಶಾಸಕರಿರುವ ಲಿಂಗಾಯತರಿಗೆ ಮುಖ್ಯಮಂತ್ರಿ ಕುರ್ಚಿ ಬಿಟ್ಟುಕೊಡುತ್ತೀರಾ ಎಂದು ಸವಾಲು ಹಾಕಿದ ಪ್ರತಾಪ್ ಸಿಂಹ, ತಮ್ಮ ಹುಳುಕು ಮುಚ್ಚಿಕೊಳ್ಳಲು ಏನೇನೋ ಹೇಳಿಕೆ ನೀಡುವುದು ಸರಿಯಲ್ಲ ಎಂದು ತಿಳಿಸಿದರು.

ಸಿದ್ದರಾಮಯ್ಯ ಕಸರತ್ತು! ವಿರೋಧಿಗಳ ಮಸಲತ್ತು!!

ಒಂದು ಕಡೆ ಸಿದ್ದರಾಮಯ್ಯ ಮುಖ್ಯಮಂತ್ರಿ ಕುರ್ಚಿ ಉಳಿಸಿಕೊಳ್ಳಲು ಕಸರತ್ತು ನಡೆಸುತ್ತಿದ್ದರೆ, ಮತ್ತೊಂದು ಕಡೆ ಅವರ ಕುರ್ಚಿ ಎಳೆದು ತಾವು ಆ ಪಟ್ಟ ಅಲಂಕರಿಸಲು ಸಿಎಂ ಆಕಾಂಕ್ಷಿಗಳು ತಂತ್ರ ರೂಪಿಸುತ್ತಿದ್ದಾರೆ ಎಂದು ಪ್ರತಾಪ್ ಸಿಂಹ ಕಾಂಗ್ರೆಸ್ ನಾಯಕರ ಕುರ್ಚಿ ಕಚ್ಚಾಟದ ಬಗ್ಗೆ ಗೇಲಿ ಮಾಡಿದರು.

ಕಾಂಗ್ರೆಸ್ ನಾಯಕರು ಒಬ್ಬರಿಗೊಬ್ಬರು ಕುರ್ಚಿ ಕಿತ್ತಾಟ ನಡೆಸುತ್ತಿದ್ದರೆ, ಸ್ವಲ್ಪ ಜನರು ಕುರ್ಚಿ ಗಲಾಟೆಯಿಂದ ತಮಗೇನಾದರೂ ಲಾಭ ಆಗುವುದೇ ಎಂದು ಕಾಯುತ್ತಿದ್ದಾರೆ ಎಂದರು. ಈ ರೀತಿಯ ರಾಜಕೀಯ ಬೆಳವಣಿಗೆ ಜನರಿಗೆ ತಿಳಿದರೆ ಮುಜುಗರ ಅನುಭವಿಸಬೇಕಾಗುತ್ತದೆ ಎಂಬ ಕಾರಣದಿಂದ ಸಿದ್ದರಾಮಯ್ಯ ಅವರು ಜಾತಿಗಣತಿಯನ್ನು ಮುನ್ನಲೆಗೆ ತಂದು ತಮ್ಮ ಕಿತ್ತಾಟವನ್ನು ವಿಷಯಾಂತರ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

ಅಧಿಕಾರ ಉಳಿಸಿಕೊಳ್ಳಲು ಸಿದ್ದರಾಮಯ್ಯ ಯಾವ ತಂತ್ರ ಮಂತ್ರ ಮಾಡುತ್ತಿದ್ದಾರೊ ಗೊತ್ತಿಲ್ಲ. ಎಲ್ಲರ ನಿರೀಕ್ಷೆಯಂತೆ ನವೆಂಬರ್‌ನಲ್ಲಿ ಬದಲಾವಣೆ ಆಗುತ್ತಾರೋ ಎಂಬುದೂ ಗೊತ್ತಿಲ್ಲ. ಏನೇ ಇರಲಿ ಇನ್ನು ಮೂರು ವರ್ಷ ಕಾಂಗ್ರೆಸ್‌ನಲ್ಲಿ ಕುರ್ಚಿ ಕಿತ್ತಾಟ ನಡೆಯುತ್ತಲೇ ಇರುತ್ತದೆ. ಜನರು ಕಾಂಗ್ರೆಸ್ ಪಕ್ಷಕ್ಕೆ 136 ಸ್ಥಾನ ನೀಡಿದ್ದಾರೆ. ಪೂರ್ಣ ಬಹುಮತವಿರುವ ಈ ಸರ್ಕಾರದಲ್ಲಿ ಇನ್ನು ಮೂರು ವರ್ಷ ನಾನಾ ರೀತಿಯ ಕಿತ್ತಾಟ ನೋಡುತ್ತಲೇ ಇರಬೇಕು ಎಂದರು.

ನಮ್ಮದೇ ಬೇರೆ...

ಜನರ ಸಾಮಾಜಿಕ, ಆರ್ಥಿಕ ಪರಿಸ್ಥಿತಿ ತಿಳಿದಿರಬೇಕು. ಅದಕ್ಕಾಗಿ ಮರು ಸಮೀಕ್ಷೆ ಅಗತ್ಯವಿದೆ. ಕೇಂದ್ರ ಸರ್ಕಾರ ಜಾತಿಗಣತಿ ನಡೆಸುತ್ತಿದೆಯೇ ಹೊರತು ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಳ್ಳುತ್ತಿಲ್ಲ. ಕಳೆದ 14 ವರ್ಷಗಳ ಹಿಂದೆ ಜನಗಣತಿ ನಡೆದಿತ್ತು, ಕೇಂದ್ರ ಸರ್ಕಾರ 2027ರಿಂದ ಜನಗಣತಿ ಸಮೀಕ್ಷೆ ನಡೆಸುತ್ತಿದೆ. ಇದರಲ್ಲಿ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡುವುದಾಗಿ ಹೇಳಿಲ್ಲ. ನಾವು ಮಾಡುತ್ತಿರುವುದು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಜೊತೆ ಜಾತಿಗಣತಿ ಎಂದರು. ಕೇಂದ್ರದ ಜನಗಣತಿಗೆ ನಮ್ಮ ತಕರಾರಿಲ್ಲ. ಆದರೆ, ನಮ್ಮ ಸಮೀಕ್ಷೆ ಹಾಗೂ ಕೇಂದ್ರದ ಸಮೀಕ್ಷೆಗೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ವಿಷಯಗಳಲ್ಲಿ ವ್ಯತ್ಯಾಸವಿದೆ ಎಂದರು.

ಸಮೀಕ್ಷೆಗೆ ಹೊಸ ಮಾರ್ಗ ಕಂಡುಕೊಳ್ಳೇವೆ: ಹೆಚ್‌ಸಿಎಂ



ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿ, 90 ದಿನಗಳಲ್ಲಿ ಹೊಸ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಲಿದೆ.

ಸಾಫ್ಟ್‌ವೇರ್ ಹಾಗೂ ದತ್ತಾಂಶಗಳ ಮೂಲಕ ಸಮೀಕ್ಷೆ ಮಾಡಲಾಗುವುದು. ಶಿಕ್ಷಕರ ಕೊರತೆ ಇದ್ದರೆ ಹೊಸ ಮಾರ್ಗ ಕಂಡು ಕೊಳ್ಳುವುದಾಗಿಯೂ ತಿಳಿಸಿದರು. ಉತ್ತಮ ಆಡಳಿತ ನೀಡಬೇಕೆಂದರೆ ಜಾತಿ ಗಣತಿ ಅತ್ಯವಶ್ಯ. ಆದರೆ ಕೇಂದ್ರದಲ್ಲಿ ಸತತವಾಗಿ ಮೂರು ಅವಧಿಯಿಂದ ಅಧಿಕಾರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರ ಸಮೀಕ್ಷೆಯನ್ನೇ ಮಾಡಿಸಿಲ್ಲ. ಪ್ರಜಾಪ್ರಭುತ್ವ, ಸಂವಿಧಾನ ಹಾಗೂ ಒಳ್ಳೆಯ ಆಡಳಿತ ನೀಡುವುದರ ಕುರಿತು ಕೇಂದ್ರ ತಲೆ ಕೆಡಿಸಿಕೊಳ್ಳುತ್ತಿಲ್ಲ ಎಂದು ದೂರಿದರು. ದೇಶದಲ್ಲಿ ದಿನೇ ದಿನೆ ಜನಸಂಖ್ಯೆ ಹೆಚ್ಚುತ್ತಲೇ ಇದೆ ಎಂದರು.

ಕಾಂತರಾಜ್ ವರದಿ ಬಹಿರಂಗಪಡಿಸಲು ಆಗ್ರಹ



ವಿಧಾನ ಪರಿಷತ್ ಸದಸ್ಯ ಹಾಗೂ ಕಾಂಗ್ರೆಸ್‌ನ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಸುದ್ದಿಗಾರರೊಂದಿಗೆ ಪ್ರತ್ಯೇಕವಾಗಿ ಮಾತನಾಡಿ, ಕಾಂತರಾಜ್ ವರದಿ ಜಾರಿಗೊಳಿಸದಿದ್ದರೂ ಬಹಿರಂಗಪಡಿಸಬೇಕು ಎಂದು ಮುಖ್ಯಮಂತ್ರಿ ಅವರನ್ನು ಆಗ್ರಹಿಸಿದರು.

ಮೇಲ್ಜಾತಿಯವರಿಗೆ ಸಾಮಾಜಿಕ ನ್ಯಾಯದ ಅವಶ್ಯಕತೆ ಇಲ್ಲ, ಅವರಿಗೆ ಬೇಕಾಗಿರುವುದು ತಮ್ಮ ಸಮುದಾಯ ಸಂಖ್ಯೆ ಎಷ್ಟು ಬೆಳೆದಿದೆ ಎಂಬುದನ್ನು ತೋರಿಸುವ ಉದ್ದೇಶ. ಯಾವುದೇ ಹಿಂದುಳಿದ ವರ್ಗಗಳ ಆಯೋಗಗಳ ವರದಿಗೂ ಈ ವರ್ಗ ಆಕ್ಷೇಪ ವ್ಯಕ್ತಪಡಿಸುತ್ತಲೇ ಬಂದಿದೆ. ಈಗ ಕೇಂದ್ರ ಸರ್ಕಾರ ಜನಗಣತಿ ಜೊತೆ ಜಾತಿ ಗಣತಿ ಮಾಡಿಸುತ್ತಿರು ವುದನ್ನು ಸ್ವಾಗತಿಸುತ್ತೇನೆ, ಆದರೆ, ಕರ್ನಾಟಕದಲ್ಲಿ ನಮ್ಮ ಸರ್ಕಾರ ಹಿಂದುಳಿದ ವರ್ಗಗಳಿಗೆ ಆಗಿರುವ ಅನ್ಯಾಯ ಸರಿಪಡಿಸಲು ಸಮೀಕ್ಷೆ ನಡೆಯುತ್ತಿದೆ.

ಯುವತಿ ಸೇರಿ ಉಳಿದವರು ನಾಪತ್ತೆ

ಆಕೆ ಕಳುಹಿಸಿದ ಲೋಕೇಷನ್‌ಗೆ ತೆರಳಿದ್ದಾರೆ. ಕಾರಿನ ಬಳಿ ಬಂದ ಯುವತಿ, ನಮ್ಮ ಚಿಕ್ಕಮ್ಮನ ಮನೆಗೆ ಹೋಗೋಣ ಎಂದು ಕರೆದುಕೊಂಡು ಹೋಗಿದ್ದಾಳೆ. ಮನೆಯಲ್ಲಿ ದಿನೇಶ್ ಕುಮಾರ್ ಪಕ್ಕದಲ್ಲೇ ಕುಳಿತು ಸಲುಗೆ ಯಿಂದ ಮಾತನಾಡಿದ್ದಾಳೆ. ನೀನು ನನಗೆ ತುಂಬಾ ಇಷ್ಟ ಎಂದು ತಬ್ಬಿಕೊಂಡು ಪ್ರಚೋದಿಸಿದ್ದಾಳೆ. ನಂತರ ಡೋರ್ ಲಾಕ್ ಮಾಡಿ ಬರುತ್ತೇನೆ ಎಂದು ಹೋದವಳು ಲಾಕ್ ಹಾಕದೆ, ಬರೀ ಬಾಗಿಲು ಹಾಕಿ ವಾಪಸ್ ಬಂದಿದ್ದಾಳೆ. ಸ್ವಲ್ಪ ಸಮಯದಲ್ಲೇ ಬಾಗಿಲು ಬಡಿದ ಶಬ್ಧ ಕೇಳಿಬಂದಿದೆ. ಅದರ ಬೆನ್ನ ಹಿಂದೆಯೇ ಮೂವರು ಒಳ ನುಗ್ಗಿದ್ದಾರೆ. ರೂಮ್‌ನಲ್ಲಿದ್ದ ದಿನೇಶ್ ಕುಮಾರ್‌ನನ್ನು ಎಳೆದು ಹೊರ ತಂದು ಮನ ಬಂದಂತೆ ಥಳಿಸಿದ್ದಾರೆ. ಅಲ್ಲದೆ, ಅರೆ ಬೆತ್ತಲೆ ಮಾಡಿ, ಯುವತಿ ಜೊತೆ ನಿಲ್ಲಿಸಿ ಫೋಟೋ ಮತ್ತು ವಿಡಿಯೋ ಚಿತ್ರೀಕರಣ ಮಾಡಿದ್ದಾರೆ.

ಪೊಲೀಸಪ್ಪನ ಎಂಟ್ರಿ: ಕೆಲ ಹೊತ್ತಿಗೆ ಮಾಕನಹಳ್ಳಿಪಾಳ್ಯದ ಮೂರ್ತಿ ಎಂಬುವರ ಜೊತೆ ಹುಣಸೂರು ತಾಲೂಕಿನಲ್ಲಿ ಕಾರ್ಯ ನಿರ್ವಹಿಸುವ ಪೊಲೀಸ್ ಸಿಬ್ಬಂದಿ ಶಿವಣ್ಣ ಎಂಟ್ರಿ ಕೊಟ್ಟಿದ್ದಾರೆ. ನಿನ್ನನ್ನು ಇಲ್ಲಿಂದ ಬಿಟ್ಟು ಕಳುಹಿಸಲು ಮಾತನಾಡುತ್ತೇವೆ ಎಂದು 10 ಲಕ್ಷ ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ. ಹಣ ಕೊಡಲಿಲ್ಲ ಎಂದರೆ ಈ ಫೋಟೋ ಮತ್ತು ವಿಡಿಯೋವನ್ನು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಮಾಡುತ್ತೇವೆ ಎಂದು ಹಲ್ಲೆ ನಡೆಸಿ, ಹೆದರಿಸಿದ್ದಾರೆ. ಭಯದಿಂದ ದಿನೇಶ್ ಕುಮಾರ್, ತನ್ನ ಸಹೋದರ ಮಹೇಂದ್ರ ಚೌಧರಿಗೆ ಕರೆ ಮಾಡಿ 10 ಲಕ್ಷ ಹಣವನ್ನು ಪೊಲೀಸ್ ಪೇದೆ ಶಿವಣ್ಣನಿಗೆ ನೀಡುವಂತೆ ಹೇಳಿದ್ದಾರೆ. ಅಣ್ಣ ದಿಢೀರ್ ಹತ್ತು ಲಕ್ಷ ಬೇಕೆಂದು ಕೇಳಿದ್ದರಿಂದ ಅನುಮಾನಗೊಂಡ ಮಹೇಂದ್ರ ಚೌಧರಿ, ತನ್ನ ಸ್ನೇಹಿತ ಮಹೇಶ್ ಜೊತೆ ಪಿರಿಯಾಪಟ್ಟಣ ಪೊಲೀಸ್ ಠಾಣೆಗೆ ಹೋಗಿ ದೂರು ನೀಡಿದ್ದಾರೆ.

ಪಿರಿಯಾಪಟ್ಟಣ ಪೊಲೀಸ್ ಇನ್ಸ್‌ಪೆಕ್ಟರ್, ಮಹೇಂದ್ರ ಚೌಧರಿ ಮೊಬೈಲ್‌ನಿಂದ ದಿನೇಶ್‌ಕುಮಾರ್‌ಗೆ ಫೋನ್ ಮಾಡಿದ್ದಾರೆ. ಆರೋಪಿಗಳಿಗೆ ಫೋನ್ ಕೊಡುವಂತೆಯೂ ಹೇಳಿದ್ದಾರೆ. ನಾನು ಪೊಲೀಸ್ ಇನ್ಸ್‌ಪೆಕ್ಟರ್ ಮಾತನಾಡುತ್ತಿದ್ದೇನೆ, ಈ ಕೂಡಲೇ ದಿನೇಶ್ ಕುಮಾರ್‌ನನ್ನು ಬಿಡುಗಡೆ ಮಾಡದಿದ್ದರೆ, ನಮ್ಮ ಕೆಲಸ ನಾವು ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಇದರಿಂದ ಹೆದರಿದ ಆರೋಪಿಗಳು ತಡರಾತ್ರಿ 1.15ರ ಸಮಯದಲ್ಲಿ ದಿನೇಶ್ ಕುಮಾರ್‌ನನ್ನು ಬೈಲಕುಪ್ಪೆ ಟೌನ್ ಬಳಿ ಬಿಟ್ಟು ಪರಾರಿಯಾಗಿದ್ದಾರೆ. ನಂತರ ದಿನೇಶ್ ಕುಮಾರ್, ಸಹೋದರನೊಂದಿಗೆ ಬೈಲಕುಪ್ಪೆ ಠಾಣೆಗೆ ತೆರಳಿ ದೂರು ನೀಡಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ಆರೋಪಿ ಪೊಲೀಸ್ ಪೇದೆ ಶಿವಣ್ಣನನ್ನು ಬಂಧಿಸಿ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿ ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಯುವತಿ ಸೇರಿ ಇನ್ನುಳಿದ ಆರೋಪಿಗಳ ಬಂಧನಕ್ಕೆ ಕ್ರಮ ಕೈಗೊಂಡಿದ್ದಾರೆ.

ಶಿವಣ್ಣನ ವಿರುದ್ಧ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ವರದಿ

ಹನಿಟ್ರ್ಯಾಪ್ ದಂಧೆಯಲ್ಲಿ ಭಾಗಿಯಾಗಿರುವ ಶಿವಣ್ಣ ಅಲಿಯಾಸ್ ಪೊಲೀಸ್ ಶಿವಣ್ಣನ ಸಂಬಂಧ ವರದಿಯನ್ನು ಬೈಲಕುಪ್ಪೆ ಪೊಲೀಸರು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ಅವರಿಗೆ ಸಲ್ಲಿಸಿದ್ದಾರೆ. ಈಗ ಶಿವಣ್ಣ ಜೈಲಿನಲ್ಲಿದ್ದಾನೆ. ಆದರೆ, ಈತ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಿನ್ನೆಲೆ ಶಿವಣ್ಣನ ವಿರುದ್ಧ ಇಲಾಖೆ, ಪ್ರತ್ಯೇಕ ಕ್ರಮ ಕೈಗೊಳ್ಳಲಿದೆ. ಇಂತಹ ಪ್ರಕರಣದಲ್ಲಿ ಭಾಗಿಯಾಗುವ ಇಲಾಖೆಯ ಸಿಬ್ಬಂದಿಯನ್ನು ಅಮಾನತು ಅಥವಾ ವಜಾ ಮಾಡಿರುವ ಬಹಳಷ್ಟು ನಿದರ್ಶನಗಳಿವೆ. ಇದೀಗ ಹನಿಟ್ರ್ಯಾಪ್ ಕೃತ್ಯದಲ್ಲಿ ಭಾಗಿಯಾಗಿರುವ ಶಿವಣ್ಣನ ವಿರುದ್ಧ ಯಾವ ಕ್ರಮವಾಗಲಿದೆ ಎಂದು ಕಾದು ನೋಡಬೇಕಿದೆ.

ಕೆ.ಎಂ. ಕಾರ್ಯಪ್ಪ ಹೆಸರು

ಕೊಡವರು ಜಾತಿ–ಧರ್ಮ ಮಾಡುವವರಲ್ಲ. ಎಲ್ಲ ರನ್ನೂ ಭಾರತೀಯರು ಎಂದು ಗೌರವಿಸುತ್ತಾರೆ ಎಂದರು. ಕೊಡಗಿನ ಶಾಸಕರಾದ ಎ.ಎಸ್.ಪೊನ್ನಣ್ಣ ಹಾಗೂ ಡಾ.ಮಂತರ್ ಗೌಡ ಇಬ್ಬರಿಗೂ ಉತ್ತಮ ರಾಜಕೀಯ ಭವಿಷ್ಯ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಕೊಡಗಿನ ಆಸ್ತಿ ಮಾತ್ರವಲ್ಲ, ಅವರು ಈ ರಾಜ್ಯದ ಆಸ್ತಿ ಎಂದು ಮುಖ್ಯಮಂತ್ರಿಗಳು ಕೊಂಡಾಡಿದರಲ್ಲದೆ, ಪೊನ್ನಣ್ಣ ಅವರಿಗೆ ಉತ್ತಮ ಭವಿಷ್ಯವಿದೆ. ಇವರನ್ನು ಬೆಂಬಲಿಸಿ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಕರೆ ನೀಡಿದರು. ಕೊಡಗಿನ ಎ.ಕೆ.ಸುಬ್ಬಯ್ಯ ಮತ್ತು ಎಂ.ಸಿ.ನಾಣಯ್ಯ ಅವರುಗಳು ಉತ್ತಮ ಸಂಸದೀಯ ಪಟುಗಳು. ಇವರು ಸದನದಲ್ಲಿ ಸಮಾಜಮುಖಿಯಾಗಿ ಮಾತನಾಡಿದ ಫೈರ್‌ಬ್ರಾಂಡ್‌ಗಳು. ಅದೇ ರೀತಿ ಪೊನ್ನಣ್ಣ ಅವರಿಗೂ ಫೈರ್ ಬ್ರಾಂಡ್ ಆಗುವ ಎಲ್ಲಾ ಲಕ್ಷಣಗಳೂ ಇವೆ ಎಂದರು. ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಜೆ.ಜಾರ್ಜ್, ಕೃಷ್ಣ ಭೈರೇಗೌಡ, ಭೈರತಿ ಸುರೇಶ್, ಶಾಸಕ ರಿಜ್ವಾನ್ ಅರ್ಷದ್, ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್ ಗೌಡ ಬೆಂಗಳೂರು ಕೊಡವ ಸಮಾಜದ ಅಧ್ಯಕ್ಷ ಕರುವಟ್ಟಿರ ಪೆಮ್ಮಯ್ಯ ಉಪಸ್ಥಿತರಿದ್ದರು.

ಇಸ್ರೇಲ್–ಇರಾನ್ ತೀವ್ರ ಸಂಘರ್ಷ: 230 ಮಂದಿ ಸಾವು

ಖಮೇನಿ ಹತ್ಯೆ ಯೋಜನೆ ವಿಫಲಗೊಳಿಸಿದ ಟ್ರಂಪ್!



ಇರಾನ್ ಕ್ಷಿಪಣಿ ದಾಳಿಯಿಂದ ಇಸ್ರೇಲ್‌ನ ಬ್ಯಾಟ್‌ಯಾಮ್ ನಗರ ಸಂಪೂರ್ಣ ಛಿದ್ರ ಛಿದ್ರಗೊಂಡಿರುವುದು.

ಜೆರುಸಲೇಂ: ಇರಾನ್‌ನ ರಕ್ಷಣಾ ಕೇಂದ್ರಗಳು, ತೈಲ ಘಟಕಗಳನ್ನು ಗುರಿಯಾಗಿಸಿಕೊಂಡು ಇಸ್ರೇಲ್ ದಾಳಿಯನ್ನು ತೀವ್ರಗೊಳಿಸಿದೆ. ಇದಕ್ಕೆ ಪ್ರತಿಯಾಗಿ ಇರಾನ್ ಕೂಡ ದಾಳಿ ನಡೆಸಿದೆ. ಹೋರಾಟ ನಿಲ್ಲಿಸುವಂತೆ ಕರೆಗಳು ಬಂದಿದ್ದರೂ, ಎರಡೂ ದೇಶಗಳು ಹಿಂದೆ ಸರಿದಿಲ್ಲ ಹೀಗಾಗಿ ಸಂಘರ್ಷ ಮೂರನೇ ದಿನಕ್ಕೆ ಕಾಲಿಟ್ಟಿದೆ.

ಇಸ್ರೇಲ್ ತನ್ನ ತೈಲ ಸಂಸ್ಕರಣಾಗಾರಗಳನ್ನು ಹೊಡೆದುರುಳಿಸಿದೆ, ತನ್ನ ಅರೆಸೈನಿಕ ಕ್ರಾಂತಿಕಾರಿ ಗಾರ್ಡ್‌ನ ಗುಪ್ತಚರ ಮುಖ್ಯಸ್ಥ ಮತ್ತು ಇತರ ಇಬ್ಬರು ಜನರಲ್‌ಗಳನ್ನು ಕೊಂದಿದೆ. ಜನಸಂಖ್ಯಾ ಕೇಂದ್ರಗಳ ಮೇಲೆ ತೀವ್ರವಾದ ವೈಮಾನಿಕ ದಾಳಿ ನಡೆಸಿದೆ ಎಂದು ಇರಾನ್ ಹೇಳಿದೆ

ಟೆಹರಾನ್‌ನಲ್ಲಿರುವ ಇರಾನ್ ರಕ್ಷಣಾ ಸಚಿವಾಲಯದ ಪ್ರಧಾನ ಕಚೇರಿ ಮೇಲೆ ಇಸ್ರೇಲ್ ಕ್ಷಿಪಣಿ ದಾಳಿ ನಡೆಸಿತ್ತು. ಇದಕ್ಕೆ ಪ್ರತಿಯಾಗಿ ಇರಾನ್‌ನ ಕ್ಷಿಪಣಿಗಳು, ಇಸ್ರೇಲ್ ವಾಯುರಕ್ಷಣಾ ವ್ಯವಸ್ಥೆಯನ್ನು ಭೇದಿಸಿ, ಹಲವು ಕಟ್ಟಡಗಳನ್ನು ನಾಶಗೊಳಿಸಿವೆ.

ಸೋಮವಾರ ಬೆಳಿಗ್ಗೆ ಟೆಹರಾನ್‌ನ ವಿವಿಧೆಡೆಯೂ ಸ್ಫೋಟಗಳು ಸಂಭವಿಸಿವೆ. ನಾಲ್ಕು ದಿನಗಳ ಸಂಘರ್ಷದಲ್ಲಿ ದೇಶದಲ್ಲಿ 224 ಮಂದಿ ಮೃತಪಟ್ಟಿದ್ದು, 1,277ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ ಎಂದು ಇರಾನ್‌ನ ವಿಶ್ವಸಂಸ್ಥೆಯ ರಾಯಭಾರಿ ತಿಳಿಸಿದ್ದಾರೆ. ಆಪರೇಷನ್ ರೈಸಿಂಗ್ ಲಯನ್ ಹೆಸರಿನಡಿ ಇಸ್ರೇಲ್ ನಡೆದ ಕಾರ್ಯಾಚರಣೆಯಲ್ಲಿ ಇರಾನ್ ಸೇನೆಯ ಅತ್ಯುನ್ನತ ಶ್ರೇಣಿಯ ಅಧಿಕಾರಿ, ಸಶಸ್ತ್ರ ಪಡೆಗಳ ಮುಖ್ಯಸ್ಥ ಮೊಹಮ್ಮದ್ ಬಘೇರಿ ಮತ್ತು ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕೋರ್ (ಐಆರ್‌ಜಿಸಿ) ಮುಖ್ಯಸ್ಥ ಹುಸೇನ್ ಸಲಾಮಿ ಅವರು ಶುಕ್ರವಾರ ಮೃತಪಟ್ಟಿದ್ದರು.

ಐಆರ್‌ಜಿಸಿಯ ಗುರಿ ನಿರ್ದೇಶಿತ ಕ್ಷಿಪಣಿ ಯೋಜನೆಯ ಮುಖ್ಯಸ್ಥ ಅಮೀರ್ ಅಲಿ ಹಾಜಿಝದಾ ಅವರೂ ಮೃತಪಟ್ಟಿದ್ದರು. ಈ ಮೂವರ ಸಾವನ್ನು ಇರಾನ್ ದೃಢಪಡಿಸಿತ್ತು ಇರಾನ್ ಪರಮಾಣು ಯೋಜನೆಯಲ್ಲಿ ಭಾಗಿಯಾಗಿರುವ ಹಲವು ವಿಜ್ಞಾನಿಗಳೂ ದಾಳಿಯಲ್ಲಿ ಮೃತಪಟ್ಟಿದ್ದಾರೆ.

ಈ ದಾಳಿಗೆ ಪ್ರತ್ಯುತ್ತರವಾಗಿ ಇಸ್ರೇಲ್ ಅನ್ನು 'ಕಠಿಣ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಇರಾನ್‌ನ ಪರಮೋಚ್ಚ ನಾಯಕ ಆಯಾತೊಲ್ಲಾ ಅಲಿ ಖಮೇನಿ ಎಚ್ಚರಿಸಿದ್ದಾರೆ. ಇದರ ಬೆನ್ನಲ್ಲೇ ಇರಾನ್ ಸೇನೆ ಇಸ್ರೇಲ್ ನತ್ತ ಹಲವು ಡ್ರೋನ್‌ಗಳನ್ನು ಹಾರಿಸಿದೆ.

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರನ್ನು ಕೊಲ್ಲುವ ಇಸ್ರೇಲ್ ಯೋಜನೆಯನ್ನು ವಿಫಲಗೊಳಿಸಿದ್ದಾರೆ ಎಂದು ಅಮೆರಿಕದ ಅಧಿಕಾರಿಯೊಬ್ಬರು ಅಸೋಸಿಯೇಟೆಡ್ ಪ್ರೆಸ್‌ಗೆ ತಿಳಿಸಿದ್ದಾರೆ. ಖಮೇನಿ ಎಲ್ಲಾ ಪ್ರಮುಖ ನೀತಿಗಳ ಮೇಲೆ ಅಂತಿಮ ಅಧಿಕಾರ ಹೊಂದಿದ್ದಾರೆ, ಸಶಸ್ತ್ರ ಪಡೆಗಳ ಕಮಾಂಡರ್–ಇನ್–ಚೀಫ್ ಆಗಿ ಕಾರ್ಯನಿರ್ವಹಿಸುತ್ತಾರೆ ಮತ್ತು ಪ್ರಬಲ ಕ್ರಾಂತಿಕಾರಿ ಗಾರ್ಡ್ ನಿಯಂತ್ರಿಸುತ್ತಾರೆ.

ಇರಾನ್ ಪರಮಾಣು ಕೇಂದ್ರದ ಮೇಲೆ ದಾಳಿ ಸೂಚನೆ ಇರಲಿಲ್ಲ

ಅಣು ಶಕ್ತಿ ಸಂಸ್ಥೆ ಸ್ಪಷ್ಟನೆ

ವಿಯೆನ್ನಾ: ಇರಾನ್‌ನ ನಟಾನ್ಜ್‌ನಲ್ಲಿರುವ ನೆಲದಡಿಯಲ್ಲಿನ ಪರಮಾಣು ಘಟಕದ ಮೇಲೆ ದಾಳಿ ನಡೆಯುವ ಯಾವುದೇ ಸುಳಿವು ಸಿಕ್ಕಿರಲಿಲ್ಲ ವಿಶ್ವಸಂಸ್ಥೆಯ ಅಣ್ವಸ್ತ್ರ ನಿಗಾಸಂಸ್ಥೆ ತಿಳಿಸಿದೆ. ಅಣ್ವಸ್ತ್ರಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಆರೋಪಿಸಿ, ಇರಾನ್‌ನ ಪರಮಾಣು ಕೇಂದ್ರಗಳನ್ನು ಗುರಿಯಾಗಿರಿಸಿಕೊಂಡು ಇಸ್ರೇಲ್ ಕಳೆದ ವಾರ ದಾಳಿ ನಡೆಸಿತ್ತು. ಇಸ್ರೇಲ್‌ನ ಆರೋಪವನ್ನು, ಇರಾನ್ ಮೊದಲಿನಿಂದಲೂ ತಳ್ಳಿ ಹಾಕುತ್ತಿದೆ. ಈ ಕುರಿತು ವಿಶೇಷ ಸಭೆ ನಡೆಸಿದ ಅಂತರರಾಷ್ಟ್ರೀಯ ಅಣು ಶಕ್ತಿ ಸಂಸ್ಥೆಯ (ಐಎಇಎ) ಮುಖ್ಯಸ್ಥ ರಫೇಲ್ ಗ್ರೊಸ್ಸಿ, 'ಶುಕ್ರವಾರದ ಬಳಿಕ ನಟಾನ್ಜ್‌ನ ಮೇಲೆ ಹೆಚ್ಚುವರಿಯಾಗಿ ಯಾವುದೇ ಹಾನಿ ಉಂಟಾಗಿಲ್ಲ' ಎಂದು ಸ್ಪಷ್ಟಪಡಿಸಿದರು. ನಟಾನ್ಜ್ ಕೇಂದ್ರದ ಹೊರಭಾಗ ದಲ್ಲಿ ವಿಕಿರಣಗಳ ಪ್ರಮಾಣದಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಸಹಜ ಪ್ರಮಾಣದಲ್ಲಿದೆ. ಬಾಹ್ಯ ವಿಕಿರಣ ಪರಿಣಾಮವು ಬೀರಿಲ್ಲ ಎಂದು ಗ್ರೊಸ್ಸಿ ತಿಳಿಸಿದರು. ಕೇಂದ್ರದ ಮೇಲೆ ದಾಳಿ ನಡೆಯುವ ಕುರಿತು ಯಾವುದೇ ಮುನ್ಸೂಚನೆ ಇರಲಿಲ್ಲ ಎಂದು ಐಎಇಎ ಪ್ರಕಟಣೆಯಲ್ಲಿ ತಿಳಿಸಿದೆ. ನಟಾನ್ಜ್ ಕೇಂದ್ರದ ಮೇಲೆ ಇಸ್ರೇಲ್ ಮೇಲೆ ದಾಳಿ ನಡೆಸಿರು ವುದನ್ನು ಕಟುವಾಗಿ ಖಂಡಿಸಿ, ಅದಕ್ಕೆ ಜವಾಬ್ದಾರರನ್ನಾಗಿ ಮಾಡಬೇಕು ಎಂದು ಐಎಇಎನ ಇರಾನ್ ರಾಯಭಾರಿ ರೆಜಾ ನಜಾಫಿ ತಿಳಿಸಿದ್ದಾರೆ.

ಮೈಸೂರಿನ ಮಣಿಪಾಲ ಆಸ್ಪತ್ರೆಯಿಂದ ಮಿದುಳಿನ ಆರೋಗ್ಯ, ನರಕೋಶದ ಆರೈಕೆ ಕುರಿತು ಕಾರ್ಯಕ್ರಮ



ಮೈಸೂರಿನ ಮಣಿಪಾಲ ಆಸ್ಪತ್ರೆಯಲ್ಲಿ 'ಮಿದುಳಿನ ಆರೋಗ್ಯ, ನರ ಕೋಶಗಳ ಆರೈಕೆ' ಕುರಿತು ಕಾರ್ಯಕ್ರಮದಲ್ಲಿ ಆಸ್ಪತ್ರೆಯ ನರಶಸ್ತ್ರ ಚಿಕಿತ್ಸೆ ಕನ್ಸಲ್ಟೆಂಟ್ ಡಾ.ಮಕ್ಸೂದ್ ಅಹಮದ್ ಮಾತನಾಡಿದರು.

ಮೈಸೂರು, ಜೂ.16– ವಿಶ್ವ ಮಿದುಳಿನ ಗೆಡ್ಡೆ ದಿನದ ಅಂಗವಾಗಿ, ಮೈಸೂರಿನ ಮಣಿಪಾಲ ಆಸ್ಪತ್ರೆಯಲ್ಲಿ 'ಮಿದುಳಿನ ಆರೋಗ್ಯ ಮತ್ತು ನರ ಕೋಶಗಳ ಆರೈಕೆ'ಯ ಕುರಿತು ಕಾರ್ಯಕ್ರಮ ಆಯೋಜಿಸಲಾಗಿತ್ತು.

ಈ ವೇಳೆ ಮಣಿಪಾಲ್ ಆಸ್ಪತ್ರೆಯ ನರಶಸ್ತ್ರ ಚಿಕಿತ್ಸೆ ಕನ್ಸಲ್ಟೆಂಟ್ ಡಾ. ಎ.ಆರ್. ಮಕ್ಸೂದ್ ಅಹಮದ್, ಮೆದುಳಿನ ಗೆಡ್ಡೆಗಳನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚುವುದು ಮತ್ತು ಅವುಗಳ ನಿರ್ವಹಣೆಗಾಗಿ ಸೂಕ್ತ ವೈದ್ಯಕೀಯ ಮಧ್ಯಸ್ಥಿಕೆ ಎಷ್ಟು ಮುಖ್ಯ ಎಂಬುದರ ಕುರಿತು ಸಭಿಕರನ್ನು ಉದ್ದೇಶಿಸಿ ಮಾತನಾಡಿದರು. ಮೆದುಳಿನ ಗೆಡ್ಡೆಗಳು ಇತರ ಆರೋಗ್ಯ ಸಮಸ್ಯೆಗಳಂತೆ ಆಗಾಗ್ಗೆ ಕಂಡುಬರದಿದ್ದರೂ, ಮೆದುಳಿನ ನರಕೋಶಗಳು ಮತ್ತು ಒಟ್ಟಾರೆ ನರಮಂಡಲದ ಕಾರ್ಯನಿರ್ವಹಣೆಯ ಮೇಲೆ ಅವುಗಳ ಪ್ರಭಾವದಿಂದಾಗಿ ಅವುಗಳ ಪರಿಣಾಮಗಳು ಗಮನಾರ್ಹವಾಗಿರಬಹುದು ಎಂದು ಅವರು ಒತ್ತಿ ಹೇಳಿದರು.

ಮೆದುಳಿನ ಗೆಡ್ಡೆಗಳ ಬಗ್ಗೆ ಕೆಲವು ಸಾಮಾನ್ಯ ತಪ್ಪುಗ್ರಹಿಕೆಗಳಿವೆ. ಆದರೆ ಆರಂಭಿಕ ಹಂತದಲ್ಲಿಯೇ ಗುರುತಿಸಿದರೆ ಇವುಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಬಹುದು. ನಿರಂತರ ತಲೆನೋವು, ದೃಷ್ಟಿ ಅಡಚಣೆಗಳು ಅಥವಾ ವ್ಯಕ್ತಿತ್ವ (ಸ್ವಭಾವ ಹಾಗೂ ನಡುವಳಿಕೆಯಲ್ಲಿ) ಬದಲಾವಣೆಗಳಂತಹ ಎಚ್ಚರಿಕೆ ಚಿಹ್ನೆಗಳ ಅರಿವು ನಿರ್ಣಾಯಕವಾಗಿದೆ. ಮಣಿಪಾಲ ಆಸ್ಪತ್ರೆಯಲ್ಲಿ, ಮೆದುಳಿನ ಗೆಡ್ಡೆಗಳ ಚಿಕಿತ್ಸೆಯ ಉತ್ತಮ ಫಲಿತಾಂಶಗಳು ಮತ್ತು ಜೀವನದ ಗುಣಮಟ್ಟಕ್ಕೆ ಸಕಾಲಿಕ ಹಸ್ತಕ್ಷೇಪ ಮತ್ತು ಬಹುಶಿಸ್ತೀಯ ವಿಧಾನವು ಪ್ರಮುಖವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮೆದುಳಿನ ಗೆಡ್ಡೆಗಳ ವಿಧಗಳು, ಅವುಗಳ ಸೂಚನೆಗಳು ಮತ್ತು ಅಭಿವ್ಯಕ್ತಿಗಳು ಮತ್ತು ಚಿಕಿತ್ಸಾ ವಿಧಾನಗಳಲ್ಲಿನ ಇತ್ತೀಚಿನ ಪ್ರಗತಿಯ ಕುರಿತು ಸಮಗ್ರ ಚರ್ಚೆ ನಡೆಯಿತು.

ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಸಮಗ್ರ ಆರೈಕೆ, ರೋಗಿಗಳು ಮತ್ತು ಅವರ ಕುಟುಂಬಗಳಿಗೆ ಸಹಾಯಕ ಚಿಕಿತ್ಸೆಗಳು, ಪುನರ್ವಸತಿ ಮತ್ತು ಮಾನಸಿಕ ಬೆಂಬಲದ ಮೌಲ್ಯಗಳ ಮಹತ್ವದ ಬಗ್ಗೆಯೂ ಕಾರ್ಯಕ್ರಮದಲ್ಲಿ ಚರ್ಚಿಸಲಾಯಿತು.

ಚಾ.ಬೆಟ್ಟದಲ್ಲಿ ಮೂಲಸೌಕರ್ಯಕ್ಕೆ ಆಗ್ರಹಿಸಿ, ಸೇವಾ ಶುಲ್ಕ ಏರಿಕೆ ಖಂಡಿಸಿ ಪ್ರತಿಭಟನೆ

ಮೈಸೂರು,ಜೂ.16(ಎಂಟಿವೈ)– ಚಾಮುಂಡಿಬೆಟ್ಟದಲ್ಲಿ ಮೂಲ ಸೌಲಭ್ಯ ಕಲ್ಪಿಸಲು ಆದ್ಯತೆ ನೀಡದೇ ದೇವಾಲಯದ ಸೇವಾ ಶುಲ್ಕ ಹೆಚ್ಚಳ ಮಾಡಲಾಗಿದೆ ಎಂದು ಆರೋಪಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಪ್ರತಿಭಟನೆ ಮಾಡಿದರು.



ಚಾಮುಂಡಿಬೆಟ್ಟದಲ್ಲಿ ಮೂಲ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಸೋಮವಾರ ಪ್ರತಿಭಟನೆ ನಡೆಸಿದರು.

ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಸೋಮವಾರ ಬೆಳಗ್ಗೆ ಪ್ರತಿಭಟನೆ ನಡೆಸಿದ ಕರ್ನಾಟಕ ಸೇನಾಪಡೆ ಕಾರ್ಯಕರ್ತರು, ಚಾಮುಂಡಿಬೆಟ್ಟದ ನಿವಾಸಿಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳದ ಬೆಟ್ಟದ ಪ್ರಾಧಿಕಾರ ಚಾಮುಂಡೇಶ್ವರಿ ದೇವಿಯ ಸೇವಾ ಶುಲ್ಕವನ್ನು ಏಕಾಏಕಿ ಏರಿಕೆ ಮಾಡಿರುವುದು ಖಂಡನೀಯ. ಚಾಮುಂಡಿಬೆಟ್ಟದಲ್ಲಿ ಕುಡಿಯುವ ನೀರು ಸರಿಯಾಗಿ ಪೂರೈಕೆಯಾಗುತ್ತಿಲ್ಲ. ಇದರಿಂದ ಅಲ್ಲಿನ ಸ್ಥಳೀಯ ನಿವಾಸಿಗಳು ಪರದಾಡುತ್ತಿದ್ದಾರೆ. ಹಲವು ವರ್ಷಗಳ ಹಿಂದೆಯೇ ಆರಂಭವಾದ ಪೈಪ್‌ಲೈನ್ ಕಾಮಗಾರಿ ಇನ್ನೂ ಪೂರ್ಣವಾಗಿಲ್ಲ. ಬೆಟ್ಟಕ್ಕೆ ಆಗಮಿಸುವ ಪ್ರವಾಸಿಗರಿಗೆ ಸರಿಯಾದ ಮೂಲಸೌಕರ್ಯಗಳೇ ಇಲ್ಲ. ಶೌಚಾಲಯದಲ್ಲಿ 5, 10 ರೂ. ವಸೂಲಿ ಮಾಡಲಾಗುತ್ತಿದೆ. ಇದನ್ನು ಉಚಿತ ಮಾಡಬೇಕು. ಆಷಾಢದಲ್ಲಿ ಬೆಟ್ಟಕ್ಕೆ ಲಕ್ಷಾಂತರ ಭಕ್ತರು ಬರುವುದರಿಂದ ಕೂಡಲೇ ಮೂಲಸೌಕರ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಹಣ ಪೂರೈಸಲಾಗದೆ ಚಾಮುಂಡೇಶ್ವರಿ ದೇವಸ್ಥಾನದ ಸೇವಾ ಶುಲ್ಕವನ್ನು 300 ರೂ ನಿಂದ 550 ರೂಗೆ ಏರಿಸಿದೆ. ಈ ವರ್ಷ ಆಷಾಢ ಶುಕ್ರವಾರದ ವಿಶೇಷ ದರ್ಶನಕ್ಕಾಗಿ 2000 ರೂ ಟಿಕೆಟ್ ಮಾಡಿರುವುದು ಖಂಡನೀಯ. ಕೂಡಲೇ 2000 ರೂ ಟಿಕೆಟ್ ರದ್ದುಗೊಳಿಸಿ, ಸೇವಾ ಶುಲ್ಕವನ್ನು ಯಥಾ ಸ್ಥಿತಿಗೆ ತರಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಪ್ರಜೀಶ್.ಪಿ, ಗೋಲ್ಡ್ ಸುರೇಶ್, ಲಕ್ಷ್ಮೀದೇವಿ, ಪ್ರಭುಶಂಕರ್, ಶಿವಲಿಂಗಯ್ಯ, ಕೇಬಲ್ ರಮೇಶ್, ಸಿಂಧುವಳ್ಳಿ ಶಿವಕುಮಾರ್, ಕೃಷ್ಣೇಗೌಡ, ಬೋಗಾದಿ ಸಿದ್ದೇಗೌಡ, ಲಕ್ಷ್ಮಿ, ನೇಹಾ, ಹನುಮಂತಯ್ಯ, ಭಾಗ್ಯಮ್ಮ ಸೇರಿದಂತೆ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಸಾಮಾನ್ಯರಿಗೆ ಆಯುರ್ವೇದ ಆರೋಗ್ಯ ಅರಿವು ಕಾರ್ಯಕ್ರಮ



ಮೈಸೂರಲ್ಲಿ ನಡೆದ 'ಜನಸಾಮಾನ್ಯರಿಗೆ ಆಯುರ್ವೇದ ಆರೋಗ್ಯ ಅರಿವು' ಕಾರ್ಯಕ್ರಮದಲ್ಲಿ ಡಾ.ಭವ್ಯಾ ಗೋಖಲೆ ಮಾತನಾಡಿದರು.

ಮೈಸೂರು: ದಂಪತಿ ಮಕ್ಕಳನ್ನು ಪಡೆಯುವ ಮೊದಲು ತಮ್ಮ ಶಾರೀರಿಕ, ಮಾನಸಿಕ ಆರೋಗ್ಯವನ್ನು ಸದೃಢಪಡಿಸಿಕೊಳ್ಳಬೇಕು ಎಂದು ಡಾ.ಭವ್ಯಾ ಗೋಖಲೆ ಸಲಹೆ ನೀಡಿದರು.

ಬೆಂಗಳೂರಿನ ಆಯುರ್ವೇದ ಅಕಾಡೆಮಿ ಹಾಗೂ ಇಲ್ಲಿನ ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘದ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ 'ಧಾತ್ರಿ' ಜನ ಸಾಮಾನ್ಯರಿಗೆ ಆಯುರ್ವೇದ ಆರೋಗ್ಯ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು.

ಆಯುರ್ವೇದಲ್ಲಿಯ ಆರೋಗ್ಯದ ಅರಿವು ಮೂಡಿಸುವ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗಿಯಾಗಬೇಕು. ಅಲ್ಲದೆ ಆರೋಗ್ಯಕ್ಕೆ ಪಂಚಕರ್ಮ ಚಿಕಿತ್ಸೆಯು ತುಂಬಾ ಸಹಕಾರಿಯಾಗುತ್ತದೆ ಎಂದರು.

ಡಾ.ದೀಪಿಕಾ ಹಾಗೂ ಡಾ.ಪ್ರಶಾಂತ್ ಗೋಖಲೆ ಉಪನ್ಯಾಸ ನೀಡಿ ಮಹಿಳೆಯರು ಗರ್ಭಧಾರಣೆಯ ವೇಳೆ ಆರೋಗ್ಯವನ್ನು ಹೆಚ್ಚಿನದಾಗಿ ಕಾಪಾಡಿಕೊಳ್ಳಬೇಕು. ನಿರಂತರ ನಿತ್ಯದ ಚಟುವಟಿಕೆಗಳೊಂದಿಗೆ ಕ್ರಿಯಾಶೀಲತೆ, ಧೈರ್ಯ ಹೊಂದಿರಬೇಕು. ಅಲ್ಲದೆ ಆಹಾರದಲ್ಲಿ ವಿವಿಧ ಬೇಳೆಕಾಳುಗಳನ್ನು ಉಪಯೋಗಿಸಬೇಕು ಎಂದು ಕಿವಿಮಾತು ಹೇಳಿದರು.

ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘದ ಕಾರ್ಯದರ್ಶಿ ಸಂಧ್ಯಾ ರವಿ, ಡಾ.ಕೀರ್ತಿ, ಡಾ.ರಶ್ಮಿರಾಣಿ, ಪ್ರಜೀವಾ ಆಯುರ್ವೇದ ಮಾಸಪತ್ರಿಕೆ ಸಂಪಾದಕ ಶಿವಕುಮಾರ್, ಮೈಸೂರು ಚಿತ್ಪಾವನ ಸಂಘದ ಅಧ್ಯಕ್ಷ ದಿನೇಶ್ ಚಿಪೂಣಕರ್ ಭಾಗವಹಿಸಿದ್ದರು.

ಅರ್ಜಿ ಆಹ್ವಾನ

ಮೈಸೂರು: 2025–26ನೇ ಸಾಲಿಗೆ ಮೀನುಗಾರಿಕೆ ಇಲಾಖೆ ಜಿಲ್ಲಾ ವಲಯ, ರಾಜ್ಯ ವಲಯ ಯೋಜನೆ, ವಿಶೇಷ ಘಟಕ ಯೋಜನೆ, ಗಿರಿಜನ ಉಪ ಯೋಜನೆಗಳಡಿ ಮೀನುಗಾರರಿಗೆ ಅಗತ್ಯವಿರುವ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ, ಮೀನುಮರಿ ಖರೀದಿಗೆ ಸಹಾಯಧನ, ಕೆರೆ ಅಂಚಿನಲ್ಲಿ ಕೊಳ ನಿರ್ಮಾಣಕ್ಕೆ ಸಹಾಯಧನ, ಮೀನು ಮಾರಾಟಕ್ಕೆ ಮತ್ಸ್ಯವಾಹಿನಿ ಸಹಾಯಧನ ಯೋಜನೆಗಳಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅರ್ಹ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಜುಲೈ 30 ಕೊನೆಯ ದಿನ. ಮಾಹಿತಿಗಾಗಿ ಜಿಲ್ಲಾ ಪಂಚಾಯತ್‌ನ ಮೀನುಗಾರಿಕೆ ಉಪನಿರ್ದೇಶಕರ ಕಚೇರಿ, ತಾಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮೈಸೂರು, ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ, ಕೆ.ಆರ್. ನಗರ, ನಂಜನಗೂಡು ಹಾಗೂ ತಿ.ನರಸೀಪುರ ಕಚೇರಿಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್‌ನ ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ಆದಿಚುಂಚನಗಿರಿ ಒಕ್ಕಲಿಗ ಮಹಿಳಾ ಸಮಾಜದಿಂದ ಪರಿಸರ ದಿನಾಚರಣೆ



ಮೈಸೂರಿನ ಕುವೆಂಪುನಗರದ ಆದಿಚುಂಚನಗಿರಿ ಒಕ್ಕಲಿಗ ಮಹಿಳಾ ಸಮಾಜದ ವತಿಯಿಂದ ವಿಶ್ವ ಪರಿಸರ ದಿನ ಆಚರಿಸಲಾಯಿತು. ಮೈಸೂರು ಸಹಕಾರ ನಿಯಮಿತ ಮಹಿಳಾ ಬ್ಯಾಂಕ್ ನಿರ್ದೇಶಕಿ ಸುಶೀಲ ನಂಜಪ್ಪ, ಅಧ್ಯಕ್ಷೆ ಸವಿತಾಗೌಡ, ಮೈಸೂರು ದಿ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಪ್ರಮೀಳಾ, ರಾಜೇಶ್ವರಿ ನಾಗರಾಜ, ಪದಾಧಿಕಾರಿಗಳಾದ ಲತಾ ರಮೇಶ, ಲತಾ ಮಹೇಶ, ಕನ್ಯಾ, ಲಕ್ಷೀ ಚಿಕ್ಕಣ್ಣ, ಲೀಲಾ ಗಂಗಾಧರ, ಲೀಲಾವತಿ, ಲಕ್ಷೀ, ಭಾರತಿ ಉಪಸ್ಥಿತರಿದ್ದರು.

ಹೂಟಗಳ್ಳಿ ಸರ್ಕಾರಿ ಪ್ರೌಢಶಾಲೆಯ ಭೋಜನಾಲಯಕ್ಕೆ ತಡೆಗೋಡೆ

ಮೈಸೂರು, ಜೂ. 16– ಹೂಟಗಳ್ಳಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಸುಮಾರು 300 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ಮಧ್ಯಾಹ್ನದ ಭೋಜನಕ್ಕೆ ಭೋಜನಾಲಯ ಇದ್ದು ಆದರೆ ನಾಲ್ಕು ಕಡೆ ತಡೆಗೋಡೆ ಇಲ್ಲದೆ ಹೊರಗಿನಿಂದ ಜೋರಾಗಿ ಬೀಸುವ ಗಾಳಿಯಿಂದ ಧೂಳು ಮಕ್ಕಳು ಸೇವಿಸುವ ಊಟದ ತಟ್ಟೆಗೆ ಬೀಳುತ್ತಿತ್ತು. ಶಾಲೆ ಮುಖ್ಯ ಶಿಕ್ಷಕರು ಲಯನ್ಸ್ ಅಂಬಾಸಿಡರಸ್ ಸಂಸ್ಥೆಯ ಲಯನ್ ಟಿ.ಹೆಚ್.ವೆಂಕಟೇಶ್ ಅವರಿಗೆ ಮನವಿ ಮಾಡಿ ಭೋಜನಾ ವಲಯದ ನಾಲ್ಕು ಕಡೆ ತಡೆಗೋಡೆಯನ್ನು ನಿರ್ಮಿಸಿ ಕೊಡುವಂತೆ ಮನವಿ ಮಾಡಿದ್ದರು. ಆ ಮನವಿಗೆ ಸ್ಪಂದಿಸಿದ ಲಯನ್ ಟಿ.ಹೆಚ್.ವೆಂಕಟೇಶ್ ಅವರು 35000 ರೂ. ವೆಚ್ಚದ ಪಾಲಿ ಕಾರ್ಬೋನೇಟ್ ಶೀಟ್‌ಗಳನ್ನು ಅಳವಡಿಸಿ ಕೊಟ್ಟಿದ್ದು, ಇದರಿಂದ ಶಾಲೆಯ ವಿದ್ಯಾರ್ಥಿಗಳು ಸಾವಕಾಶವಾಗಿ ಊಟ ಮಾಡಲು ಸಹಕಾರಿಯಾಗಿದೆ. ಇದಕ್ಕಾಗಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಪಿ.ವಿ.ಸಂಗೀತಾ ಕೃತಜ್ಞತೆ ಸಲ್ಲಿಸಿದ್ದಾರೆ.

ನ್ಯಾಷನಲ್ ಐಕಾನ್ ಮಾಡೆಲ್ ಹಂಟ್ ಫ್ಯಾಷನ್ ಶೋ ಸ್ಪರ್ಧೆಯಲ್ಲಿ 6 ವಿಜೇತರು

ಮೈಸೂರು,ಜೂ.16(ಎಂಟಿವೈ)–ಮೈಸೂರಿನ ತಿಬ್ಬಾಸ್ ಗ್ರೂಪ್ ವತಿಯಿಂದ ಆಯೋಜಿಸಿದ್ದ ನ್ಯಾಷನಲ್ ಐಕಾನ್ ಮಾಡೆಲ್ ಹಂಟ್–2025 ಸೀಸನ್–5ರ ಫ್ಯಾಷನ್ ಶೋ ಸ್ಪರ್ಧೆಯಲ್ಲಿ ವಿವಿಧ ವಿಭಾಗಗಳಲ್ಲಿ ಆರು ಮಂದಿ ವಿಜೇತರಾಗಿದ್ದಾರೆ ಎಂದು ತಿಬ್ಬಾಸ್ ಸಂಸ್ಥೆಯ ಡಿ.ಸಿ.ನಾಗೇಶ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಿಬ್ಬಾಸ್ ಗ್ರೂಪ್ ಡಾ.ವಿಷ್ಣುವರ್ಧನ್ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ರಾಷ್ಟ್ರಮಟ್ಟದ ಫ್ಯಾಷನ್ ಶೋ ಸ್ಪರ್ಧೆಯಲ್ಲಿ ವಿವಿಧ ರಾಜ್ಯದ ಮಾಡೆಲ್‌ಗಳು ಆಗಮಿಸಿದ್ದರು. ದೇಶದ ವಿವಿಧ ಭಾಗದ ಉಡುಪು ಧರಿಸಿ ರ್‍ಯಾಂಪ್ ಮೇಲೆ ಹೆಜ್ಜೆಹಾಕುವ ಮೂಲಕ ರೂಪದರ್ಶಿಗಳು ಗಮನ ಸೆಳೆದರು. ಮಿಸ್ಟರ್ ಏಷ್ಯಾ ಪ್ರಶಸ್ತಿ ಪಡೆದಿರುವ ಶರ್ವಿನ್ ಆರ್ಯ ಹಾಗೂ ರೂಪದರ್ಶಿ ಲೂಸಿ ಸರೇರಿಯ ತೀರ್ಪುಗಾರರಾಗಿದ್ದರು. ಪ್ರಿನ್ಸ್ ವಿಭಾಗದಲ್ಲಿ ಹಾಸನದ ಋತ್ವಿಕ್, ಪ್ರಿನ್ಸಸ್ ವಿಭಾಗದಲ್ಲಿ ಮೈಸೂರಿನ ಅನ್ವಿಷ, ಬೆಂಗಳೂರಿನ ಮಧುಕುಮಾರ್ ಅವರಿಗೆ ಮಿಸ್ಟರ್, ಮೈಸೂರಿನ ದಾಕ್ಷಾಯಿಣಿ ಅವರಿಗೆ ಮಿಸ್, ಚಿತ್ರದುರ್ಗದ ವಿದ್ಯಾಶ್ರೀ ಅವರಿಗೆ ಮಿಸೆಸ್, ಕೆ.ಆರ್.ನಗರದ ಭೂಷತ್ ಅವರಿಗೆ ಮಿಸ್ ಟೀನ್ ಪ್ರಶಸ್ತಿ ಪಡೆದುಕೊಂಡರು. ಈ ಸ್ಪರ್ಧೆಗೆ ವೇದ್ಸ್ ಮೇಕ್‌ವೋವರ್ ಸ್ಟುಡಿಯೋ ವತಿಯಿಂದ ಮೇಕ್‌ವೋವರ್ ಆಗಿ, ಶೋ ಕೋರಿಯೋಗ್ರಫಿಯಾಗಿ ಶಿವಾನಿ ವೇದ ಕಾರ್ಯನಿರ್ವಹಿಸಿದರು ಎಂದು ವಿವರಿಸಿದರು.

ಸಾಮಾಜಿಕ, ಶೈಕ್ಷಣಿಕ ಮರು ಸಮೀಕ್ಷೆಗೆ ಸ್ವಾಗತ

ಮೈಸೂರು, ಜೂ.16– ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ, ಜಾತಿ ಸಮೀಕ್ಷೆಗೆ 10 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಮರು ಸಮೀಕ್ಷೆಗೆ ರಾಜ್ಯ ಸರಕಾರ ತೀರ್ಮಾನ ಕೈಗೊಂಡಿರುವುದನ್ನು ಸ್ವಾಗತಿಸುವುದಾಗಿ ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿದ ಅವರು, ಕಾಂತರಾಜು ನೇತೃತ್ವದಲ್ಲಿ ಸಿದ್ಧಪಡಿಸಿದ ಸಾಮಾಜಿಕ ಮತ್ತು ಶೈಕ್ಷಣಿಕ ವರದಿ ಹಾಗೂ ಜಯಪ್ರಕಾಶ್ ಹೆಗ್ಡೆ ನೇತೃತ್ವದಲ್ಲಿ ಸರಕಾರಕ್ಕೆ ಸಲ್ಲಿಸಲಾದ ಪರಿಷ್ಕೃತ ವರದಿಯ ಶಿಫಾರಸುಗಳು 10 ವರ್ಷಗಳ ಹಿಂದಿನ ದತ್ತಾಂಶಗಳನ್ನು ಆಧರಿಸಿವೆ. ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗದ ಪ್ರಕಾರ 10 ವರ್ಷಗಳಿಗೊಮ್ಮೆ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಾಡಬೇಕಿದೆ ಎಂದರು.



ರವಿ

ಪಾರದರ್ಶಕ ಸಮೀಕ್ಷೆ: ಈ ಸಮೀಕ್ಷೆಯನ್ನು ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್‌ದಾಸ್ ನೇತೃತ್ವದ ಆಯೋಗವು 90 ದಿನದ ಒಳಗಾಗಿ ಡಿಜಿಟಲೀಕರಣ ಮೂಲಕ ಪೂರ್ಣಗೊಳಿಸಿ, ಸರಕಾರಕ್ಕೆ ವರದಿ ಸಲ್ಲಿಸಲಿದೆ. ಪ್ರತಿಯೊಬ್ಬರು ತಮ್ಮ ಜಾತಿ ಮತ್ತು ಉಪಜಾತಿ ಕಡ್ಡಾಯವಾಗಿ ದಾಖಲಿಸಬೇಕು. ಇದರಿಂದ ಸರಕಾರ ಎಲ್ಲರಿಗೂ ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಶಕ್ತಿ ತುಂಬಲು ಸಾಧ್ಯವಾಗಲಿದೆ ಎಂದರು.

ಪ್ರಮೋದ್‌ಕುಮಾರ್‌ಗೆ ಪಿಹೆಚ್.ಡಿ ಪದವಿ



ಮೈಸೂರು, ಜೂ.16– ಡಾ. ಕೆ.ವಿ. ಹರೀಶ್ ಪ್ರಶಾಂತ್ ಅವರ ಮಾರ್ಗದರ್ಶನದಲ್ಲಿ ಪಿ. ಪ್ರಮೋದ್ ಕುಮಾರ್ ಅವರು ಜೈವಿಕ ರಸಾಯನಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ವಿಶ್ವ ಹಿರಿಯರ ಮೇಲಿನ ದೌರ್ಜನ್ಯ ಜಾಗೃತಿ ದಿನಾಚರಣೆ; ಕಾನೂನು ಅರಿವು

ಮೈಸೂರು, ಜೂ. 16– ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮೈಸೂರು ಜೆಎಸ್‌ಎಸ್ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಮೈಸೂರು ಹಾಗೂ ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳ ಸಹಯೋಗದಲ್ಲಿ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸಭಾಂಗಣ ಜೆಎಸ್‌ಎಸ್ ಹಳೆ ಆಸ್ಪತ್ರೆ ಆವರಣದಲ್ಲಿ ವಿಶ್ವ ಹಿರಿಯರ ಮೇಲಿನ ದೌರ್ಜನ್ಯ ಜಾಗೃತಿ ದಿನಾಚರಣೆ ಮತ್ತು ಕಾನೂನು ಅರಿವು ಕಾರ್ಯಕ್ರಮ ಏರ್ಪಡಿಸಲಾಗಿತ್ತು.



ಜೆಎಸ್‌ಎಸ್ ಹಳೆ ಆಸ್ಪತ್ರೆ ಆವರಣದಲ್ಲಿರುವ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸಭಾಂಗಣದಲ್ಲಿ ಏರ್ಪಡಿಸಿದ್ದ ವಿಶ್ವ ಹಿರಿಯರ ಮೇಲಿನ ದೌರ್ಜನ್ಯ ಜಾಗೃತಿ ದಿನಾಚರಣೆ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅಮರ್‌ನಾಥ್ ಉದ್ಘಾಟಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಕೆ.ಅಮರ್‌ನಾಥ್ ಕಾರ್ಯ ಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಹಿರಿಯ ನಾಗರಿಕರಿಗೆ ಸರ್ಕಾರ ಹಲವಾರು ಕಾನೂನುಗಳನ್ನು ನೀತಿಗಳನ್ನು ಜಾರಿಗೆ ತಂದಿದ್ದು ಹಿರಿಯ ನಾಗರಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸುತ್ತಾ ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯಿದೆ 2007ರ ಬಗ್ಗೆ ಸಂಕ್ಷಿಪ್ತವಾಗಿ ಮಾಹಿತಿ ನೀಡಿ ಹಿರಿಯ ನಾಗರಿಕರಿಗೆ ಯಾವುದೇ ರೀತಿಯ ಕಾನೂನಿನ ಸಹಾಯಬೇಕಿದ್ದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಭೇಟಿ ನೀಡಿ ಎಂದರು.

ಸಾಮಾನ್ಯ ಅಭಿವೃದ್ಧಿ ವಿಭಾಗ ನಿರ್ದೇಶಕ ಕೆ.ಎಲ್.ರೇವಣ್ಣಸ್ವಾಮಿ ಮಾತನಾಡಿ, 60 ವರ್ಷ ತುಂಬಿದ ಹಿರಿಯ ನಾಗರಿಕರಿಗಾಗಿ ಸರ್ಕಾರಗಳು ಹಲವಾರು ಯೋಜನೆಗಳನ್ನು ಜಾರಿಗೆ ತಂದಿವೆ. ಸಹಾಯವಾಣಿ, ವೃದ್ಧಾಶ್ರಮ ಹಾಗೂ ಇನ್ನಿತರ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಹಿರಿಯ ನಾಗರಿಕರು ಯಾವಾಗಲು ಚಟುವಟಿಕೆಯಿಂದ ಇರಬೇಕು. ಆಗ ಮಾತ್ರ ಆರೋಗ್ಯದಿಂದ ಇರಲು ಸಾಧ್ಯ. ಯಾವುದೇ ರೀತಿಯ ಚಿಂತೆಗಳನ್ನು ಹಚ್ಚಿಕೊಳ್ಳದೆ ಜೀವನ ನಿರ್ವಹಿಸಿದರೆ ಮಾತ್ರ ನೆಮ್ಮದಿ ಸಾಧ್ಯ ಎಂದು ಹಿರಿಯ ನಾಗರಿಕರಿಗೆ ಕಿವಿಮಾತು ಹೇಳಿದರು.

ಸಹಾಯಕ ಕಾನೂನು ನೆರವು ಅಭಿರಕ್ಷಕಿ ಎನ್.ಗೀತಾ ಮಾತನಾಡಿ, ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯಿದೆ 2007ರ ಬಗ್ಗೆ ವಿವರವಾದ ಮಾಹಿತಿ ನೀಡಿದರು. ಈ ಕಾಯಿದೆಯಲ್ಲಿ ಹಿರಿಯ ನಾಗರಿಕರು ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಿರ್ವಹಣಾ ನ್ಯಾಯಮಂಡಳಿ ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮೇಲ್ಮನವಿ ಪ್ರಾಧಿಕಾರಗಳನ್ನು ಸ್ಥಾಪಿಸಲಾಗಿದೆ. ಇವುಗಳು ಅವಲಂಬಿತರಿಂದ ಹಿರಿಯರಿಗೆ ಅವಶ್ಯವಾದ ಜೀವನಾಂಶ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಿಕೊಡಲು ಸಹಕರಿಸುತ್ತವೆ. ಹಿರಿಯರಿಗೆ ಇನ್ನು ಹೆಚ್ಚಿನ ನೆರವು ಹಾಗೂ ಮಾಹಿತಿ ಬೇಕಿದ್ದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಉಚಿತ ಕಾನೂನು ನೆರವು ಸಹಾಯವಾಣಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸಂಪರ್ಕಿಸಲು ತಿಳಿಸಿದರು ಹಾಗೂ ಹಿರಿಯ ನಾಗರಿಕರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಶಂಕರಗೌಡ ಪಾಟೀಲ, ಸರ್ಕಾರದಿಂದ ಹಿರಿಯ ನಾಗರಿಕರಿಗೆ ಇರುವ ಯೋಜನೆಗಳು, ಕಾರ್ಯಕ್ರಮಗಳು ಮತ್ತು ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಹಿರಿಯ ನಾಗರಿಕರು ಕೇಳಿದ ಪ್ರಶ್ನೆಗಳಿಗೆ ಈ ದಿನವೇ ಸೂಕ್ತ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

ದೇಶ – ವಿದೇಶ

ಜಿ20 ಶೆರ್ಪಾ ಹುದ್ದೆಗೆ ಅಮಿತಾಬ್ ಕಾಂತ್ ರಾಜೀನಾಮೆ



ನವದೆಹಲಿ: 45 ವರ್ಷಗಳ ಸರ್ಕಾರಿ ಸೇವೆಯಲ್ಲಿ ವಿವಿಧ ಹುದ್ದೆಗಳನ್ನು ನಿರ್ವಹಿಸಿದ್ದ ಅಮಿತಾಭ್ ಕಾಂತ್ ಅವರು ಸೋಮವಾರ ಭಾರತದ ಜಿ20 ಶೆರ್ಪಾ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ.

ಕೇರಳ ಕೇಡರ್‌ನ 1980ನೇ ಬ್ಯಾಚ್‌ನ ನಿವೃತ್ತ ಐಎಎಸ್ ಅಧಿಕಾರಿಯಾಗಿರುವ ಅಮಿತಾಬ್ ಕಾಂತ್ ಅವರನ್ನು ಭಾರತವು ಜಿ20 ಅಧ್ಯಕ್ಷತೆ ವಹಿಸಿಕೊಳ್ಳುವ ಕೆಲವೇ ತಿಂಗಳುಗಳ ಮೊದಲು ಜುಲೈ 2022 ರಲ್ಲಿ ಭಾರತದ ಜಿ20 ಶೆರ್ಪಾ ಆಗಿ ನೇಮಿಸಲಾಗಿತ್ತು.

'ನನ್ನ ಹೊಸ ಪ್ರಯಾಣ' ಶೀರ್ಷಿಕೆಯ ಲಿಂಕ್ಡ್‌ಇನ್ ಪೋಸ್ಟ್‌ನಲ್ಲಿ ಅಮಿತಾಬ್ ಕಾಂತ್, 45 ವರ್ಷಗಳ ಸಮರ್ಪಿತ ಸರ್ಕಾರಿ ಸೇವೆಯ ನಂತರ, ನಾನು ಹೊಸ ಅವಕಾಶಗಳನ್ನು ಸ್ವೀಕರಿಸಲು ಮತ್ತು ಜೀವನದಲ್ಲಿ ಅಧ್ಯಾಯವನ್ನು ಆರಂಭಿಸಲು ನಿರ್ಧರಿಸಿದ್ದೇನೆ. ಜಿ20 ಶೆರ್ಪಾ ಹುದ್ದೆಗೆ ನನ್ನ ರಾಜೀನಾಮೆ ಸ್ವೀಕರಿಸಿದ್ದಕ್ಕಾಗಿ ಮತ್ತು ಹಲವಾರು ಅಭಿವೃದ್ಧಿ ಉಪಕ್ರಮಗಳನ್ನು ಮುನ್ನಡೆಸಲು ಮತ್ತು ಭಾರತದ ಬೆಳವಣಿಗೆ, ಅಭಿವೃದ್ಧಿ ಮತ್ತು ಪ್ರಗತಿಗೆ ಕೊಡುಗೆ ನೀಡಲು ನನಗೆ ಅವಕಾಶ ನೀಡಿದ್ದಕ್ಕಾಗಿ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ನಾನು ಕೃತಜ್ಞನಾಗಿದ್ದೇನೆ ಎಂದು ಪೋಸ್ಟ್ ಮಾಡಿದ್ದಾರೆ.

ಮೊರಾದಾಬಾದ್‌ನಲ್ಲಿ ರೀಲ್ಸ್ ಮಾಡಲು ಹೋಗಿ ಹಾವು ಕಡಿತ

ಮೊರಾದಾಬಾದ್ (ಉತ್ತರ ಪ್ರದೇಶ): ಹಾವಿಗೆ ಮುತ್ತಿಕ್ಕುವ ರೀಲ್ಸ್ ಮಾಡುವ ಸಂದರ್ಭದಲ್ಲಿ ವ್ಯಕ್ತಿಯ ನಾಲಿಗೆಗೆ ಹಾವು ಕಚ್ಚಿರುವ ಘಟನೆ ಉತ್ತರ ಪ್ರದೇಶದ ಅಮ್ರೋಹಾ ಜಿಲ್ಲೆಯ ಹೈಬತ್‌ಪುರದಲ್ಲಿ ನಡೆದಿದೆ. ಈ ಘಟನೆ ಶುಕ್ರವಾರ ಸಂಜೆ ನಡೆದಿದೆ. ರೈತ ಜಿತೇಂದ್ರ ಕುಮಾರ್ (50) ಅವರು ಹಾವನ್ನು ಹಿಡಿದು, ಕುತ್ತಿಗೆಗೆ ಸುತ್ತಿಕೊಂಡು ನಿಧಾನವಾಗಿ ಅದರ ತಲೆಯನ್ನು ತಮ್ಮ ಬಾಯಿಯ ಬಳಿಗೆ ತಂದು ಮುತ್ತಿಕ್ಕಲು ಪ್ರಯತ್ನಿಸಿದರು. ಆಗ ಹಾವು ಕುಮಾರ್ ಅವರ ನಾಲಿಗೆಗೆ ಕಚ್ಚಿತು.



ಈ ದೃಶ್ಯವಿರುವ ವಿಡಿಯೋಯೊಂದು ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕವಾಗಿ ಹರಿದಾಡಿದೆ.

ಹಾವು ಕಚ್ಚಿದ ತಕ್ಷಣವೇ ಅವರನ್ನು ಮೊರಾದಾಬಾದ್‌ನಲ್ಲಿರುವ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಕುಮಾರ್ ಅವರ ಸ್ಥಿತಿ ಗಂಭೀರವಾಗಿದೆ.

ಪೊಲೀಸ್ ವೇಷದಲ್ಲಿ ಬಂದು ಇಬ್ಬರು ರಾಜಕಾರಣಿಗಳ ಮೇಲೆ ಗುಂಡು ಹಾರಿಸಿದ ಹಂತಕ





ವಾಷಿಂಗ್ಟನ್: ಅಮೆರಿಕದ ಮಿನ್ನೇಸೋಟದಲ್ಲಿ ಇಬ್ಬರು ರಾಜಕಾರಣಿಗಳ ಮೇಲೆ ಹಂತಕನೊಬ್ಬ ಗುಂಡಿನ ದಾಳಿ ನಡೆಸಿರುವ ಘಟನೆ ವರದಿಯಾಗಿದೆ. ಮಿನ್ನೇಸೋಟದ ಡೆಮಾಕ್ರಟಿಕ್ ಸೆನೆಟರ್ ಜಾನ್ ಹಾಫ್‌ಮನ್ ಮತ್ತು ಡೆಮಾಕ್ರಟಿಕ್ ಪ್ರತಿನಿಧಿ ಮೆಲಿಸ್ಸಾ ಹಾರ್ಟ್‌ಮನ್ ಅವರ ಮನೆಯೊಳಗೆ ರಾತ್ರಿ ಪೊಲೀಸ್ ಅಧಿಕಾರಿಯಂತೆ ಬಂದು ಗುಂಡು ಹಾರಿಸಿದ್ದಾನೆ. ಮಿನ್ನೇಸೋಟ ಗವರ್ನರ್ ವಾಲ್ಜ್ ಅವರು ಡೆಮಾಕ್ರಟಿಕ್ ಪ್ರತಿನಿಧಿ ಮೆಲಿಸ್ಸಾ ಹಾರ್ಟ್‌ಮನ್ ಮತ್ತು ಅವರ ಪತಿ ಮೇಲೆ ಗುಂಡು ಹಾರಿಸಲಾಗಿದ್ದು, ಇದೊಂದು ರಾಜಕೀಯಪ್ರೇರಿತ ಎಂದು ಬಣ್ಣಿಸಿದ್ದಾರೆ.

ಪೊಲೀಸರು ಕೊಲೆಯ ಹಿಂದಿನ ಉದ್ದೇಶವೇನು ಮತ್ತು ಅಪರಾಧವನ್ನು ಯಾಕೆ ಮಾಡಿದ್ದಾರೆ ಎಂಬುದನ್ನು ಕಂಡುಹಿಡಿಯಲು ಪ್ರಯತ್ನಿಸುತ್ತಿದ್ದಾರೆ. ಶಂಕಿತ ವ್ಯಕ್ತಿ ಮನೆಗೆ ಪ್ರವೇಶಿಸಲು ತನ್ನನ್ನು ಪೊಲೀಸ್ ಅಧಿಕಾರಿ ಎಂದು ಬಿಂಬಿಸಿಕೊಂಡಿದ್ದ. ಮಿನ್ನೇಸೋಟದಲ್ಲಿ ನಡೆದ ಡೆಮಾಕ್ರಟಿಕ್ ನಾಯಕನ ಹತ್ಯೆಯು ಈ ಪ್ರದೇಶದ ನಾಯಕರಲ್ಲಿ ಭೀತಿ ಸೃಷ್ಟಿಸಿದೆ. ಅಮೆರಿಕದಾದ್ಯಂತ ಚುನಾಯಿತ ಪಕ್ಷದ ನಾಯಕರಿಗೆ ಈಗಾಗಲೇ ಬೆದರಿಕೆ ಇರುವಾಗಲೇ ಈ ಕೊಲೆ ನಡೆದಿದೆ. ಪೊಲೀಸ್ ಡ್ರೆಸ್‌ನಲ್ಲೇ ಸುತ್ತಾಡುತ್ತಿದ್ದ ಎಂದು ತಿಳಿದುಬಂದಿದೆ.

ರೈಲಿನ ಕಸದ ಬುಟ್ಟಿಗೆ ಬೀಡಿ ಎಸೆದ ವ್ಯಕ್ತಿ; ಪುಣೆ–ದೌಂಡ್ ರೈಲಿನಲ್ಲಿ ಬೆಂಕಿ



ಪುಣೆ: ವ್ಯಕ್ತಿಯೊಬ್ಬ ಧೂಮಪಾನ ಮಾಡಿದ ನಂತರ ಬೀಡಿಯನ್ನು ರೈಲಿನ ಕಸದ ಬುಟ್ಟಿಗೆ ಎಸೆದ ಪರಿಣಾಮ ಪುಣೆ–ದೌಂಡ್ ನಡುವೆ ಸಂಚರಿಸುತ್ತಿದ್ದ ರೈಲಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಘಟನೆಗೆ ಸಂಬಂಧಿಸಿದಂತೆ ಮಧ್ಯಪ್ರದೇಶದ 55 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ. ಸೋಮವಾರ ಬೆಳಿಗ್ಗೆ ಪುಣೆಯಿಂದ ದೌಂಡ್‌ಗೆ ಹೋಗುತ್ತಿದ್ದ ಡೀಸೆಲ್ ಎಲೆಕ್ಟ್ರಿಕ್ ಮಲ್ಟಿಪಲ್ ಯುನಿಟ್ (ಡೆಮು) ರೈಲಿನಲ್ಲಿ ಸಣ್ಣ ಬೆಂಕಿ ಕಾಣಿಸಿಕೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಕಿಯನ್ನು ತ್ವರಿತವಾಗಿ ನಂದಿಸಲಾಯಿತು. ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ ಎಂದು ತಿಳಿಸಿದ್ದಾರೆ. ಬೆಳಿಗ್ಗೆ 8 ಗಂಟೆಗೆ ಚಲಿಸುವ ದೌಂಡ್–ಪುಣೆ ಷಟಲ್ ರೈಲಿನ ಶೌಚಾಲಯದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಪ್ರಯಾಣಿಕರಲ್ಲಿ ಭೀತಿ ಉಂಟುಮಾಡಿದೆ. ಕಸದ ಬುಟ್ಟಿಯಲ್ಲಿ ಕಾಗದಗಳು ಮತ್ತು ಇತರ ಕಸವಿತ್ತು, ಅದು ಬೆಂಕಿಯನ್ನು ಹೊತ್ತಿಕೊಂಡಿತು, ಇದರ ಪರಿಣಾಮವಾಗಿ ಶೌಚಾಲಯದಿಂದ ಹೊಗೆ ಬರಲು ಕಾರಣವಾಯಿತು ಮತ್ತು ಪ್ರಯಾಣಿಕರಲ್ಲಿ ಭಯಭೀತಿ ಉಂಟಾಯಿತು. ಆ ಕೋಚ್‌ನಲ್ಲಿ ಕೆಲವೇ ಪ್ರಯಾಣಿಕರಿದ್ದರು. ಬೆಂಕಿಯನ್ನು ಬೇಗನೆ ನಂದಿಸಲಾಯಿತು, ಮತ್ತು ಅದೃಷ್ಟವಶಾತ್, ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ ಎಂದು ರೈಲ್ವೆ ಅಧಿಕಾರಿಗಳು ಹೇಳಿದ್ದಾರೆ.

ಮೂರು ದಿನದಿಂದ ನಿದ್ದೆ ಮಾಡಿಲ್ಲ

ಇರಾನ್‌ನಲ್ಲಿ ಭಾರತೀಯ ವಿದ್ಯಾರ್ಥಿ ಅಳಲು



ಟೆಹರಾನ್: ಶುಕ್ರವಾರ ಬೆಳಗಿನ ಜಾವ 2:30ಕ್ಕೆ ಜೋರಾದ ಸ್ಫೋಟಗಳ ಶಬ್ದದಿಂದ ಎಚ್ಚರಗೊಂಡು ನೆಲಮಾಳಿಗೆಗೆ ಧಾವಿಸಿದೆವು. ಅಂದಿನಿಂದ ನಮಗೆ ನಿದ್ದೆ ಬಂದಿಲ್ಲ. ದಯವಿಟ್ಟು ನಮ್ಮನ್ನು ಸ್ಥಳಾಂತರಿಸಿ ಎಂದು ಇರಾನ್‌ನಲ್ಲಿ ಸಿಲುಕಿರುವ ನೂರಾರು ಭಾರತೀಯ ವೈದ್ಯಕೀಯ ವಿದ್ಯಾರ್ಥಿಗಳಲ್ಲಿ ಒಬ್ಬರಾದ ಇಮ್ತಿಸಾಲ್ ಮೊಹಿದಿನ್ ಹೇಳಿದ್ದಾರೆ. ವಿದ್ಯಾರ್ಥಿ ಹಾಸ್ಟೆಲ್‌ಗಳು ಮತ್ತು ಅಪಾರ್ಟ್‌ಮೆಂಟ್‌ಗಳಿಂದ ಕೆಲವೇ ಕಿಲೋಮೀಟರ್‌ಗಳ ದೂರದಲ್ಲಿ ಸ್ಫೋಟಗಳು ವರದಿಯಾಗಿರುವುದರಿಂದ, ಭಯ ಹೆಚ್ಚುತ್ತಿದೆ. ಭಾರತ ಸರ್ಕಾರವು ಸಹ ವಿದ್ಯಾರ್ಥಿಗಳ ಸ್ಥಳಾಂತರಕ್ಕೆ ಇರಾನ್ ಸರ್ಕಾರಕ್ಕೆ ಮನವಿ ಮಾಡಿದೆ. ಈ ವಿಶ್ವವಿದ್ಯಾಲಯದಲ್ಲೇ 350ಕ್ಕೂ ಹೆಚ್ಚು ಭಾರತೀಯ ವಿದ್ಯಾರ್ಥಿಗಳು ದಾಖಲಾಗಿದ್ದಾರೆ ಎಂದು ಟೆಹರಾನ್‌ನ ಶಾಹಿದ್ ಬೆಹೆಶ್ತಿ ವಿವಿಯ 22 ವರ್ಷದ 3ನೇ ವರ್ಷದ ಎಂಬಿಬಿಎಸ್ ವಿದ್ಯಾರ್ಥಿ ಇಮ್ತಿಸಾಲ್ ಹೇಳಿದ್ದಾರೆ. ನಾವು ನಮ್ಮ ಅಪಾರ್ಟ್‌ಮೆಂಟ್ ನೆಲಮಾಳಿಗೆಯೊಳಗೆ ಸಿಲುಕಿಕೊಂಡಿದ್ದೇವೆ. ಪ್ರತಿರಾತ್ರಿ ಸ್ಫೋಟಗಳ ಶಬ್ದ ಕೇಳುತ್ತೇವೆ. ಒಂದು ಸ್ಫೋಟವು ಕೇವಲ 5 ಕಿ.ಮೀ ದೂರದಲ್ಲಿ ಸಂಭವಿಸಿದೆ. ನಾವು 3 ದಿನಗಳಿಂದ ನಿದ್ದೆ ಮಾಡಿಲ್ಲ ಎಂದು ಅವರು ಸುದ್ದಿಸಂಸ್ಥೆಯೊಂದಕ್ಕೆ ದೂರವಾಣಿಯಲ್ಲಿ ತಿಳಿಸಿದ್ದಾರೆ. ಇರಾನ್ ಮತ್ತು ಇಸ್ರೇಲ್ ಸಂಘರ್ಷ ತೀವ್ರಗೊಂಡಿದ್ದು, ಪರಸ್ಪರ ಡ್ರೋನ್, ಕ್ಷಿಪಣಿ ದಾಳಿ ನಡೆಸುತ್ತಿವೆ.

ನಾಪೋಕ್ಲುವಿನಲ್ಲಿ ಸಂಚಾರ ದಟ್ಟಣೆ

ನಾಪೋಕ್ಲು, ಜೂ.16(ದುಗ್ಗಳ ಸದಾನಂದ)– ಅತ್ತ ನೋಡಿದರೆ ವಾಹನ... ಇತ್ತ ನೋಡಿದರೆ ವಾಹನ... ಎತ್ತೆತ್ತ ನೋಡಿದರೂ ವಾಹನಗಳೆ ಇದೇನು ನಾವು ಅಪ್ಪಿತಪ್ಪಿ ಬೆಂಗಳೂರಿಗೆ ಬಂದಿದ್ದೇವ ಎಂದು ಕ್ಷಣಕಾಲ ಚಿಂತಿಸುವಷ್ಟರ ಮಟ್ಟಿಗೆ ಪಟ್ಟಣದಲ್ಲಿ ಟ್ರಾಫಿಕ್ ಜಾಮ್ ಆಗುತ್ತಿದ್ದರೂ ಪೋಲೀಸರು ಮಾತ್ರ ಜಡನಿದ್ದೆಯಲ್ಲಿದ್ದಾರೆ.

ರಸ್ತೆ ಇಕ್ಕೆಲಗಳಲ್ಲಿಯೂ ವಾಹನಗಳ ಸಾಲು ಸಾಲು... ರಸ್ತೆ ದಾಟಲೂ ಅಸಾಧ್ಯ, ಜನಸಾಮಾನ್ಯರು ನಡೆದಾಡಲು ಭಯಪಡುವ ಪರಿಸ್ಥಿತಿ. ಶಾಲಾ ಮಕ್ಕಳಂತೂ ಕಂಗಾಲು... ಇದು ನಾಪೋಕ್ಲುನಲ್ಲಿ ಸಂಜೆ ವೇಳೆ ಕಂಡುಬರುವ ಟ್ರಾಫಿಕ್ ಜಾಮ್ ಚಿತ್ರಣ. ಶಾಲೆ ಬಿಡುವ ವೇಳೆಗೆ ಇಲ್ಲಿ ಶಾಲಾ ವಾಹನಗಳು ಸೇರಿದಂತೆ ವಾಹನಗಳ ದಟ್ಟಣೆ ಅಧಿಕವಾಗಿರುತ್ತದೆ. ವಾಹನಗಳನ್ನು ನಿಯಂತ್ರಿಸಲು ಹರಸಾಹಸ ಪಡಬೇಕು. ಇಕ್ಕಟ್ಟಾದ ರಸ್ತೆಯ ಎರಡೂ ಬದಿಗಳಲ್ಲಿ ನಿಲುಗಡೆ ಮಾಡುತ್ತಿರುವುದರಿಂದಲೇ ಸಮಸ್ಯೆ ಉದ್ಭವಿಸುತ್ತಿದೆ. ಅತ್ತ ಪೊಲೀಸ್ ಇಲಾಖೆ ವಾಹನಗಳ ದಟ್ಟಣೆ ನಿಯಂತ್ರಿಸುತ್ತಿಲ್ಲ. ವಾಹನ ಮಾಲೀಕರಿಗೆ ರಸ್ತೆಬದಿ ವಾಹನ ನಿಲ್ಲಿಸಬಾರದೆಂಬ ಸಾಮಾನ್ಯ ಅರಿವೂ ಇಲ್ಲ ಎಂಬುದು ಪಾದಚಾರಿಗಳ ದೂರಾಗಿದೆ. ಇದಕ್ಕೆ ಕಾರಣ ಪಟ್ಟಣದಲ್ಲಿ ಕಿರಿದಾದ ರಸ್ತೆ ಹಾಗೂ ವ್ಯವಸ್ಥಿತ ಬಸು ನಿಲ್ದಾಣ ಇಲ್ಲದಿರುವುದು ಮೂರು ರಸ್ತೆಗಳು ಕೂಡುವ ಸ್ಥಳವೇ ಬಸ್ಸು ನಿಲ್ದಾಣವಾಗಿದ್ದು ಇಲ್ಲಿ ಜನಸಾಮಾನ್ಯರು ಬಸ್ಸಿಗಾಗಿ ಪರದಾಡುವ ಪರಿಸ್ಥಿತಿ ಸಾಮಾನ್ಯ. ಪಂಚಾಯಿತಿ ಹಾಗೂ ಪೊಲೀಸರು ಕೆಲವು ನಿಯಮಗಳನ್ನು ಜಾರಿಗೊಳಿಸಿದ್ದರೂ ಇಲ್ಲಿ ಯಾವುದೂ ಪಾಲನೆಯಾಗುತ್ತಿಲ್ಲ. ಸಂತೆಯ ದಿನ ಗ್ರಾಮಾಂತರ ಭಾಗಗಳಿಂದ ಸಂತೆಗೆ ಬಂದವರಿಂದ ವಾಹನದಟ್ಟಣೆ ಇನ್ನೂ ಹೆಚ್ಚಾಗುತ್ತದೆ.


ಇಕ್ಕಟ್ಟಾದ ರಸ್ತೆಯ ಎರಡು ಬದಿಗಳಲ್ಲಿ ಶಾಲಾ ವಾಹನ, ವಾಹನಗಳ ದಟ್ಟಣೆ

ಮಡಿಕೇರಿ ತಾಲೂಕಿನಲ್ಲಿ ಎರಡನೇ ದೊಡ್ಡ ಪಟ್ಟಣವಾದ ನಾಪೋಕ್ಲುನಲ್ಲಿ ಬಸ್ಸು ನಿಲ್ದಾಣಕ್ಕಾಗಿ ಹಲವು ವರ್ಷಗಳಿಂದ ಬೇಡಿಕೆಯಿದ್ದು, ನಿಲ್ದಾಣಕ್ಕಾಗಿ ಇಲ್ಲಿಯ ಸಂತೆ ಮೈದಾನದಲ್ಲಿ ಸೂಕ್ತ ಸ್ಥಳ ನಿಗದಿ ಮಾಡಿದ್ದರು ಸ್ಪಂದಿಸುವವರೇ ಇಲ್ಲದ್ದರಿಂದ ಸಮಸ್ಯೆ ಬಿಗಡಾಯಿಸಿದೆ. ವರ್ಷದಿಂದ ವರ್ಷಕ್ಕೆ ವಾಹನಗಳ ಸಂಖ್ಯೆ ಏರುತ್ತಿದ್ದು ನಿಲುಗಡೆಗೆ ಸ್ಥಳವಿಲ್ಲದೆ ವಾಹನ ಮಾಲೀಕರು ಚುನಾಯಿತ ಪ್ರತಿನಿಧಿಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಾಗರಿಕರ ಹಲವು ವರ್ಷದ ಬೇಡಿಕೆಯಂತೆ ಬಸ್ಸು ನಿಲ್ದಾಣ ಹಾಗೂ ಪಟ್ಟಣದಲ್ಲಿ ಕಾನೂನು ಬದ್ಧವಾಗಿ ರಸ್ತೆಯನ್ನು ಅಗಲೀಕರಣ ಮಾಡಿಸಿ ವಾಹನಗಳ ಸುಗಮ ಸಂಚಾರಕ್ಕೆ ಕೂಡಲೇ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.



ಪಟ್ಟಣದ ರಸ್ತೆ ಅಗಲೀಕರಣದ ಬಗ್ಗೆ ಗ್ರಾಮ ಪಂಚಾಯತಿ ಸಭೆಯಲ್ಲಿ ನಿರ್ಣಯ ಕೈಗೊಂಡು ಅಧಿಕಾರಿಗಳಿಗೆ ನೋಟಿಸ್ ನೀಡಿದರೂ ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ.

ಬಸ್ ನಿಲ್ದಾಣ ನಿರ್ಮಾಣಕ್ಕೆ ಜಾಗ ಇತ್ತೀಚೆಗೆ ಗ್ರಾಮ ಪಂಚಾಯತಿ ಹೆಸರಿಗೆ ಆಗಿದೆ. ಈ ಬಗ್ಗೆ ಒಂದೆರಡು ದಿನದಲ್ಲಿ ಶಾಸಕರಾಗಿರುವ ಎಸ್. ಪೊನ್ನಣ್ಣನವರನ್ನು ಭೇಟಿ ಮಾಡಿ ಬಸ್ ನಿಲ್ದಾಣ ನಿರ್ಮಾಣಕ್ಕೆ ಮನವಿ ಮಾಡಲಾಗುವುದು.

ವನಜಾಕ್ಷಿ ರೇಣುಕೇಶ್,
ನಾಪೋಕ್ಲು ಗ್ರಾಪಂ ಅಧ್ಯಕ್ಷೆ.

ಮಳೆ ಬಿರುಸಿಗೆ ಮನೆಯ ಗೋಡೆ ಕುಸಿತ



ಮಳೆ ಬಿರುಸಿಗೆ ಮನೆಯ ಗೋಡೆ ಕುಸಿದಿರುವುದು

ಮಡಿಕೇರಿ: ಜಿಲ್ಲೆಯಲ್ಲಿ ಮತ್ತೆ ಮಳೆ ಬಿರುಸು ಪಡೆಯುತ್ತಿದ್ದು, ಮನೆ ಹಾನಿ ಪ್ರಕರಣಗಳು ವರದಿಯಾಗಿವೆ. ಗಾಳಿ ಸಹಿತ ಮಳೆ ಸುರಿಯುತ್ತಿರುವ ಪರಿಣಾಮ ಮರ ಮುರಿದು ಬಿದ್ದು ವಿದ್ಯುತ್ ಕಂಬಗಳಿಗೂ ಹಾನಿಯಾಗಿವೆ.

ಕೆಲವು ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ಸಂಪರ್ಕ ಕಣ್ಣಾಮುಚ್ಚಾಲೆ ಆಟದಂತಾಗಿರುವ ಬಗ್ಗೆಯೂ ವರದಿಯಾಗಿದೆ. ಪೊನ್ನಂಪೇಟೆ ತಾಲೂಕಿನ ಹುದೂರು ಗ್ರಾಮದ ಕೃಷ್ಣನಗರದಲ್ಲಿ ಹೆಚ್.ಕೆ. ರವಿ ಎಂಬವರ ವಾಸದ ಮನೆಯ ಗೋಡೆ ಕುಸಿದು ಬಿದ್ದು, ಮನೆ ಮಂದಿ ಅಪಾಯದಿಂದ ಪಾರಾಗಿದ್ದಾರೆ.

ಬಾಡಗ ಬಾಣಂಗಾಲ ಗ್ರಾಮ ನಿವಾಸಿ ಅಮೀನ ಎಂಬವರ ವಾಸದ ಮನೆಯ ಗೋಡೆ ಕೂಡ ಕುಸಿದು ಬಿದ್ದಿದ್ದು, ಗೃಹೋಪಯೋಗಿ ವಸ್ತುಗಳಿಗೆ ಹಾನಿಯಾಗಿದೆ. ಘಟನಾ ಸ್ಥಳಕ್ಕೆ ಪೊನ್ನಂಪೇಟೆ ತಹಶೀಲ್ದಾರ್ ಮೋಹನ್, ಕಂದಾಯ ಇಲಾಖೆ ಸುದೀಂದ್ರ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕರಡಿಗೋಡು ಗ್ರಾಮದ ರಸ್ತೆಯಲ್ಲಿ ಹುಲಿ ಪತ್ತೆ


ಎವೊಲ್ವ್ ಬ್ಯಾಕ್ ಎಸ್ಟೇಟ್ ಬಳಿ ರಾತ್ರಿ ಕಾಣಿಸಿಕೊಂಡಿರುವ ಹುಲಿ.

ಮಡಿಕೇರಿ: ವಿರಾಜಪೇಟೆ ತಾಲೂಕಿನ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗೋಡು ಗ್ರಾಮದ ರಸ್ತೆಯಲ್ಲಿ ಹುಲಿ ಕಾಣಿಸಿಕೊಂಡಿದೆ.

ಗ್ರಾಮದ ಎವೊಲ್ವ್ ಬ್ಯಾಕ್ ಎಸ್ಟೇಟ್ ಬಳಿ ರಾತ್ರಿ ರಸ್ತೆಯಲ್ಲಿ ವಾಹನವೊಂದು ತೆರಳುತ್ತಿದ್ದ ಸಂದರ್ಭ ತೋಟದ ಪಕ್ಕದ ರಸ್ತೆಯಲ್ಲಿ ಹುಲಿ ಕಂಡು ಬಂದಿದ್ದು, ವಾಹನ ಪ್ರಯಾಣಿಕರು ಹುಲಿಯ ವಿಡಿಯೋವನ್ನು ಮೊಬೈಲ್‌ನಲ್ಲಿ ಚಿತ್ರೀಕರಿಸಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ವಿಡಿಯೋ ದೃಶ್ಯಾವಳಿಗಳ ಸತ್ಯಾಸತ್ಯತೆ ಅರಿಯಲು ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ಥಳಕ್ಕೆ ತೆರಳಿ ಹುಲಿ ಕಾಣಿಸಿ ಕೊಂಡಿದ್ದ ಸ್ಥಳ ಪರಿಶೀಲನೆ ನಡೆಸಿದ್ದಾರೆ. ತೇವಾಂಶದ ಮಣ್ಣಿನಲ್ಲಿ ಹುಲಿಯ ಹೆಜ್ಜೆ ಗುರುತುಗಳು ಕಂಡು ಬಂದಿದ್ದು, ಹುಲಿ ಸಂಚರಿಸಿರುವುದನ್ನು ಅರಣ್ಯ ಇಲಾಖೆ ಖಚಿತಪಡಿಸಿದೆ. ಆದರೆ ಹುಲಿ ಈ ಭಾಗದಿಂದ ಮತ್ತೊಂದು ಕಡೆಗೆ ತೆರಳಿರುವ ಸಾಧ್ಯತೆಯೂ ಇದೆ ಎಂದು ಅರಣ್ಯ ಇಲಾಖಾಧಿಕಾರಿಗಳು ಶಂಕಿಸಿದ್ದಾರೆ. ಹುಲಿ ಕಂಡು ಬಂದಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಗ್ರಾಮದಲ್ಲಿ ಸಾರ್ವಜನಿಕರು ರಾತ್ರಿ ವೇಳೆ ಸಂಚರಿಸುವಾಗ ಎಚ್ಚರಿಕೆ ವಹಿಸಬೇಕೆಂದು ಅರಣ್ಯ ಇಲಾಖೆ ತಿಳಿಸಿದೆ.

ವಿರಾಜಪೇಟೆಯಲ್ಲಿ ಬೃಹತ್ ರಕ್ತದಾನ ಶಿಬಿರ


ಕೊಡಗು ಉಪಾಧ್ಯಾಯರ ಸಂಘದ ಕಚೇರಿಯಲ್ಲಿ 'ಬೃಹತ್ ರಕ್ತದಾನ ಶಿಬಿರ'ವನ್ನು ಏರ್ಪಡಿಸಲಾಗಿತ್ತು.

ವಿರಾಜಪೇಟೆ: ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ 'ಸಹಾರ ಫ್ರೆಂಡ್ಸ್ ವಿರಾಜಪೇಟೆ', ಕೊಡಗು ಜಿಲ್ಲಾ ಆಸ್ಪತ್ರೆ ರಕ್ತನಿಧಿ ಘಟಕ, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರಗಳ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಎಫ್.ಎಂ.ಸಿ ರಸ್ತೆಯಲ್ಲಿರುವ ಕೊಡಗು ಉಪಾಧ್ಯಾಯರ ಸಂಘದ ಕಚೇರಿ ಸಭಾಂಗಣದಲ್ಲಿ 'ಬೃಹತ್ ರಕ್ತದಾನ ಶಿಬಿರ'ವನ್ನು ಏರ್ಪಡಿಸಲಾಗಿತ್ತು.

ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ ರಕ್ತದಾನ ಶ್ರೇಷ್ಠವಾದ ದಾನವಾಗಿದೆ ಇದರಿಂದ ಮನುಷ್ಯ ಮನುಷ್ಯನನ್ನು ಉಳಿಸಲು ಸಾಧ್ಯ ಅನೇಕರ ಪ್ರಾಣವನ್ನು ಉಳಿಸುವ ಪ್ರಯತ್ನ ಮಾಡಬಹುದು. ಹಾಗೂ ರಕ್ತದಾನ ಶಿಬಿರ ಉತ್ತಮ ಕಾರ್ಯವಾಗಿದೆ ಎಂದು ಶುಭ ಹಾರೈಸಿದರು.

ಸಂಘದ ಅಧ್ಯಕ್ಷ ಸಿ.ಎ.ನಾಸೀರ್ ಮಾತನಾಡಿ ಹಿಂದೆ ಸಾರ್ವಜನಿಕ ಆಸ್ಪತ್ರೆಯಲ್ಲಿ ರಕ್ತದ ಬ್ಯಾಂಕ್ ಇತ್ತು ಈಗ ಅದು ಇಲ್ಲ ಅನಿವಾರ್ಯ ಸಂದರ್ಭದಲ್ಲಿ ಮಡಿಕೇರಿ ಜಿಲ್ಲಾ ಆಸ್ಪತ್ರೆಯಿಂದ ರಕ್ತ ತರುವಂತಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಜಿಲ್ಲಾ ಆಸ್ಪತ್ರೆಯ ರಕ್ತನಿಧಿ ಕೇಂದ್ರದ ವೈದ್ಯ ಡಾ. ಕರುಂಬಯ್ಯ ಶ್ರೀಮುತ್ತಪ್ಪನ್ ದೇವಾಲಯದ ಆಡಳಿತ ಮಂಡಳಿಯ ಸುಮೇಶ್ ಈ ರೀತಿಯ ರಕ್ತದಾನ ಶಿಬಿರ ಅಗತ್ಯವಾಗಿದೆ ಎಂದರು.

ಸುಮಾರು 70 ಬಾರಿ ರಕ್ತದಾನ ಮಾಡಿರುವ ಪಟ್ಟಣದ ನಿವಾಸಿ ಐವತ್ತೆಂಟು ವರ್ಷದ ರವಿಶಂಕರ್ ಹಾಗೂ ಗೋಣಿಕೊಪ್ಪದ ನಿವಾಸಿ 25 ಬಾರಿ ರಕ್ತದಾನ ಮಾಡಿರುವ 36 ವರ್ಷದ ಪ್ರಿಯಾ ಅವರನ್ನು ಆರೋಗ್ಯ ಇಲಾಖೆ ಹಾಗೂ ಸಹಾರ ಫ್ರೆಂಡ್ಸ್ ವತಿಯಿಂದ ಸನ್ಮಾನಿಸಲಾಯಿತು. ಹಿಂದೂ ಮಲಯಾಳಿ ಸಂಘದ ವಿನೂಪ್ ಕುಮಾರ್, ವಿನಾಯಕ ಸಂಸ್ಥೆಯ ಹೇಮಂತ್, ಉಪಾಧ್ಯಾಯರ ಸ್ಟೋರ್ ಸಂಘದ ಉಪಾಧ್ಯಕ್ಷ ಎ.ವಿ.ಮಂಜುನಾಥ್, ರವೂಫ್ ಉಪಸ್ಥಿತರಿದ್ದರು.

ಸ್ಮಶಾನಕ್ಕಾಗಿ ಒತ್ತಾಯಿಸಿ ಅಣಕು ಶವಯಾತ್ರೆ ಪ್ರತಿಭಟನೆ

ಸಿದ್ದಾಪುರ, ಜೂ.16– ನೆಲ್ಲಿಹುದಿಕೇರಿ ಗ್ರಾಮ ವ್ಯಾಪ್ತಿಯಲ್ಲಿ ಮೃತ ವ್ಯಕ್ತಿಯ ಅಂತ್ಯಸಂಸ್ಕಾರಕ್ಕೆ ಸ್ಮಶಾನವೇ ಇಲ್ಲವಾಗಿದ್ದು, ಈ ಸಮಸ್ಯೆಯ ಪರಿಹಾರಕ್ಕೆ ಆಡಳಿತ ವ್ಯವಸ್ಥೆ ಮತ್ತು ಜನಪ್ರತಿನಿಧಿಗಳು ಆಸಕ್ತಿ ತೋರುತ್ತಿಲ್ಲ. ಈ ಹಿನ್ನೆಲೆಯಲ್ಲಿ ಸ್ಮಶಾನ ಜಾಗ ಒದಗಿಸುವಂತೆ ಆಗ್ರಹಿಸಿ ನೆಲ್ಲಿಹುದಿಕೇರಿ ಗ್ರಾಮ ಪಂಚಾಯಿತಿ ಮುಂಭಾಗ ಮಳೆಯ ನಡುವೆಯೂ ಪ್ರತಿಭಟನೆ ನಡೆಸಿದರು.



ಸ್ಮಶಾನ ಹೋರಾಟ ಸಮಿತಿ ಸಂಚಾಲಕ ಪಿ.ಆರ್. ಭರತ್ ಮಾತನಾಡಿ, ನೆಲ್ಲಿಹುದಿಕೇರಿಯಲ್ಲಿ ಬಡವರು ಮತ್ತು ಕೂಲಿಕಾರ್ಮಿಕರೇ ಹೆಚ್ಚಾಗಿ ವಾಸವಾಗಿದ್ದಾರೆ. ಆದರೆ ಇವರುಗಳಿಗೆ ಬಹಳಷ್ಟು ವರ್ಷಗಳಿಂದ ವ್ಯವಸ್ಥಿತವಾದ ಸ್ಮಶಾನ ಜಾಗವಿಲ್ಲದೆ ಪರದಾಡುವಂತಾಗಿದೆ. ಸಮಿತಿಯ ಹೋರಾಟದ ಹಿನ್ನೆಲೆಯಲ್ಲಿ ಕೆಲ ತಿಂಗಳ ಹಿಂದೆ ತಹಶೀಲ್ದಾರರು ಸಭೆ ನಡೆಸಿ ಮೂರು ತಿಂಗಳ ಅವಧಿಯಲ್ಲಿ ಸ್ಮಶಾನಕ್ಕೆ ಜಾಗ ಒದಗಿಸುವುದಾಗಿ ಭರವಸೆ ನೀಡಿದ್ದರು. ಆದರೆ ಏಳು ತಿಂಗಳು ಕಳೆದಿದ್ದರೂ ಸ್ಮಶಾನಕ್ಕೆ ಜಾಗ ದೊರಕಿಲ್ಲ. ಹೀಗಿದ್ದೂ ಈ ಅವಧಿಯಲ್ಲಿ ತಹಶೀಲ್ದಾರರು ಬೆಟ್ಟದಕಾಡು ಮಾರ್ಗದ ಬಳಿಯ ಸರ್ವೇ ನಂ.177 ರಲ್ಲಿ 1.02 ಎಕರೆ ಜಾಗವನ್ನು ಸ್ಮಶಾನಕ್ಕೆಂದು ಗುರುತಿಸಿದ್ದಾರೆ. ಆದರೆ, ಇದನ್ನು ಸ್ಮಶಾನಕ್ಕೆ ನಿಗದಿಗೊಳಿಸಿ ಆರ್‌ಟಿಸಿ ಮಾಡುವಲ್ಲಿ ನೆಲ್ಲಿಹುದಿಕೇರಿ ವ್ಯಾಪ್ತಿಯ ಭೂ ಮಾಫಿಯಾಗಳು, ರಿಯಲ್ ಎಸ್ಟೇಟ್ ದಂಧೆಗಳು ಅಡ್ಡಗಾಲು ಹಾಕುತ್ತಿವೆ ಎಂದು ಆರೋಪಿಸಿದರು.

ನೆಲ್ಲಿಹುದಿಕೇರಿಯ ಸ.ನಂ.183 ರಲ್ಲಿ 1.8 ಎಕರೆ ಜಾಗ ಸ್ಮಶಾನಕ್ಕೆಂದು ಮೀಸಲಾಗಿ ಆರ್‌ಟಿಸಿ ಯಾಗಿದ್ದರೂ ಕೂಡ ಅದು ಒತ್ತುವರಿಯಾಗಿ ಕಾಫಿ ತೋಟವಾಗಿ ಪರಿವರ್ತನೆಯಾಗಿದೆ. ಈ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ಮುಂದಿನ ದಿನಗಳಲ್ಲಿ ಗ್ರಾಮ ವ್ಯಾಪ್ತಿಯಲ್ಲಿ ಸಾವು ಸಂಭವಿಸಿದಾಗ, ಅಂತ್ಯಸಂಸ್ಕಾರವನ್ನು ಒತ್ತುವರಿ ಜಾಗದಲ್ಲೇ ನಡೆಸಲಾಗುವುದು. ಉಂಟಾಗಬಹುದಾದ ಸಂಘರ್ಷಕ್ಕೆ ಅಧಿಕಾರಿಗಳು ಮತ್ತು ಜನ ಪ್ರತಿನಿಧಿಗಳೇ ಕಾರಣರಾಗುತ್ತಾರೆ ಎಂದ ಭರತ್, ನೆಲ್ಲಿಹುದಿಕೇರಿಯಲ್ಲಿ ಸ್ಮಶಾನ ಜಾಗಕ್ಕಾಗಿ ಕಾನೂನಾತ್ಮಕ ಹೋರಾಟಕ್ಕೂ ಸ್ಮಶಾನ ಹೋರಾಟ ಸಮಿತಿ ಸಿದ್ಧವಿದೆ ಎಂದು ಎಚ್ಚರಿಸಿದರು.

ಗ್ರಾಪಂ ಅಧ್ಯಕ್ಷರು ಹಾಗೂ ಅಧಿಕಾರಿಗಳಿಗೆ ಪ್ರತಿಭಟನಾಕಾರರು ಮನವಿ ನೀಡಿದರು. ಟಿ.ಟಿ. ಉದಯಕುಮಾರ್, ಎನ್. ನಾರಾಯಣ, ಕೆ.ಜಿ. ರಮೇಶ್, ಸುರೇಶ್, ಪ್ರಭಾಕರ, ಚಂದ್ರ, ಮುಕುಂದ, ರವಿ, ಅನಿಲ್, ರಾಜು, ಶಿವರಾಮ, ದಾಸ್, ರಮೇಶ್, ಬೋಜಿ, ಬೇಬಿ, ಸುಶೀಲಾ, ಕುಟ್ಟನ್, ಅಭಿ ಸ್ಥಳೀಯರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಆರೋಪಿಗಳಿಬ್ಬರ ಬಂಧನ 80 ಗ್ರಾಂ ಗಾಂಜಾ ವಶ

ಸುಂಟಿಕೊಪ್ಪ: ನಿಷೇಧಿತ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಬಂಧಿಸುವಲ್ಲಿ ಸುಂಟಿಕೊಪ್ಪ ಪೊಲೀಸರು ಯಶಸ್ವಿಯಾಗಿದ್ದಾರೆ.

ಕೊಡಗರಹಳ್ಳಿಯ ಆಟೋ ಚಾಲಕ ಜಗದೀಶ್ ಅಲಿಯಾಸ್ ಜಗ್ಗ ಮತ್ತು ಸುಂಟಿಕೊಪ್ಪ ಗದ್ದೆಹಳ್ಳ ನಿವಾಸಿ ನೌಫಲ್ ಬಂಧನಕ್ಕೊಳಗಾಗಿರುವ ಆರೋಪಿಗಳು. ಪೋಲೀಸರು ಇವರಿಂದ 80 ಗ್ರಾಂ ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ.

ಪಟ್ಟಣದಲ್ಲಿ ಆರೋಪಿಗಳಿಬ್ಬರು ನಿಷೇಧಿತ ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ಕುಶಾಲನಗರ ಡಿವೈಎಸ್‌ಪಿ ಚಂದ್ರಶೇಖರ್ ಹಾಗೂ ವೃತ್ತ ನಿರೀಕ್ಷಕ ದಿನೇಶ್ ಕುಮಾರ್ ಮಾರ್ಗದರ್ಶನದಲ್ಲಿ ಸಬ್‌ಇನ್ಸ್‌ಪೆಕ್ಟರ್ ಮೋಹನ್‌ರಾಜ್, ಕ್ರೈಮ್ ಸಬ್‌ಇನ್ಸ್‌ಪೆಕ್ಟರ್ ಭಾರತಿ ಮಾಲು ಸಮೇತ ಆರೋಪಿಗಳನ್ನು ಬಂಧಿಸಿದ್ದಾರೆ.

ಪ್ರಶಾಂತ್ ಅಟ್ಟುಗುಳಿಪುರ ಗ್ರಾಪಂಗೆ ಉಪಾಧ್ಯಕ್ಷ


ಅಟ್ಟುಗುಳಿಪುರ ಗ್ರಾ.ಪಂ. ನೂತನ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಪ್ರಶಾಂತ್‌ರನ್ನು ಅಧ್ಯಕ್ಷರು, ಸದಸ್ಯರು ಸನ್ಮಾನಿಸಿದರು.

ಚಾಮರಾಜನಗರ, ಜೂ.16–ತಾಲೂಕಿನ ಅಟ್ಟುಗುಳಿಪುರ ಗ್ರಾ.ಪಂ ಉಪಾಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಪ್ರಶಾಂತ್ ಅವಿರೋಧವಾಗಿ ಆಯ್ಕೆಯಾದರು.

ಗ್ರಾಮ ಪಂಚಾಯತಿಯಲ್ಲಿ ತೆರವಾಗಿದ್ದ ಸಾಮಾನ್ಯ ಉಪಾಧ್ಯಕ್ಷ ಸ್ಥಾನಕ್ಕೆ ಪ್ರಶಾಂತ್ ನಾಮಪತ್ರ ಸಲ್ಲಿಸಿದರು. ಈ ಸ್ಥಾನಕ್ಕೆ ಬೇರೆ ಯಾರೂ ನಾಮಪತ್ರ ಸಲ್ಲಿಸದ ಹಿನ್ನಲೆಯಲ್ಲಿ ಚುನಾವಣಾಧಿಕಾರಿಯಾಗಿದ್ದ ಜಿಲ್ಲಾ ನಗರಾಭಿವೃದ್ಧಿ ಕೋಶ ಸಹಾಯಕ ಕಾರ್ಯ ಪಾಲಕ ಅಭಿಯಂತರ ರಾಮಚಂದ್ರ ನೂತನ ಉಪಾಧ್ಯಕ್ಷರ ಆಯ್ಕೆಯನ್ನು ಘೋಷಿಸಿದರು.

ಸಭೆಯಲ್ಲಿ ಅಧ್ಯಕ್ಷೆ ಶಿವಮ್ಮ, ಸದಸ್ಯರಾದ ಬಸವಣ್ಣ, ಸೋಮಣ್ಣ, ಕೌಶಲ್ಯ, ವಿಮಲ, ಸಣ್ಣಕ್ಕಿಗೌಡ, ಮೂರ್ತಿ, ಹೇಮ, ಮರಿಸ್ವಾಮಿ, ಮಹದೇವಮ್ಮ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎನ್.ಹನುಮಂತರಾಯ ಭಾಗವಹಿಸಿದ್ದರು.

ನೂತನ ಉಪಾಧ್ಯಕ್ಷ ಪ್ರಶಾಂತ್‌ರನ್ನು ಅಧ್ಯಕ್ಷರು, ಸದಸ್ಯರು ಹಾಗೂ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಸನ್ಮಾನಿಸಿದರು. ಪ್ರಶಾಂತ್ ಮಾತನಾಡಿ, ನನ್ನನ್ನು ಉಪಾಧ್ಯಕ್ಷರನ್ನಾಗಿ ಅವಿರೋಧ ವಾಗಿ ಆಯ್ಕೆ ಮಾಡಿದ ಅಧ್ಯಕ್ಷರು, ಸದ ಸ್ಯರು, ಪಕ್ಷದ ಮುಖಂಡರು, ಕಾರ್ಯ ಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಎಲ್ಲರ ವಿಶ್ವಾಸ ಪಡೆದು ಗ್ರಾಪಂ. ವ್ಯಾಪ್ತಿಗೆ ಬರುವ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಅಟ್ಟುಗುಳಿಪುರ ಎಲ್‌ಐಸಿ ಕುಮಾರ್, ಸಿದ್ದಯ್ಯನಪುರ ಗೋವಿಂದರಾಜ, ಗ್ರಾಪಂ ಮಾಜಿ ಸದಸ್ಯ ನಂಜುಂಡಸ್ವಾಮಿ, ಮಾಜಿ ಸದಸ್ಯ ಹೊಂಗಲವಾಡಿ ಹೆಚ್.ಬಸವರಾಜು, ಕುಂಭೇಶ್ವರ ಕಾಲೋನಿ ಸ್ವಾಮಿ, ಎಸ್‌ಡಿಎಂಸಿ ಅಧ್ಯಕ್ಷ ಸಿದ್ದರಾಜು, ಮುಖಂಡರಾದ ಮಹದೇವಯ್ಯ, ರೋಟರಿ ಉಪಾಧ್ಯಕ್ಷ ಅಬ್ದುಲ್ ಅಜೀಜ್ ದೀನಾ, ಯಜಮಾನರಾದ ರಾಜೇಂದ್ರ, ಮಹದೇವಯ್ಯ, ಬಸವರಾಜು,ಕೆಡಿಪಿ ಸದಸ್ಯ ಸೈಯದ್ ಮುಸಾಯಿಬ್, ಸುವರ್ಣಾವತಿ ನೀರು ಬಳಕೆದಾರ ಸಂಘದ ಅಧ್ಯಕ್ಷ ಗೋವಿಂದರಾಜು, ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಅಪ್ಪು, ಅನಂತ್ ಕುಮಾರ್, ಕಾರ್ತಿಕ್, ರಾಹುಲ್, ನಿರಂಜನ್, ದರ್ಶನ್, ವಿಕಾಸ್, ಎಂ. ಪ್ರಸಾದ್ ಇತರರು ಹಾಜರಿದ್ದರು.

ಮೈಸೂರು, ಚಾಮರಾಜನಗರ ಜಿಲ್ಲಾ ಸಹಕಾರ ಬ್ಯಾಂಕ್ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ

ಕಾಂಗ್ರೆಸ್‌ನಿಂದ ಪುಟ್ಟರಂಗಶೆಟ್ಟಿ, ಬಿಜೆಪಿಯಿಂದ ವೃಷಭೇಂದ್ರಪ್ಪ ನಾಮಪತ್ರ



ಕಾಂಗ್ರೆಸ್ ಅಭ್ಯರ್ಥಿಯಾಗಿ ಶಾಸಕ ಸಿ.ಪುಟ್ಟರಂಗಶೆಟ್ಟಿ, ಬಿಜೆಪಿ ಅಭ್ಯರ್ಥಿಯಾಗಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಭೇಂದ್ರಪ್ಪ ನಾಮಪತ್ರ ಸಲ್ಲಿಸಿದರು.

ಚಾಮರಾಜನಗರ, ಜೂ–16–ಇದುವರೆಗೂ ತೆರೆಮರೆಯಲ್ಲಿ ನಡೆಯುತ್ತಿದ್ದ ಮೈಸೂರು, ಚಾಮರಾಜನಗರ ಜಿಲ್ಲಾ ಸಹಕಾರ ಬ್ಯಾಂಕ್ (ಎಂಡಿಸಿಸಿ) ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆಯನ್ನು ಈ ಬಾರಿ ಕಾಂಗ್ರೆಸ್ ಹಾಗೂ ಬಿಜೆಪಿ ಪ್ರತಿಷ್ಠೆಯಾಗಿ ತೆಗೆದುಕೊಂಡಿದ್ದು, ಜಿಲ್ಲೆಯಲ್ಲಿ ಚುನಾವಣೆ ರಂಗೇರಿದೆ.

ಬ್ಯಾಂಕ್ ನಿರ್ದೇಶಕರ ಸ್ಥಾನಕ್ಕೆ ಜಿಲ್ಲೆಯ ಹಾಲಿ ಶಾಸಕರು ಹಾಗೂ ಮಾಜಿ ಶಾಸಕರು ಸ್ಪರ್ಧಿಸಿರುವುದರಿಂದ ಫಲಿತಾಂಶ ತೀವ್ರ ಕುತೂಹಲ ಕೆರಳಿಸಿದೆ. ಚಾಮರಾಜನಗರ ತಾಲೂಕಿನಿಂದ ಶಾಸಕ ಸಿ. ಪುಟ್ಟರಂಗಶೆಟ್ಟಿ, ಗುಂಡ್ಲುಪೇಟೆ ತಾಲೂಕಿನಿಂದ ಶಾಸಕ ಎಚ್.ಎಂ. ಗಣೇಶಪ್ರಸಾದ್, ಹನೂರು ತಾಲೂಕಿನಿಂದ ಮಾಜಿ ಶಾಸಕ ಆರ್. ನರೇಂದ್ರ ಸ್ಪರ್ಧಿಸಿದ್ದಾರೆ.

ನಾಮಪತ್ರ ಸಲ್ಲಿಕೆ

ಕಾಂಗ್ರೆಸ್ ಅಭ್ಯರ್ಥಿಯಾಗಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಹಾಗೂ ಬಿಜೆಪಿ ಅಭ್ಯರ್ಥಿಯಾಗಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ವೃಷಭೇಂದ್ರಪ್ಪ ಮೈಸೂರಿನಲ್ಲಿ ಇಂದು ನಾಮಪತ್ರ ಸಲ್ಲಿಸಿದ್ದಾರೆ. ಅದೇ ರೀತಿ ಗುಂಡ್ಲುಪೇಟೆ ತಾಲೂಕು ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಶಾಸಕ ಎಚ್.ಎಂ.ಗಣೇಶಪ್ರಸಾದ್ ಕಣಕ್ಕಿಳಿದಿದ್ದರೆ, ಇವರ ಎದುರಾಳಿಯಾಗಿ ಬಿಜೆಪಿ ಅಭ್ಯರ್ಥಿಯಾಗಿ ತಾಪಂ ಮಾಜಿ ಸದಸ್ಯ ಎಸ್.ಎಂ. ವೀರಪ್ಪ ಸ್ಪರ್ಧಿಸುತ್ತಿದ್ದಾರೆ. ಹನೂರು ತಾಲೂಕಿನಿಂದ ಮಾಜಿ ಶಾಸಕ ಆರ್. ನರೇಂದ್ರ ಸ್ಪರ್ಧಿಸುವುದು ಬಹುತೇಕ ಖಚಿತವಾಗಿದ್ದು, ಬಿಜೆಪಿಯಿಂದ ಇವರಿಗೆ ಪ್ರಬಲ ಅಭ್ಯರ್ಥಿಯ ಹುಡುಕಾಟ ನಡೆಸುತ್ತಿದೆ.

ಎರಡು ಪಕ್ಷಕ್ಕೂ ಪ್ರತಿಷ್ಠೆ ಚುನಾವಣೆ

ಕಾಂಗ್ರೆಸ್ ಮೇಲುಗೈ ಸಾಧಿಸಬೇಕೆಂಬ ಉದ್ದೇಶದಿಂದ ಕಾಂಗ್ರೆಸ್ ಪ್ರತಿಷ್ಠೆಯಾಗಿ ಪರಿಗಣಿಸಿದೆ. ಇದಲ್ಲದೆ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ತವರು ಜಿಲ್ಲೆಯ ಸಹಕಾರ ಸಂಘದ ಚುನಾವಣೆಯಾಗಿರುವುದರಿಂದ ಆಡಳಿತದ ಚುಕ್ಕಾಣಿ ಹಿಡಿಯಬೇಕೆಂಬುದು ಅವರ ಅಭಿಲಾಷೆಯಾಗಿದೆ

ಹೀಗಾಗಿ ಪಕ್ಷದಿಂದ ಆಯಾ ಕ್ಷೇತ್ರದ ಶಾಸಕರನ್ನೇ ನಿರ್ದೇಶಕರ ಸ್ಥಾನಗಳಿಗೆ ಸ್ಪರ್ಧಿಸುವಂತೆ ಸೂಚನೆ ನೀಡಿದ್ದು, ಅದರಂತೆ ಶಾಸಕರೇ ಎಂಡಿಸಿಸಿ ಬ್ಯಾಂಕ್ ನಿರ್ದೇಶಕರ ಸ್ಥಾನಗಳಿಗೆ ಸ್ಪರ್ಧೆ ಮಾಡುತ್ತಿದ್ದಾರೆ ಎಂದು ರಾಜಕೀಯ ಮೂಲಗಳಿಂದ ತಿಳಿದು ಬಂದಿದೆ

ಬಿಜೆಪಿಯಿಂದ ಪೈಪೋಟಿ

ಶಾಸಕರಿಗೆ ಸೆಡ್ಡು ಹೊಡೆಯಲು ಬಿಜೆಪಿ ಸಹ ತಂತ್ರ ರೂಪಿಸಿದ್ದು, ತಮ್ಮ ಪಕ್ಷದಿಂದಲೂ ವರ್ಚಸ್ಸಿನ ಜೊತೆಗೆ ಚುನಾವಣೆ ಎದುರಿಸ ಬಲ್ಲ ಸಾಮರ್ಥ್ಯ, ಸಂಪನ್ಮೂಲವಿರುವ ಹಾಗೂ ಪಕ್ಷದ ನಾಯಕರು, ಮುಖಂಡರು ಹಾಗೂ ಕಾರ್ಯಕರ್ತರು ಒಪ್ಪುವ ಅಭ್ಯರ್ಥಿಗಳನ್ನು ಒಮ್ಮತದಿಂದ ಆಯ್ಕೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

ಶಾಲೆಗಳಿಗೆ ಮೂಲ ಸೌಕರ್ಯ ಒದಗಿಸಲು ಕ್ರಮ


ಮಲ್ಲಯ್ಯನಪುರ ಬಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲಾವರಣದಲ್ಲಿ ಸುತ್ತುಗೋಡೆ ನಿರ್ಮಾಣ ಕಾಮಗಾರಿಗೆ ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

ಚಾಮರಾಜನಗರ, ಜೂ.16–ನಗರದ ಹೊರವಲಯದ ಮಲ್ಲಯ್ಯನಪುರ ಬಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲಾವರಣದಲ್ಲಿ 53.38 ಲಕ್ಷ ರೂ.ವೆಚ್ಚದ ಶಾಲೆಯ ಸುತ್ತುಗೋಡೆ ನಿರ್ಮಾಣ ಕಾಮಗಾರಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

ದೇಶದ ಅಭಿವೃದ್ಧಿಗೆ ಇಂದು ಶಿಕ್ಷಣವೊಂದೇ ಆಧಾರವಾಗಿದೆ. ಕೇಂದ್ರ ಮತ್ತು ರಾಜ್ಯಸರ್ಕಾರಗಳು ಮಕ್ಕಳ ಶಿಕ್ಷಣಕ್ಕೆ ಕೋಟ್ಯಂತರ ರೂ.ವೆಚ್ಚ ಮಾಡುತ್ತಿದ್ದು, ವಿದ್ಯಾರ್ಥಿಗಳು ಸರ್ಕಾರ ಒದಗಿಸುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕಿದೆ ಎಂದರು. ಶಾಲೆಗಳ ಭದ್ರತೆಗೆ ಸುತ್ತುಗೋಡೆ ನಿರ್ಮಿಸಲಾಗುತ್ತಿದೆ. ಸುತ್ತುಗೋಡೆ ಇಲ್ಲದಿರುವ ಶಾಲೆಗಳಿಗೆ ಸುತ್ತುಗೋಡೆ ಸೇರಿದಂತೆ ಮೂಲಸೌಕರ್ಯ ಒದಗಿಸಲು ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿ ಸಕಾಲದಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಕರ್ನಾಟಕ ವಸತಿಶಿಕ್ಷಣಸಂಸ್ಥೆ ಎಇಇ ಮಂಜುನಾಯಕ್, ಮುಖಂಡ ಸಮೀಉಲ್ಲಾ, ಗುತ್ತಿಗೆದಾರ ಅಶೋಕ್ ವಿನೋದ್, ಮೊರಾರ್ಜಿದೇಸಾಯಿ ವಸತಿಶಾಲೆ ಪ್ರಾಂಶುಪಾಲ ಹಾಗೂ ಇತರರು ಹಾಜರಿದ್ದರು.

ಶಾಲಾ ಕಟ್ಟಡಕ್ಕೆ ಬುದ್ಧರತ್ನ ಬಂತೇಜಿ ಚಾಲನೆ


ಶ್ರೀ ಸಿದ್ಧಾರ್ಥ ವಿದ್ಯಾಸಂಸ್ಥೆಯ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಬುದ್ಧರತ್ನ ಬಂತೇಜಿ ಬುದ್ಧ ವಂದನೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು.

ಯಳಂದೂರು: ಪಟ್ಟಣದಲ್ಲಿರುವ ಶ್ರೀ ಸಿದ್ಧಾರ್ಥ ವಿದ್ಯಾ ಸಂಸ್ಥೆಯ ಪ್ರೌಢಶಾಲಾ ಕಟ್ಟಡದ ಮುಂದು ವರೆದ ಶಾಲಾ ಕಟ್ಟಡ ಕಾಮಗಾರಿಗೆ ಹೊನ್ನೂರು ಮಹಾವನ ಬುದ್ಧ ವಿಹಾರದ ಬುದ್ಧರತ್ನ ಬಂತೇಜಿ ಚಾಲನೆ ನೀಡಿದರು.

ಪಟ್ಟಣದಲ್ಲಿ 32 ವರ್ಷಗಳಿಂದಲೂ ಗ್ರಾಮೀಣ ವಿದ್ಯಾರ್ಥಿಗಳಿಗೆ ಸಿದ್ಧಾರ್ಥ ವಿದ್ಯಾಸಂಸ್ಥೆಯು ಗುಣಮಟ್ಟದ ಶಿಕ್ಷಣವನ್ನು ನೀಡುತ್ತಾ ಬಂದಿದೆ. 20 ವರ್ಷಗಳ ಕಾಲ ಬಾಡಿಗೆ ಕಟ್ಟಡದಲ್ಲೇ ಶಾಲೆ ನಡೆಯುತ್ತಿದ್ದು, ಸ್ವಂತ ಸ್ಥಳದಲ್ಲಿ ಸ್ವಂತ ಕಟ್ಟಡವನ್ನು ಮಾಡಿ ಕೊಂಡಿದೆ. ಇಲ್ಲಿನ ಶಿಕ್ಷಕರ ಶ್ರಮದಿಂದ ಮತ್ತಷ್ಟು ಯಶಸ್ಸು ಈ ಶಾಲೆಗೆ ಲಭಿಸಲಿ ಎಂದರು.

ಸಂಸ್ಥೆ ಅಧ್ಯಕ್ಷ ಡಾ.ಎಚ್.ಎಸ್. ಬಸವರಾಜು, ಕಾರ್ಯದರ್ಶಿ ಅಂಬಳೆ ಸಿದ್ದರಾಜು, ನಿರ್ದೇಶಕರಾದ ಕೆ.ಕೃಷ್ಣಯ್ಯ, ಎನ್. ಸಿದ್ದಯ್ಯ, ಮುಖ್ಯಶಿಕ್ಷಕ ಎ.ಶಿವಣ್ಣ, ಶಿಕ್ಷಕ ಆರ್. ಶಾಂತರಾಜಶೆಟ್ಟಿ, ಸಿ.ಮಂಜುನಾಥ, ನಾಗಮಣಿ, ಟಿ.ಎನ್. ರಘು, ಆರ್.ಗೋಪಾಲಸ್ವಾಮಿ, ವಿ.ನೇತ್ರಾ, ಪಿ.ಶಿವಣ್ಣ, ವಿದ್ಯಾರ್ಥಿಗಳು ಹಾಗೂ ಪೋಷಕರು ಇದ್ದರು.

ವಿಶ್ವವಿದ್ಯಾನಿಲಯದಲ್ಲಿ ಉದ್ಯೋಗ ಮೇಳ

ಚಾಮರಾಜನಗರ: ಚಾಮರಾಜನಗರ ವಿಶ್ವವಿದ್ಯಾನಿಲಯ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಮತ್ತು ಜಿಲ್ಲಾ ಕೌಶಾಲ್ಯಾಭಿವೃದ್ಧಿ ಕೇಂದ್ರ ಸಹಯೋಗದಲ್ಲಿ ಉದ್ಯೋಗ ಮೇಳವನ್ನು ಜೂನ್ 19ರ ಬೆಳಿಗ್ಗೆ 10.30 ರಿಂದ ಸಂಜೆ 4 ಗಂಟೆಯವರೆಗೆ ವಿಶ್ವವಿದ್ಯಾನಿಲಯದ ಆವರಣದಲ್ಲಿ ಆಯೋಜಿಸಲಾಗಿದೆ.

ಉದ್ಯೋಗ ಮೇಳದಲ್ಲಿ 15ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಪಾಲ್ಗೊಳ್ಳಲಿವೆ. ಯಾವುದೇ ಪದವಿ, ಸ್ನಾತಕೋತ್ತರ ಪದವಿ, ಎಂಜಿನಿಯರಿಂಗ್, ಡಿಪ್ಲೋಮಾ, ಯಾವುದೇ ಟ್ರೇಡಿನ ಐಟಿಐ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಅಭ್ಯರ್ಥಿಗಳು ಸ್ವ ವಿವರ ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಉದ್ಯೋಗ ಮೇಳದಲ್ಲಿ ನಡೆಯುವ ಸಂದರ್ಶನಕ್ಕೆ ಹಾಜರಾಗಬಹುದು. ಉದ್ಯೋಗ ಮೇಳದ ವಿವರಗಳಿಗೆ ಮೊ.ಸಂ. 8970932547, 9743904790 ಮತ್ತು 08226–224430 ಸಂಪರ್ಕಿಸಬಹುದು.

ಉದ್ಯೋಗ ಮೇಳದ ಅಧ್ಯಕ್ಷತೆಯನ್ನು ಕುಲಪತಿ ಪ್ರೊ. ಎಂ.ಆರ್. ಗಂಗಾಧರ್ ವಹಿಸುವರು. ಕುಲಸಚಿವ ಆರ್. ಲೋಕನಾಥ್, ಪ್ರೊ. ಜಿ.ವಿ. ವೆಂಕಟರಮಣ (ಮೌಲ್ಯಮಾಪನ) ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

ಮಿಥುನ್ ನಿಧನ



ಚಾಮರಾಜನಗರ: ಮಿಥುನ್(17) ಸೋಮವಾರ ಮುಂಜಾನೆ ನಿಧನರಾದರು. ಮೃತರು ಚಿಕ್ಕಪ್ಪ ಕಾರ್ ನಾಗೇಶ್, ತಾಯಿ–ತಂದೆ, ಸಹೋದರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಕುಂಬೇಶ್ವರ ಕಾಲೋನಿಯಲ್ಲಿರುವ ಕುಂಭೇಶ್ವರ ದೇವಸ್ಥಾನದ ಬಳಿ ಇರುವ ಜಮೀನಿನಲ್ಲಿ ಇಂದು ಸಂಜೆ ನಡೆಯಿತು ಎಂದು ಕುಟುಂಬದ ಮೂಲ ತಿಳಿಸಿದೆ.

70 ವರ್ಷದ ವೃದ್ಧ ಕಾಣೆ



ಚಾಮರಾಜನಗರ: ತಾಲೂಕಿನ ಚಂದಕವಾಡಿ ಗ್ರಾಮದ ನಿವಾಸಿ ಬಸವರಾಜಪ್ಪ ಎಂಬುವರು ಕಾಣೆಯಾಗಿದ್ದಾರೆ. 70 ವರ್ಷದ ಬಸವರಾಜಪ್ಪ 5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಕೋಲುಮುಖ, ಸಾಧಾರಣ ಮೈಕಟ್ಟು, ಬಿಳಿ ತಲೆಕೂದಲು ಹೊಂದಿದ್ದು, ಮನೆಯಿಂದ ಹೋಗುವಾಗ ಕಾಫಿ ಕಲರ್ ತುಂಬುತೋಳಿನ ಶರ್ಟ್, ನೀಲಿ ಬಣ್ಣದ ಲುಂಗಿ, ಬಿಳಿ ಬಣ್ಣದ ನಿಕ್ಕರ್ ಧರಿಸಿದ್ದರು.

ಇವರ ಸುಳಿವು ದೊರೆತಲ್ಲಿ ಚಾಮರಾಜನಗರ ಜಿಲ್ಲಾ ಪೊಲೀಸ್ ಅಧೀಕ್ಷಕರು ದೂ.ಸಂ.08226–222243, ಪೂರ್ವ ಪೊಲೀಸ್ ಠಾಣೆ ದೂ.ಸಂ 08226–222058, ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ 08226–222383, ಪೂರ್ವ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಮೊ.ಸಂ 9480804648 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಗುಂಡ್ಲುಪೇಟೆ, ಬೇಗೂರಲ್ಲಿ ಇಂದು ವಿದ್ಯುತ್ ಜನ ಸಂಪರ್ಕ ಸಭೆ

ಗುಂಡ್ಲುಪೇಟೆ, ಜೂ. 16– ಇಲ್ಲಿನ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಬೇಗೂರು ಮತ್ತು ಗುಂಡ್ಲುಪೇಟೆ ಉಪವಿಭಾಗದಲ್ಲಿ ಜೂ.17ರ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 12 ಗಂಟೆವರೆಗೆ ಜನಸಂಪಕ ಸಭೆಯನ್ನು ಚಾ.ನಗರ ಸೆಸ್ಕ್ ಕಾರ್ಯನಿರ್ವಾಹಕ ಇಂಜಿನಿಯರ್ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ.

ವಿದ್ಯುತ್ ಗ್ರಾಹಕರು ತಪ್ಪದೇ ಭಾಗವಹಿಸಿ, ವಿದ್ಯುತ್ ಸಂಬಂಧಿಸಿದ ಕುಂದು ಕೊರತೆಗಳನ್ನು ಸಲ್ಲಿಸಬಹುದೆಂದು ಸಹಾಯಕ ಕಾರ್ಯನಿವಾಹಕ ಇಂಜಿನಿಯರ್ ಸಿದ್ದಲಿಂಗಪ್ಪ ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

ಪಡುವಾರಹಳ್ಳಿ ಸಿಗ್ನಲ್ ಬಳಿ ಮ್ಯಾನ್‌ಹೋಲ್ ಉಕ್ಕಿ ಹರಿದರೂ ಪಾಲಿಕೆ ದಿವ್ಯ ನಿರ್ಲಕ್ಷ್ಯ


ಮ್ಯಾನ್‌ಹೋಲ್ ಉಕ್ಕಿ ಹರಿಯುತ್ತಿರುವುದು

ಮೈಸೂರು, ಜೂ.16(ಎಸ್‌ಪಿಎನ್)– ಕಳೆದ ಎರಡು ತಿಂಗಳಿಂದ ಮೈಸೂರು–ಹುಣಸೂರು ರಸ್ತೆಯ ಪಡುವಾರಹಳ್ಳಿ ಸಿಗ್ನಲ್ ಸಮೀಪ ಮ್ಯಾನ್‌ಹೋಲ್ ಕಟ್ಟಿಕೊಂಡು ಮಲತ್ಯಾಜ್ಯ ನೀರು ರಸ್ತೆಯಲ್ಲಿ ಹರಿದು ಪಾದಚಾರಿಗಳು, ವಾಹನ ಸವಾರರು ಮೂಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಮೈಸೂರು ಮಹಾನಗರ ಪಾಲಿಕೆ ಇದನ್ನು ರಿಪೇರಿ ಮಾಡುವ ಗೋಜಿಗೆ ಹೋಗಿಲ್ಲ.

ಈ ಮ್ಯಾನ್‌ಹೋಲ್ ವರ್ಷಕ್ಕೆ ಹಲವು ಬಾರಿ ಕಟ್ಟಿಕೊಳ್ಳುತ್ತದೆ. ಧಾರಾಕಾರ ಮಳೆ ಸುರಿದಾಗ ಮಳೆ ನೀರು ಹಾಗೂ ಮಲತ್ಯಾಜ್ಯ ಮಿಶ್ರಿತ ನೀರು ಒಟ್ಟಿಗೆ ರಸ್ತೆಗೆ ಹರಿಯುವುದರಿಂದ ವಾಹನ ಸವಾರರು ಈ ಮಾರ್ಗದ ಓಡಾಟದ ವೇಳೆ ದುರ್ವಾಸನೆ ಬೀರುತ್ತಿದೆ ಎಂದು ಸಾರ್ವಜನಿಕರೊಬ್ಬರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಪಡುವಾರಹಳ್ಳಿ ಸಿಗ್ನಲ್ ಬಿಟ್ಟ ತಕ್ಷಣ, ವಾಹನಗಳು ಮಲತ್ಯಾಜ್ಯ ನೀರಿನ ಮೇಲೆ ಓಡಿಸುವುದರಿಂದ ಆ ನೀರು ಪಾದಚಾರಿಗಳಿಗೆ ಸಿಡಿದು ಬಟ್ಟೆಗಳೆಲ್ಲಾ ಗಲೀಜು ಆಗಿರುವ ಪ್ರಕರಣಗಳಿವೆ. ಈ ಸಂಬಂಧ 'ಮೈಸೂರು ಮಿತ್ರ' ಪತ್ರಿಕೆಯಲ್ಲಿ ಜೂ.8ರಂದು ವಿಸ್ತೃತ ವರದಿಯಾಗಿತ್ತು. ಆದರೂ ದಪ್ಪ ಚರ್ಮದ ಅಧಿಕಾರಿಗಳು ಈ ಸಮಸ್ಯೆ ಸರಿಪಡಿಸುವ ಗೋಜಿಗೆ ಹೋಗಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಹಾಗಾಗಿ ಈ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವಂತೆ ಸಾರ್ವಜನಿಕರು ಮನವಿ ಮಾಡಿದ್ದಾರೆ.

ನೀರಾವರಿ ಇಲಾಖೆಯ 42 ಮಂದಿ ಎಇಇ ವರ್ಗಾವಣೆ

ಮೈಸೂರು, ಜೂ.16(ಎಸ್‌ಪಿಎನ್)– ರಾಜ್ಯದ ವಿವಿಧ ಜಿಲ್ಲೆಯ ಜಲಸಂಪನ್ಮೂಲ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ, ಸ್ಥಳ ನಿರೀಕ್ಷಣೆಯಲ್ಲಿರುವ ಅಧಿಕಾರಿಗಳನ್ನು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರುವ 42 ಮಂದಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್(ಎಇಇ)ಗಳನ್ನು ವರ್ಗಾವಣೆ ಮಾಡಲಾಗಿದೆ. ಜಲಸಂಪನ್ಮೂಲ ಇಲಾಖೆಯ ಅಧೀನ ಕಾರ್ಯದರ್ಶಿ ಎಸ್.ಹರ್ಷ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಅನುಮೋದನೆ ಮೇರೆಗೆ ವರ್ಗಾವಣೆ ಮಾಡಿದ್ದಾರೆ.

ತುಮಕೂರಿನ ತಿಪಟೂರು ತಾಲೂಕಿನ ಕಾವೇರಿ ನೀರಾವರಿ ನಿಗಮ ನಿಯಮಿತ ಕಿಬ್ಬನಹಳ್ಳಿ ಉಪವಿಭಾಗದ ಎಇಇ ಟಿ.ಎಸ್.ಹರೀಶ್ ಅವರನ್ನು ಮಂಡ್ಯದ ಬೆಳ್ಳೂರು ಕಾವೇರಿ ನೀರಾವರಿ ನಿಗಮ ನಿಯಮಿತ (ಕಾನೀನಿನಿ) ಹೇಮಾವತಿ ನಾಲಾ ಉಪ ವಿಭಾಗದ ಹುದ್ದೆಗೆ, ಹೇಮಾವತಿ ನಾಲಾ ಉಪವಿಭಾಗದ ಎಇಇ ಎನ್.ಎನ್.ರಾಜೇಗೌಡ ಅವರನ್ನು ಮಂಡ್ಯದ ನಾಗಮಂಗಲ ತಾಲೂಕು ಬೆಳ್ಳೂರು ಕ್ರಾಸ್ ಹೇಮಾವತಿ ನಾಲಾ ಉಪವಿಭಾಗದ ಹುದ್ದೆಗೆ, ಹಾಸನದ ಸಕಲೇಶಪುರದ ವಿಶ್ವೇಶ್ವರಯ್ಯ ಜಲನಿಗಮದ ಎತ್ತಿನಹೊಳೆ ಯೋಜನಾ ಉಪವಿಭಾಗದ ಎಇಇ ಹೆಚ್.ಎಂ.ಶಶಿಕುಮಾರ್ ಅವರನ್ನು ಹಾಸನದ ಗೋರೂರು ಹೇಮಾವತಿ ಯೋಜನಾ ವಲಯದ ಮುಖ್ಯ ಇಂಜಿನಿಯರ್ ಕಚೇರಿಯ ತಾಂತ್ರಿಕ ಸಹಾಯಕ ಹುದ್ದೆಗೆ ವರ್ಗಾಯಿಸಲಾಗಿದೆ.

ಸ್ಥಳ ನಿರೀಕ್ಷೆಯಲ್ಲಿದ್ದ ಎಇಇ ವೈ.ಸಿ.ನವೀನ್‌ಕುಮಾರ್ ಅವರನ್ನು ಕಾವೇರಿ ನೀರಾವರಿ ನಿಗಮ ನಿಯಮಿತ ವಿಸಿಸಿ ಉಪವಿಭಾಗದ ಹುದ್ದೆಗೆ, ಸ್ಥಳ ನಿರೀಕ್ಷೆಯಲ್ಲಿದ್ದ ಎಇಇ ಕೆ.ಯದುಕೃಷ್ಣ ಅವರನ್ನು ನಾಗಮಂಗಲದ ಕಾನೀನಿನಿ ಹೆಚ್‌ಎಲ್‌ಬಿಸಿ ಉಪವಿಭಾಗದ ಹುದ್ದೆಗೆ, ಸ್ಥಳ ನಿರೀಕ್ಷೆಯಲ್ಲಿದ್ದ ಡಿ.ಎಚ್. ಅನಿಲ್ ಕುಮಾರ್ ಅವರನ್ನು ಮೈಸೂರು ಅಧೀಕ್ಷಕ ಇಂಜಿನಿಯರ್ ಕಚೇರಿಯ ನೀರಾವರಿ ತನಿಖಾ ವೃತ್ತದ ತಾಂತ್ರಿಕ ಸಹಾಯಕ ಹುದ್ದೆಗೆ, ಸ್ಥಳ ನಿರೀಕ್ಷೆಯಲ್ಲಿದ್ದ ಕೆ.ಎಸ್. ಮಹೇಶ್ ಅವರನ್ನು ಚಾಮರಾಜನಗರದ ಅಟ್ಟಿಗುಳಿಪುರದ ಕಾವೇರಿ ನೀರಾವರಿ ನಿಗಮ ನಿಯಮಿತದ ಸಿಆರ್‌ಆರ್ ಉಪ ವಿಭಾಗದ ಹುದ್ದೆಗೆ ವರ್ಗಾಯಿಸ ಲಾಗಿದ್ದು, ಇವರು ಸೇರಿದಂತೆ 42 ಮಂದಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳನ್ನು ವರ್ಗಾವಣೆ ಮಾಡಲಾಗಿದೆ.

ರಾಜ್ಯದಲ್ಲಿ ಕೊರೊನಾಗೆ ಮತ್ತೊಬ್ಬರು ಬಲಿ

208 ಮಂದಿಗೆ ಪಾಸಿಟಿವ್, 103 ಮಂದಿ ಡಿಸ್ಚಾರ್ಜ್

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ವೈರಸ್ ಪ್ರಕರಣ ಪತ್ತೆ ಮುಂದುವರೆದಿದ್ದು, ಇಂದು ಮತ್ತೆ 208 ಹೊಸ ಸೋಂಕು ಪ್ರಕರಣಗಳು ವರದಿಯಾಗಿವೆ.



ಈ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತನ್ನ ದೈನಂದಿನ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಕಳೆದ 24 ಗಂಟೆಯಲ್ಲಿ ರಾಜ್ಯದಲ್ಲಿ 208 ಮಂದಿಗೆ ಕೋವಿಡ್–19 ಪಾಸಿಟಿವ್ ದೃಢಪಟ್ಟಿದೆ.

ಅಂತೆಯೇ ಇದೇ ಅವಧಿಯಲ್ಲಿ ಸೋಂಕಿಗೆ ತುತ್ತಾಗಿದ್ದ 103 ಮಂದಿ ಗುಣಮುಖರಾಗಿದ್ದು, ಇದರೊಂದಿಗೆ ರಾಜ್ಯದಲ್ಲಿನ ಸಕ್ರಿಯ ಸೋಂಕಿತರ ಸಂಖ್ಯೆ 696ಕ್ಕೆ ಏರಿಕೆಯಾಗಿದೆ.

ಈ ಪೈಕಿ 692 ಮಂದಿ ಹೋಮ್ ಐಸೋಲೇಷನ್ (ಮನೆಯಲ್ಲೇ ಚಿಕಿತ್ಸೆ)ನಲ್ಲಿದ್ದಾರೆ. 4 ಮಂದಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಇನ್ನು ರಾಜ್ಯದಲ್ಲಿ ಮಹಾಮಾರಿ ಕೊರೊನಾದಿಂದ ಯಾವುದೇ ಸಾವು ವರದಿಯಾಗಿಲ್ಲ. ರಾಜ್ಯದಲ್ಲಿ ಇಂದು ಒಟ್ಟು 386 ಜನರನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಲಾಗಿದ್ದು, ಆ ಪೈಕಿ 348 ಆರ್‌ಟಿಪಿಸಿಆರ್ ಪರೀಕ್ಷೆ ಮಾಡಲಾಗಿದೆ. 38 RAT ಪರೀಕ್ಷೆ ಮಾಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಆರೋಗ್ಯ ಇಲಾಖೆ ಕೋವಿಡ್ ಪರಿಸ್ಥಿತಿಯ ನಿಗಾ ವಹಿಸಿದ್ದು, ಹತೋಟಿಗೆ ತರಲು ಕ್ರಮಗಳನ್ನು ಕೈಗೊಳ್ಳುತ್ತಿದೆ. ರಾಜ್ಯದಲ್ಲಿ ಆತಂಕ ಪಡುವ ಪರಿಸ್ಥಿತಿ ಇಲ್ಲವಾದರೂ, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ.

ಜೂ.26ಕ್ಕೆ ಎಂಸಿಡಿಸಿಸಿ ಬ್ಯಾಂಕ್ ಚುನಾವಣೆ

ಚಾ.ನಗರ ಶಾಸಕ ಸಿ.ಪುಟ್ಟರಂಗಶೆಟ್ಟಿ ಸೇರಿ 15 ಮಂದಿ ನಾಮಪತ್ರ ಸಲ್ಲಿಕೆ

ಮೈಸೂರು, ಜೂ.16(ಎಂಕೆ)– ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್(ಎಂಸಿಡಿಸಿಸಿ) ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಗೆ ಸ್ಪರ್ಧೆ ಬಯಸಿ ಚಾಮರಾಜನಗರ ಕ್ಷೇತ್ರದ ಶಾಸಕ ಸಿ.ಪುಟ್ಟರಂಗಶೆಟ್ಟಿ ಸೇರಿದಂತೆ 15 ಮಂದಿ ನಾಮಪತ್ರ ಸಲ್ಲಿಸಿದ್ದಾರೆ.



ಜೂ.26 ರಂದು ನಡೆಯುವ ಚುನಾವಣೆ ಕಣ ರಂಗೇರುತ್ತಿದ್ದು, ಸೋಮವಾರ ಒಂದೇ ದಿನ 11 ಮಂದಿಯಿಂದ ಉಮೇದುವಾರಿಕೆ ಸಲ್ಲಿಕೆಯಾಗಿದೆ. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರಗಳಿಂದ ಮೈಸೂರು ತಾಲೂಕಿನಿಂದ ಕೆಂಚಪ್ಪ, ಹೆಚ್.ಡಿ.ಕೋಟೆಯಿಂದ ಶಿವಣ್ಣ, ಲಕ್ಷ್ಮೀಪ್ರಸಾದ್, ಮಾದಪ್ಪ, ಶಿವನಂಜೇಗೌಡ ನಾಮಪತ್ರ ಸಲ್ಲಿಸಿದರೆ, ಗುಂಡ್ಲುಪೇಟೆಯಿಂದ ವೀರಪ್ಪ, ಪಿರಿಯಾಪಟ್ಟಣದಿಂದ ರವಿ ಮತ್ತು ಲೋಕೇಶ್, ಹುಣಸೂರಿನಿಂದ ಉದ್ಯಮಿ ಅಮರನಾಥ್ ಕಣಕ್ಕಿಳಿದಿದ್ದಾರೆ.

ಹಾಗೆಯೇ ಚಾಮರಾಜನಗರದಿಂದ ಶಾಸಕ ಸಿ.ಪುಟ್ಟರಂಗಶೆಟ್ಟಿ, ವೃಷಭೇಂದ್ರಪ್ಪ, ಕೊಳ್ಳೇಗಾಲದಿಂದ ಹನೂರು ಕ್ಷೇತ್ರದ ಮಾಜಿ ಶಾಸಕ ಸಿ.ನರೇಂದ್ರ, ನಾಗರಾಜು ಸ್ಪರ್ಧೆಗಿಳಿದಿದ್ದಾರೆ. ತಾಲೂಕು, ಜಿಲ್ಲೆ ಹಾಗೂ ಜಿಲ್ಲೆ ಮೇಲ್ಪಟ್ಟು ಕಾರ್ಯವ್ಯಾಪ್ತಿ ಹೊಂದಿರುವ ಸಹಕಾರ ಸಂಘಗಳು ಮತ್ತು ಸಹಕಾರ ಬ್ಯಾಂಕ್‌ಗಳ ಕ್ಷೇತ್ರದ ಒಂದು ಸ್ಥಾನಕ್ಕೆ ಜಿ.ಎಸ್. ಮಂಜುನಾಥ್ ಹಾಗೂ ನಗರಪಾಲಿಕೆ ಮಾಜಿ ಸದಸ್ಯ ಎಸ್.ಬಿ.ಎಂ.ಮಂಜು ನಾಮಪತ್ರ ಸಲ್ಲಿಸಿದ್ದಾರೆ.

ರಂಗೇರಿದ ಚುನಾವಣ ಕಣ: ಈ ಬಾರಿ ಘಟಾನುಘಟಿಗಳು ಕಣಕ್ಕಿಳಿಯುತ್ತಿರುವುದರಿಂದ ಎಂಸಿಡಿಸಿಸಿ ಬ್ಯಾಂಕ್ ಚುನಾವಣಾ ಕಣ ರಂಗೇರಿದೆ. ಆಕಾಂಕ್ಷಿಗಳು ಈಗಾಗಲೇ ಮತದಾರರಾಗಿರುವ ಸಹಕಾರ ಸಂಘಗಳ 'ಪ್ರತಿನಿಧಿ(ಡೆಲಿಗೇಟ್ಸ್)'ಗಳನ್ನು ಭೇಟಿಯಾಗಿ ಮತ ನೀಡುವಂತೆ ಮನವೊಲಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

ಹೆಚ್.ಡಿ.ಕೋಟೆ ಕ್ಷೇತ್ರದ ಶಾಸಕ ಅನಿಲ್ ಚಿಕ್ಕಮಾದು, ಹುಣಸೂರು ಶಾಸಕ ಜಿ.ಡಿ. ಹರೀಶ್‌ಗೌಡ, ಗುಂಡ್ಲುಪೇಟೆ ಕ್ಷೇತ್ರದ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್, ಎಂಸಿಡಿಸಿಸಿ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್, ಸಿ.ಬಸವೇಗೌಡ, ಮಾಜಿ ನಿರ್ದೇಶಕರಾದ ಬಿ.ಎನ್. ಸದಾನಂದ, ಅಮಿತ್ ವಿ.ದೇವರಹಟ್ಟಿ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಕಣಕ್ಕಿಳಿಯುವುದು ಖಚಿತವಾಗಿದೆ ಎನ್ನಲಾಗುತ್ತಿದ್ದು ಹಳೆಯ ಮುಖಂಡರುಗಳೊಂದಿಗೆ ಕೆಲವು ಹೊಸ ಮುಖಂಡರು ಕೂಡ ಕಣಕ್ಕಿಳಿಯುತ್ತಿರುವುದು ರೋಚಕತೆ ಹೆಚ್ಚಿಸಿದೆ.

ಜೂ.18 ಕೊನೆ ದಿನ: ನ್ಯಾಯಾಲಯದಲ್ಲಿರುವ 3 ಕ್ಷೇತ್ರಗಳನ್ನು ಹೊರತುಪಡಿಸಿ, ಉಳಿದ 13 ಕ್ಷೇತ್ರಗಳ ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ನಾಮಪತ್ರ ಸಲ್ಲಿಕೆಗೆ ಜೂ.18 ಕೊನೆಯ ದಿನವಾಗಿದೆ. ಜೂ.19 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಜೂ.20 ರಂದು ನಾಮಪತ್ರ ವಾಪಸ್ ಪಡೆಯಲು ಅವಕಾಶ ನೀಡಿದ್ದು, ಜೂ.26 ರಂದು ಮೈಸೂರಿನ ನಂಜರಾಜ ಬಹದ್ದೂರ್ ಛತ್ರದಲ್ಲಿ ಮತದಾನ ನಡೆಯಲಿದೆ

ಸಾಲುಮರದ ತಿಮ್ಮಕ್ಕ ಜೀವನ ಕಥೆ ಆಧರಿಸಿದ ಚಿತ್ರ 'ವೃಕ್ಷಮಾತೆ' ವಿರುದ್ಧ ದೂರು ದಾಖಲು

ಬೆಂಗಳೂರು: ಸಾಲುಮರದ ತಿಮ್ಮಕ್ಕ ಅವರ ಜೀವನ ಕಥೆ ಆಧರಿಸಿ ನಿರ್ಮಾಣವಾಗುತ್ತಿದ್ದ 'ವೃಕ್ಷಮಾತೆ' ಎಂಬ ಸಿನಿಮಾಕ್ಕೆ ಆರಂಭದಲ್ಲೇ ವಿಘ್ನ ಎದುರಾಗಿದ್ದು ಸ್ವತಃ ಸಾಲುಮರದ ತಿಮ್ಮಕ್ಕ ಈ ಸಂಬಂಧ ದೂರು ದಾಖಲಿಸಿದ್ದಾರೆ.



ತಮ್ಮ ಜೀವನದ ಉದ್ದಕ್ಕೂ ಪರಿಸರ ಪೋಷಣೆಯಲ್ಲಿ ತೊಡಗಿಸಿಕೊಂಡು, ಲಕ್ಷಾಂತರ ಮರಗಳನ್ನು ನೆಟ್ಟಿದ್ದ 'ವೃಕ್ಷ ಮಾತೆ' ಸಾಲುಮರದ ತಿಮ್ಮಕ್ಕ ಇದೀಗ ಫಿಲಂ ಚೇಂಬರ್ ಮೆಟ್ಟಿಲೇರಿದ್ದು, ಈ ಸಿನಿಮಾ ಮಾಡಬಾರದು ಎಂದು ಸ್ವತಃ ತಿಮ್ಮಕ್ಕ ಅವರೇ ಫಿಲ್ಮ್ ಚೇಂಬರ್‌ಗೆ ಬಂದು ದೂರು ಕೊಟ್ಟಿದ್ದಾರೆ ಎಂದು ಮಾಧ್ಯಮವೊಂದು ವರದಿ ಮಾಡಿದೆ.

ಮೂಲಗಳ ಪ್ರಕಾರ 'ಶ್ರೀಲಕ್ಷ್ಮಿ ವೆಂಕಟೇಶ್ವರ ಪಿಕ್ಚರ್ಸ್' ಬ್ಯಾನರ್ ಅಡಿಯಲ್ಲಿ 'ವೃಕ್ಷಮಾತೆ' ಸಿನಿಮಾ ಸಿದ್ಧವಾಗುತ್ತಿದೆ. ಈ ಚಿತ್ರವನ್ನು ದಿಲೀಪ್ ಕುಮಾರ್ ಎಚ್.ಆರ್., ಸೌಜನ್ಯ ಡಿ.ವಿ, ಎ. ಸಂತೋಷ್ ಮುರಳಿ, ಒರಟ ಶ್ರೀ ಅವರು ನಿರ್ಮಿಸುತ್ತಿದ್ದಾರೆ.

ಒರಟ ಖ್ಯಾತಿಯ ಶ್ರೀ ನಿರ್ದೇಶನ ಮಾಡುತ್ತಿದ್ದಾರೆ. ಸಿದ್ದೇಶ್ ಅವರು ಬರೆದಿರುವ 'ವೃಕ್ಷಮಾತೆ ಸಾಲುಮರದ ತಿಮ್ಮಕ್ಕ' ಕೃತಿಯನ್ನು ಆಧರಿಸಿ ಈ ಸಿನಿಮಾ ಸಿದ್ಧವಾಗುತ್ತಿದೆ. ಆದರೆ, ಇದಕ್ಕೆ ಸಾಲುಮರದ ತಿಮ್ಮಕ್ಕ ಅವರೇ ವಿರೋಧ ವ್ಯಕ್ತಪಡಿಸಿದ್ದಾರೆ.

ಎರಡು ದಿನಗಳ ಹಿಂದೆ ಚಿತ್ರತಂಡ ಸಿನಿಮಾದ ಶೂಟಿಂಗ್ ಮಾಡುತ್ತಿತ್ತು. ಈ ವೇಳೆ ತಂಡವನ್ನು ಸ್ಟೇಷನ್‌ಗೆ ಕರೆದುಕೊಂಡು ಹೋಗಿದ್ದರು. ಅಲ್ಲಿ 'ವೃಕ್ಷಮಾತೆ' ಸಿನಿಮಾಗೆ ಸಾಲು ಮರದ ತಿಮ್ಮಕ್ಕ ಅವರ ಸಾಕು ಮಗ ಉಮೇಶ್ ಅವರಿಂದ ಅನುಮತಿ ಪಡೆದಿಲ್ಲ ಎಂಬ ಮಾಹಿತಿಯನ್ನು ಪೊಲೀಸರು ನೀಡಿದ್ದರು. ಈಗ ಫಿಲ್ಮ್ ಚೇಂಬರ್‌ಗೆ ಆಗಮಿಸಿ ಸಾಲುಮರದ ತಿಮ್ಮಕ್ಕ ದೂರು ಕೊಟ್ಟಿದ್ದಾರೆ.

ಮಗ ಉಮೇಶ್ ಸ್ಪಷ್ಟನೆ: ತಿಮ್ಮಕ್ಕ ಅವರ ಸಾಕು ಮಗ ಉಮೇಶ್ ಈ ಬಗ್ಗೆ ಮಾತನಾಡಿದ್ದಾರೆ. ಸಾಲುಮರದ ತಿಮ್ಮಕ್ಕ ಅವರ ಬಯೋಪಿಕ್ ಮಾಡೋದಾಗಿ ಸಾಕಷ್ಟು ನಿರ್ದೇಶಕರು ಬಂದಿದ್ದರು. ಆದರೆ, ನಾವು ಮಾಡೋದು ಬೇಡ ಎಂದು ಹೇಳಿದ್ದೇವೆ. ದಿಲೀಪ್ ಕೂಡ ಸಿನಿಮಾ ಮಾಡುತ್ತೇನೆ ಎಂದಿದ್ದರು. ಅವರಿಗೂ ಬೇಡ ಎಂದು ಹೇಳಿದ್ದೆವು. ಈ ತಂಡಕ್ಕೆ ನಾವು ಸಿನಿಮಾ ಮಾಡೋಕೆ ಬಿಡುವುದಿಲ್ಲ' ಎಂದು ಹೇಳಿದ್ದಾರೆ.

ಫಿಲ್ಮ್ ಚೇಂಬರ್‌ನಿಂದ ಸ್ಪಷ್ಟನೆ: ಸಿನಿಮಾ ಸಂಬಂಧ ಸಾಲುಮರದ ತಿಮ್ಮಕ್ಕ ದೂರು ಕೊಟ್ಟಿದ್ದಾರೆ. ನಮ್ಮ ಅನುಮತಿ ಇಲ್ಲದೇ ಸಿನಿಮಾ ಮಾಡ್ತಿದಾರೆ ಎಂದು ಹೇಳಿದ್ದಾರೆ. ಇಲ್ಲಿ ವೃಕ್ಷಮಾತೆ ಸಿನಿಮಾ ರಿಜಿಸ್ಟರ್ ಆಗಿಲ್ಲ. ಸಿನಿಮಾ ತಂಡವನ್ನು ಕರೆದು ಮಾತನಾಡುತ್ತೇವೆ ಎಂದು ಹೇಳಿದ್ದಾರೆ.

ಬೆಂಗಳೂರಿನ ಎಂಪಿ, ಎಂಎಲ್‌ಎಗಳ ಮೌಲ್ಯಮಾಪನ: ಬಿಜೆಪಿ ಶಾಸಕ ನಂ.1 ಶ್ರೀಮಂತ

ಬೆಂಗಳೂರು, ಜೂ. 16: ಬೆಂಗಳೂರಿನಿಂದ ಆಯ್ಕೆಯಾಗಿರುವ 32 ಶಾಸಕರು ಹಾಗೂ ನಾಲ್ವರು ಸಂಸದರ ಸಾಧನೆ ಕುರಿತು 'ಸಿವಿಕ್' ಸಂಸ್ಥೆಯು ನಾಗರಿಕ ವರದಿಯನ್ನು ಬಿಡುಗಡೆ ಮಾಡಿದ್ದು, ಕಾರ್ಯಕ್ಷಮತೆ ಮೌಲ್ಯಮಾಪನ, ಕ್ರಿಮಿನಲ್ ಪ್ರಕರಣಗಳು ಹಾಗೂ ಶಾಸಕರ ಆದಾಯವನ್ನು ವರದಿಯಲ್ಲಿ ತಿಳಿಸಲಾಗಿದೆ. ಬೆಂಗಳೂರಿನ 32 ಶಾಸಕರ ಪೈಕಿ ಮಹಾಲಕ್ಷ್ಮೀ ಲೇಔಟ್ ಕ್ಷೇತ್ರದ ಬಿಜೆಪಿ ಶಾಸಕ ಕೆ.ಗೋಪಾಲಯ್ಯ ಅವರ ಆದಾಯವು ಶೇ.1,399 ರಷ್ಟು ಹೆಚ್ಚಳವಾಗಿದ್ದು, ನಂಬರ್ 1 ಶ್ರೀಮಂತ ಶಾಸಕರೆನಿಸಿಕೊಂಡಿದ್ದಾರೆ.


ಗೋಪಾಲಯ್ಯ ಮುನಿರತ್ನ ಆರ್.ಅಶೋಕ್

ಕಳೆದ 6 ತಿಂಗಳಿಂದ ನಾಗರಿಕ ಸ್ವಯಂಸೇವಕರು, ವಿದ್ಯಾರ್ಥಿಗಳು ಸಂಗ್ರಹಿಸಿದ ರಿಪೋರ್ಟ್ ಕಾರ್ಡ್ ಇದಾಗಿದ್ದು, ಶಾಸಕರು, ಸಂಸದರ ಹಾಜರಾತಿ, ಶಾಸನ ರಚನೆಯಲ್ಲಿನ ಸಕ್ರಿಯ ಭಾಗವಹಿಸುವಿಕೆ, ಕ್ಷೇತ್ರಾಭಿವೃದ್ಧಿ ನಿಧಿ ಬಳಕೆ, ಅನುದಾನಗಳ ಸದ್ವಿನಿಯೋಗ, ವೈಯಕ್ತಿಕ ಆಸ್ತಿ ಬೆಳವಣಿಗೆ, ಅಪರಾಧ ಚಟುವಟಿಕೆ ಅಥವಾ ಪ್ರಕರಣ ಸೇರಿದಂತೆ ಹಲವು ಅಂಶಗಳನ್ನು ಒಳಗೊಂಡಿದೆ.

ಗೋಪಾಲಯ್ಯ ನಂ.1 ಶ್ರೀಮಂತ ಶಾಸಕ: ಈ ಪೈಕಿ ಶಾಸಕ ಗೋಪಾಲಯ್ಯ ಅವರ ಆದಾಯ ಹಿಂದಿನ ಅವಧಿಗೆ ಹೋಲಿಸಿದರೆ ಈ ಬಾರಿ ಶೇ.1399 ರಷ್ಟು ಹೆಚ್ಚಳವಾಗಿದೆ. ನಂತರದ ಸ್ಥಾನದಲ್ಲಿರುವ ಮುನಿರತ್ನ ಅವರ ಆದಾಯ ಪ್ರಮಾಣವು ಶೇ.959 ರಷ್ಟು ಹೆಚ್ಚಳವಾಗಿದ್ದರೆ, ಮೂರನೇ ಸ್ಥಾನದಲ್ಲಿರುವ ಕಾಂಗ್ರೆಸ್ ಶಾಸಕ ಎನ್.ಎ. ಹ್ಯಾರಿಸ್ ಅವರ ಆದಾಯವು ಶೇ.318 ಹಾಗೂ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅವರ ಆದಾಯವು ಸಹ ಶೇ.104 ರಷ್ಟು ಹೆಚ್ಚಳವಾಗಿದ್ದು, ನಾಲ್ಕನೇ ಸ್ಥಾನ ಕಾಯ್ದುಕೊಂಡಿದ್ದಾರೆ.

ಇಲ್ಲಿದೆ ಸಂಸದರ ಕ್ಷಮತೆ: ಜೂನ್ 24ಕ್ಕೆ ಬೆಂಗಳೂರಿನ ನಾಲ್ವರು ಸಂಸದರು 18ನೇ ಲೋಕಸಭೆಯ ಸದಸ್ಯರಾಗಿ 1 ವರ್ಷ ಪೂರ್ಣಗೊಳ್ಳಲಿದೆ. ಹೀಗಾಗಿ ಇವರ ಕಾರ್ಯವೈಖರಿ ಬಗ್ಗೆ 'ಸಿವಿಕ್' ಸಂಸ್ಥೆಯು ನಾಗರಿಕ ವರದಿಯಲ್ಲಿ ತಿಳಿಸಿದ್ದು, ಸಂಸತ್ ಅಧಿವೇಶನಕ್ಕೆ ಹಾಜರಾಗುವ ವಿಚಾರದಲ್ಲಿ ಬೆಂಗಳೂರು ಸೆಂಟ್ರಲ್ ಕ್ಷೇತ್ರದ ಬಿಜೆಪಿ ಸಂಸದ ಪಿ.ಸಿ. ಮೋಹನ್ (ಶೇ.98.51) ಮೊದಲ ಸ್ಥಾನದಲ್ಲಿದ್ದರೆ, ಬೆಂಗಳೂರು ದಕ್ಷಿಣ ಕ್ಷೇತ್ರದ ಮತ್ತೋರ್ವ ಬಿಜೆಪಿ ಶಾಸಕ ತೇಜಸ್ವಿ ಸೂರ್ಯ (ಶೇ.77.6) ಹಾಜರಾತಿ ವಿಚಾರದಲ್ಲಿ ಕೊನೆ ಸ್ಥಾನದಲ್ಲಿದ್ದಾರೆ. ಆದರೆ, ಅತೀ ಹೆಚ್ಚು ಪ್ರಶ್ನೆ ಕೇಳಿದವರ ಪಟ್ಟಿಯಲ್ಲಿ 84 ಪ್ರಶ್ನೆಗಳನ್ನು ಕೇಳಿರುವ ತೇಜಸ್ವಿ ಸೂರ್ಯ ಮೊದಲ ಸ್ಥಾನದಲ್ಲಿದ್ದು, ಒಂದೇ ಒಂದು ಪ್ರಶ್ನೆ ಕೇಳಿರುವ ಪಿ.ಸಿ. ಮೋಹನ್ ಕಡೆಯಲ್ಲಿದ್ದಾರೆ.

ನಿಧಿ ಬಳಕೆಯಲ್ಲಿ ಡಾ. ಮಂಜುನಾಥ್ ಅಗ್ರಸ್ಥಾನ: ಇನ್ನು ಸಂಸದರ ನಿಧಿ ಬಳಕೆಯಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಬಿಜೆಪಿ ಸಂಸದ ಡಾ.ಮಂಜುನಾಥ್ (ಶೇ.126.44) ಅಗ್ರಸ್ಥಾನದಲ್ಲಿದ್ದರೆ, ಪಿ.ಸಿ. ಮೋಹನ್ (ಶೇ.9.48) ಕೊನೆಯಲ್ಲಿದ್ದಾರೆ ಎಂದು ವರದಿಯಲ್ಲಿದೆ. ಬೆಂಗಳೂರಿನ ಜಯದೇವ ಆಸ್ಪತ್ರೆಯ ನಿರ್ದೇಶಕರಾಗಿದ್ದ ಡಾ.ಮಂಜುನಾಥ್ ಅವರು ನಿವೃತ್ತಿ ಬಳಿಕ ರಾಜಕೀಯಕ್ಕೆ ಪ್ರವೇಶ ಮಾಡಿದ್ದು, ಇದೇ ಮೊದಲ ಬಾರಿಗೆ ಬಿಜೆಪಿ ಅಭ್ಯರ್ಥಿಯಾಗಿ ಬೆಂಗಳೂರು ಗ್ರಾಮಾಂತರ ಕ್ಷೇತ್ರಕ್ಕೆ ಬಿಜೆಪಿಯಿಂದ ಸ್ಪರ್ಧಿಸಿ ಕಾಂಗ್ರೆಸ್‌ನ ಡಿ.ಕೆ. ಸುರೇಶ್ ಅವರನ್ನು ಸೋಲಿಸಿದ್ದಾರೆ. ಈ ಮೂಲಕ ಇದೇ ಮೊದಲ ಬಾರಿಗೆ ಮಂಜುನಾಥ್ ಅವರು ಸಂಸತ್ ಪ್ರವೇಶ ಮಾಡಿದ್ದು, ಮೊದಲ ಅವಧಿಯಲ್ಲೇ ಅವರು ತಮ್ಮ ಸಂಸದರ ನಿಧಿ ಬಳಕೆಯಲ್ಲಿ ಇನ್ನುಳಿದ ಬೆಂಗಳೂರಿನ ಎಂಪಿಗಳಿಗಿಂತ ಮುಂಚೂಣಿಯಲ್ಲಿದ್ದಾರೆ.

ನಿಧಿ ಬಳಕೆಯಲ್ಲಿ ಶಾಸಕರಿಗಿಲ್ಲ ಆಸಕ್ತಿ: ಶಾಸಕರ ನಿಧಿ ಬಳಕೆಯಲ್ಲಿ ಪರಮ ನಿರ್ಲಕ್ಷ್ಯ ಅನುಸರಣೆ ಆಗುತ್ತಿದ್ದು, ನಾಲ್ವರು ಶಾಸಕರು ಸಂಪೂರ್ಣ ನಿಧಿ ಬಳಸಿಕೊಂಡಿದ್ದರೆ, 6 ಶಾಸಕರು ಶೇ.90ಕ್ಕಿಂತ ಅಧಿಕ ಪ್ರಮಾಣದ ನಿಧಿ ಬಳಸಿಕೊಂಡಿದ್ದಾರೆ ಎಂದು ವರದಿಯಲ್ಲಿ ಹೇಳಲಾಗಿದೆ. ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 40.79 ಕೋಟಿ ರೂ. ಖರ್ಚಾಗದೆ ಉಳಿದಿದೆ. ಇನ್ನು ಹಾಜರಾತಿ ವಿಚಾರದಲ್ಲಿ ನೆಲಮಂಗಲದ ಶಾಸಕ ಶ್ರೀನಿವಾಸ್ ಶೇ.100 ರಷ್ಟು ಸಕ್ರಿಯರಾಗಿದ್ದು, ಮೂವರು ಶಾಸಕರ ಹಾಜರಾತಿ ಶೇ.70ಕ್ಕಿಂತ ಕಡಿಮೆ ಇದೆ. ಶೇ.53.62 ರಷ್ಟು ಹಾಜರಾತಿ ಕೊರತೆ ಇರುವ ಪ್ರಿಯಕೃಷ್ಣ ಕೊನೆಯ ಸ್ಥಾನದಲ್ಲಿ ಇದ್ದಾರೆ.

ಮುನಿರತ್ನ ವಿರುದ್ಧ ಅತೀ ಹೆಚ್ಚು ಕೇಸ್: ಇನ್ನು ಶಾಸಕರ ಅಪರಾಧ ಚಟುವಟಿಕೆ ಅಥವಾ ಅವರ ವಿರುದ್ಧ ಪ್ರಕರಣಗಳ ಬಗ್ಗೆಯೂ ವರದಿಯಲ್ಲಿ ಉಲ್ಲೇಖವಾಗಿದ್ದು, ಮುನಿರತ್ನ ಅವರ ಮೇಲೆ ಲೈಂಗಿಕ ಕಿರುಕುಳದ ಆರೋಪಗಳು ಸೇರಿದಂತೆ 8 ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ. ಡಿಸೆಂಬರ್ 2024 ರಲ್ಲಿ ಅವರ ಮೇಲೆ ಅತ್ಯಾಚಾರ ಮತ್ತು ಹನಿಟ್ರ್ಯಾಪ್ ಆರೋಪಗಳೂ ಕೇಳಿಬಂದಿವೆ. ಇದರೊಂದಿಗೆ ಬೆಂಗಳೂರಿನಲ್ಲಿ ಅತಿ ಹೆಚ್ಚು ಕ್ರಿಮಿನಲ್ ಪ್ರಕರಣಗಳನ್ನು ಹೊಂದಿರುವ ಶಾಸಕರೆನಿಸಿಕೊಂಡಿದ್ದಾರೆ.

ಅಪರಿಚಿತ ವಾಹನ ಡಿಕ್ಕಿ: ರಸ್ತೆ ದಾಟುತ್ತಿದ್ದ ವೃದ್ಧೆ ಸಾವು

ಮೈಸೂರು, ಜೂ.16– ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ರಸ್ತೆ ದಾಟುತ್ತಿದ್ದ ವೃದ್ಧೆ ಸಾವನ್ನಪ್ಪಿರುವ ಘಟನೆ ಮೈಸೂರಿನ ಕಲ್ಯಾಣಗಿರಿಯಲ್ಲಿ ನಡೆದಿದೆ.

ಕಲ್ಯಾಣಗಿರಿ ಕೆಹೆಚ್‌ಬಿ ಕಾಲೋನಿ ನಿವಾಸಿ ಪಿ.ರಾಣಿ(74) ಅಪಘಾತದಲ್ಲಿ ಮೃತಪಟ್ಟವರಾಗಿದ್ದು, ಡಿಕ್ಕಿ ಹೊಡೆದ ವಾಹನ ಪತ್ತೆಗೆ ಪೊಲೀಸರು ಕ್ರಮ ವಹಿಸಿದ್ದಾರೆ.

ಇವರು ಶನಿವಾರ ರಾತ್ರಿ 7.15ರ ಸಮಯದಲ್ಲಿ ಡಾ.ರಾಜ್‌ಕುಮಾರ್ ರಸ್ತೆ ದಾಟುವಾಗ ಬಿಎಸ್‌ಎನ್‌ಎಲ್ ಜಂಕ್ಷನ್ ಕಡೆಯಿಂದ ತ್ರಿವೇಣಿ ಸರ್ಕಲ್ ಕಡೆಗೆ ವೇಗವಾಗಿ ಬಂದ ವಾಹನವೊಂದು ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ನೆಲಕ್ಕುರುಳಿ ರಾಣಿ ಅವರು ತೀವ್ರವಾಗಿ ಗಾಯಗೊಂಡಿದ್ದಾರೆ. ಕೂಡಲೇ ಅವರನ್ನು ಸಾರ್ವಜನಿಕರು ಖಾಸಗಿ ಆಸ್ಪತ್ರೆಗೆ ಕರೆದೊಯ್ದು, ನಂತರ ಹೆಚ್ಚಿನ ಚಿಕಿತ್ಸೆಗಾಗಿ ಕೆ.ಆರ್.ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಚಿಕಿತ್ಸೆ ಫಲಕಾರಿಯಾಗದೆ ರಾಣಿ ಅವರು ಮೃತಪಟ್ಟಿದ್ದಾರೆ.

ರಾಣಿ ಅವರಿಗೆ ಡಿಕ್ಕಿ ಹೊಡೆದಿದ್ದು, ಆಟೋ ಮಾದರಿ ವಾಹನ. ಘಟನೆ ಬಳಿಕ ಚಾಲಕ ವಾಹನದೊಂದಿಗೆ ಪರಾರಿಯಾದ ಎಂದು ಪ್ರತ್ಯಕ್ಷದರ್ಶಿಗಳು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಈ ಸಂಬಂಧ ಸಿದ್ದಾರ್ಥ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮನೆ ಬಾಗಿಲು ಮುರಿದು ಚಿನ್ನಾಭರಣ ಕಳವು

ಮೈಸೂರು, ಜೂ.16– ಮನೆ ಬಾಗಿಲು ಮುರಿದು ಚಿನ್ನಾಭರಣ ದೋಚಿರುವ ಘಟನೆ ಮೈಸೂರು ತಾಲೂಕು ಇಲವಾಲ ಸಮೀಪ ನಡೆದಿದೆ.

ಕ್ರೈಂ ಬಾಕ್ಸ್

ರುಷಿಹಳ್ಳಿ ಗ್ರಾಮ ವ್ಯಾಪ್ತಿಯ ರಾಜಧಾನಿ–2 ಬಡಾವಣೆ ನಿವಾಸಿ ಶೀಲಾಮಣಿ ಅವರ ಮನೆಗೆ ಹಾಡಹಗಲೇ ನುಗ್ಗಿರುವ ಖದೀಮರು, ಚಿನ್ನದ ಸರ, ಓಲೆ ಸೇರಿ 3.50 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ 500 ರೂ. ನಗದು ಕಳವು ಮಾಡಿದ್ದಾರೆ.

ಸಿಐಎಸ್‌ಎಫ್ ಸಿಬ್ಬಂದಿಯಾಗಿರುವ ಪತಿ, ಕಾರವಾರದಲ್ಲಿ ಕರ್ತವ್ಯದಲ್ಲಿದ್ದಾರೆ. ಶೀಲಾಮಣಿ ಅವರು ಇಬ್ಬರು ಮಕ್ಕಳೊಂದಿಗೆ ಮೈಸೂರಿನಲ್ಲಿ ವಾಸವಿದ್ದಾರೆ. ಶನಿವಾರ ಶೀಲಾಮಣಿ ಅವರು ಹಾಸನ ಜಿಲ್ಲೆಯಲ್ಲಿರುವ ತವರು ಮನೆಗೆ ಹೋಗಿದ್ದರು. ಮರುದಿನ ಕರೆ ಮಾಡಿದ ಮಗ, ಯಾರೋ ಮನೆಯ ಬಾಗಿಲು ಮುರಿದಿರುವುದಾಗಿ ತಿಳಿಸಿದ್ದ. ಕೂಡಲೇ ತವರಿನಿಂದ ವಾಪಸ್ಸಾಗಿ ಪರಿಶೀಲಿಸಿದಾಗ ಬೀರುವನ್ನು ಒಡೆದು ಚಿನ್ನಾಭರಣ ಕಳ್ಳತನ ಮಾಡಿರುವುದು ಗೊತ್ತಾಯಿತು. ಈ ಸಂಬಂಧ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಹೊರವಲಯದಲ್ಲಿ ಜೂಜಾಟ; ಹಲವರ ಬಂಧನ


ಮೈಸೂರು, ಜೂ.16– ಮೈಸೂರು ಹೊರವಲಯದಲ್ಲಿ ಇಸ್ಪೀಟ್ ಜೂಜು ಎಗ್ಗಿಲ್ಲದೆ ನಡೆಯುತ್ತಿದ್ದು, ನಿನ್ನೆ ಎರಡು ಕಡೆ ಪೊಲೀಸರು ದಾಳಿ ನಡೆಸಿದ್ದಾರೆ.

ಇಲವಾಲ ಪೊಲೀಸ್ ಠಾಣೆ ವ್ಯಾಪ್ತಿಯ ಸೀಗಳ್ಳಿ ರಸ್ತೆಯ ಆತ್ಮಾನಂದಸಾಗರ ಬಡಾವಣೆಯಲ್ಲಿ ಜೂಜಾಡುತ್ತಿದ್ದ 6 ಮಂದಿಯನ್ನು ವಶಕ್ಕೆ ಪಡೆದು, ಪಣಕ್ಕಿಟ್ಟಿದ್ದ ಸುಮಾರು 8 ಸಾವಿರ ಹಣವನ್ನು ಜಪ್ತಿ ಮಾಡಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಆಲನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಕಾವೇರಿ ಎನ್‌ಕ್ಲೇವ್ ಮುಖ್ಯರಸ್ತೆಯ ಬದಿಯಲ್ಲಿ 12–13 ಮಂದಿ ಜೂಜಾಡುತ್ತಿದ್ದಾಗ ಪೊಲೀಸರು ದಾಳಿ ನಡೆಸಿದ್ದು, ಕೆಲವರು ಸಿಕ್ಕಿ ಬಿದ್ದಿದ್ದಾರೆ ಎಂದು ತಿಳಿದುಬಂದಿದೆ.

ಬ್ಲ್ಯಾಕ್‌ಮೇಲ್, ಅತ್ಯಾಚಾರ ಯತ್ನ

ಬೆಂಗಳೂರು ಪೊಲೀಸರಿಂದ ಕೇರಳ ಅರ್ಚಕನ ಬಂಧನ

ಬೆಂಗಳೂರು: ಮಹಿಳೆಯೊಬ್ಬರಿಗೆ ಬ್ಲ್ಯಾಕ್‌ಮೇಲ್ ಮಾಡಿ ಅತ್ಯಾಚಾರಕ್ಕೆ ಯತ್ನಿಸಿದ ಆರೋಪದ ಮೇಲೆ ಬೆಂಗಳೂರು ಪೊಲೀಸರು ಕೇರಳದ ಅರ್ಚಕರೊಬ್ಬರನ್ನು ಬಂಧಿಸಿದ್ದಾರೆ. ತಲೆಮರೆಸಿಕೊಂಡಿರುವ ಮತ್ತೊಬ್ಬ ಅರ್ಚಕನಿಗಾಗಿ ಹುಡುಕಾಟ ಆರಂಭಿಸಿದ್ದಾರೆ.



ಪೊಲೀಸರ ಪ್ರಕಾರ, ಬಂಧಿತ ವ್ಯಕ್ತಿ ಕೇರಳದ ಪೆರಿಂಗೊಟ್ಟುಕರ ದೇವಸ್ಥಾನದ ಅರುಣ್ ಪ್ರಕರಣಕ್ಕೆ ಸಂಬಂಧಿಸಿದಂತೆ ದೇವಾಲಯದ ಪ್ರಧಾನ ಅರ್ಚಕ ಉನ್ನಿ ದಾಮೋದರನ್‌ಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

ಆರ್ಥಿಕ ತೊಂದರೆಗಳನ್ನು ಅನುಭವಿಸುತ್ತಿದ್ದ ಮಹಿಳೆಯ ಕುಟುಂಬಕ್ಕೆ ಪರಿಹಾರಕ್ಕಾಗಿ ಪೆರಿಂಗೊಟ್ಟುಕರ ದೇವಸ್ಥಾನಕ್ಕೆ ಭೇಟಿ ನೀಡುವಂತೆ ಆಕೆಯ ಸ್ನೇಹಿತರು ಸಲಹೆ ನೀಡಿದ್ದರು. ಬೆಂಗಳೂರಿನ ನಿವಾಸಿಯಾಗಿರುವ ಸಂತ್ರಸ್ತ ಮಹಿಳೆ ದೇವಾಲಯದ ಬಗ್ಗೆ ವಿಡಿಯೋವನ್ನು ಸಹ ನೋಡಿದ್ದರು ಮತ್ತು ಅಲ್ಲಿ ವಿಶೇಷ ಪೂಜೆ ಮಾಡುವುದರಿಂದ ಆಕೆಯ ಬಿಕ್ಕಟ್ಟು ಕೊನೆಗೊಳ್ಳುತ್ತದೆ ಎಂದು ಮನವರಿಕೆ ಮಾಡಿಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ವಿಶೇಷ ಪೂಜೆ ಮಾಡಲು ಮಹಿಳೆ ದೇವಸ್ಥಾನಕ್ಕೆ ಹೋದಾಗ ಆರೋಪಿಯ ಪರಿಚಯವಾಯಿತು. ಅರ್ಚಕರು ಆಕೆಯ ವಿಶ್ವಾಸವನ್ನು ಗಳಿಸಿದರು. ನಂತರ ಆಕೆಗೆ ವಾಟ್ಸಾಪ್ ವಿಡಿಯೋ ಕರೆಗಳನ್ನು ಮಾಡಿ ಅನುಚಿತವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಲಾಗಿದೆ.

ಆಕೆಯ ದುರ್ಬಲ ಪರಿಸ್ಥಿತಿಯ ಲಾಭ ಪಡೆದು, ಆರೋಪಿಯು ಸಂತ್ರಸ್ತೆಯನ್ನು ಮಾಟಮಂತ್ರ ಮಾಡುವ ನೆಪದಲ್ಲಿ ಬೆದರಿಸಿ ಅಪರಾಧ ಎಸಗಿದ್ದಾನೆ. ನಂತರ, ಅವರು ಆಕೆಯನ್ನು ದೇವಸ್ಥಾನಕ್ಕೆ ಕರೆಸಿ ಈ ಬಾರಿ ಲೈಂಗಿಕ ಕ್ರಿಯೆಗೆ ಸಹಕಾರ ನೀಡುವಂತೆ ಒತ್ತಾಯಿಸಿದ್ದು, ಅಸ್ವಾಭಾವಿಕ ಲೈಂಗಿಕ ಕ್ರಿಯೆಗೂ ಒತ್ತಾಯಿಸಿದ್ದಾನೆ ಎಂದು ಸಂತ್ರಸ್ತೆ ದೂರಿನಲ್ಲಿ ಆರೋಪಿಸಿದ್ದಾರೆ.

ಪಾಕ್‌ನಿಂದ ನ್ಯೂಕ್ಲಿಯರ್ ಬಾಂಬ್ ದಾಳಿ ಮಾಡಿಸ್ತೀವಿ: ಇಸ್ರೇಲ್‌ಗೆ ಇರಾನ್ ಎಚ್ಚರಿಕೆ

ಟೆಹ್ರಾನ್: ಇಸ್ರೇಲ್ ಮತ್ತು ಇರಾನ್ ನಡುವೆ ಸಂಘರ್ಷ ತೀವ್ರಗೊಳ್ಳುತ್ತಿದೆ. ಉಭಯ ದೇಶಗಳು ಪರಸ್ಪರ ಬಾಂಬ್ ದಾಳಿಗಳನ್ನು ಮಾಡಿಕೊಳ್ಳುತ್ತಿದ್ದು ಭಾರಿ ಸಂಖ್ಯೆಯಲ್ಲಿ ಸಾವು–ನೋವು ವರದಿಯಾಗುತ್ತಿವೆ. ಇನ್ನು ಇಸ್ರೇಲ್ ಈ ಬಾರಿ ತನ್ನ ದಾಳಿಯನ್ನು ತೀವ್ರಗೊಳಿಸಿದ್ದು ಇರಾನ್‌ನ ನ್ಯೂಕ್ಲಿಯರ್ ಕೇಂದ್ರ, ಕ್ಷಿಪಣಿ ವ್ಯವಸ್ಥೆಗಳು, ಸೇನಾ ಮುಖ್ಯಸ್ಥರು ಮತ್ತು ಅನಿಲ ದಾಸ್ತಾನುಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿವೆ. ಇದು ಇರಾನ್‌ಗೆ ತೀವ್ರಪ್ರಮಾಣದಲ್ಲಿ ಹಾನಿಯುಂಟು ಮಾಡಿದೆ.

ಇದರ ಬೆನ್ನಲ್ಲೇ ಇರಾನ್ ರೆವಲ್ಯೂಷನರಿ ಗಾರ್ಡ್ಸ್‌ನ ಹಿರಿಯ ಕಮಾಂಡರ್ ಮತ್ತು ರಾಷ್ಟ್ರೀಯ ಭದ್ರತಾ ಮಂಡಳಿಯ ಸದಸ್ಯ ಜನರಲ್ ಮೊಹ್ಸಿನ್ ರಾಜ್ಯೆ, ಇರಾನ್ ಮೇಲೆ ಇಸ್ರೇಲ್ ಪರಮಾಣು ಬಾಂಬ್‌ಗಳನ್ನು ಬಳಸಿದರೆ, ಪಾಕಿಸ್ತಾನವು ಇಸ್ರೇಲ್‌ನ ಮೇಲೆ ಪರಮಾಣು ಬಾಂಬ್‌ಗಳ ಮೂಲಕ ದಾಳಿ ಮಾಡುತ್ತದೆ ಎಂದು ಪಾಕಿಸ್ತಾನ ನಮಗೆ ತಿಳಿಸಿದೆ ಎಂದು ಹೇಳಿದ್ದಾರೆ.

2025ರ ಜೂನ್ 13ರಂದು 'ಆಪರೇಷನ್ ರೈಸಿಂಗ್ ಲಯನ್' ಅಡಿಯಲ್ಲಿ ಇಸ್ರೇಲ್ ಇರಾನ್‌ನ ಪರಮಾಣು, ಮಿಲಿಟರಿ ಮತ್ತು ತೈಲ–ಅನಿಲ ಸ್ಥಾಪನೆಗಳ ಮೇಲೆ ಬೃಹತ್ ದಾಳಿಗಳನ್ನು ನಡೆಸಿದ ಸಮಯದಲ್ಲಿ ಈ ಹೇಳಿಕೆ ಬಂದಿದೆ. ಈ ದಾಳಿಗಳಲ್ಲಿ ನಾಲ್ಕು ಹಿರಿಯ ಇರಾನಿನ ಮಿಲಿಟರಿ ಕಮಾಂಡರ್‌ಗಳು, ಆರು ಪರಮಾಣು ವಿಜ್ಞಾನಿಗಳು ಮತ್ತು 78 ನಾಗರಿಕರು ಸಾವನ್ನಪ್ಪಿದರು. ಇದಕ್ಕೆ ಪ್ರತಿಕ್ರಿಯೆಯಾಗಿ ಇರಾನ್ ಇಸ್ರೇಲ್ ಮೇಲೆ 100ಕ್ಕೂ ಹೆಚ್ಚು ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹಾರಿಸಿತು. ಇದು ಉದ್ವಿಗ್ನತೆಯನ್ನು ಮತ್ತಷ್ಟು ಹೆಚ್ಚಿಸಿತು. ಇರಾನ್‌ನ ಹೇಳಿಕೆಯು ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧವನ್ನು ಮತ್ತಷ್ಟು ಸಂಕೀರ್ಣಗೊಳಿಸುತ್ತದೆ ಆದು ಪಾಕಿಸ್ತಾನದಂತಹ ಪರಮಾಣು–ಸಶಸ್ತ್ರ ದೇಶವನ್ನು ಈ ಸಂಘರ್ಷದಲ್ಲಿ ತೊಡಗಿಸಿಕೊಳ್ಳಲು ಪ್ರಯತ್ನಿಸುತ್ತಿದೆ

2025ರ ಜೂನ್ 16ರಂದು, ಇರಾನ್‌ನ ಹಿರಿಯ ಮಿಲಿಟರಿ ಅಧಿಕಾರಿಯೊಬ್ಬರು ಇಸ್ರೇಲ್ ಇರಾನ್ ಮೇಲೆ ಪರಮಾಣು ಬಾಂಬ್ ಬಳಸಿದರೆ, ಪಾಕಿಸ್ತಾನವು ಇಸ್ರೇಲ್ ಮೇಲೆ ಪರಮಾಣು ದಾಳಿಯನ್ನು ನಡೆಸುತ್ತದೆ ಎಂದು ಹೇಳಿದ್ದರು. ಇರಾನ್ ಮತ್ತು ಇಸ್ರೇಲ್ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ ಈ ಹೇಳಿಕೆ ಬಂದಿದ್ದು, ಎರಡೂ ದೇಶಗಳು ಪರಸ್ಪರ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ನಡೆಸುತ್ತಿವೆ. ಆದಾಗ್ಯೂ, ಪಾಕಿಸ್ತಾನ ಈ ಹೇಳಿಕೆಯನ್ನು ಸಾರಾಸಗಟಾಗಿ ತಿರಸ್ಕರಿಸಿತು. ಅಂತಹ ಯಾವುದೇ ಕೆಲಸಕ್ಕೆ ಮುಂದಾಗಲ್ಲ ಎಂದು ಹೇಳಿದೆ.

ಪಾಕಿಸ್ತಾನ ರಕ್ಷಣಾ ಸಚಿವ ಖವಾಜಾ ಆಸಿಫ್ ಅವರು ಇರಾನ್‌ನ ಹೇಳಿಕೆಯನ್ನು ಸಂಪೂರ್ಣವಾಗಿ ತಿರಸ್ಕರಿಸಿದರು. ಇಸ್ಲಾಮಾಬಾದ್ ಇಸ್ರೇಲ್ ವಿರುದ್ಧ ಪರಮಾಣು ದಾಳಿಯ ಬಗ್ಗೆ ಮಾತನಾಡಿಲ್ಲ ಎಂದು ಅವರು ಹೇಳಿದರು. ಪಾಕಿಸ್ತಾನವು ಅಂತಹ ಯಾವುದೇ ಉದ್ದೇಶವನ್ನು ಹೊಂದಿಲ್ಲ ಎಂದು ಸ್ಪಷ್ಟಪಡಿಸಿತು. ಇಸ್ರೇಲ್‌ನ ಕ್ರಮಗಳನ್ನು ಖಂಡಿಸಿರುವ ಪಾಕಿಸ್ತಾನವು ಇರಾನ್‌ಗೆ ಬೆಂಬಲ ವ್ಯಕ್ತಪಡಿಸಿದೆ.

ಸಕಲ ಸರ್ಕಾರಿ ಗೌರವದೊಂದಿಗೆ ಗುಜರಾತ್ ಮಾಜಿ ಸಿಎಂ ವಿಜಯ್ ರೂಪಾನಿ ಅಂತ್ಯಕ್ರಿಯೆ

ರಾಜ್ಕೋಟ್: ಏರ್ ಇಂಡಿಯಾ ವಿಮಾನ ಪತನದಲ್ಲಿ ಸಾವನ್ನಪ್ಪಿದ (ಜೂನ್ 12ರಂದು) ಗುಜರಾತ್ ಮಾಜಿ ಮುಖ್ಯಮಂತ್ರಿ ವಿಜಯ್ ಭಾಯ್ ರೂಪಾನಿ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವದೊಂದಿಗೆ ಸೋಮವಾರ ನೆರವೇರಿಸಲಾಯಿತು.



ಇಂದು ಶಿಷ್ಟಾಚಾರದ ಪ್ರಕಾರ ಕಟ್ಟುನಿಟ್ಟಾಗಿ ನಡೆಸಲಾದ ಅಂತಿಮ ವಿಧಿವಿಧಾನಗಳಲ್ಲಿ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರು ಭಾಗವಹಿಸಿದ್ದರು. ರೂಪಾನಿ ಅವರ ಕೊಡುಗೆಗಳು ಮತ್ತು ನಾಯಕತ್ವಕ್ಕೆ ರಾಜ್ಯದ ಅತ್ಯುನ್ನತ ಗೌರವದ ಸಂಕೇತವಾಗಿ ಗಾರ್ಡ್ ಆಫ್ ಹಾನರ್ ನೀಡಲಾಯಿತು.

ಇದಕ್ಕೂ ಮುನ್ನ ಗಣ್ಯರ ಸಮ್ಮುಖದಲ್ಲಿ ರೂಪಾನಿ ಅವರ ಮೃತದೇಹವನ್ನು ಪತ್ನಿ ಅಂಜಲಿ ರೂಪಾನಿ ಮತ್ತು ಮಗ ರುಷಭ್ ರೂಪಾನಿ ಸೇರಿದಂತೆ ದುಃಖಿತ ಕುಟುಂಬಕ್ಕೆ ಗೌರವಯುತವಾಗಿ ಹಸ್ತಾಂತರಿಸಲಾಯಿತು.

ಅಹಮದಾಬಾದ್‌ನ ಸಿವಿಲ್ ಆಸ್ಪತ್ರೆಯಲ್ಲಿದ್ದ ರೂಪಾನಿ ಅವರ ಪಾರ್ಥಿವ ಶರೀರವನ್ನು ಹೊತ್ತೊಯ್ಯುವ ವಾಹನಕ್ಕೆ 2,000 ಕೆ.ಜಿ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು ಮತ್ತು ಮೃತದೇಹದ ಮೇಲೆ ತ್ರಿವರ್ಣ ಧ್ವಜ ಹೊದಿಸಲಾಗಿತ್ತು.

ಜೂನ್ 12ರಂದು ಲಂಡನ್‌ಗೆ ಹಾರುತ್ತಿದ್ದ ಏರ್ ಇಂಡಿಯಾ ಬೋಯಿಂಗ್ 787–8 ಡ್ರೀಮ್ಲೈನರ್ ವಿಮಾನ ಅವಘಡದಲ್ಲಿ ಸಾವನ್ನಪ್ಪಿದ 241 ಪ್ರಯಾಣಿಕರ ಪೈಕಿ ರೂಪಾನಿ ಕೂಡ ಒಬ್ಬರು. ಡಿಎನ್‌ಎ ಪರೀಕ್ಷೆ ಮೂಲಕ ಅವರ ಮೃತದೇಹವನ್ನು ಪತ್ತೆ ಮಾಡಿರುವ ಕುರಿತು ನಿನ್ನೆ ಆಸ್ಪತ್ರೆ ಅಧಿಕಾರಿಗಳು ದೃಢಪಡಿಸಿದ್ದರು.

ಅಧಿಕೃತ ಹೇಳಿಕೆಯಲ್ಲಿ, ರಾಜ್ಯ ಸರ್ಕಾರವು ವಿಜಯ್‌ಭಾಯ್ ರೂಪಾನಿ ಅವರನ್ನು ಕೇವಲ ರಾಜಕೀಯ ವ್ಯಕ್ತಿಯಾಗಿ ಮಾತ್ರವಲ್ಲದೆ, ಸಮಗ್ರತೆ, ಸಹಾನುಭೂತಿ ಮತ್ತು ಸಾರ್ವಜನಿಕ ಕಲ್ಯಾಣಕ್ಕಾಗಿ ಅಚಲ ಸಮರ್ಪಣೆಗೆ ಹೆಸರುವಾಸಿಯಾದ ನಾಯಕರಾಗಿದ್ದರು ಎಂದು ಸ್ಮರಿಸಿದೆ.



ಪಾಳುಬಿದ್ದಿರುವ ಉಪಹಾರ ಗೃಹ

ಲೋಕಾರ್ಪಣೆಗೊಳ್ಳದೆ ಪಾಳು ಬಿದ್ದ ಉಪಹಾರ ಗೃಹ

- ಅನೈತಿಕ ಚಟುವಟಿಕೆ, ಹಾವು-ಚೇಳುಗಳ ಆವಾಸ ತಾಣವಾಗಿ ಮಾರ್ಪಟ್ಟ ಕಟ್ಟಡಗಳು
- 2019ರಲ್ಲೇ ನಿರ್ಮಾಣಗೊಂಡರೂ, ಸ್ವಾಧೀನಕ್ಕೆ ಪಡೆಯದ ಅಧಿಕಾರಿಗಳು

ಚುಂಚನಕಟ್ಟೆ, ಜೂ.16– ಸಾಲಿಗ್ರಾಮ ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣ ಚುಂಚನಕಟ್ಟೆ ಜಲಪಾತದ ಪ್ರವಾಸಿ ಮಂದಿರದ ಬಳಿ ಲಕ್ಷಾಂತರ ರೂ. ವೆಚ್ಚದಲ್ಲಿ ನಿರ್ಮಿಸಿರುವ ಉಪಾಹಾರ ಗೃಹ, ಶೌಚಾಲಯ ಸಾರ್ವಜನಿಕರ ಬಳಕೆಗೆ ಲೋಕಾರ್ಪಣೆಗೊಳ್ಳದೆ ಪಾಳು ಬಿದ್ದಿದೆ.

ಈ ಹಿಂದಿನ ಸರ್ಕಾರದಲ್ಲಿ ಪ್ರವಾಸೋದ್ಯಮ ಸಚಿವರಾಗಿದ್ದ ಸಾ.ರಾ. ಮಹೇಶ್ ಅವರು, ಸುಮಾರು 8 ಕೋಟಿ ರೂ. ವಿಶೇಷ ಅನುದಾನ ನೀಡಿ ಗ್ರಾಮದಲ್ಲಿ ದ್ವಿಪಥ ರಸ್ತೆ, ಬೃಹತ್ ಆಂಜನೇಯ ಮೂರ್ತಿ, ಪಾರ್ಕ್, ವೀಕ್ಷಣಾ ಗೋಪುರ ಸೇರಿದಂತೆ ಪ್ರವಾಸಿ ಮಂದಿರದ ಬಳಿ 55 ಲಕ್ಷ ರೂ. ವೆಚ್ಚದಲ್ಲಿ ಉಪಹಾರ ಗೃಹ, ಶೌಚಾಲಯ, ಕುಡಿಯುವ ನೀರು ಸರಬರಾಜು ಘಟಕ ನಿರ್ಮಿಸಿದ್ದರು. 2019 ರಲ್ಲಿ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿದ್ದರೂ, ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ತಮ್ಮ ಸ್ವಾಧೀನಕ್ಕೆ ತೆಗೆದುಕೊಳ್ಳದ ಕಾರಣ ಕಟ್ಟಡಗಳು ಪಾಳು ಬಿದ್ದಿದ್ದು, ಆವರಣದಲ್ಲಿ ಗಿಡಗಂಟಿಗಳು ಬೆಳೆದು ಹಾವು ಚೇಳುಗಳ ಆವಾಸವಾಗಿ ಮಾರ್ಪಟ್ಟಿದೆ. ಇದೇ ಜಾಗದಲ್ಲಿ ಜಲಪಾತ ವೀಕ್ಷಣಾ ಗೋಪುರಗಳಿದ್ದರೂ, ಅಧಿಕಾರಿಗಳು ಇದರ ನಿರ್ವಹಣೆಗೆ ಮುಂದಾಗದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.



ಗೆದ್ದಲು ಪಾಲಾದ ಕಟ್ಟಡದ ಬಾಗಿಲು

ಮೈಸೂರು ಜಿಲ್ಲೆಯಲ್ಲಿ ಚುಂಚನಕಟ್ಟೆ ಜಲಪಾತ ಹೊಂದಿರುವ ಪ್ರಮುಖ ಪ್ರೇಕ್ಷಣೀಯ ಪ್ರವಾಸಿ ತಾಣವಾಗಿದೆ. ಅಲ್ಲದೇ ಶ್ರೀಕೋದಂಡ ರಾಮ ನೆಲೆಸಿರುವ ಪುರಾಣ ಪ್ರಸಿದ್ಧ ಸ್ಥಳವಾಗಿದೆ. ಇಲ್ಲಿನ ಕುಂದುಕೊರತೆ ನಿವಾರಣೆಗೆ ಸರ್ಕಾರ ಸಾಕಷ್ಟು ಅನುದಾನ ನೀಡಿ ಅಭಿವೃದ್ಧಿ ಕಾರ್ಯ ಕೈಗೊಂಡಿದ್ದರೂ ಪ್ರವಾಸೋದ್ಯಮ ಇಲಾಖೆ ತನ್ನ ಸುಪರ್ದಿಗೆ ತೆಗೆದುಕೊಳ್ಳಲು 6 ವರ್ಷಗಳು ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ.

ಚುಂಚನಕಟ್ಟೆಗೆ ಆಗಮಿಸುವ ಪ್ರವಾಸಿಗರಿಗೆ ರುಚಿ, ಶುಚಿಯಾದ ಗುಣಮಟ್ಟದ ಆಹಾರ ನೀಡುವ ಉದ್ದೇಶದಿಂದ ಉಪಹಾರ ಕೇಂದ್ರ ನಿರ್ಮಿಸಲಾಗಿದೆ. ಆದರೆ ಕಟ್ಟಡಕ್ಕೆ ಅಳವಡಿಸಿರುವ ಕಿಟಕಿ, ಬಾಗಿಲುಗಳನ್ನು ಗೆದ್ದಲುಗಳು ತಿಂದು ಹಾಕಿವೆ. ಅಲ್ಲದೇ ಕಿಟಕಿಗಳ ಗಾಜು ಒಡೆದು ಹೋಗಿದ್ದು, ಕಟ್ಟಡ ಅನೈತಿಕ ಚಟುವಟಿಕೆಗಳ ತಾಣವಾಗಿದೆ. ಶೌಚಾಲಯ ಸಾರ್ವಜನಿಕರ ಉಪಯೋಗಕ್ಕೆ ಬಾರದಂತಾಗಿದೆ ಎಂದು ಸ್ಥಳೀಯ ಗ್ರಾಮಸ್ಥರು ಆರೋಪಿಸಿದ್ದಾರೆ.

> ಕೆಆರ್‌ಎಸ್‌ನಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ಮಾಡಲು ಹೊರಟ ಸರ್ಕಾರ ಇರುವ ಸೌಲಭ್ಯ ಬಳಸಿ ಗುಣಮಟ್ಟದ ಸೇವೆ ನೀಡಲಾಗದೇ ಇರುವುದಕ್ಕೆ ಚುಂಚನಕಟ್ಟೆಯೇ ಸಾಕ್ಷಿ. ಕಳೆದ 6 ವರ್ಷಗಳಿಂದ ಲಕ್ಷಾಂತರ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಉಪಾಹಾರ ಗೃಹ, ಶೌಚಾಲಯ ಸೇರಿದಂತೆ ಕುಡಿಯುವ ನೀರಿನ ಘಟಕ ಪಾಳು ಬಿದ್ದಿದ್ದು, ಇನ್ನಾದರೂ ಸ್ಥಳೀಯ ಜನ ಪ್ರತಿನಿಧಿಗಳು ಹಾಗೂ ಅಧಿಕಾರಿ ವರ್ಗ ಇತ್ತ ಗಮನ ಹರಿಸಬೇಕಿದೆ.
>
> 
>
> – **ಮಹಾದೇವ್, ಬೇವಿನಹಳ್ಳಿ ಮಾಜಿ ಗ್ರಾಪಂ ಸದಸ್ಯ.**



ಕಟ್ಟಡದ ಒಳಗೆ ಬಿದ್ದಿರುವ ಕಸಕಡ್ಡಿಗಳು

ಉಪಹಾರ ಗೃಹ ಅನವಶ್ಯಕ: ಜಲಪಾತ ವೀಕ್ಷಣೆ ಮತ್ತು ದೇವಾಲಯಕ್ಕೆ ಬರುವ ಪ್ರವಾಸಿಗರು, ಭಕ್ತರಿಗೆ ಉಳಿದುಕೊಳ್ಳಲು ಸೂಕ್ತ ವ್ಯವಸ್ಥೆ ಇಲ್ಲದಿರುವಾಗ ಉಪಹಾರ ಗೃಹವನ್ನು ಜಲಪಾತದ ಬಳಿ ಮಾಡದೇ ಅಲ್ಲಿಂದ ದೂರ ನಿರ್ಮಿಸಿದ್ದು, ಇದನ್ನು ಆರಂಭಿಸಿದರೂ ಪ್ರಯೋಜನವಿಲ್ಲ. ಹೀಗಾಗಿ ಮೊದಲು ಪ್ರವಾಸಿಗರಿಗೆ ವಸತಿ ಗೃಹದ ವ್ಯವಸ್ಥೆ ಮಾಡಿ ನಂತರ ಉಪಾಹಾರ ಗೃಹ ಆರಂಭಿಸಿದರೇ ಒಳಿತು ಎಂಬುದು ಪ್ರವಾಸಿಗರ ಅಭಿಪ್ರಾಯವಾಗಿದೆ.

ಇನ್ನಾದರೂ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ಸೂಕ್ತ ಕ್ರಮ ವಹಿಸಿ ಉಪಾಹಾರ ಗೃಹ, ಶೌಚಾಲಯ, ಕುಡಿಯುವ ನೀರಿನ ಘಟಕ ಸಾರ್ವಜನಿಕರ ಬಳಕೆಗೆ ಲೋಕಾರ್ಪಣೆಗೊಳಿಸಲಿದೆಯೇ ಎಂಬುದನ್ನು ಕಾದು ನೋಡಬೇಕಿದೆ

ವಿವಿಧೆಡೆ ವಿಜೃಂಭಣೆಯ ಗ್ರಾಮದೇವತೆಗಳ ಮೆರವಣಿಗೆ

ವೆಂಕಟೇಶ್ವರಸ್ವಾಮಿ, ಬಸವೇಶ್ವರಸ್ವಾಮಿ ಮತ್ತು ಮಾರಮ್ಮ ದೇವರುಗಳ ಉತ್ಸವ

ಕೆ.ಆರ್.ನಗರ, ಜೂ.16– ತಾಲೂಕಿನ ಕಾಳೇನಹಳ್ಳಿ, ಕೆಂಪನಕೊಪ್ಪಲು, ಹೊಸಕೊಪ್ಪಲು, ಮಾರಿಗುಡಿಕೊಪ್ಪಲು ಮತ್ತು ಕನಕನಗರ ಹೊಸ ಬಡಾವಣೆ ಗ್ರಾಮಗಳಲ್ಲಿ ಗ್ರಾಮ ದೇವತೆಗಳ ಮೆರವಣಿಗೆ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಕೆ.ಆರ್.ನಗರಕ್ಕೆ ಹೊಂದಿಕೊಂಡಂತಿರುವ ಈ ಗ್ರಾಮಗಳಲ್ಲಿ ಉತ್ತಮ ಮಳೆಯಾಗಿ, ಬೆಳೆ ಬೆಳೆದು ರೈತರು ಮತ್ತು ರಾಜ್ಯ ಸುಭಿಕ್ಷವಾಗಿರಲಿ ಎಂದು ಈ ಹಬ್ಬವನ್ನು ಪ್ರತಿವರ್ಷ ಜೂನ್‌ನಲ್ಲಿ ಆಚರಿಸಿಕೊಂಡು ಬರಲಾಗುತ್ತಿದೆ.



ಹೆಣ್ಣು ಮಕ್ಕಳು ಮಾರಮ್ಮತಾಯಿ ದೇವಾಲಯಕ್ಕೆ ತಂಬಿಟ್ಟು ಆರತಿಯೊಂದಿಗೆ ನೈವೇದ್ಯ ಅರ್ಪಿಸಿದರು.

ಗ್ರಾಮ ದೇವತೆಗಳಾದ ವೆಂಕಟೇಶ್ವರ ಸ್ವಾಮಿ, ಬಸವೇಶ್ವರಸ್ವಾಮಿ ಮತ್ತು ಮಾರಮ್ಮ ದೇವರುಗಳ ಉತ್ಸವ ನಡೆಸಿದ ಗ್ರಾಮಸ್ಥರು ಎಲ್ಲಾ ದೇವರುಗಳ ಉತ್ಸವ ಮೂರ್ತಿಗಳನ್ನು ಪಟ್ಟಣದ ಹೊರವಲಯದಲ್ಲಿರುವ ಹಳೆ ಎಡತೊರೆಯ ದಕ್ಷಿಣ ಗಂಗೆ ಕಾವೇರಿ ನದಿಯಲ್ಲಿ ಗಂಗಾ ಪೂಜೆ ಸಲ್ಲಿಸಿ 5 ಗ್ರಾಮಗಳ ಪ್ರಮುಖ ಬೀದಿಗಳಲ್ಲಿ ತಮಟೆ, ಮಂಗಳವಾದ್ಯ, ಕೊಂಬು, ಕಹಳೆಗಳೊಂದಿಗೆ ವೈಭವದ ಮೆರವಣಿಗೆ ನಡೆಸಿದರು.

ದೇವರ ಮೆರವಣಿಗೆ ತೆರಳುವ ರಸ್ತೆಗಳನ್ನು ಮಹಿಳೆಯರು ಮತ್ತು ಹೆಣ್ಣು ಮಕ್ಕಳು ಬಣ್ಣ ಬಣ್ಣದ ರಂಗೋಲಿಗಳಿಂದ ಶೃಂಗರಿಸಿದ್ದರು. ಜೊತೆಗೆ ಗ್ರಾಮದ ಪ್ರಮುಖ ಬೀದಿಗಳನ್ನು ತಳಿರು, ತೋರಣ ಮತ್ತು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

ಸೋಮವಾರ ಬೆಳಗ್ಗೆ 4 ಗ್ರಾಮಗಳಲ್ಲಿರುವ ಮಾರಮ್ಮತಾಯಿ ದೇವಾಲಯಕ್ಕೆ ತಂಬಿಟ್ಟು ಆರತಿಯೊಂದಿಗೆ ತೆರಳಿದ ಹೆಣ್ಣು ಮಕ್ಕಳು ದೇವತೆಗೆ ವಿವಿಧ ನೈವೇದ್ಯಗಳನ್ನು ಅರ್ಪಿಸಿ ಇಷ್ಟಾರ್ಥ ಈಡೇರಿಸುವಂತೆ ಪ್ರಾರ್ಥನೆ ಸಲ್ಲಿಸಿದರು.

ಗ್ರಾಮ ದೇವತೆಗಳ ಮೆರವಣಿಗೆ ತಮ್ಮ ಮನೆ ಬಾಗಿಲಿಗೆ ಬಂದಾಗ ಹೆಣ್ಣು ಮಕ್ಕಳು ಬಂಧುಗಳ ಜೊತೆಗೂಡಿ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭ ದೇವರ ಕುಣಿತ, ಮಂಗಳವಾದ್ಯ, ತಮಟೆ ಮತ್ತಿತರ ಸಾಂಪ್ರದಾಯಿಕ ಕುಣಿತಗಳು ಗ್ರಾಮಸ್ಥರನ್ನು ಆಕರ್ಷಿಸಿದವು. ಸಂಪ್ರದಾಯದಂತೆ ವೇಂಕಟೇಶ್ವರಸ್ವಾಮಿಗೆ ವೈಷ್ಣವ ಸಮುದಾಯದವರು, ಬಸವೇಶ್ವರಸ್ವಾಮಿಗೆ ವೀರಶೈವ ಲಿಂಗಾಯಿತ ಸಮಾಜದವರು, ಮಾರಮ್ಮ ತಾಯಿಗೆ ಕುರುಬ ಸಮುದಾಯದವರು ಅರ್ಚಕರಾಗಿದ್ದು, ಈ ಐದು ಗ್ರಾಮಗಳ ಕುರುಬ, ಒಕ್ಕಲಿಗ, ವೀರಶೈವ ಲಿಂಗಾಯಿತ, ನಾಮಧಾರಿ, ಪ.ಜಾತಿ, ಪ.ಪಂಗಡ, ವಿಶ್ವಕರ್ಮ ಹಾಗೂ ನಯನಜ ಕ್ಷತ್ರಿಯ ಸೇರಿದಂತೆ ಎಲ್ಲಾ ಸಮುದಾಯದವರೂ ಒಟ್ಟಿಗೆ ಸೇರಿ ಹಬ್ಬ ಆಚರಿಸಿದರು.

ಈ ವೇಳೆ ಯಜಮಾನರಾದ ಕೆ.ಎಂ. ಮಹದೇವ್, ಕೆ.ಜೆ.ಕುಮಾರ್, ದೇವರಾಜು, ಚನ್ನಕೇಶವ, ಸಿದ್ದೇಗೌಡ, ರಾಜೇಗೌಡ, ರಾಮೇಗೌಡ, ಗ್ರಾಪಂ ಸದಸ್ಯರಾದ ಕೆ.ಪಿ.ಜಗದೀಶ್, ಮಹೇಶ್‌ಗೌಡ, ಪಲ್ಲವಿ, ಶ್ವೇತಾ, ಸವಿತಾ, ಲಕ್ಷ್ಮೀ, ಮಹದೇವ್, ಮಾಜಿ ಸದಸ್ಯರಾದ ಕೆ.ಎಸ್.ರವಿ, ಮಹದೇವ್, ಅರ್ಚಕರಾದ ವೆಂಕಟೇಶ್, ಮಾದೇಶ್, ಧನುಕುಮಾರ್ ಹಾಜರಿದ್ದರು.

ಯಾವುದೇ ಚುನಾವಣೆ ಎದುರಾದರೂ ಕಾರ್ಯಕರ್ತರು ಸಜ್ಜಾಗಿ: ಸುಬ್ಬಣ್ಣ ಕರೆ

ತಿ.ನರಸೀಪುರ, ಜೂ.16– ಬಿಜೆಪಿ ಕಾರ್ಯಕರ್ತರು ಪಕ್ಷವನ್ನು ಬೂತ್ ಮಟ್ಟದಿಂದ ಸಂಘಟಿಸುವ ಮೂಲಕ ಸ್ಥಳೀಯವಾಗಿ ಯಾವುದೇ ಚುನಾವಣೆ ಎದುರಾದರೂ ಸಜ್ಜಾಗಬೇಕು ಎಂದು ಜಿಲ್ಲಾ ಗ್ರಾಮಾಂತರ ನೂತನ ಬಿಜೆಪಿ ಅಧ್ಯಕ್ಷ ಕುಂಬ್ರಹಳ್ಳಿ ಕೆ.ಎನ್.ಸುಬ್ಬಣ್ಣ ಕರೆ ನೀಡಿದರು.

ವರುಣ ಕ್ಷೇತ್ರದ ಕಾರ್ಯಕರ್ತರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಬೂತ್ ಮಟ್ಟದಿಂದ ಪಕ್ಷ ಸಂಘಟಿಸಿ ಯಾವುದೇ ಚುನಾವಣೆ ಎದುರಾದರೂ ಕ್ಷೇತ್ರ ಬಿಜೆಪಿ ವಶವಾಗುವಂತೆ ಶ್ರಮಿಸೋಣ. ಇದಕ್ಕೆ ಎಲ್ಲಾ ವರ್ಗದ ಜನತೆ ಸಹಕಾರ ನೀಡಬೇಕು ಎಂದರು.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ಸೂಚನೆಯಂತೆ ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಮಾಡುವಂತೆ ಕಾರ್ಯಕರ್ತರಿಗೆ ಮನವಿ ಮಾಡಿದ ಅವರು, ಬೂತ್ ಮಟ್ಟದಲ್ಲಿ ಕೆಲಸ ಮಾಡಿದ ಹಲವು ನಾಯಕರು ಬೆಳೆದಿದ್ದಾರೆ. ಹೀಗಾಗಿ ಎಲ್ಲರನ್ನೂ ಒಗ್ಗೂಡಿಸಿ ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಮಾಡುತ್ತೇವೆ ಎಂದರು.



ಕುಂಬ್ರಹಳ್ಳಿ ಕೆ.ಎನ್.ಸುಬ್ಬಣ್ಣ ಅವರನ್ನು ಸನ್ಮಾನಿಸಲಾಯಿತು.

ಗ್ರಾಪಂ ಸದಸ್ಯ ಕಿರಗಸೂರು ಮಹಾದೇವಸ್ವಾಮಿ ಮಾತನಾಡಿ, ಈ ಬಾರಿ ಯುವಕರಿಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಮುಂಬರುವ ಚುನಾವಣೆಯಲ್ಲಿ ಗೆಲ್ಲುವ ಮೂಲಕ ನಮ್ಮ ಶಕ್ತಿ ಏನೆಂದು ತೋರಿಸೋಣ ಎಂದರು.

ಈ ವೇಳೆ ತಿ.ನರಸೀಪುರ ಕ್ಷೇತ್ರ ಅಧ್ಯಕ್ಷ ಶಿವಕುಮಾರ್, ಮೈಸೂರು ಜಿಲ್ಲಾ ಗ್ರಾಮಾಂತರ ವಕ್ತಾರ ದಯಾನಂದ ಪಟೇಲ್, ರೈತ ಮೋರ್ಚಾ ಉಪಾಧ್ಯಕ್ಷ ಎಸ್‌ಬಿಟಿ ಸುರೇಶ್, ದೇವಲಾಪುರ ಆದಿತ್ಯ, ನಿಲಸೋಗೆ ಬಸವರಾಜು, ಪ್ರಧಾನ ಕಾರ್ಯದರ್ಶಿ ಬಾಲಕೃಷ್ಣ ಮತ್ತಿತರರಿದ್ದರು.

ಜೆಎಸ್‌ಎಸ್ ಶಾಲೆಯಲ್ಲಿ ಪರಿಸರ ದಿನಾಚರಣೆ



ಸರಗೂರಿನ ಜೆಎಸ್‌ಎಸ್ ಶಾಲೆಯಲ್ಲಿ ಪರಿಸರ ದಿನಾಚರಣೆ ನಡೆಯಿತು.

ಸರಗೂರು, ಜೂ.16– ಪ್ರಕೃತಿ ಮೇಲಿನ ದುಷ್ಪರಿಣಾಮ ತಡೆಗೆ ಪರಿಸರ ಉಳಿಸುವುದೊಂದೇ ಪರಿಹಾರ ಎಂದು ಪಟ್ಟಣದ ಜೆಎಸ್‌ಎಸ್ ಶಾಲೆ ಶಿಕ್ಷಕಿ ನಂದಿನಿ ತಿಳಿಸಿದರು.

ಪಟ್ಟಣದ ಜೆಎಸ್‌ಎಸ್ ಶಾಲಾವರಣದಲ್ಲಿ ಶಿಕ್ಷಕರು, ಮಕ್ಕಳೊಂದಿಗೆ ಗಿಡ ನೆಡುವ ಮೂಲಕ ಪರಿಸರ ದಿನಾಚರಣೆ ಆಚರಿಸಿ ಮಾತನಾಡಿದ ಅವರು, ಪ್ರಕೃತಿ ಮೇಲೆ ದುಷ್ಪಪರಿಣಾಮ ತಡೆಗೆ ಪರಿಸರ ಉಳಿಸುವುದೊಂದೆ ಪರಿಹಾರ. ಪ್ರಕೃತಿ ಸೊಬಗು ನೋಡಲು ನಾವೇ ಹೋಗಬೇಕು. ಪ್ರಕೃತಿ ವಿಕೋಪಗೊಂಡು ನಮ್ಮ ಬಳಿ ಬಂದರೆ ನಾವು ಉಳಿಯುವುದು ಕಷ್ಟ, ಡಾ.ಸಿ.ಎನ್.ಮೃತ್ಯುಂಜಯಪ್ಪನವರು ಹಿಂದಿನಿಂದಲೂ ಜೆಎಸ್‌ಎಸ್ ಶಾಲಾ ಆವರಣದಲ್ಲಿ ವನಮೋತ್ಸವ ಹಾಗೂ ಪರಿಸರ ದಿನಾಚರಣೆ ನಡೆಸಿಕೊಂಡು ಬರುತ್ತಿದ್ದರು. ಇದರಿಂದಾಗಿ ಅವರು ನೆಟ್ಟ 5 ಸಾವಿರ ಗಿಡಗಳು ಇಂದು ಮರಗಳಾಗಿ ಸಾರ್ವಜನಿಕರಿಗೆ ಉತ್ತಮ ಗಾಳಿ ನೀಡುತ್ತಿವೆ ಎಂದರು.

ಜೆಎಸ್‌ಎಸ್ ಶಾಲೆ ಮುಖ್ಯ ಶಿಕ್ಷಕ ಮಹಮದ್ ಅಂಜುಪಾಷ ಮಾತನಾಡಿ, ಸಾಮಾಜಿಕ ಕಳಕಳಿ ಹೊಂದಿರುವ ಸುಧಾ ಮೃತ್ಯುಂಜಯಪ್ಪ ನವರು ಪ್ರತಿ ವರ್ಷ ಪರಿಸರ ದಿನಾಚರಣೆ ನಡೆಸುವ ಮೂಲಕ ಗಿಡಗಳನ್ನು ನೆಟ್ಟು ಮಕ್ಕಳಂತೆ ಆರೈಕೆ ಮಾಡುತ್ತಾರೆ. ಅವರ ಮಾರ್ಗದರ್ಶನದಂತೆ ಇಂದು ಶಾಲಾವರಣದಲ್ಲಿ ವಿವಿಧ ಗಿಡಗಳನ್ನು ನೆಡುವ ಮೂಲಕ ಪರಿಸರ ದಿನಾಚರಣೆ ನಡೆಸಲಾಗಿದೆ ಎಂದರು.

ಈ ವೇಳೆ ಶಿಕ್ಷಕರಾದ ಶ್ವೇತಾ, ಶಿಲ್ಪ, ಕೃಷ್ಣಮೂರ್ತಿ, ಜಯಣ್ಣ, ಗುರುಪ್ರಸಾದ್, ಶಂಕರ್, ಜಯಲಕ್ಷ್ಮಿ, ಶೀಲಾ, ಶೋಭಾರಾಣಿ, ಮಂಜುಳಾ, ಅಂತೋಣಿ ಮೇರಿ, ಅನಿತಾ, ನಂದಿನಿ, ಮಂಜುನಾಥ್, ಮಹದೇವಸ್ವಾಮಿ, ರಂಜನಿ ಅರಸ್, ಶಿವರಾತ್ರೀಶ್ವರ ಶಿವಾನುಭವ ಮಂದಿರ ಮೇಲ್ವಿಚಾರಕ ಅಶೋಕ್, ಸ್ಕೌಟ್ ಅಂಡ್ ಗೈಡ್ ಮಕ್ಕಳು ಹಾಗೂ ಶಾಲಾ ಮಕ್ಕಳು ಇದ್ದರು.

ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ

ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿ: ಸುನೀಲ್ ಬೋಸ್

ತಿ.ನರಸೀಪುರ, ಜೂ.16– ಮುಂಬರುವ ಜಿಪಂ, ತಾಪಂ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶಕ್ತಿಮೀರಿ ಶ್ರಮಿಸಬೇಕು ಎಂದು ಸಂಸದ ಸುನೀಲ್ ಬೋಸ್ ಕಾರ್ಯಕರ್ತರಿಗೆ ಕರೆ ನೀಡಿದರು.

ಬೆಂಗಳೂರಿನ ತಮ್ಮ ಕಚೇರಿಯಲ್ಲಿ ಭೇಟಿಯಾದ ತಿ.ನರಸೀಪುರ ಕ್ಷೇತ್ರದ ಸಂಸದ ಸುನೀಲ್ ಬೋಸ್ ಯುವ ಬ್ರಿಗೇಡ್ ಕಾರ್ಯಕರ್ತರೊಂದಿಗೆ ಮಾತನಾಡಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಸಂಬಂಧ ಸಲಹೆ, ಸೂಚನೆ ನೀಡಿದ ಅವರು, ಪಕ್ಷವನ್ನು ತಳಮಟ್ಟದಿಂದ ಸಂಘಟಿಸಬೇಕು ಎಂದರು.

ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಎಲ್ಲಾ ವರ್ಗದ ಬಡಜನತೆಗೆ ಅನುಕೂಲವಾಗಿದೆ. ಹೀಗಾಗಿ ಅವುಗಳನ್ನು ಮನೆ ಮನೆಗೆ ತಲುಪಿಸುವ ಕೆಲಸವನ್ನು ಯುವ ಕಾರ್ಯಕರ್ತರು ಮಾಡಬೇಕು. ಆ ಮೂಲಕ ಮುಂಬರುವ ಜಿಪಂ, ತಾಪಂ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ತಳಮಟ್ಟದಿಂದ ಪಕ್ಷ ಸಂಘಟಿಸಬೇಕು. ಇದಕ್ಕಾಗಿ ಬೇಕಾಗುವ ನೆರವನ್ನು ನೀಡುತ್ತೇನೆ ಎಂದರು.



ಸಂಸದರನ್ನು ಸುನೀಲ್ ಬೋಸ್ ಯುವ ಬ್ರಿಗೇಡ್ ಕಾರ್ಯಕರ್ತರು ಸನ್ಮಾನಿಸಿದರು.

ಈ ವೇಳೆ ಸುನೀಲ್ ಬೋಸ್ ಯುವ ಬ್ರಿಗೇಡ್ ಅಹಿಂದಾ ವರ್ಗಗಳನ್ನು ಒಟ್ಟಾಗಿ ಕರೆದುಕೊಂಡು ಹೋಗುವ ಕೆಲಸ ಮಾಡಬೇಕು. ಅಲ್ಲದೇ, ಎಲ್ಲಾ ವರ್ಗದ ಯುವಕರಿಗೆ ಆದ್ಯತೆ ನೀಡಬೇಕು ಎಂದ ಅವರು, ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರೂ ಆದ ನನ್ನ ತಂದೆ ಡಾ.ಹೆಚ್.ಸಿ.ಮಹದೇವಪ್ಪನವರು ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದು, ಮುಂದಿನ ದಿನಗಳಲ್ಲೂ ಕ್ಷೇತ್ರಕ್ಕೆ ಸಾವಿರಾರು ಕೋಟಿ ರೂ. ಅನುದಾನ ತಂದು ಮತ್ತಷ್ಟು ಅಭಿವೃದ್ಧಿ ಪರ್ವ ಕೈಗೊಳ್ಳಲಿದ್ದಾರೆ. ಅಲ್ಲದೇ ನನ್ನ ಸಂಸದರ ಅನುದಾನದಿಂದಲೂ ಸಾಕಷ್ಟು ಅಭಿವೃದ್ಧಿ ಕಾರ್ಯ ಕೈಗೊಂಡು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಇದೇ ವೇಳೆ ಸುನೀಲ್ ಬೋಸ್ ಯುವ ಬ್ರಿಗೇಡ್ ಹಾಗೂ ರಾಷ್ಟ್ರೀಯ ಅಹಿಂದ ಒಕ್ಕೂಟ ಸಂಘಟನೆಗೆ ನೆರವು ಕೋರಲಾಯಿತು. ಸುನೀಲ್ ಬೋಸ್ ಯುವ ಬ್ರಿಗೇಡ್ ಅಧ್ಯಕ್ಷ ಕನ್ನಾಯಕನಹಳ್ಳಿ ಕುಮಾರ್ ರಾಮೇಗೌಡ, ತಾಲೂಕು ಅಧ್ಯಕ್ಷ ಸೋಸಲೆ ದೇವರಾಜ್, ಸಂಘಟನಾ ಕಾರ್ಯದರ್ಶಿ ಬೆನಕನಹಳ್ಳಿ ಅರುಣ, ತಾಲೂಕು ಯುವ ವೇದಿಕೆ ತಲಕಾಡು ಆನಂದ್, ಸಂಚಾಲಕರಾದ ವಾಟಾಳ್ ಚಿನ್ನಸ್ವಾಮಿ, ಕೇತಹಳ್ಳಿ ಹರೀಶ್, ದೊಡ್ಡಪುರ ಚರಣ್, ತಲಕಾಡು ಭರತ್ ರಾಜ್, ತಾಲೂಕು ಗ್ಯಾರಂಟಿ ಯೋಜನಾ ಅಧ್ಯಕ್ಷ ಶಂಭುದೇವನಪುರ ಪ್ರಭು, ಸಂದೀಪ್, ಅಶೋಕ್‌ಗೌಡ ಇನ್ನಿತರರಿದ್ದರು.

ಮಗುವಿಗಿಂತ ಮದ್ಯ ಸೇವನೆ ಮುಖ್ಯ ಎಂದ ತಾಯಿ

ಮದ್ಯಕ್ಕಾಗಿ ರಂಪಾಟ: ಸಮಾಧಾನಪಡಿಸುವಲ್ಲಿ ವೈದ್ಯರು ಸುಸ್ತು

ಹೆಚ್.ಡಿ.ಕೋಟೆ, ಜೂ.16– ತನ್ನ 9 ತಿಂಗಳ ಮಗುವಿಗಿಂತ ಮದ್ಯ ಸೇವನೆಯೇ ಮುಖ್ಯ ಎಂದು ತಾಯಿಯೊಬ್ಬಳು ರಂಪಾಟ ನಡೆಸಿರುವ ಘಟನೆ ಹೆಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಯಲ್ಲಿ ನಡೆದಿದೆ.

ತಾಲೂಕಿನ ಚಿಕ್ಕಕೆರೆಯೂರು ಗ್ರಾಮದ ಗಿರಿಜನ ಹಾಡಿಯ ನಿವಾಸಿ ಪಾರ್ವತಿ ತನ್ನ 9 ತಿಂಗಳ ಗಂಡು ಮಗುವನ್ನು ಸಮರ್ಪಕವಾಗಿ ಪೋಷಣೆ ಮಾಡದೆ ಕುಡಿತದ ಚಟಕ್ಕೆ ಬಲಿಯಾಗಿ ಸದಾ ಮದ್ಯ ಸೇವನೆಯಲ್ಲಿ ತೊಡಗಿದ್ದಳು. ತಾಯಿ, ಮಗುವಿನ ಪರಿಸ್ಥಿತಿ ಹದಗೆಡುತ್ತಿರುವುದನ್ನು ಗಮನಿಸಿದ ಇಲ್ಲಿನ ಆಶಾ ಕಾರ್ಯಕರ್ತೆಯರಾದ ಮಂಜುಳಾ, ವೀಣಾ, ಚಂದ್ರಿಕಾ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ವಿಚಾರ ತಿಳಿಸಿದಾಗ ಮಹಿಳಾ ಸಾಂತ್ವನ ಕೇಂದ್ರದ ಮುಖ್ಯಸ್ಥೆ ಜಯಶೀಲ ಅವರು ತಾಯಿ ಮತ್ತು ಮಗುವನ್ನು ಕೋಟೆ ಸಾರ್ವಜನಿಕ ಆಸ್ಪತ್ರೆಗೆ ಕರೆತರುವಂತೆ ಸೂಚಿಸಿದರು.

ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಮೂಲಕ ತಾಯಿ ಮತ್ತು ಮಗುವನ್ನು ತಪಾಸಣೆ ಮಾಡಿಸಲು ಮುಂದಾದಾಗ ತಾಯಿ ಪಾರ್ವತಿ ಮದ್ಯದ ಚಟಕ್ಕೆ ಬಲಿಯಾಗಿದ್ದರಿಂದ ಮಾನಸಿಕ ಸ್ಥಿಮಿತತೆ ಕಳೆದುಕೊಂಡು ರಂಪಾಟ ನಡೆಸಿದ್ದಾಳೆ. ನಂತರ ಆಶಾ ಕಾರ್ಯಕರ್ತರು, ವೈದ್ಯರು, ಮಹಿಳಾ ಸಾಂತ್ವನ ಕೇಂದ್ರದವರು, ಇಲಾಖೆಯವರು ಪಾರ್ವತಿಗೆ ಮದ್ಯದ ಚಟದ ದುಷ್ಪರಿಣಾಮಗಳ ಬಗ್ಗೆ ಮನವರಿಕೆ ಮಾಡಿಕೊಡಲು ಮುಂದಾದರು. ಆದರೆ ಪಾರ್ವತಿ ನಾನು ಕುಡಿತ ಬಿಡುವ ಪ್ರಶ್ನೆಯೇ ಇಲ್ಲ. ಬೆಳಗ್ಗೆ, ಮಧ್ಯಾಹ್ನ, ಸಂಜೆ ನನಗೆ ಎಣ್ಣೆ ಬೇಕೇ ಬೇಕು ಎಂದು ಪಟ್ಟು ಹಿಡಿದರು. ಕೊನೆಗೆ ಎಲ್ಲರೂ ಸೇರಿ ಆಕೆಯನ್ನು ಸಮಾಧಾನಪಡಿಸಿ ಊರಿಗೆ ಕರೆದುಕೊಂಡು ಹೋಗಿ ಬಿಟ್ಟಿದ್ದಾರೆ.



ಮಗುವಿನೊಂದಿಗೆ ತಾಯಿ ಪಾರ್ವತಿ.

ತಾಯಿಯಿಂದ ಮಗುವಿಗೆ ಯಾವುದೇ ತೊಂದರೆಯಾಗಿಲ್ಲ. ಮುಂದಿನ ದಿನಗಳಲ್ಲಿ ಮದ್ಯ ಸೇವನೆ ಚಟದಿಂದ ಏನಾಗುತ್ತದೆ ಎಂದು ಹೇಳಲಾಗುವುದಿಲ್ಲ ಎಂದು ವೈದ್ಯರು ತಿಳಿಸಿದರು.


ದೇವಸ್ಥಾನಗಳು ಧಾರ್ಮಿಕ, ಸಂಸ್ಕೃತಿಯ ರಾಯಭಾರಿಗಳಿದ್ದಂತೆ

ಮಹದೇಶ್ವರಸ್ವಾಮಿ ದೇವಾಲಯಕ್ಕೆ ಸಂಸದ ಯದುವೀರ್ ಭೂಮಿ ಪೂಜೆ

ಮೈಸೂರು, ಜೂ.16– ದೇವಸ್ಥಾನಗಳು ಮತ್ತು ಸಮುದಾಯ ಭವನಗಳು ಧಾರ್ಮಿಕ ಮತ್ತು ಸಂಸ್ಕೃತಿಯ ರಾಯಭಾರಿ ಇದ್ದಂತೆ ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ತಾಲೂಕಿನ ಜಯಪುರ ಹೋಬಳಿ ಬರಡನಪುರದಲ್ಲಿ ಮಹದೇಶ್ವರಸ್ವಾಮಿ ದೇವಾಲಯ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಯವರ ವಿಕಸಿತ ಭಾರತ ಕಲ್ಪನೆಯು, ವಿಶ್ವಶ್ರೇಷ್ಠ ಭಾರತ ನಿರ್ಮಾಣ ಮಾಡುವುದಾಗಿದೆ. ನೀವು ನೀಡಿರುವ ಮತಗಳಿಂದ ನಾನು ಸಂಸದನಾಗಿ ಆಯ್ಕೆಯಾಗಿ, ಪ್ರಧಾನಮಂತ್ರಿಯವರಿಗೆ ಸಂಪರ್ಕ ಸೇತುವೆಯಾಗಿ ಕೆಲಸ ಮಾಡುತ್ತಿದ್ದೇನೆ. ನಿರಂತರವಾಗಿ ನಿಮ್ಮಗಳ ಜೊತೆ ಇದ್ದು ಸೇವೆ ಮಾಡುವುದರ ಜೊತೆಗೆ ಅಭಿವೃದ್ಧಿ ಕೆಲಸ ಮಾಡಲು ಕೈಜೋಡಿಸುತ್ತೇನೆ ಎಂದರು.

ಪ್ರಧಾನಿಯವರು ದೂರದೃಷ್ಟಿಯ ಯೋಜನೆಗಳನ್ನು ರೂಪಿಸುತ್ತಿದ್ದು, ಗ್ರಾಮೀಣ ಮಟ್ಟದಲ್ಲಿ ಉತ್ತಮ ಉದ್ಯೋಗಾವಕಾಶಗಳು ದೊರೆಯುವಂತೆ ಮಾಡಲು ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದಾರೆ. ನಗರ ಭಾಗದಲ್ಲಿ ಸಿಗುವ ಸೌಲಭ್ಯಗಳು ಗ್ರಾಮೀಣ ಭಾಗಕ್ಕೂ ವಿಸ್ತರಿಸುವ ಯೋಜನೆಯಾಗಿದೆ. ಭಾರತದ ಆರ್ಥಿಕತೆಗೆ ಕೃಷಿಯ ಕೊಡುಗೆ ಅಪಾರವಾಗಿದೆ. ಐಎಂಎಫ್ ಕೂಡ ಭಾರತದ ಕೃಷಿ ಆರ್ಥಿಕ ವ್ಯವಸ್ಥೆಯನ್ನು ಶ್ಲಾಘಿಸಿದೆ. ಗ್ರಾಮೀಣ ಭಾಗದಲ್ಲಿ ಪರಿಸರದ ಸೊಗಡು ಮತ್ತು ಸಂಸ್ಕೃತಿಯನ್ನು ಉಳಿಸಬೇಕು. ಪ್ರಧಾನಿಯವರ ನಿಲುವು ಕೂಡ ಇದೆ ಆಗಿದ್ದು, ಭವಿಷ್ಯ ಭಾರತ ನಿರ್ಮಾಣಕ್ಕೆ ಪಣತೊಟ್ಟಿದ್ದು, ನಾವೆಲ್ಲರೂ ಕೈಜೋಡಿಸಬೇಕು. ಗ್ರಾಮದಲ್ಲಿ ನಿರ್ಮಿಸುತ್ತಿರುವ ಮಹದೇಶ್ವರ ದೇವಾಲಯಕ್ಕೆ ಹೆಚ್ಚಿನ ಅನುದಾನ ನೀಡಲಾಗುವುದು ಎಂದರು.



ಮಹದೇಶ್ವರಸ್ವಾಮಿ ದೇವಾಲಯ ನಿರ್ಮಾಣಕ್ಕೆ ಸಂಸದ ಯದುವೀರ್ ಭೂಮಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮಕ್ಕೆ ಆಗಮಿಸಿದ ಸಂಸದರಿಗೆ ಗ್ರಾಮಸ್ಥರು ವಾದ್ಯಮೇಳ ಮೂಲಕ ಪೂರ್ಣಕುಂಭ ಸ್ವಾಗತ ನೀಡಿ, ಸನ್ಮಾನಿಸಿದರು. ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ಎಂ. ರಘು, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಪೈಟಿ.ರವಿ, ನಿಕಟಪೂರ್ವ ಅಧ್ಯಕ್ಷ ಗೆಜ್ಜಗಳ್ಳಿ ಮಹೇಶ್, ಪ್ರಧಾನ ಕಾರ್ಯದರ್ಶಿ ಹೇಮಂತ್ ಕುಮಾರ್, ಉಪಾಧ್ಯಕ್ಷ ಕೂರ್ಗಳ್ಳಿ ರೇವಣ್ಣ, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಈರಪ್ಪ, ಯುವ ಮೋರ್ಚಾ ಮಾಜಿ ಅಧ್ಯಕ್ಷ ದಾರಿಪುರ ಡಿ.ಚಂದ್ರಶೇಖರ್, ಬರಡನಪುರ ಗ್ರಾಪಂ ಸದಸ್ಯ ಶಿವಣ್ಣ, ಗೌಡಿಕೆ ಸೋಮಣ್ಣ, ಚಿಕ್ಕಣ್ಣ, ಶಿವಮಲ್ಲಿಕಾರ್ಜುನ್, ಬೂತ್ ಅಧ್ಯಕ್ಷ ಗ್ಯಾಸ್ ಮಹೇಶ್, ಮಹದೇವಪ್ಪ, ದಯಾನಂದ್, ಬಸವರಾಜು, ಗಿರೀಶ್, ಗಾಡಿನಿಂಗಪ್ಪನ ಮಲ್ಲಪ್ಪನ ಮಹೇಶ್ ಹಾಜರಿದ್ದರು.

ಶ್ರೀಆದಿಚುಂಚನಗಿರಿ ಶಾಲೆಯಲ್ಲಿ ಅಕ್ಷರಾಭ್ಯಾಸ

ತಿ.ನರಸೀಪುರ, ಜೂ.16– ಪಟ್ಟಣದ ಹೌಸಿಂಗ್ ಬೋರ್ಡ್‌ನಲ್ಲಿರುವ ಶ್ರೀಆದಿ ಚುಂಚನಗಿರಿ ಬಾಲ ಜಗತ್ ಶಾಲೆಯಲ್ಲಿ ಸೋಮವಾರ ಹೇಮಗಿರಿ ಶಾಖಾ ಮಠದ ಗೌರವ ಕಾರ್ಯದರ್ಶಿಗಳ ಅನುಪಸ್ಥಿತಿಯಲ್ಲಿ ಮಕ್ಕಳಿಗೆ ಜ್ಞಾನಾಂಕುರ ಅಕ್ಷರಾಭ್ಯಾಸ ನಡೆಸಲಾಯಿತು.

ಶಾಲಾವಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸರಸ್ವತಿ, ಗಣಪತಿಗೆ ಪೂಜೆ ಸಲ್ಲಿಸಿ ಹೋಮ, ಹವನ ಹಾಗೂ ಅಭಿಷೇಕದೊಂದಿಗೆ ವಿಶೇಷ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ಪೋಷಕರು ಪೂಜೆಯಲ್ಲಿ ಭಾಗವಹಿಸುವ ಜೊತೆಗೆ ತಮ್ಮ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಿದರು. ಈ ವೇಳೆ ಶಾಲೆಯ 102 ಮಕ್ಕಳ ಪೋಷಕರು ಅಕ್ಷರಾಭ್ಯಾಸಕ್ಕೆ ಸಾಕ್ಷಿಯಾಗಿದ್ದರು.



ವಿದ್ಯಾರ್ಥಿಗಳಿಗೆ ಅಕ್ಷರಾಭ್ಯಾಸ ಮಾಡಿಸಲಾಯಿತು.

ಶಾಲೆ ವ್ಯವಸ್ಥಾಪಕ ಬಸವರಾಜು ಮಾತನಾಡಿ, ನಮ್ಮ ಪೂರ್ವಿಕರು, ಹಿರಿಯರು ಶೃಂಗೇರಿ ಶಾರದಾ ಪೀಠದಲ್ಲಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುತ್ತಿದ್ದರು. ಶ್ರೀ ಬಾಲಗಂಗಾಧರನಾಥ ಶ್ರೀಗಳು ಆರಂಭಿಸಿರುವ ಶಾಲೆಯಲ್ಲಿ ಓದುವ ಗ್ರಾಮೀಣ ಮಕ್ಕಳು ಅಕ್ಷರಾಭ್ಯಾಸ ಮಾಡಿಸಲು ಸಾಧ್ಯವಿಲ್ಲ ಎಂಬ ಕಾರಣಕ್ಕೆ ಆದಿ ಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಶ್ರೀಗಳ ಸೂಚನೆಯಂತೆ ಸಂಸ್ಥೆಯ ಪ್ರತಿಯೊಂದು ಶಾಲೆಯಲ್ಲೂ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುತ್ತಿದ್ದೇವೆ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ಸಂಸ್ಕೃತಿ, ನಾಗರಿಕತೆ, ನಮ್ಮ ಆಚಾರ-ವಿಚಾರಗಳನ್ನು ಕಲಿಸಬೇಕಿದೆ. ಆ ನಿಟ್ಟಿನಲ್ಲಿ ನಮ್ಮ ಬಿಜಿಎಸ್ ಮಠದ ಶಾಲೆಗಳು ಕೆಲಸ ಮಾಡುತ್ತಿವೆ ಎಂದರು.

ಇದೇ ವೇಳೆ ಶಾಲಾ ಆಡಳಿತ ಮಂಡಳಿಯ ಸೋಮಣ್ಣ, ಮುಖ್ಯಶಿಕ್ಷಕ ಎಂ.ಬಿ.ಪ್ರಶಾಂತ್, ಸಹ ಶಿಕ್ಷಕರಾದ ಶಾಂತಕುಮಾರ್, ಜಗದೀಶ್, ರವಿ, ಲಾವಣ್ಯ, ರಮ್ಯಶ್ರೀ, ಮಂಜುಶ್ರೀ, ವಿನೋದ್, ಅನಿತಾ, ಮಮತಾ, ಶಿಲ್ಪಶ್ರೀ, ಗಿರಿಜಾ, ನಾಗನಂದಿನಿ, ಜ್ಯೋತಿ, ದಿವ್ಯ, ಕಾವ್ಯಶ್ರೀ ಎಸ್, ಪೂಜಶ್ರೀ, ಸಿಬ್ಬಂದಿಗಳಾದ ಲಕ್ಷ್ಮೀ, ಜ್ಯೋತಿ, ಗೀತಾ ಇತರರಿದ್ದರು.

ಕಳಪೆ ಕೀಟನಾಶಕ, ಬಿತ್ತನೆ ಬೀಜ, ರಸಗೊಬ್ಬರ ವಿತರಣೆ; 4 ವರ್ಷದಲ್ಲಿ 56 ಪ್ರಕರಣ ದಾಖಲು

ಮೈಸೂರು, ಜೂ.16(ಎಂಕೆ)– ರೈತರಿಗೆ ಕಡಿಮೆ ಗುಣಮಟ್ಟದ ಕೀಟನಾಶಕ(ಪೀಡೆನಾಶಕ), ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆ ಮಾಡುವ ಡೀಲರ್ ಹಾಗೂ ಕಂಪನಿಗಳ ವಿರುದ್ಧ ಕಳೆದ 4 ವರ್ಷದಲ್ಲಿ 56 ಪ್ರಕರಣಗಳನ್ನು ದಾಖಲಿಸಲಾಗಿದೆ.

ಬೆಳೆಗಳ ಉತ್ತಮ ಬೆಳವಣಿಗೆಗೆ ಅನುಕೂಲವಾಗಬೇಕು. ಹೆಚ್ಚಿನ ಪ್ರಮಾಣದಲ್ಲಿ ಇಳುವರಿ ಬರಬೇಕು. ಬೆಳೆಗೆ ಯಾವುದೇ ವಿಧದ ರೋಗಗಳು ಬಾಧಿಸಬಾರದು ಎಂಬ ದೃಷ್ಟಿಯಿಂದ ರೋಗ ನಿರೋಧಕ ಗುಣವುಳ್ಳ ಬೀಜ ಬಿತ್ತನೆಯ ಜೊತೆಗೆ ಕೀಟನಾಶಕ ಹಾಗೂ ಇಳುವರಿ ಹೆಚ್ಚಳಕ್ಕೆ ರಸಗೊಬ್ಬರಗಳನ್ನು ಬಳಕೆ ಮಾಡಲಾಗುತ್ತದೆ.



ರೈತರ ಅಗತ್ಯತೆಗಳನ್ನೇ ಬಂಡವಾಳ ಮಾಡಿಕೊಂಡು ಕೆಲ ಖಾಸಗಿ ಕಂಪನಿಗಳು ವಿತರಣೆ ಮಾಡುವ ಕಡಿಮೆ ಗುಣಮಟ್ಟದ ಕೀಟನಾಶಕ, ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಮಾದರಿಗಳನ್ನು ಪರೀಕ್ಷೆಗೊಳಪಡಿಸುವ ಕೃಷಿ ಇಲಾಖೆ, ಕಡಿಮೆ ಗುಣಮಟ್ಟವುಳ್ಳ ಗುಣಮಟ್ಟದ ಕೀಟನಾಶಕ, ರಸಗೊಬ್ಬರ ಹಾಗೂ ಬಿತ್ತನೆ ಬೀಜ ತಯಾರಿಕೆ ಕಂಪನಿಗಳು ಹಾಗೂ ಆಯಾ ಕಂಪನಿಯ ಡೀಲರ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಿದೆ

ಮೈಸೂರು ಜಿಲ್ಲೆಯಲ್ಲಿ ಕಳೆದ ಐದು ವರ್ಷದಲ್ಲಿ ಕಡಿಮೆ ಗುಣಮಟ್ಟದ ಗುಣಮಟ್ಟದ ಕೀಟನಾಶಕ, ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ವಿತರಿಸಿರುವ ಡೀಲರ್ ಹಾಗೂ ಕಂಪನಿಗಳ ವಿರುದ್ಧ 56 ಕ್ರಿಮಿನಲ್ ಪ್ರಕರಣ ದಾಖಲಿಸಿರುವ ಕೃಷಿ ಇಲಾಖೆ, ರೈತರ ಅನುಕೂಲತೆಗೆ ಅನುಗುಣವಾಗಿ ಕಾರ್ಯನಿರ್ವಹಿಸಲಾಗುತ್ತಿದೆ.

ಕೀಟನಾಶಕ: ಬೆಳೆಗಳನ್ನು ಬಾಧಿಸುವ ರೋಗಗಳ ನಿಯಂತ್ರಣಕ್ಕೆ ಬಳಸುವ ಕೀಟನಾಶಕಗಳನ್ನು ಗುಣಮಟ್ಟದ ಪರೀಕ್ಷೆಯಲ್ಲಿ ಕಳೆದ 4 ವರ್ಷದಲ್ಲಿ 1192 ಮಾದರಿ ಪರೀಕ್ಷೆಗಳನ್ನು ನಡೆಸಿದ್ದು, 4 ಕಳಪೆ ಮಾದರಿ ಪತ್ತೆಯಾಗಿದೆ. ಈ ಸಂಬಂಧ 2023–24ನೇ ಸಾಲಿನಲ್ಲಿ 2 ಪ್ರಕರಣ ದಾಖಲಾದರೆ,

> ಕಡಿಮೆ ಗುಣಮಟ್ಟದ ಕೀಟನಾಶಕ, ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಾಡುವ ಡೀಲರ್ ಹಾಗೂ ತಯಾರಕಾ ಕಂಪನಿ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು. ಬೆಳೆಗಳಿಗೆ ಅಗತ್ಯವಾಗಿ ಬೇಕಾಗುವ ಪೋಷಕಾಂಶಗಳ ಗುಣಮಟ್ಟ ಕಡಿಮೆಯಾದರೂ ಅಥವಾ ಹೆಚ್ಚಾದರೂ ಬೆಳೆಗಳಿಗೆ ಇಳುವರಿಯ ಮೇಲೆ ಪರಿಣಾಮ ಬೀರಲಿದೆ. ರೋಗಗಳು ನಿಯಂತ್ರಣಕ್ಕೆ ಬರಲ್ಲ. ಹಾಗಾಗಿ ಪ್ರತೀ ವರ್ಷ ಬಿತ್ತನೆ ಬೀಜ, ಕೀಟನಾಶಕ ಹಾಗೂ ರಸಗೊಬ್ಬರ ಮಾದರಿಗಳನ್ನು ಸಂಗ್ರಹಿಸಿ ಗುಣಮಟ್ಟ ಪರೀಕ್ಷೆಗೆ ಒಳಪಡಿಸಲಾಗುವುದು.
>
> 
>
> – ಕೆ.ಹೆಚ್.ರವಿ, ಜಂಟಿ ಕೃಷಿ ನಿರ್ದೇಶಕ, ಮೈಸೂರು

2024–25ನೇ ಸಾಲಿನ 2 ಕಂಪನಿಗಳ ವಿರುದ್ಧ ಪ್ರಕರಣ ದಾಖಲಿಸಲು ಕೃಷಿ ಇಲಾಖೆ ಮುಂದಾಗಿದೆ.

ಬಿತ್ತನೆ ಬೀಜ: ಕಡಿಮೆ ಗುಣಮಟ್ಟದ ಬಿತ್ತನೆ ಬೀಜ ವಿತರಣೆ ಮೇಲೆ ಕಣ್ಣಿಟ್ಟಿರುವ ಕೃಷಿ ಇಲಾಖೆ ಕಳೆದ 4 ವರ್ಷದಲ್ಲಿ 47 ಕಡಿಮೆ ಗುಣಮಟ್ಟದ ಬಿತ್ತನೆ ಬೀಜ ಮಾದರಿಗಳನ್ನು ಪತ್ತೆಮಾಡಿದ್ದು, ಡೀಲರ್ ಹಾಗೂ ತಯಾರಕಾ ಕಂಪನಿಗಳ ವಿರುದ್ಧ 41 ಪ್ರಕರಣಗಳನ್ನು ದಾಖಲಿಸಿದೆ. 2022–23ರ ಅವಧಿಯಲ್ಲೇ 40 ಪ್ರಕರಣಗಳು ದಾಖಲಾಗಿದ್ದರೆ, 2023–24ನೇ ಸಾಲಿನಲ್ಲಿ 1 ಪ್ರಕರಣ ದಾಖಲಾಗಿದೆ. ಅಲ್ಲದೆ ಇನ್ನೂ 2 ಪ್ರಕರಣಗಳು ದಾಖಲಿಸುವ ಹಂತದಲ್ಲಿವೆ.

ರಸಗೊಬ್ಬರ: ಅಧಿಕ ಇಳುವರಿಗಾಗಿ ಬಳಸುವ ವಿವಿಧ ಬಗೆಯ ರಸಗೊಬ್ಬರಗಳಲ್ಲಿ 2674 ಮಾದರಿ ಪರೀಕ್ಷೆಗಳನ್ನು ನಡೆಸಿ, 37 ಕಡಿಮೆ ಗುಣಮಟ್ಟದ ರಸಗೊಬ್ಬರಗಳನ್ನು ಪತ್ತೆ ಮಾಡಲಾಗಿದೆ. ಈ ಪೈಕಿ ಕಡಿಮೆ ಗುಣಮಟ್ಟದ ರಸಗೊಬ್ಬರ ವಿತರಣೆ ಮಾಡಿರುವ ಡೀಲರ್ ಹಾಗೂ ತಯಾರಿಕಾ ಕಂಪನಿಗಳ ವಿರುದ್ಧ 4 ವರ್ಷದಲ್ಲಿ 15 ಪ್ರಕರಣಗಳನ್ನು ದಾಖಲಿಸಲಾಗಿದೆ.

ಪರಿಣಾಮಕಾರಿ ಇಳುವರಿ ಬರಲ್ಲ: ಕಡಿಮೆ ಗುಣಮಟ್ಟದ ಬಿತ್ತನೆ ಬೀಜ, ಕೀಟನಾಶಕ ಹಾಗೂ ರಸಗೊಬ್ಬರ ಬಳಕೆಯಿಂದ ಪರಿಣಾಮಕಾರಿ ಇಳುವರಿ ಬರಲ್ಲ. ಬೆಳೆಗೆ ಬಾಧಿಸುವ ರೋಗಗಳು ನಿಯಂತ್ರಣಕ್ಕೆ ಬರುವುದಿಲ್ಲ. ಇದರಿಂದ ಇಳುವರಿ ಕಡಿಮೆಯಾಗಿದೆ ರೈತರಿಗೆ ಭಾರೀ ಪ್ರಮಾಣದಲ್ಲಿ ನಷ್ಟ ಉಂಟಾಗಲಿದೆ. ಅಲ್ಲದೆ ಮಣ್ಣಿನ ಫಲವತ್ತತೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇರಲಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಪುದುಪೆಟ್ಟೈ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಾದೇವ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹೌಸ್‌ಫುಲ್–5 (ಹಿಂ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಮಾದೇವ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾದೇವ (ಕ)	4 ಪ್ರದರ್ಶನಗಳು
ರಾಜಕಮಲ್	
ಹೊಲೊಕಾಸ್ಟ್ (ತ)	4 ಪ್ರದರ್ಶನಗಳು
ಸಂಗಂ	
ಎಡಗೈಯೇ ಅಪಘಾತಕ್ಕೆ ಕಾರಣ (ಕ)	4 ಪ್ರದರ್ಶನಗಳು
ಲಿಡೋ	
ಮೆರ್ಸಲ್ (ತ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ1ಕ್ಕೆ, ಮ3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.930ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮತ್ತೆ ಆತಂಕ ಪರಿಸ್ಥಿತಿ

ಹಜ್ ಯಾತ್ರಿಕರನ್ನು ಕರೆದೊಯ್ಯುತ್ತಿದ್ದ ವಿಮಾನದಲ್ಲಿ ಹೊಗೆ; ಪ್ರಯಾಣಿಕರು ಸುರಕ್ಷಿತ



ಲಕ್ನೋ: ಸೌದಿ ಅರೇಬಿಯಾದಿಂದ ಹಜ್ ಯಾತ್ರಿಕರು ಸೇರಿದಂತೆ ಸುಮಾರು 250 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ವಿಮಾನದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ನಂತರ ಉತ್ತರ ಪ್ರದೇಶದ ಲಕ್ನೋ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿದಿದೆ.

ಭಾನುವಾರ ಬೆಳಗ್ಗೆ ಸೌದಿ ಅರೇಬಿಯಾ ಏರ್‌ಲೈನ್ಸ್ ವಿಮಾನ ಲಕ್ನೋ ವಿಮಾನ ನಿಲ್ದಾಣದಲ್ಲಿ ಇಳಿಯುವಾಗ ಅದರ ಎಡ ಚಕ್ರದಿಂದ ಹೊಗೆ ಹೊರಹೊಮ್ಮುತ್ತಿರುವುದು ಕಂಡುಬಂದಿದೆ. ಚಕ್ರದಲ್ಲಿನ ದೋಷವು ಹೈಡ್ರಾಲಿಕ್ ವ್ಯವಸ್ಥೆಯಲ್ಲಿನ ಸೋರಿಕೆಯಿಂದಾಗಿರಬಹುದು ಎಂದು ಅಂದಾಜಿಸಲಾಗಿದೆ.

ವಿಮಾನ ರಕ್ಷಣಾ ಮತ್ತು ಅಗ್ನಿಶಾಮಕ ದಳ ತಂಡವು ಸ್ಥಳಕ್ಕೆ ಧಾವಿಸಿತು. ಸೌದಿಯ ತಂಡದೊಂದಿಗೆ ಸೇರಿ ಹೊಗೆಯನ್ನು ನಿಯಂತ್ರಿಸಲಾಯಿತು ಮತ್ತು ವಿಮಾನಕ್ಕೆ ಆಗಬಹುದಾದ ಹಾನಿಯನ್ನು ತಪ್ಪಿಸಲಾಯಿತು ಎಂದು ಅಧಿಕಾರಿಗಳು ಹೇಳಿದ್ದಾರೆ.

ವಿಮಾನ ನಿಲ್ದಾಣದ ಕಾರ್ಯಾಚರಣೆಗಳ ಮೇಲೆ ಯಾವುದೇ ಪರಿಣಾಮ ಬೀರಲಿಲ್ಲ, ಖಾಲಿ ವಿಮಾನವು ಇಂದು ತನ್ನ ಗಮ್ಯಸ್ಥಾನಕ್ಕೆ ಮರಳುತ್ತದೆ ಎಂದು ಅವರು ಹೇಳಿದರು. ವಿಮಾನಕ್ಕೆ ಯಾವುದೇ ಹಾನಿಯಾಗಿಲ್ಲ. ಜೆಡ್ಡಾದಿಂದ 242 ಹಜ್ ಯಾತ್ರಿಕರನ್ನು ಕರೆತರುತ್ತಿದ್ದ ಸೌದಿ ವಿಮಾನದ ಚಕ್ರಗಳಿಂದ ಹೊಗೆ ಪತ್ತೆಯಾಗಿದೆ ಎಂದು ಮೂಲಗಳು ಪಿಟಿಐಗೆ ತಿಳಿಸಿವೆ.

ತಾಂತ್ರಿಕ ದೋಷ ಶಂಕೆ: ದೆಹಲಿಗೆ ಬರುತ್ತಿದ್ದ ಏರ್ ಇಂಡಿಯಾ ವಿಮಾನ ಹಾಂಗ್‌ಕಾಂಗ್‌ಗೆ ವಾಪಸ್

ಮುಂಬೈ: ಹಾಂಗ್‌ಕಾಂಗ್‌ನಿಂದ ಸೋಮವಾರ ದೆಹಲಿಗೆ ಹೊರಟಿದ್ದ ಏರ್ ಇಂಡಿಯಾ ವಿಮಾನದ ಪೈಲಟ್, ತಾಂತ್ರಿಕ ದೋಷದ ಬಗ್ಗೆ ಅನುಮಾನ ವ್ಯಕ್ತಪಡಿಸಿ, ಮಧ್ಯದಲ್ಲಿಯೇ ವಾಪಸ್ ಹಾಂಗ್‌ಕಾಂಗ್ ವಿಮಾನ ನಿಲ್ದಾಣದಲ್ಲಿ ಲ್ಯಾಂಡಿಂಗ್ ಮಾಡಿದ್ದಾರೆ.

ವಿಮಾನವು ಹಾಂಗ್ ಕಾಂಗ್‌ನಲ್ಲಿ ಸುರಕ್ಷಿತವಾಗಿ ಇಳಿಯಿತು. ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ ಮತ್ತು ವಿಮಾನವನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ವಿಮಾನವು ಹಾಂಗ್‌ಕಾಂಗ್‌ನಿಂದ ಬೆಳಗ್ಗೆ 9.50ಕ್ಕೆ(ಭಾರತೀಯ ಕಾಲಮಾನ) ಟೇಕಾಫ್ ಆಯಿತು ಮತ್ತು ದೆಹಲಿಯಲ್ಲಿ ಇಂದು ಮಧ್ಯಾಹ್ನ 12: 20ಕ್ಕೆ ಲ್ಯಾಂಡ್ ಆಗಬೇಕಿತ್ತು. ಕಳೆದ ಜೂನ್ 12 ರಂದು ಮಧ್ಯಾಹ್ನ 1:39 ಕ್ಕೆ ಅಹಮದಾಬಾದ್ ನಿಂದ ಲಂಡನ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಟೇಕಾಫ್ ಆದ ಕೆಲವೇ ಕ್ಷಣಗಳಲ್ಲಿ ಮೇಘನಿ ನಗರದ ವೈದ್ಯಕೀಯ ಕಾಲೇಜಿನ ಆವರಣಕ್ಕೆ ಅಪ್ಪಳಿಸಿತ್ತು. ಈ ದುರಂತದಲ್ಲಿ ವಿಮಾನದಲ್ಲಿದ್ದ 242 ಜನರಲ್ಲಿ 241 ಜನ ಮತ್ತು ಕೆಳಗಡೆ ಇದ್ದ 29 ಜನ ಸಾವನ್ನಪ್ಪಿದ್ದರು.

ಅಂಡಮಾನ್ ಸಮುದ್ರದಲ್ಲಿ ಭಾರೀ ತೈಲ ನಿಕ್ಷೇಪ

ನವದೆಹಲಿ, ಜೂ.16: ಭಾರತವು ಅಂಡಮಾನ್ ಸಮುದ್ರದಲ್ಲಿ 184,440 ಕೋಟಿ ಲೀಟರ್ ಕಚ್ಚಾ ತೈಲವನ್ನು ಹೊಂದಿರುವ ನಿಕ್ಷೇಪವನ್ನು ಪತ್ತೆ ಮಾಡುತ್ತಿದೆ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ವಿಶೇಷ ಸಂದರ್ಶನದಲ್ಲಿ ಸುಳಿವು ನೀಡಿದ್ದಾರೆ. ಈ ನಿಕ್ಷೇಪ ಪರಿಶೋಧನೆ ಯಶಸ್ವಿಯಾದಲ್ಲಿ ಇದು ಭಾರತದ ಆರ್ಥಿಕ ಸ್ಥಿತಿಯ ದಿಕ್ಕನ್ನೇ ಬದಲಿಸಬಹುದು ಎಂದಿದ್ದಾರೆ. ಗಯಾನಾಗೆ ಅಲ್ಲಿನ ತೈಲ ನಿಕ್ಷೇಪ ಮಾಡಿದ ಮ್ಯಾಜಿಕ್ ರೀತಿಯಲ್ಲಿಯೇ ಭಾರತಕ್ಕೆ ಈ ತೈಲ ನಿಕ್ಷೇಪ ಜಾಕ್‌ಪಾಟ್ ನೀಡಬಹುದು ಎಂದಿದ್ದಾರೆ.



ನಾನು ಕೃಷ್ಣ ಗೋದಾವರಿ ಜಲಾನಯನ ಪ್ರದೇಶದ ಬಗ್ಗೆ ಈ ಹೇಳಿಕೆ ನೀಡಿದಾಗ. ಈಗ ನಾವು ಹಸಿರು ಚಿಗುರುಗಳು, ತೈಲ ಮತ್ತು ಹಲವಾರು ಇತರ ಸ್ಥಳಗಳನ್ನು ಕಂಡುಕೊಂಡಿದ್ದೇವೆ. ಮತ್ತು ಅಂಡಮಾನ್ ಸಮುದ್ರದಲ್ಲಿ ದೊಡ್ಡ ಗಯಾನಾವನ್ನು ಕಂಡುಕೊಳ್ಳುವುದು ಕೇವಲ ಸಮಯದ ವಿಷಯ ಎಂದು ನಾನು ಭಾವಿಸುತ್ತೇನೆ' ಎಂದು ಪುರಿ ಹೇಳಿದರು, ಭಾರತದ ಇಂಧನ ಪರಿಶೋಧನಾ ನಿರೀಕ್ಷೆಗಳ ಬಗ್ಗೆ ಬಲವಾದ ಆಶಾವಾದವನ್ನು ವ್ಯಕ್ತಪಡಿಸಿದರು.

ಭಾರತದ ಕಾರ್ಯತಂತ್ರವು, ಗಯಾನಾದ ಕರಾವಳಿಯಲ್ಲಿ ಎಕ್ಸಾನ್‌ಮೊಬಿಲ್, ಹೆಸ್ ಕಾರ್ಪೋರೇಷನ್ ಮತ್ತು ಸಿಎನ್‌ಓಸಿ 11.6 ಶತಕೋಟಿ ಬ್ಯಾರೆಲ್‌ಗಳಿಗೂ ಹೆಚ್ಚಿನ ದೈತ್ಯ ನಿಕ್ಷೇಪವನ್ನು ಪತ್ತೆಹಚ್ಚಿದ ನಂತರ ದಕ್ಷಿಣ ಅಮೆರಿಕಾದ ರಾಷ್ಟ್ರದ ಗಮನಾರ್ಹ ರೂಪಾಂತರದಿಂದ ಸ್ಫೂರ್ತಿ ಪಡೆದಿದೆ. ಆ ಆವಿಷ್ಕಾರವು ದೇಶವನ್ನು ವಿಶ್ವದ ಅಗ್ರ 20 ತೈಲ ನಿಕ್ಷೇಪ ಹೊಂದಿರುವವರ ಪಟ್ಟಿಯಲ್ಲಿ ಸೇರಿಸಿತು, ಅದರ ಆರ್ಥಿಕತೆಯನ್ನು ಮರುರೂಪಿಸಿತು. ಪ್ರಸ್ತುತ ತೈಲ ನಿಕ್ಷೇಪ ಕೊರೆಯುವ ಪ್ರಯತ್ನಗಳು ಫಲ ನೀಡಿದರೆ, ಭಾರತವು, ವಿಶೇಷವಾಗಿ ಅಂಡಮಾನ್ ಪ್ರದೇಶದಲ್ಲಿ ಇದೇ ರೀತಿಯ ಪ್ರಗತಿಯತ್ತ ಸಾಗಬಹುದು ಎಂದು ಪುರಿ ನಂಬಿದ್ದಾರೆ.

ಕಾಲ್ತುಳಿತ ಪ್ರಕರಣ: ವಿಧಾನಮಂಡಲದ ತುರ್ತು ಅಧಿವೇಶನ ಕರೆಯುವಂತೆ ಆರ್.ಅಶೋಕ್ ಆಗ್ರಹ





ಆರ್. ಅಶೋಕ್

ಬೆಂಗಳೂರು, ಜೂ.16– ಆರ್‌ಸಿಬಿ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ದುರಂತದ ಕುರಿತು ಚರ್ಚಿಸಲು ವಿಧಾನ ಮಂಡಲದ ತುರ್ತು ಅಧಿವೇಶನ ಕರೆಯುವಂತೆ ಆಗ್ರಹಿಸಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.

ಪತ್ರದಲ್ಲೇನಿದೆ: ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಆರ್‌ಸಿಬಿ ಸಂಭ್ರಮಾಚರಣೆಯ ಸಂದರ್ಭದಲ್ಲಿ (ಜೂ.4) ನಡೆದ ಕಾಲ್ತುಳಿತ ದುರ್ಘಟನೆಯಿಂದ 11 ಜನರು ದುರದೃಷ್ಟಕರ ಸಾವು ಮತ್ತು 75 ಮಂದಿಗೆ ಗಾಯಗಳಾಗಿರುವ ಘಟನೆ ರಾಜ್ಯವನ್ನೇ ಬೆಚ್ಚಿಬೀಳಿಸಿದೆ. ಈ ದುರ್ಘಟನೆಯು ಸಾರ್ವಜನಿಕ ಸುರಕ್ಷತೆ, ಗುಂಪು ನಿಯಂತ್ರಣ, ಮತ್ತು ರಾಜ್ಯದಲ್ಲಿ ಕ್ರೀಡಾ ಹಾಗೂ ಇತರೆ ಕಾರ್ಯಕ್ರಮಗಳ ಸಂಘಟನೆಗೆ ಸಂಬಂಧಿಸಿದಂತೆ ಗಂಭೀರ ಪ್ರಶ್ನೆಗಳನ್ನು ಎತ್ತಿದೆ.

ಈ ಪ್ರಕರಣ ಜನರಲ್ಲಿ ಅತೀವವಾದ ಆತಂಕ ಮತ್ತು ಕಳವಳ ಉಂಟುಮಾಡಿದೆ. ಘಟನೆಗೆ ಸಂಬಂಧಿಸಿದಂತೆ ಆಡಳಿತದಲ್ಲಿ ಆಗಿರುವ ಲೋಪಗಳು, ಘಟನೆ ನಂತರ ಸರ್ಕಾರದ ಕ್ರಮಗಳು ಸಾರ್ವಜನಿಕ ವಲಯದಲ್ಲಿ ಅನೇಕ ಸಂಶಯಗಳನ್ನು ಹುಟ್ಟುಹಾಕಿದೆ. ಕಾಲ್ತುಳಿತಕ್ಕೆ ಕಾರಣರಾದ ಬಲಾಢ್ಯರ ರಕ್ಷಣೆ ಮಾಡಲಾಗುತ್ತಿದೆ. ಸತ್ಯವನ್ನು ಮುಚ್ಚಿಹಾಕಲು ಮೂರು ರೀತಿಯ ತನಿಖೆಗಳನ್ನು ನಡೆಸಲಾಗುತ್ತಿದೆ. ಪ್ರಕರಣದಲ್ಲಿ ಅಸಹಾಯಕ ಅಧಿಕಾರಿಗಳನ್ನು ಬಲಿಪಶು ಮಾಡಲಾಗಿದೆ ಎಂಬ ಚರ್ಚೆಗಳು ಸಾರ್ವಜನಿಕ ವಲಯದಲ್ಲಿ ನಡೆಯುತ್ತಿವೆ.

ಇದರ ಜತೆಗೆ ಭವಿಷ್ಯದಲ್ಲಿ ಇಂತಹ ದುರ್ಘಟನೆಗಳನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಗ್ರ ಚರ್ಚೆಯ ಅಗತ್ಯವು ಇದೆ. ಈ ನಿಟ್ಟಿನಲ್ಲಿ, ಕರ್ನಾಟಕ ವಿಧಾನಮಂಡಲದ ಮೂರು ದಿನಗಳ ತುರ್ತು ಅಧಿವೇಶನವನ್ನು ಕರೆಯುವಂತೆ ಆಗ್ರಹಿಸುತ್ತೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಅಧಿವೇಶನದಲ್ಲಿ ಕಾಲ್ತುಳಿತ ಘಟನೆಗೆ ಕಾರಣವಾದ ಸಂದರ್ಭಗಳ ಸಂಪೂರ್ಣ ತನಿಖೆ, ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಗುಂಪು ನಿಯಂತ್ರಣ ಮತ್ತು ಸುರಕ್ಷತಾ ಕ್ರಮಗಳ ಬಲವರ್ಧನೆ, ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಮತ್ತು ಸಂತ್ರಸ್ತ ಕುಟುಂಬಗಳಿಗೆ ಪರಿಹಾರದ ವ್ಯವಸ್ಥೆ, ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಗಟ್ಟಲು ರಾಜ್ಯ ಸರ್ಕಾರದ ಯೋಜನೆಗಳು ಮುಂತಾದ ವಿಷಯಗಳ ಕುರಿತು ಚರ್ಚಿಸಬೇಕಾಗಿದೆ.

ಈ ತುರ್ತು ಅಧಿವೇಶನವು ರಾಜ್ಯದ ಜನತೆಗೆ ಸರ್ಕಾರದ ಬದ್ಧತೆಯನ್ನು ತೋರಿಸಲು ಮತ್ತು ಈ ದುರಂತದಿಂದ ಕಲಿತ ಪಾಠಗಳ ಆಧಾರದಲ್ಲಿ ಭವಿಷ್ಯಕ್ಕೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸಹಾಯಕವಾಗಲಿದೆ. ಹಾಗೆಯೇ ಘಟನೆಗೆ ಕಾರಣಗಳೇನು ಎಂಬುದನ್ನು ರಾಜ್ಯದ ಜನತೆಗೆ ತಿಳಿಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕಿದೆ. ಈ ಹಿನ್ನೆಲೆಯಲ್ಲಿ ವಿಧಾನಮಂಡಲದ ತುರ್ತು ಅಧಿವೇಶನ ಕರೆಯುವಂತೆ ಆಗ್ರಹಿಸುತ್ತಿದ್ದೇನೆ ಎಂದು ಅವರು ಪತ್ರದಲ್ಲಿ ಬರೆದಿದ್ದಾರೆ.

ಬೆಂಗಳೂರಲ್ಲಿ ಮಹಿಳಾ ಪ್ರಯಾಣಿಕಳಿಗೆ ರಸ್ತೆ ಮಧ್ಯೆ ಕಪಾಳಕ್ಕೆ ಹೊಡೆದ ರ್‍ಯಾಪಿಡೋ ಬೈಕ್ ಸವಾರ

ಬೆಂಗಳೂರು: ಅತಿವೇಗದ ಚಾಲನೆ ಬಗ್ಗೆ ದೂರು ನೀಡಿದ್ದಕ್ಕೆ ಆಕ್ರೋಶಗೊಂಡ ರ್‍ಯಾಪಿಡೋ ಬೈಕ್ ಸವಾರ ಮಹಿಳಾ ಪ್ರಯಾಣಿಕಳಿಗೆ ರಸ್ತೆ ಮಧ್ಯೆ ಕಪಾಳಮೋಕ್ಷ ಮಾಡಿದ ಘಟನೆ ಬೆಂಗಳೂರಿನ ಜಯನಗರದಲ್ಲಿ ನಡೆದಿದೆ. ಈ ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು ಬೈಕ್ ಸವಾರನ ವಿರುದ್ಧ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ.


ಆಭರಣ ಅಂಗಡಿಯೊಂದರ ಉದ್ಯೋಗಿಯಾಗಿದ್ದ ಮಹಿಳೆ ರ್‍ಯಾಪಿಡೋ ಬೈಕ್ ಬುಕ್ ಮಾಡಿದ್ದಳು. ಬೈಕ್ ಸವಾರನ ಅತಿವೇಗದ ಚಾಲನೆ ವಿರುದ್ಧ ಆರೋಪಿಸಿದ ಮಹಿಳೆ ಪ್ರಯಾಣವನ್ನು ಅರ್ಧದಲ್ಲೇ ಕೊನೆಗೊಳಿಸಲು ಆಯ್ಕೆ ಮಾಡಿದ್ದಳು. ಈ ವೇಳೆ ಸವಾರ, ಮಹಿಳೆಯನ್ನು ಪ್ರಶ್ನಿಸಿದ್ದು ನಂತರ ವಾಗ್ವಾದ ಶುರುವಾಗಿದೆ. ಮಾತಿಗೆ ಮಾತು ಬೆಳೆಸಿದ ಸವಾರ, ಮಹಿಳೆಯ ಕಪಾಳಕ್ಕೆ ಹೊಡೆದಿದ್ದು ಆಕೆ ನೆಲದ ಮೇಲೆ ಉರುಳಿ ಬಿದ್ದಿದ್ದಾಳೆ.

ಮಹಿಳೆ ಇಂಗ್ಲಿಷ್‌ನಲ್ಲಿ ಮಾತನಾಡಿದ್ದು ಚಾಲಕ ಕನ್ನಡದಲ್ಲಿ ಮಾತನಾಡಿದ್ದರಿಂದ ಪರಿಸ್ಥಿತಿ ಇನ್ನಷ್ಟು ಹದಗೆಡಿಸಿತು. ನಂತರ ಮಹಿಳೆ ಹಣ ಪಾವತಿಸಲು ಹಾಗೂ ಕಂಪನಿ ನೀಡಿದ ಹೆಲ್ಮೆಟ್ ಅನ್ನು ಹಿಂತಿರುಗಿಸಲು ನಿರಾಕರಿಸಿದಾಗ ಪರಿಸ್ಥಿತಿ ಮತ್ತಷ್ಟು ಹದಗೆಟ್ಟಿತು. ಇವರಿಬ್ಬರ ಜಗಳವನ್ನು ದಾರಿಹೋಕರೊಬ್ಬರು ಚಿತ್ರೀಕರಿಸಿದ್ದು ನಂತರ ಸಾಮಾಜಿಕ ಜಾಲತಾಣಕ್ಕೆ ಅಪ್ಲೋಡ್ ಮಾಡಿದ್ದರು. ವಿಡಿಯೋದಲ್ಲಿ ಹಲವು ಜನರು ಕಾಣಿಸಿಕೊಂಡಿದ್ದಾರೆ. ಆದರೆ ಹಲ್ಲೆಯ ಸಮಯದಲ್ಲಿ ಯಾರೂ ಮಧ್ಯಪ್ರವೇಶಿಸಲಿಲ್ಲ.

ಪೊಲೀಸ್ ಮೂಲಗಳ ಪ್ರಕಾರ, ಮಹಿಳೆ ಆರಂಭದಲ್ಲಿ ಔಪಚಾರಿಕ ದೂರು ದಾಖಲಿಸಲು ಮುಂದಾಗಲಿಲ್ಲ. ಹೀಗಾಗಿ NCR ದಾಖಲಿಸಲಾಗಿದೆ. ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ಬಳಿಕ NCR ಅನ್ನು ಔಪಚಾರಿಕ FIR ಆಗಿ ಅಪ್‌ಗ್ರೇಡ್ ಮಾಡುವ ಬಗ್ಗೆ ಯೋಚಿಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಜಯನಗರ ಪೊಲೀಸ್ ಠಾಣೆಯಲ್ಲಿ ವಿವರವಾದ ತನಿಖೆ ನಡೆಯುತ್ತಿದೆ.

ಶ್ರೀ ಬಸವೇಶ್ವರ ಮೂರ್ತಿ, ಶ್ರೀ ಗುರುಮಲ್ಲೇಶ್ವರ ಮೂರ್ತಿ ಮೆರವಣಿಗೆ

ಮೈಸೂರು, ಜೂ.16(ಎಸ್‌ಪಿಎನ್)– ಶ್ರೀ ಗುರುಮಲ್ಲೇಶ್ವರ ಸ್ವಾಮೀಜಿ ಅವರ 126ನೇ ಗಣಾರಾಧನೆ ಮತ್ತು ಲಿಂಗೈಕ್ಯ ಶ್ರೀ ಗುರುಲಿಂಗ ಸ್ವಾಮೀಜಿ ಅವರ 34ನೇ ವಾರ್ಷಿಕ ಗಣಾರಾಧನಾ ಮಹೋತ್ಸವದ ಪ್ರಯುಕ್ತ ಶ್ರೀ ಬಸವೇಶ್ವರ ಮೂರ್ತಿ ಹಾಗೂ ಶ್ರೀ ಗುರುಮಲ್ಲೇಶ್ವರ ಮೂರ್ತಿ ಮೆರವಣಿಗೆಯು ಭಕ್ತಿ–ಭಾವದಿಂದ ಸೋಮವಾರ ನೆರವೇರಿತು.



ಶ್ರೀ ಬಸವೇಶ್ವರ ಮೂರ್ತಿ ಹಾಗೂ ಶ್ರೀ ಗುರುಮಲ್ಲೇಶ್ವರ ಮೂರ್ತಿ ಮೆರವಣಿಗೆಯು ಭಕ್ತಿ–ಭಾವದಿಂದ ಸೋಮವಾರ ನೆರವೇರಿತು.

ಮೈಸೂರು ಅಗ್ರಹಾರದ ಕುದೇರು ಮಠದ ಮುಂಭಾಗದಿಂದ ಆರಂಭವಾದ ಮೆರವಣಿಗೆಯಲ್ಲಿ ಕುದೇರು ಮಠದ ಹಿರಿಯ ಶ್ರೀ ಗುರುಶಾಂತ ಸ್ವಾಮೀಜಿ, ಕಿರಿಯ ಶ್ರೀ ಇಮ್ಮಡಿ ಗುರುಲಿಂಗಸ್ವಾಮೀಜಿ ನೇತೃತ್ವದಲ್ಲಿ ಜಾನಪದ ಕಲಾತಂಡದೊಂದಿಗೆ ಜರುಗಿತು. ಮೆರವಣಿಗೆಯಲ್ಲಿ ವೀರಭದ್ರ ಕುಣಿತ, ನಂದಿಧ್ವಜ, ಡೊಳ್ಳು, ನಗಾರಿ ಸೇರಿದಂತೆ ಇತರೆ ಜಾನಪದ ಕಲಾತಂಡ ದೊಂದಿಗೆ ಅಗ್ರಹಾರ ನೂರೊಂದು ಗಣಪತಿ ದೇವಸ್ಥಾನ, ಬಸವೇಶ್ವರ ರಸ್ತೆ ಸೇರಿದಂತೆ ಅಗ್ರಹಾರದ ಪ್ರಮುಖ ರಸ್ತೆಗಳಲ್ಲಿ ಸಾಗಿತು.

ಈ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್ ಸೇರಿದಂತೆ ಇತರರು ಭಾಗವಹಿಸಿ ದ್ದರು. ಹೊಸಪಾಳ್ಯದ ಶ್ರೀ ಗುರುಮಲ್ಲೇಶ್ವರ ಕೃಪಾಪೋಷಿತ ನಾಟಕ ಮಂಡಳಿ ಕಲಾವಿದರು ಹಾಗೂ ಎಂ.ಜಿ.ನಾಗೇಶ್ ನೇತೃತ್ವದಲ್ಲಿ ದಕ್ಷಯಜ್ಞ ಅಥವಾ ಭೃಗುಮುನಿಯ ಗರ್ವಭಂಗ ನಾಟಕ ಪ್ರದರ್ಶನ ಗೊಂಡಿತು. ಸಾವಿರಾರು ಭಕ್ತರಿಗೆ ಅನ್ನಸಂತರ್ಪಣೆ ನೆರವೇರಿತು.

ಅಹಮದಾಬಾದ್ ವಿಮಾನ ಪತನ: ತನಿಖೆಗೆ ಅಮೆರಿಕ, ಬ್ರಿಟನ್ ತಂಡ

ಅಹಮದಾಬಾದ್: 'ಏರ್ ಇಂಡಿಯಾ' (ಎಐ–171) ಅಪಘಾತಕ್ಕೆ ಕಾರಣ ಏನಾಗಿರಬಹುದು ಎಂಬುದನ್ನು ತಿಳಿದುಕೊಳ್ಳಲು ಅಮೆರಿಕದ ಎಂಟು ಮತ್ತು ಬ್ರಿಟನ್‌ನ ಐವರು ಸದಸ್ಯರ ತನಿಖಾ ತಂಡವು ಅಹಮದಾಬಾದ್‌ಗೆ ಬಂದಿದೆ. ಅಲ್ಲದೆ ತನಿಖೆ ನಡೆಸಲು ಬೋಯಿಂಗ್‌ನ ತಜ್ಞರ ತಂಡವೂ ಸೋಮವಾರ ಬಂದಿಳಿದಿದೆ ಎಂದು ಮೂಲಗಳು ತಿಳಿಸಿವೆ.



ಬೋಯಿಂಗ್ 787–8 ಡ್ರೀಮ್‌ಲೈನರ್ ವಿಮಾನವು ಜೂನ್ 12ರಂದು ಟೇಕಾಫ್ ಆದ ಕೆಲ ಕ್ಷಣಗಳಲ್ಲಿಯೇ ಬಿಜೆ ವೈದ್ಯಕೀಯ ಕಾಲೇಜಿನ ಹಾಸ್ಟೆಲ್ ಕಟ್ಟಡಕ್ಕೆ ಅಪ್ಪಳಿಸಿತ್ತು. ವಿಮಾನದಲ್ಲಿದ್ದ 241 ಜನರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಸೇರಿ 30 ಮಂದಿ ಮೃತಪಟ್ಟಿದ್ದರು. 'ಅಮೆರಿಕದ ಎಂಟು, ಬ್ರಿಟನ್‌ನ ಐವರು ತನಿಖಾ ತಂಡದಲ್ಲಿ ಇರಲಿದ್ದಾರೆ. ಅವರಿಗೆ ಭಾರತದ ವಿಮಾನ ಅಪಘಾತ ತನಿಖಾ ಬ್ಯೂರೊದ ಹಿರಿಯ ಅಧಿಕಾರಿಗಳು ನೆರವು ನೀಡಲಿದ್ದಾರೆ' ಎಂದು ಮೂಲಗಳು ತಿಳಿಸಿವೆ.

ಮೈಸೂರಲ್ಲಿ ಗಾಂಧಿ ಅಧ್ಯಯನ, ಸಂಶೋಧನೆ, ವಿಸ್ತರಣಾ ಕೇಂದ್ರ

'ಗಾಂಧಿ ಭಾರತ' ಶತಮಾನೋತ್ಸವ; ಪೂರ್ವಭಾವಿ ಸಭೆ

ಮೈಸೂರು, ಜೂ. 16(ಆರ್‌ಕೆ)– ಮಹಾತ್ಮ ಗಾಂಧೀಜಿ ಅವರು ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿ 100 ವರ್ಷ ತುಂಬಿದ ನೆನಪಿಗಾಗಿ ಕರ್ನಾಟಕ ಸರ್ಕಾರವು ವರ್ಷ ಪೂರ್ತಿ 'ಗಾಂಧಿ ಭಾರತ' ಶತಮಾನೋತ್ಸವ ಕಾರ್ಯಕ್ರಮ ಆಚರಿಸಲು ಮುಂದಾಗಿದೆ.

ಮೈಸೂರು ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರದ ವತಿಯಿಂದ ಈ ಸಂಬಂಧ ಪ್ರಸ್ತಾವನೆ ಸಲ್ಲಿಸುವ ಸಲುವಾಗಿ ಇಂದು ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷರಾದ ಪ್ರೊ ಎಸ್.ಆರ್. ನಿರಂಜನ 'ಗಾಂಧಿ ಭಾರತ' ಕಾರ್ಯಕ್ರಮದ ಮಹತ್ವ ಕುರಿತು ವಿವರಿಸಿದರು.



ಮೈಸೂರಿನ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ಸೋಮವಾರ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ ಎಸ್.ಆರ್. ನಿರಂಜನ ಸಭೆ ನಡೆಸಿದರು.

ಮೈಸೂರಲ್ಲಿ ಗಾಂಧಿ ಅಧ್ಯಯನ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ ಸ್ಥಾಪನೆಗೆ ತಗಲುವ ವೆಚ್ಚ ವಿನ್ಯಾಸಗಳೊಂದಿಗೆ ಮಾಹಿತಿ ಸಿದ್ಧಪಡಿಸಬೇಕಾಗಿದ್ದು, ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ನೇತೃತ್ವದಲ್ಲಿ ನಡೆಯುವ ಉನ್ನತ ಮಟ್ಟದ ಸಭೆಯಲ್ಲಿ ಅಂತಿಮ ರೂಪ ನೀಡಲಾಗುವುದು ಎಂದು ಪ್ರೊ. ನಿರಂಜನ ತಿಳಿಸಿದರು.

ಮಾದರಿ ಕೇಂದ್ರವನ್ನಾಗಿ ಮಾಡಿ ಆ ಮೂಲಕ ಪಿಯು ಮತ್ತು ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಮಹಾತ್ಮ ಗಾಂಧೀಜಿ ಕುರಿತು ಉಪನ್ಯಾಸ, ವಿಚಾರ ಸಂಕಿರಣ, ಕಾರ್ಯಾಗಾರ ಏರ್ಪಡಿಸಿ ಯುವ ಪೀಳಿಗೆಗೆ ಗಾಂಧೀಜಿ ಅವರ ಜೀವನ ಚರಿತ್ರೆಯನ್ನು ಮನದಟ್ಟು ಮಾಡುವುದು ಕಾರ್ಯಕ್ರಮದ ಉದ್ದೇಶ ಎಂದು ಅವರು ತಿಳಿಸಿದರು.

ಗಾಂಧಿ ಜಯಂತಿ ಸೇರಿದಂತೆ ವರ್ಷವಿಡೀ ಕಾರ್ಯಕ್ರಮ ಆಯೋಜಿಸುವುದು, ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಗಾಂಧೀಜಿ ಕುರಿತ ಬೀದಿ ನಾಟಕ ಪ್ರದರ್ಶನ ಸೇರಿದಂತೆ ಹಲವು ವಿನೂತನ ಕಾರ್ಯಕ್ರಮಗಳ ಬಗ್ಗೆ ವರದಿ ಸಿದ್ಧಪಡಿಸಲು ಇಂದಿನ ಸಭೆಯಲ್ಲಿ ತೀರ್ಮಾನಿಸಲಾಯಿತು.

ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ಎಂ.ಕೆ. ಸವಿತಾ ಅಧ್ಯಕ್ಷತೆ ವಹಿಸಿದ್ದ ಸಭೆಯಲ್ಲಿ ಹಿರಿಯ ಪತ್ರಕರ್ತ ಜಿ.ಪಿ. ಬಸವರಾಜು, ಲೇಖಕ ಡಾ. ಜಗದೀಶ ಕೊಪ್ಪ ಡಾ. ಬಿ.ಆರ್. ಅಂಬೇಡ್ಕರ್ ಸಂಸ್ಥೆ ಸಲಹೆಗಾರ ಬಸವರಾಜ ದೇವನೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ, ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ. ಎಸ್. ನರೇಂದ್ರ ಕುಮಾರ್ ಸಭೆಯಲ್ಲಿ ಭಾಗವಹಿಸಿದ್ದರು.

ನೆಲಮಂಗಲದಲ್ಲಿ ಬೈಕ್‌ಗೆ ಲಾರಿ ಡಿಕ್ಕಿ; ಇಬ್ಬರು ಡ್ಯಾನ್ಸರ್ ಸ್ಥಳದಲ್ಲೇ ಸಾವು

ಬೆಂಗಳೂರು: ನೆಲಮಂಗಲದ ಕುಣಿಗಲ್ ಬೈಪಾಸ್‌ನಲ್ಲಿ ಸೋಮವಾರ ಬೈಕ್‌ಗೆ ಲಾರಿಯೊಂದು ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ಬೈಕ್‌ನಲ್ಲಿದ್ದ ಇಬ್ಬರು ಡ್ಯಾನ್ಸರ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.



ಮೃತರನ್ನು ಬೆಂಗಳೂರಿನ ಶ್ರೀರಾಮಪುರದ ಪ್ರಜ್ವಲ್(22) ಮತ್ತು ಸಹನಾ(21) ಎಂದು ಗುರುತಿಸಲಾಗಿದೆ. ಅಪಘಾತದ ನಂತರ ಲಾರಿ ಜಪ್ತಿ ಮಾಡಿ ಚಾಲಕನನ್ನು ವಶಕ್ಕೆ ಪಡೆಯಲಾಗಿದೆ. ಪ್ರಜ್ವಲ್ ಕೆಲವು ಸಿನಿಮಾ ಮತ್ತು ಇವೆಂಟ್‌ಗಳಲ್ಲಿ ನೃತ್ಯ ಮಾಡಿದ್ದಾರೆ. ಸಹನಾ ಕೂಡ ಡ್ಯಾನ್ಸರ್ ಆಗಿದ್ದಾರೆ. ಇಬ್ಬರು ಮದುವೆ ಇವೆಂಟ್ ಒಂದನ್ನು ಮುಗಿಸಿಕೊಂಡು ಕುಣಿಗಲ್‌ನಿಂದ ಬೆಂಗಳೂರಿಗೆ ವಾಪಸಾಗುತ್ತಿದ್ದ ವೇಳೆ ಈ ಭೀಕರ ಅಪಘಾತ ಸಂಭವಿಸಿದೆ. ಈ ಸಂಬಂಧ ನೆಲಮಂಗಲ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

ಪಿಂಚಣಿ, ಗ್ರಾಚ್ಯುಟಿಗೆ ಸರ್‌ಚಾರ್ಜ್; ವಿದ್ಯುತ್ ದರ ಮತ್ತಷ್ಟು ಏರಿಕೆ

ಮೈಸೂರು, ಜೂ.16(ಆರ್‌ಕೆ)– ಬರಿದಾಗಿರುವ ಖಜಾನೆ ತುಂಬಿಸಿಕೊಳ್ಳಲು ರಾಜ್ಯ ಸರ್ಕಾರ ಇದೀಗ ವಿದ್ಯುತ್ ಗ್ರಾಹಕರ ಜೇಬಿಗೆ ಕೈ ಹಾಕಿದೆ.

ಹಾಲು–ಮೊಸರು, ಪೆಟ್ರೋಲ್–ಡೀಸೆಲ್, ಮದ್ಯ, ಆಸ್ತಿ ತೆರಿಗೆ, ಆಸ್ತಿ ನೋಂದಣಿ, ಮುದ್ರಾಂಕ ಶುಲ್ಕ, ವಿದ್ಯುತ್ ದರ, ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ, ಮೆಟ್ರೋ ಪ್ರಯಾಣ ದರ, ವೃತ್ತಿಪರ ಕೋರ್ಸ್‌ಗಳ ಶುಲ್ಕ ಸೇರಿದಂತೆ ಅತ್ಯವಶ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರ, ಇದೀಗ ಸೆಸ್ಕ್ ನೌಕರರ ಪಿಂಚಣಿ ಮತ್ತು ಗ್ರಾಚ್ಯುಟಿಗೆ ಹಣ ಒದಗಿಸಲು, ವಿದ್ಯುತ್ ಕಂಪನಿಗಳು ಸರಬರಾಜು ಮಾಡುತ್ತಿರುವ ವಿದ್ಯುತ್ ಬಿಲ್‌ಗಳಲ್ಲಿ ಸರ್‌ಚಾರ್ಜ್ ವಿಧಿಸಿರುವುದರಿಂದ ನಾಗರಿಕರ ಮೇಲೆ ಹೊಸ ಆರ್ಥಿಕ ಹೊರೆ ಬಿದ್ದಂತಾಗಿದೆ.

ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ(ಕೆಇಆರ್‌ಸಿ)ವು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ (ಸೆಸ್ಕ್) ಸೇರಿದಂತೆ ರಾಜ್ಯದ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳಿಗೆ 2025ರ ಏಪ್ರಿಲ್ ಮಾಹೆಯಿಂದ ಪೆನ್ಷನ್ ಮತ್ತು ಗ್ರಾಚ್ಯುಟಿಗಾಗಿ ಪ್ರತಿ ಯೂನಿಟ್‌ಗೆ 36 ಪೈಸೆಯಂತೆ ಸರ್‌ಚಾರ್ಜ್ ಸಂಗ್ರಹಿಸಲು ಅನುಮತಿ ನೀಡಿದೆ. ಇದು ಗ್ರಾಹಕರಿಗೆ ಹೆಚ್ಚುವರಿ ಹೊರೆಯಾದಂತಾಗಿದೆ.

ಈ ಸರ್‌ಚಾರ್ಜ್ 2027–28ರ ಹಣಕಾಸು ವರ್ಷದ ಅಂತ್ಯದವರೆಗೂ ಜಾರಿಯಲ್ಲಿರುತ್ತದೆ ಎಂದು ಕೆಇಆರ್‌ಸಿ ನೀಡಿರುವ ಅನುಮತಿ ಆದೇಶದಲ್ಲಿ ತಿಳಿಸಿದೆ. 2026–27ರಲ್ಲಿ ಪ್ರತಿ ಯೂನಿಟ್‌ಗೆ 35 ಪೈಸೆ ಮತ್ತು 2027–28ರಲ್ಲಿ 34 ಪೈಸೆಯಂತೆ ನಿಗದಿಪಡಿಸಲಾಗಿದೆ. ಮುಂದಿನ ಮೂರು ವರ್ಷದವರೆಗೂ ವಿದ್ಯುತ್ ಗ್ರಾಹಕರು ಈ ಅಧಿಕ ಶುಲ್ಕ ಪಾವತಿಸಬೇಕಾಗಿದೆ.

ಸಾಮಾನ್ಯವಾಗಿ ಸುಂಕ ಹೆಚ್ಚಿಸುವ ಮುನ್ನ ಕೆಇಆರ್‌ಸಿಯು ಸಾರ್ವಜನಿಕರ ವಿಚಾರಣೆ ನಡೆಸುತ್ತದೆ. ಆದರೆ ಈ ಬಾರಿ ರಾಜಕೀಯ ಒತ್ತಡಕ್ಕೆ ಮಣಿದು, ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದೆ. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಸರ್ಕಾರ ಅಗತ್ಯ ಬೆಲೆಗಳನ್ನು ಹೆಚ್ಚಿಸಿ, ಆ ಹಣವನ್ನು ಸಾರ್ವಜನಿಕರಿಂದ ವಾಪಸ್ ಪಡೆಯುತ್ತಿದೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ.

ಸರ್ಕಾರದ ಆರ್ಥಿಕ ದಿವಾಳಿಗೆ ಇದು ಸಾಕ್ಷಿ



ಮೈಸೂರು, ಜೂ.16(ಆರ್‌ಕೆ)– ವಿದ್ಯುತ್ ಬಿಲ್ ಮೂಲಕ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮವು ತನ್ನ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಸಂಬಳ, ಪಿಂಚಣಿ, ಗ್ರಾಚ್ಯುಟಿ ಹಣ ಸಂಗ್ರಹಿಸುತ್ತಿರುವುದು ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಶಾಸಕ ಟಿ.ಎಸ್. ಶ್ರೀವತ್ಸ ತಿಳಿಸಿದ್ದಾರೆ.

ಸೆಸ್ಕ್ ವಿದ್ಯುತ್ ಬಿಲ್‌ನಲ್ಲಿ ಸರ್ಕಾರ ಪಾವತಿಸಬೇಕಾದ ಪಿಂಚಣಿ (ಪೆನ್ಷನ್) ಮತ್ತು ಗ್ರಾಚ್ಯುಯಿಟಿ ಹೊಂದಿಸಲು ಗ್ರಾಹಕರು ಬಳಸಿದ ಯೂನಿಟ್ ವಿದ್ಯುತ್‌ಗೆ 36 ಪೈಸೆಯಂತೆ ವಸೂಲಿ ಮಾಡುತ್ತಿರುವ ಬಗ್ಗೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿರುವ ಅವರು, ಇಂಧನ ಇಲಾಖೆಯಡಿ ಬರುವ ವಿದ್ಯುತ್ ಸರಬರಾಜು ನಿಗಮಗಳ ಅಧಿಕಾರಿಗಳು ಸಿಬ್ಬಂದಿಗಳ ಸಂಬಳ, ಸಾರಿಗೆ, ಪಿಂಚಣಿ ಮತ್ತು ಗ್ರಾಚ್ಯುಟಿಗೂ ಹಣವಿಲ್ಲದ ಕಾರಣ ಸರ್ಕಾರವು ಈ ರೀತಿ ಅನ್ಯ ಮಾರ್ಗದಲ್ಲಿ ಸಾರ್ವಜನಿಕ ರಿಂದ ಹಣ ವಸೂಲಿ ಮಾಡುತ್ತಿರುವುದು ಅಕ್ಷಮ್ಯ ಅಪರಾಧ ಎಂದರು.

ರಾಜ್ಯದ ಸಂಪತ್ತನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿ ಖಜಾನೆ ಖಾಲಿಯಾಗಿರುವುದರಿಂದ ಬೇರೆ ಬೇರೆ ನಿಗಮ ಮಂಡಳಿಗಳಿಂದ ಹಣ ವಸೂಲಿ ಮಾಡುತ್ತಿರುವ ಸರ್ಕಾರ, ಆರ್ಥಿಕವಾಗಿ ದಿವಾಳಿಯಾಗಿದೆ. ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆ, ಸೇವಾ ಶುಲ್ಕ ಏರಿಸುತ್ತಿರುವುದು ನಾಗರಿಕರ ಆಕ್ಷೇಪಕ್ಕೆ ಗುರಿಯಾಗಿದೆ. ಇದೇ ಪ್ರಥಮ ಬಾರಿಗೆ ಚಾಮುಂಡಿಬೆಟ್ಟದಲ್ಲಿ ಆಷಾಢ ಶುಕ್ರವಾರ ಚಾಮುಂಡೇಶ್ವರಿ ದರ್ಶನಕ್ಕೆ 2000 ರೂ. ವಿಶೇಷ ದರ್ಶನ ಶುಲ್ಕ ಸಂಗ್ರಹಿಸುತ್ತಿರುವುದು ಸರಿಯಲ್ಲ. ರಾಜ್ಯದ ಬೊಕ್ಕಸ ಖಾಲಿಯಾಗಿದೆ ಎಂಬುದಕ್ಕೆ ಇದೇ ನಿದರ್ಶನ ಎಂದು ಶ್ರೀವತ್ಸ ತಿಳಿಸಿದರು.

ಹೆಚ್ಚುವರಿ ಶುಲ್ಕಕ್ಕೆ ಸೆಸ್ಕ್ ಸಮರ್ಥನೆ

ಮೈಸೂರು, ಜೂ.16(ಆರ್‌ಕೆ)– ಸರ್‌ಚಾರ್ಜ್ ಸಂಗ್ರಹಿಸಲು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ)ವೇ ಅನುಮತಿ ನೀಡಿದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ (ಸೆಸ್ಕ್)ದ ಸೂಪರಿಂಟೆಂಡಿಂಗ್ ಇಂಜಿನಿಯರ್ ಸುನಿಲ್ ತಿಳಿಸಿದ್ದಾರೆ.

ಪಿಂಚಣಿ ಮತ್ತು ಗ್ರಾಚ್ಯುಟಿ ಕರವನ್ನು ವಿದ್ಯುತ್ ಬಿಲ್ ಮೂಲಕ ಸಂಗ್ರಹ ಮಾಡು ತ್ತಿರುವ ಕುರಿತು 'ಮೈಸೂರು ಮಿತ್ರ'ನಿಗೆ ಪ್ರತಿ ಕ್ರಿಯೆ ನೀಡಿರುವ ಅವರು, ಕೆಇಆರ್‌ಸಿಯು ಏಕಪಕ್ಷೀಯವಾಗಿ ಸರ್‌ಚಾರ್ಜ್ (ಪಿ ಅಂಡ್ ಜಿ) ವಿಧಿಸಿದೆ ಎಂಬುದನ್ನು ನಿರಾಕರಿಸಿದರು. ಮೈಸೂರಲ್ಲಿ ಇತ್ತೀಚಿಗೆ ಆಯೋಗ ನಡೆಸಿದ ವಿಚಾರಣೆ ಸಮಯದಲ್ಲಿ ಈ ವಿಷಯವನ್ನು ವಿವರವಾಗಿ ಚರ್ಚಿಸಲಾಯಿತು. ಕೈಗಾರಿಕೋದ್ಯಮಿಗಳು ಹಾಗೂ ಗ್ರಾಹಕರು ಎಂದಿನಂತೆ ಆಕ್ಷೇಪ ವ್ಯಕ್ತಪಡಿಸಿದರು. 3 ವರ್ಷಗಳವರೆಗೆ ಯೂನಿಟ್ ವಿದ್ಯುತ್ ದರ ಏರಿಕೆ ಮಾಡಬಾರದೆಂದು ತಿಳಿಸಿದ ಆಯೋಗದ ಸದಸ್ಯರು, ಸರ್‌ಚಾರ್ಜ್‌ಗೆ ಅನುಮತಿಸಿದ್ದು, ನಂತರ ಸಚಿವ ಸಂಪುಟವೂ ಅನುಮೋದನೆ ನೀಡಿದೆ ಎಂದು ತಿಳಿಸಿದರು. ಈ ಸುಂಕ ಗ್ರಾಹಕರಿಗೆ ಹೊರೆಯಾಗುವುದಿಲ್ಲ. ಏಕೆಂದರೆ, ನಾವು ಪ್ರತಿ ಯೂನಿಟ್‌ಗೆ 76 ಪೈಸೆ ವಿದ್ಯುತ್ ದರವನ್ನು ಕಡಿಮೆ ಮಾಡಿದ್ದೇವೆ. ಪಿಂಚಣಿ ಹಾಗೂ ಗ್ರಾಚ್ಯುಟಿಗಾಗಿ 36 ಪೈಸೆ ಸಂಗ್ರಹಿಸಿದರೂ ಗ್ರಾಹಕರಿಗೆ ಪ್ರತಿ ಯೂನಿಟ್‌ಗೆ 40 ಪೈಸೆ ಉಳಿಕೆಯಾಗುತ್ತದೆ ಎಂದು ತಿಳಿಸಿದ್ದಾರೆ.

ಪಿಂಚಣಿ ಸರ್‌ಚಾರ್ಜ್ ಅವೈಜ್ಞಾನಿಕ: ಮೈಸೂರು ಗ್ರಾಹಕರ ಪರಿಷತ್ ಆಕ್ರೋಶ

ಮೈಸೂರು, ಜೂ. 16(ಆರ್‌ಕೆ)– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮವು 2025ರ ಏಪ್ರಿಲ್ ಮಾಹೆಯಿಂದ 200 ಯೂನಿಟ್‌ಗಿಂತ ಹೆಚ್ಚು ವಿದ್ಯುತ್ ಬಳಸುವ ಗ್ರಾಹಕರಿಂದ ಪಿಂಚಣಿ ಮತ್ತು ಗ್ರಾಚ್ಯುಟಿಗಾಗಿ ಪ್ರತೀ ಯೂನಿಟ್‌ಗೆ 36 ಪೈಸೆಯಂತೆ ಸರ್‌ಚಾರ್ಜ್ ವಿಧಿಸುತ್ತಿರುವುದು ಅವೈಜ್ಞಾನಿಕ ಎಂದು ಮೈಸೂರು ಗ್ರಾಹಕರ ಪರಿಷತ್ (ಎಂಜಿಪಿ) ತಿಳಿಸಿದೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಎಂಜಿಪಿ ಸಂಸ್ಥಾಪಕ ಕಾರ್ಯಾಧ್ಯಕ್ಷ ಭಾಮಿ ವಿ. ಶೆಣೈ, ನ್ಯಾಯ ಸಮ್ಮತವಲ್ಲದ ಮತ್ತು ಅನೈತಿಕವಾದ ಇಂತಹ ಸೆಸ್ ಅನ್ನು ವಿರೋಧಿಸಬೇಕು. ವಿದ್ಯುತ್ ಉತ್ಪಾದನೆ, ಪ್ರಸರಣ ಮತ್ತು ವಿತರಣೆಯನ್ನು ಪ್ರತ್ಯೇಕಿಸಿದ 2002ರ ಕರ್ನಾಟಕ ವಿದ್ಯುತ್ ಸುಧಾರಣಾ ಕಾಯ್ದೆಯಂತೆ ತನ್ನ ನೌಕರರಿಗೆ ಪಿಂಚಣಿ ಮತ್ತು ಗ್ರಾಚ್ಯುಟಿ ಪಾವತಿಗಳಿಗೆ ಹಣಕಾಸು ಹೊಂದಿಸುವ ಜವಾಬ್ದಾರಿಯನ್ನು ರಾಜ್ಯ ಸರ್ಕಾರ ಗ್ರಾಹಕರ ಮೇಲೆ ಹೇರಿದೆ.

ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ)ವು ಆರಂಭದಲ್ಲಿ ಇಂಧನ ಸರಬರಾಜು ಕಂಪನಿಗಳ ಈ ವಸೂಲಾತಿ ಪ್ರಸ್ತಾವನೆಗಳನ್ನು ತಿರಸ್ಕರಿಸಿತ್ತಲ್ಲದೇ, ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟದ ರಿಟ್ ಅರ್ಜಿಯನ್ನು 2024ರ ಮಾರ್ಚ್ 25ರಂದು ಹೈಕೋರ್ಟ್ ವಜಾಗೊಳಿಸಿತ್ತು. ತದನಂತರ ಸುಂಕಗಳನ್ನು ಬಿಲ್ ಗಳಲ್ಲಿ ಸೇರಿಸುವ ಪದ್ಧತಿ ಆರಂಭವಾಯಿತು.

ಕಾನೂನಿನ ಬದ್ಧತೆಯನ್ನು ಬದಿಗಿಟ್ಟು ಈ ಸರ್‌ಚಾರ್ಜ್ ವಿಧಿಸಿರುವುದು ಅನೈತಿಕ ಮತ್ತು ಅತಿರೇಕದ ನಡೆಯಾಗಿರುವುದರಿಂದ ವಿದ್ಯುತ್ ಗ್ರಾಹಕರು ಸೆಸ್ಕ್‌ನ ಈ ಅವೈಜ್ಞಾನಿಕ ಕ್ರಮವನ್ನು ವಿರೋಧಿಸಬೇಕಾಗಿದೆ ಎಂದಿರುವ ಭಾಮಿ ವಿ. ಶೆಣೈ, ಪಿಂಚಣಿಯನ್ನು ಗ್ರಾಹಕರ ಮೇಲೆ ಹೇರಿರುವ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಯಡಿ ಉಚಿತ ವಿದ್ಯುತ್ ಪೂರೈಸುತ್ತಿರುವುದರಿಂದ ಉಂಟಾಗುವ ನಷ್ಟವನ್ನು ಬಿಲ್ ಪಾವತಿಸುವ ಗ್ರಾಹಕರಿಂದ ವಸೂಲಿ ಮಾಡುತ್ತಿದೆ ಎಂದು ದೂರಿದರು.

ಮುಂದಿನ ವಿಧಾನಸಭಾ ಅಧಿವೇಶನದಲ್ಲಿ ಈ ವಿಷಯ ಸಂಬಂಧ ಚರ್ಚಿಸುವಂತೆ ನಮ್ಮ ಚುನಾಯಿತ ಪ್ರತಿನಿಧಿಗಳ ಮೇಲೆ ಒತ್ತಡ ಹೇರಬೇಕು. ಪ್ರಸ್ತುತ ಉಚಿತವಾಗಿ ವಿದ್ಯುತ್ ಬಳಸುತ್ತಿರುವವರು ಇದನ್ನು ವಿರೋಧಿಸದಿರಬಹುದು, ಆದರೆ ಮುಂದೊಂದು ದಿನ ಬಿಲ್ ಪಾವತಿಸಬೇಕಾಗಿ ಬಂದಲ್ಲಿ ತೀವ್ರ ತೊಂದರೆ ಅನುಭವಿಸಬೇಕಾಗುತ್ತದೆ. ಆದ್ದರಿಂದ ಎಲ್ಲರೂ ಈ ಸುಂಕದ ವಿರುದ್ಧ ಪ್ರತಿಭಟನೆ ನಡೆಸಬೇಕಾಗಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯದಲ್ಲಿ ಮುಂದೆ ಬಿಜೆಪಿ–ಜೆಡಿಎಸ್ ಸರ್ಕಾರ ಅಧಿಕಾರಕ್ಕೆ...

ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿಕೆಗೆ ಸಚಿವರ ವಾಗ್ದಾಳಿ

ಬೆಂಗಳೂರು, ಜೂ.16(ಕೆಎಂಶಿ)– ರಾಜ್ಯದಲ್ಲಿ ಮುಂದೆ ಬಿಜೆಪಿ–ಜೆಡಿಎಸ್ ನೇತೃತ್ವದ ಸರ್ಕಾರ ಅಧಿಕಾರದ ಚುಕ್ಕಾಣಿ ಹಿಡಿಯಲಿದೆ ಎಂಬ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ ಸಚಿವರು ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ದಿನೇಶ್ ಗುಂಡೂರಾವ್ ಹಾಗೂ ಡಾ.ಎಚ್.ಸಿ.ಮಹದೇವಪ್ಪ ಸರ್ಕಾರ ತೆಗೆಯಬೇಕೆಂಬುದನ್ನು ಕುಮಾರಸ್ವಾಮಿ ಅಲ್ಲ, ಜನ ತೀರ್ಮಾನ ಮಾಡುತ್ತಾರೆ.

ಕುಮಾರಸ್ವಾಮಿ ಐಸಿಯುನಲ್ಲಿ ಬಿಜೆಪಿಯವರ ಆಕ್ಸಿಜನ್ ಪಡೆದು ಬದುಕುತ್ತಿದ್ದಾರೆ. ಅವರು ಸ್ವಂತ ಬಲದ ಮೇಲೆ ಅಧಿಕಾರಕ್ಕೆ ಬಂದು ಇಂತಹ ಹೇಳಿಕೆ ನೀಡಲಿ ಎಂದು ಸವಾಲು ಹಾಕಿದ್ದಾರೆ.

ನಮ್ಮ ಸರ್ಕಾರ ಐದು ವರ್ಷ ಪೂರೈಸುತ್ತದೆ. ಚನ್ನಪಟ್ಟಣ ಉಪಚುನಾವಣೆಯಲ್ಲಿ ಮತದಾರರು ಇವರಿಗೆ ತಕ್ಕ ಪಾಠ ಕಲಿಸಿದ್ದೂ ಬುದ್ಧಿ ಬಂದಿಲ್ಲ. ಭ್ರಷ್ಟಾಚಾರ ಕಿತ್ತೊಗೆಯುತ್ತೇವೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ವ್ಯಂಗ್ಯವಾಡಿರುವ ಸಚಿವರು, ಅವರೇನು ಪ್ರಾಮಾಣಿಕರಾ ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿ–ಜೆಡಿಎಸ್‌ನವರು ಭಾರೀ ಪ್ರಾಮಾಣಿಕತೆಯಿಂದ ಸರ್ಕಾರ ನಡೆಸಿದರು. ನಮ್ಮ ಆಡಳಿತಾವಧಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪಗಳಿದ್ದರೆ ದಾಖಲೆ ಸಮೇತ ತನಿಖಾ ಸಂಸ್ಥೆಗಳಿಗೆ ನೀಡಿ ಎಂದು ಸವಾಲು ಹಾಕಿದ್ದಾರೆ.

ಕುಮಾರಸ್ವಾಮಿ ಅವರ ಹೇಳಿಕೆ ಗಮನಿಸಿದರೆ ಬಹಳ ಸಂತೋಷವಾಗುತ್ತದೆ ಎಂದಿರುವ ಶಿವಕುಮಾರ್, ಅವರು ಆರೋಗ್ಯವಾಗಿರಲಿ ಎಂದಷ್ಟೇ ಪ್ರತಿಕ್ರಿಯಿಸಿದರು.

ಅಹಮದಾಬಾದ್ ವಿಮಾನ ಪತನ: 6 ಕೋಟಿ ನೆರವು ಘೋಷಿಸಿದ ಯುಎಇ ವೈದ್ಯ

ದುಬೈ: ಕಳೆದ ವಾರ ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾ ವಿಮಾನ ಅವಘಡದಲ್ಲಿ ಮೃತಪಟ್ಟ ಹಾಗೂ ಗಾಯಗೊಂಡ ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ವೈದ್ಯರ ಕುಟುಂಬಕ್ಕೆ 6 ಕೋಟಿ ನೆರವು ನೀಡುವುದಾಗಿ ಯುಎಇ ಮೂಲದ ವೈದ್ಯ ಶಂಶೀರ್ ವಯಾಲಿಲ್ ಘೋಷಿಸಿ ದ್ದಾರೆ. ಬಿಜೆ ವೈದ್ಯಕೀಯ ಕಾಲೇಜಿನ ಹಾಸ್ಟೆಲ್ ಕಟ್ಟಡಕ್ಕೆ ವಿಮಾನ ಡಿಕ್ಕಿಹೊಡೆದು ಪತನಗೊಂಡ ಪರಿಣಾಮ ಹಾಸ್ಟೆಲ್ ಹಾಗೂ ಅಲ್ಲಿನ ಊಟದ ಕೊಠಡಿಯಲ್ಲಿದ್ದ ವಿದ್ಯಾರ್ಥಿಗಳು, ವೈದ್ಯರು ಗಾಯಗೊಂಡಿದ್ದರು. ಕೆಲವರು ಮೃತಪಟ್ಟಿದ್ದರು.

ಗೌರವಾನ್ವಿತ 6ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ಮೈಸೂರು

ಬಿ & ಡಬ್ಲ್ಯೂ.ಸಿ.ನಂ 12 / 2025

ಅರ್ಜಿದಾರರು: 1. ಧನ್ವೀರ್ ನಾಯ್ಕ್ ಎನ್.ಎಸ್. ಬಿನ್ ಲೇಟ್ ಸೋಮಶೇಖರ್ ಸಿ.ವಿ., ವಯಸ್ಸು ಸುಮಾರು 11 ವರ್ಷ, ಅಪ್ರಾಪ್ತ ವಯಸ್ಕನಾಗಿದ್ದು, ಇವನ ಪರ ನೈಸರ್ಗಿಕ ಸಂರಕ್ಷರಾಗಿ ಅಜ್ಜಿ ಶ್ರೀಮತಿ ಮಂಜುಳ ಕೆ. ಪ್ರತಿನಿಧಿಸಲ್ಪಡುತ್ತಾರೆ. 2. ಶ್ರೀಮತಿ ಮಂಜುಳ ಕೆ., ಕೋಂ ಹೆಚ್.ಕೆ. ಜಗದೀಶ್, ವಯಸ್ಸು ಸುಮಾರು 60 ವರ್ಷ. ಇಬ್ಬರ ವಾಸ: ಮನೆ ನಂ. 72/1, ಆಲನಹಳ್ಳಿ ಗ್ರಾಮ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ.

ವಿರುದ್ಧ

ಎದುರುದಾರರು : ಇಲ್ಲ

ಸಾರ್ವಜನಿಕ ಪ್ರಕಟಣೆ

ಅರ್ಜಿದಾರರು ಗಾರ್ಡಿಯನ್ ಮತ್ತು ವಾರ್ಡ್ ಆಕ್ಟ್ ಕಲಂ 7 ಮತ್ತು 12 ರ ಅಡಿಯಲ್ಲಿ 1ನೇ ಅರ್ಜಿದಾರರಿಗೆ 2ನೇ ಅರ್ಜಿದಾರರನ್ನು ನೈಸರ್ಗಿಕ ಸಂರಕ್ಷರಾಗಿ ನೇಮಕಾಗಿ ಮಾಡಿ ಗಾರ್ಡಿಯನ್ ಸರ್ಟಿಫಿಕೇಟ್ ಕೋರಿ ಸದರಿ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿದ್ದು. ಸದರಿ ಅರ್ಜಿಗೆ ಸಂಬಂಧಿಸಿದಂತೆ ಯಾರಿಗಾದರೂ ಯಾವುದೇ ರೀತಿ ಹಿತಾಸಕ್ತಿ ಅಥವಾ ಸಂಬಂಧ ಇದ್ದಲ್ಲಿ ಅವರು ಖುದ್ದಾಗಿ ಆಗಲೀ ಅಥವಾ ಅವರ ವಕೀಲರ ಮೂಲಕವಾಗಲೀ ದಿನಾಂಕ 18–7–25ರಂದು ಬೆಳಿಗ್ಗೆ 11.00 ಗಂಟೆಗೆ ನ್ಯಾಯಾಲಯದಲ್ಲಿ ಹಾಜರಾಗುವುದು. ಅಂತಹ ಆಕ್ಷೇಪಣೆಗಳು ಇಲ್ಲದೇ ಇದ್ದ ಪಕ್ಷದಲ್ಲಿ ಪ್ರಕರಣವನ್ನು ನಿಯಮಾನುಸಾರವಾಗಿ ಇತ್ಯರ್ಥ ಪಡಿಸಲಾಗುವುದು ಎಂಬುದಾಗಿ ಈ ಮೂಲಕ ತಿಳುವಳಿಕೆ ನೀಡಲಾಗಿದೆ. ನ್ಯಾಯಾಲಯದ ಆದೇಶದ ಮೇರೆಗೆ, ನ್ಯಾಯಾಲಯದ ಮೊಹರಿನೊಂದಿಗೆ ದಿನಾಂಕ ರಂದು ಈ ಪ್ರಕಟಣೆಯನ್ನು ಹೊರಡಿಸಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ,
Sd/- Chief Ministerial Officer
Court of Senior Civil Judge &
CJM, Mysuru

ಅರ್ಜಿದಾರರ ಪರ ವಕೀಲರು,
ಸಹಿ/– ಹೆಚ್.ಎನ್. ಮಹೇಶ
ನಂ. 518, ಪ್ರಗತಿ ಮೆಡಿಕಲ್ ಕಾಂಪ್ಲೆಕ್ಸ್, ಅಗ್ರಹಾರ, ಮೈಸೂರು.
ದಿನಾಂಕ: 13–6–2025. ಸ್ಥಳ : ಮೈಸೂರು